ಸಂಪುಟ: 22, ಸಂಚಿಕೆ: 205, ಪುಟಗಳು: 8, ಸೋಮವಾರ, 5 ಮೇ 2025 RNI NO. KARKAN/2002/08054
epaper: www.sanjemugilu.com
ಸುದ್ದಿಗಳ ಹೊನಲು
ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3


ವೇಣು ಸಾರಥ್ಯದಲ್ಲಿ...

### ಸುಭಾಷಿತ

ಯಾವುದೇ ತಳಮಳವಿದ್ದಲ್ಲಿ ಮನೆಯಲ್ಲಿ ಕೂರಬೇಡಿ. ಮನೆಯಲ್ಲಿ ಕುಳಿತುಕೊಂಡರೆ ಭಯ ದೊಡ್ಡದಾಗುತ್ತದೆ. ಹೊರಗೆ ಬನ್ನಿ. ಕಾರ್ಯದಲ್ಲಿ ತೊಡಗಿರಿ, ಧೈರ್ಯ ನಿಮ್ಮೊಂದಿಗೆ ನಡೆಯುತ್ತದೆ.

### ಪಂಚಾಂಗ

(ಸೋಮವಾರ 5 ಮೇ-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ
- ಉತ್ತರಾಯಣ, ವಸಂತ ಋತು
- ವೈಶಾಖ ಮಾಸ, ಶುಕ್ಲ ಪಕ್ಷ,
- ವಾರ: ಸೋಮವಾರ, ತಿಥಿ: ಅಷ್ಟಮಿ
- ನಕ್ಷತ್ರ: ಆಶ್ಲೇಷ, ಯೋಗ: ವೃದ್ಧಿ ಕರಣ: ಬವ
- ರಾಹುಕಾಲ: 7:37 ರಿಂದ 9:11
- ಗುಳಿಕಕಾಲ: 1:55 ರಿಂದ 3:29
- ಯಮಗಂಡಕಾಲ: 10:46 ರಿಂದ 12:20




## ಸಂಕ್ಷಿಪ್ತ ಸುದ್ದಿ

## ಲಾಯರ್ ಜಗದೀಶ್ ಸಾವಿಗೆ ಟ್ವಿಸ್ಟ್

**ಬೆಂಗಳೂರು:** ವಕೀಲ ಜಗದೀಶ್ ಸಾವನ್ನಪ್ಪಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಟ್ವಿಸ್ಟ್ ಸಿಕ್ಕಿದ್ದು, ಪೊಲೀಸರ ತನಿಖೆ ವೇಳೆ ರಹಸ್ಯ ಬಯಲಾಗಿದೆ.

ಶನಿವಾರ ರಾತ್ರಿ ವಕೀಲ ಜಗದೀಶ್ ಅವರ ದೇಹ ರಕ್ತಸಿಕ್ತವಾಗಿ ನೈಸ್ ರಸ್ತೆಯಲ್ಲಿ ಪತ್ತೆಯಾಗಿತ್ತು.

» **ಪೊಲೀಸರ ತನಿಖೆ ವೇಳೆ ರಹಸ್ಯ ಬಯಲು**



ಘಟನಾ ಸ್ಥಳಕ್ಕೆ ಕೆಂಗೇರಿ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದರು. ಘಟನೆ ಸಂಬಂಧ ಮೃತ ಜಗದೀಶ್ ಸೋದರ ಸಂಬಂಧಿಯೊಬ್ಬರು ಕೊಲೆ ಮಾಡಿರುವ ಬಗ್ಗೆ ಅನುಮಾನ ವ್ಯಕ್ತಪಡಿಸಿ ಕೆಂಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಪ್ರಕರಣ ದಾಖಲಿಸಿಕೊಂಡು ತನಿಖೆಗಿಳಿದ ಪೊಲೀಸರು ಸಾವಿಗೆ ರಹಸ್ಯವನ್ನು ಬಯಲಿಗೆಳೆದಿದ್ದಾರೆ. ಪ್ರಾಥಮಿಕ ತನಿಖೆ ಮಾಹಿತಿ ಪ್ರಕಾರ, ವಕೀಲ ಜಗದೀಶ್ ಸಾವಿಗೆ ರೋಡ್ ರೇಜ್ ಕಾರಣವಾಗಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಪುಟ 2

## ಭಾರತಕ್ಕೆ ಹಾನಿ ಮಾಡುವ ಮುನ್ನ ಪಾಕ್ 100 ಬಾರಿ ಯೋಚಿಸಬೇಕು ಅಂಥಾ ಕ್ರಮ ಕೈಗೊಳ್ಳಿ

**ಹೈದರಾಬಾದ್:** ಭಾರತಕ್ಕೆ ಹಾನಿ ಮಾಡುವ ಮುನ್ನ ಪಾಕಿಸ್ತಾನ100 ಬಾರಿ ಆಲೋಚಿಸಬೇಕು



ಅಂತಾ ಕ್ರಮ ಕೈಗೊಳ್ಳಿ ಎಂದು ಎಐಎಂಐಎಂ ಅಧ್ಯಕ್ಷ ಅಸಾದುದ್ದೀನ್ ಓವೈಸಿ ಪ್ರಧಾನಿ ನರೇಂದ್ರ ಮೋದಿಗೆ ಮನವಿ ಮಾಡಿದ್ದಾರೆ. ಪಾಕಿಸ್ತಾನವನ್ನು ತರಾಟೆಗೆ ತೆಗೆದುಕೊಂಡ ಓವೈಸಿ ಭಯೋತ್ಪಾದನೆಯನ್ನು ಉತ್ತೇಜಿಸುವ ವಿಫಲ ರಾಷ್ಟ್ರ ಎಂದು ಕರೆದಿದ್ದಾರೆ. ಪುಟ 2

### ಶಿವಮೊಗ್ಗದಲ್ಲಿ ಹೆಚ್ಚಾದ ಓಪನ್ ರೌಡಿಸಂ

## ದೇವಸ್ಥಾನದಲ್ಲಿ ಮಚ್ಚು ಪೂಜೆ, ರೌಡಿಯಿಂದ ಫೈರಿಂಗ್

**ಶಿವಮೊಗ್ಗ:** ಶಿವಮೊಗ್ಗ ಮತ್ತು ಭದ್ರಾವತಿಯಲ್ಲಿ ಪೊಲೀಸರ ಭಯವೇ ಇಲ್ಲದೇ ಓಪನ್ ರೌಡಿಸಂ ನಡೆಯುತ್ತಿದೆ. ಹಾಡುಹಗಲೇ ನಡು ರಸ್ತೆಯಲ್ಲಿ ರೌಡಿಸಂ ಮಾಡುವುದು, ದೇವಸ್ಥಾನದಲ್ಲಿ ಮಚ್ಚಿಗೆ ಪೂಜೆ ಮಾಡುವುದು ಮತ್ತು ಬಡಾವಣೆಯೊಂದರಲ್ಲಿ ರೌಡಿಯೊಬ್ಬನಿಂದ ಗಾಳಿಯಲ್ಲಿ ಗುಂಡು ಹಾರಿಸಲಾಗಿದೆ. ಸದ್ಯ ಈ ಮೂರ್ಮೂರು ಘಟನೆಗಳಿಂದಾಗಿ ಅವಳಿ ನಗರದ ಜನರು ನಿಜಕ್ಕೂ ಬೆಚ್ಚಿಬೀದಿದ್ದಾರೆ.

ಶಿವಮೊಗ್ಗದ ಟಿಪ್ಪು ನಗರದ ಬಡಾವಣೆಯಲ್ಲಿ ಮಹ್ಮದ್ ಇರ್ಫಾನ್ ಎಂಬ ರೌಡಿಶೀಟರ್ ರಾತ್ರಿಹೊತ್ತಿಲ್ಲಿನಲ್ಲಿ ಗನ್‌ನಿಂದ ಗಾಳಿಯಲ್ಲಿ




ಗುಂಡು ಹಾರಿಸಿ ಆತಂಕ ಮೂಡಿಸಿದ್ದ. ಆದರೆ ಇಲ್ಲಿ ರೌಡಿಶೀಟರ್ ಕೈಗೆ ಗನ್ ಬಂದಿದ್ದು ಹೇಗೆ ಎನ್ನುವುದು ಮಾತ್ರ ನಿಗೂಢ. ಟಿಪ್ಪು ನಗರದ ಜನರು ಈ ಘಟನೆಯಿಂದ ಬೆಚ್ಚಿಬಿದ್ದಿದ್ದರು. ಆದರ ಘಟನೆ ಕುರಿತು ಮಾಹಿತಿ ನೀಡಲು ಹಿಂದೇಟು ಹಾಕಿದ್ದರು.

ಇನ್ನೂ ಫೈರಿಂಗ್ ಬೆನ್ನಲ್ಲೇ ಎಚ್ಚೆತ್ತುಕೊಂಡ ತುಂಗಾ ನಗರ ಪೊಲೀಸರು ಘಟನೆ ಕುರಿತು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ್ದಾರೆ. ಫೈರಿಂಗ್ ಆಗಿರುವುದು ಏರ್ ಗನ್‌ನಿಂದ ಅಂತಾ ದೂರು ದಾಖಲಿಕೊಂಡು, ರೌಡಿಶೀಟರ್ ನನ್ನು ತುಂಗಾ ನಗರ ಪೊಲೀಸರು ಬಂಧಿಸಿದ್ದಾರೆ. ಪುಟ 2

## ಪಾಸಿಂಗ್ ಮಾರ್ಕ್ಸ್‌ನಲ್ಲಿ ಭಾರೀ ಬದಲಾವಣೆ!

**ಬೆಂಗಳೂರು:** ಇತ್ತೀಚೆಗಷ್ಟೇ ರಾಜ್ಯದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದೆ. ಕಳೆದ ವರ್ಷಕ್ಕಿಂತ ಉತ್ತೀರ್ಣಗೊಂಡವರ

» **ಮುಂದಿನ ವರ್ಷದ ಎಸ್‌ಎಸ್‌ಎಲ್‌ಸಿ- ಪಿಯುಸಿ ಪರೀಕ್ಷೆ**



ಸಂಖ್ಯೆ ಹೆಚ್ಚಿದ್ದು, ಶೇಕಡಾವಾರು ಫಲಿತಾಂಶ ಕೂಡ ಹೆಚ್ಚಿದೆ ಎನ್ನುವ ಮಾಹಿತಿ ಹೊರಬಿದ್ದಿದೆ. ಇದರ ನಡುವೆಯೇ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಮರು ಪರೀಕ್ಷೆ ಶುಲ್ಕ ಪಡೆಯದೆ ಇಲಾಖೆ ಪರೀಕ್ಷೆ ನಡೆಸುತ್ತಿದೆ. ಇದರ ನಡುವೆ ಮುಂದಿನ ವರ್ಷದ ಪರೀಕ್ಷೆಯಲ್ಲಿ ಉತ್ತೀರ್ಣ ಅಂಕದಲ್ಲೂ ಭಾರೀ ಪುಟ 2

# ಭಾರತದೊಂದಿಗಿನ ಉದ್ವಿಗ್ನತೆ ಕಡಿಮೆ ಮಾಡಲು ಯತ್ನ

# ರಷ್ಯಾದ ಮೊರೆ ಹೋದ ಪಾಕ್

**ಇಸ್ಲಾಮಾಬಾದ್:** ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ 26 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಇದಾದ ಬಳಿಕ ಪಾಕಿಸ್ತಾನ ಹಾಗೂ ಭಾರತದ ನಡುವೆ ಉದ್ವಿಗ್ನತೆ ಉಂಟಾಗಿದೆ. ಅದನ್ನು ಶಮನ ಮಾಡಲು ಪಾಕಿಸ್ತಾನವು ರಷ್ಯಾದ ಮೊರೆ ಹೋಗಿದೆ. ಉದ್ವಿಗ್ನತೆಯನ್ನು ಶಮನಗೊಳಿಸಲು ಪಾಕಿಸ್ತಾನವು ರಷ್ಯಾದ ರಾಜತಾಂತ್ರಿಕ ಹಸ್ತಕ್ಷೇಪವನ್ನು ಕೋರಿದೆ.

ಮಾಸ್ಕೋದಲ್ಲಿರುವ ಪಾಕಿಸ್ತಾನ ರಾಯಭಾರಿ ಮೊಹಮ್ಮದ್ ಖಾಲಿದ್ ಜಮಾಲಿ ಅವರು ಪರಿಸ್ಥಿತಿಯನ್ನು ಶಮನಗೊಳಿಸಲು ರಷ್ಯಾದ ಸಹಾಯವನ್ನು ಔಪಚಾರಿಕವಾಗಿ ಕೋರಿದ್ದಾರೆ. 1966 ರಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವಿನ ಸಶಸ್ತ್ರ ಸಂಘರ್ಷವನ್ನು ಕೊನೆಗೊಳಿಸಲು ಸಹಾಯ ಮಾಡಿದ ತಾಷ್ಕೆಂಟ್ ಮಾತುಕತೆಗಳ ಸಮಯದಲ್ಲಿ ರಷ್ಯಾ ಮಾಡಿದಂತೆ, ಈ ದ್ವಿಮುಖ ಸಂಬಂಧವನ್ನು ಬಳಸಿಕೊಂಡು ಮಧ್ಯಸ್ಥಿಕೆವಹಿಸಬಹುದು ಎಂದು ಆಶಿಸಿದರು.

ಪಾಕಿಸ್ತಾನದ ಉಪ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಇಶಾಕ್ ದಾರ್ ಅವರು ಲಾವ್ರೊವ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ್ದಾರೆ ಎಂದು ಪಾಕಿಸ್ತಾನ



ವಿದೇಶಾಂಗ ಕಚೇರಿಯ ಹೇಳಿಕೆ ತಿಳಿಸಿದೆ. ಲಾವ್ರೊವ್ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದರು ಮತ್ತು ಸಮಸ್ಯೆಗಳನ್ನು ಪರಿಹರಿಸಲು ರಾಜತಾಂತ್ರಿಕತೆಯ ಮಹತ್ವವನ್ನು ಒತ್ತಿ ಹೇಳಿದರು. ಎರಡೂ ಕಡೆಯವರು ಸಂಯಮದಿಂದ ವರ್ತಿಸಬೇಕು ಮತ್ತು ಉದ್ವಿಗ್ನತೆಯನ್ನು ತಪ್ಪಿಸಬೇಕು ಎಂದರು.

2019 ರ ಪುಲ್ವಾಮಾ ದಾಳಿಯ ನಂತರ ಕಣಿವೆಯಲ್ಲಿ ನಡೆದ ಅತ್ಯಂತ ಭೀಕರ ದಾಳಿ ಪಹಲ್ಗಾಮ್ ನಲ್ಲಿ ನಡೆದಿದ್ದು, 26 ಮಂದಿ ಪ್ರಾಣ ಕಳೆದುಕೊಂಡಿದ್ದರು. ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಬಂಧ ಮತ್ತಷ್ಟು ಹಳಸಿದೆ.

ಭಾರತವು ಎರಡು ದೇಶಗಳ ನಡುವಿನ ನೀರು ಹಂಚಿಕೆಯನ್ನು ನಿಯಂತ್ರಿಸುವ 1960 ರ ಸಿಂಧೂ ಒಪ್ಪಂದವನ್ನು ಸ್ಥಗಿತಗೊಳಿಸುವುದಾಗಿ ಘೋಷಿಸಿತು. ಇದಕ್ಕೂ ಮೊದಲು ಏಪ್ರಿಲ್ 24 ರಂದು, ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿರುವ ಭಯೋತ್ಪಾದಕರು ಮತ್ತು ಅವರ ಬೆಂಬಲಿಗರನ್ನು ಶಿಕ್ಷಿಸುವುದಾಗಿ ಪ್ರಧಾನಿ ನರೇಂದ್ರ ಮೋದಿ ಪ್ರತಿಜ್ಞೆ ಮಾಡಿದರು.

ಪಹಲ್ಗಾಮ್ ಭಯೋತ್ಪಾದಕ ದಾಳಿ 2019 ರಲ್ಲಿ 370 ನೇ ವಿಧಿಯನ್ನು ರದ್ದುಪಡಿಸಿದ ನಂತರ ನಡೆದ ಅತಿದೊಡ್ಡ ಭಯೋತ್ಪಾದಕ ದಾಳಿಗಳಲ್ಲಿ ಇದು ಒಂದಾಗಿದೆ. ಭಯೋತ್ಪಾದಕ ದಾಳಿಯ ನಂತರ, ಭದ್ರತಾ ಪಡೆಗಳು ಕಾರಣರಾದ ಭಯೋತ್ಪಾದಕರನ್ನು ಪತ್ತೆಹಚ್ಚಲು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದವು. ದಾಳಿಯ ನಂತರ ಭದ್ರತೆಯನ್ನು ಹೆಚ್ಚಿಸಲಾಗಿದೆ.

### ಯುದ್ಧ ಕಾರ್ಮೋಡದ ನಡುವೆ BSFಗೆ ಇನ್ನಷ್ಟು ಬಲ

## 16 ಹೊಸ ಬೆಟಾಲಿಯನ್ ಸೇರ್ಪಡೆ?

**ನವದೆಹಲಿ:** ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧದ ಕಾರ್ಮೋಡ ಹೆಚ್ಚಾಗುತ್ತಿದ್ದಂತೆ ಇದೀಗ ಭಾರತದ ಗಡಿ ಭದ್ರತಾ ಪಡೆಗೆ ಇನ್ನಷ್ಟು ಬಲ ಬಂದಿದ್ದು, 16 ಹೊಸ ಬೆಟಾಲಿಯನ್‌ಗಳು ಸೇರ್ಪಡೆಯಾಗಲಿವೆ ಎಂದು ಮೂಲಗಳು ತಿಳಿಸಿವೆ.

ಭಾರತ ಮತ್ತು ಪಾಕ್ ನಡುವೆ ಉದ್ವಿಗ್ನ ಪರಿಸ್ಥಿತಿ ಉಂಟಾಗುತ್ತಿದ್ದು, ಬಿಎಸ್‌ಎಫ್‌ಗೆ 16 ಹೊಸ ಬೆಟಾಲಿಯನ್‌ಗಳು ಮತ್ತು ಭಾರತ ಪಾಕ್ ಮತ್ತು ಭಾರತ ಬಾಂಗ್ಲಾ ಗಡಿಯಲ್ಲಿ ಒಂದೊಂದರಂತೆ ಎರಡು ಹೊಸ ಪ್ರಾದೇಶಿಕ ಪ್ರಧಾನ ಕಚೇರಿಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರ ಶೀಘ್ರವೇ ಅನುಮೋದನೆ ನೀಡಲಿದೆ. ಜೊತೆಗೆ ಬೆಟಾಲಿಯನ್‌ಗಳಲ್ಲಿ ಸುಮಾರು 17,000 ಹೊಸ ಸೈನಿಕರನ್ನು ನೇಮಿಸಲಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಈ ಕುರಿತು 2020-21ರಲ್ಲಿ ಬಿಎಸ್‌ಎಫ್ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು.

ಈ ಕುರಿತು ಭದ್ರತಾ ಪಡೆ ಮಾಹಿತಿ ನೀಡಿದ್ದು, ಪ್ರಸ್ತುತ ಈ ಅರೆಸೇನಾಪಡೆಯು 193 ಬೆಟಾಲಿಯನ್‌ಗಳನ್ನು



ಹೊಂದಿದ್ದು, ಒಂದು ಬೆಟಾಲಿಯನ್ 1,000 ಮಂದಿಗೂ ಹೆಚ್ಚು ಯೋಧರನ್ನು ಒಳಗೊಂಡಿದೆ. ಕೇಂದ್ರ ಸರ್ಕಾರ ಅನುಮೋದನೆ ನೀಡುತ್ತಿದ್ದಂತೆ ಬಿಎಸ್‌ಎಫ್ ಮಹಿಳಾ ಹಾಗೂ ಪುರುಷ ಸಿಬ್ಬಂದಿಗಾಗಿ ನೇಮಕಾತಿ ಪ್ರಕ್ರಿಯೆ ಆರಂಭಿಸಲಿದೆ. ಪುಟ 2

### ಜಮ್ಮುವಿನ ಜೈಲುಗಳ ಮೇಲೆ ಭಯೋತ್ಪಾದಕ ದಾಳಿ ಸಾಧ್ಯತೆ

## ಭದ್ರತೆ ಹೆಚ್ಚಳ



**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಜೈಲುಗಳ ಮೇಲೆ ಭಯೋತ್ಪಾದಕ ದಾಳಿಯ ಬೆದರಿಕೆ ಇದೆ ಎಂದು ಮೂಲಗಳು ಸೂಚಿಸಿವೆ. ಇದರಿಂದಾಗಿ ಭದ್ರತೆಯಲ್ಲಿ ಗಮನಾರ್ಹ ಹೆಚ್ಚಳವಾಗಿದೆ. ಗುಪ್ತಚರ ಮಾಹಿತಿಯ ಪ್ರಕಾರ ಶ್ರೀನಗರ ಕೇಂದ್ರ ಜೈಲು ಮತ್ತು ಜಮ್ಮುವಿನ ಕೋಟ್ ಬಲ್ವಾಲ್ ಜೈಲುಗಳನ್ನು ಗುರಿಯಾಗಿಸಿ ದಾಳಿ ನಡೆಸಬಹುದು ಎಂದು ಅಂದಾಜಿಸಲಾಗಿದೆ. ಪುಟ 2

## ಇಸ್ಲಾಂ ಇರುವವರೆಗೂ ಭಯೋತ್ಪಾದನೆ ಜೀವಂತ

**ನವದೆಹಲಿ:** ಇಸ್ಲಾಂ ಇರುವವರೆಗೂ ಭಯೋತ್ಪಾದನೆ ಜೀವಂತವಾಗಿರುತ್ತದೆ ಎಂದು ಬಾಂಗ್ಲಾದೇಶದ ಲೇಖಕಿ ತಸ್ಲಿಮಾ ನಸ್ರೀನ್ ಹೇಳಿದ್ದಾರೆ.

ದೆಹಲಿ ಸಾಹಿತ್ಯ ಉತ್ಸವದಲ್ಲಿ ಮಾತನಾಡಿದ ಅವರು ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು 2016ರ ಢಾಕಾದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಹೋಲಿಸಿ ಈ ಹೇಳಿಕೆ ನೀಡಿದ್ದಾರೆ.



ಕಳೆದ 1,400 ವರ್ಷಗಳಲ್ಲಿ ಇಸ್ಲಾಂ ವಿಕಸನಗೊಂಡಿಲ್ಲ. ಅದು ವಿಕಸನಗೊಳ್ಳುವವರೆಗೆ ಭಯೋತ್ಪಾದಕರನ್ನು ಬೆಳೆಸುತ್ತಲೇ ಇರುತ್ತದೆ. 2016ರ ಢಾಕಾ ದಾಳಿಯಲ್ಲಿ ಕಲ್ಮಾವನ್ನು ಪಠಿಸದಕ್ಕೆ ಜನರನ್ನು ಹತ್ಯೆ ಮಾಡಲಾಯಿತು. ನಮ್ಮ ನಂಬಿಕೆ ವಿವೇಚನೆ ಮತ್ತು ಮಾನವೀಯತೆಯನ್ನು ಮೀರಿದಾಗ ಹೀಗೆ ಆಗುತ್ತದೆ ಎಂದು ತಿಳಿಸಿದರು. ಪುಟ 2

## 30 ನಿಮಿಷ ಲೈಟ್ ಆಫ್

### ಪಂಜಾಬ್ ಗಡಿಯಲ್ಲಿ ಸೇನೆಯಿಂದ ಮಾಕ್ ಡ್ರಿಲ್

**ಚಂಡೀಗಢ:** ಪಹಲ್ಗಾಮ್ ದಾಳಿಯ ಬಳಿಕ ಭಾರತ ಮತ್ತು ಪಾಕಿಸ್ತಾನದ ಮಧ್ಯೆ ಹೆಚ್ಚುತ್ತಿರುವ ಕಾದಾಟದ ನಡುವೆಯು ಇದೀಗ ಭಾರತೀಯ ಸೇನೆ ಪಂಜಾಬ್‌ನ ಫಿರೋಜ್‌ಪುರ ಗಡಿ ಭಾಗದಲ್ಲಿ ಮಾಕ್ ಡ್ರಿಲ್ ನಡೆಸಿದೆ.

ಏ.22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ನಡೆದ ಹಿಂದೂಗಳ ನರಮೇಧದ ಬಳಿಕ ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಜೋರಾಗಿದೆ. ಭಾರತ ಪಾಕಿಸ್ತಾನಕ್ಕೆ ಒಂದಾದ ಮೇಲೊಂದರಂತೆ ಶಾಕ್ ಕೊಡುತ್ತಲೇ ಇದೆ. ಇದೆಲ್ಲದರ



ನಡುವೆ ಭಾರತೀಯ ಸೇನೆ ಪಂಜಾಬ್‌ನ ಫಿರೋಜ್‌ಪುರ ಗಡಿ ಭಾಗದಲ್ಲಿ ಭಾನುವಾರ ರಾತ್ರಿ 9 ರಿಂದ 9:30ರ ಸಮಯದಲ್ಲಿ ಮಾಕ್ ಡ್ರಿಲ್ ನಡೆಸಿತು. ಪುಟ 2

### ಸುಹಾಸ್ ಶೆಟ್ಟಿ ಹತ್ಯೆಗೆ 50 ಲಕ್ಷ ಫಂಡಿಂಗ್

## ಪ್ರಭಾವಿ ಮುಸ್ಲಿಮರ ಬ್ಯಾಂಕ್ ಖಾತೆ ಮೇಲೆ ಕಣ್ಣು!

**ಮಂಗಳೂರು:** ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿಯ ಹತ್ಯೆ ಪ್ರತೀಕಾರಕ್ಕೆ ನಡೆದರೂ ಈ ಹತ್ಯೆಯ ಹಿಂದೆ ಲಕ್ಷಾಂತರ ರೂ. ಹಣ ಹರಿದಾಡಿದೆ. ಕೇವಲ ಐದು ಲಕ್ಷಕ್ಕಾಗಿ ಮಾತ್ರ ಈ ಹತ್ಯೆ ನಡೆದಿಲ್ಲ ಎನ್ನುವ ಸ್ಫೋಟಕ ಮಾಹಿತಿ ತನಿಖೆ ವೇಳೆ ಪ್ರಕಟವಾಗಿದೆ.

ಹೌದು. ಫಾಝಿಲ್ ಹತ್ಯೆಯನ್ನು ಅರಗಿಸಿಕೊಳ್ಳಲಾಗದ ಪ್ರಭಾವಿ ಮುಸ್ಲಿಮರು ಫಾಝಿಲ್ ಸಹೋದರನ ಕೈ ಬಲಪಡಿಸಿದ್ದಾರೆ. ಲಕ್ಷಾಂತರ ರೂಪಾಯಿ ಫಂಡಿಂಗ್ ಆಗಿರುವ ಬಗ್ಗೆ ಮಾಹಿತಿ ಸಿಕ್ಕ ಪೊಲೀಸರು ಇದೀಗ



ಹಲವು ಬ್ಯಾಂಕ್ ಖಾತೆಗಳ ಪರಿಶೀಲನೆಗೆ ಮುಂದಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಫಾಝಿಲ್ ತಮ್ಮ ಆದಿಲ್ ಮೆಹರೂಫ್ ನೀಡಿದ ಸುಪಾರಿಯಂತೆ ಈ ಹತ್ಯೆಯನ್ನು ಹಂತಕರು ನಡೆಸಿದ್ದಾರೆ. ಆದಿಲ್ 5 ಲಕ್ಷ ರೂ. ನೀಡುವುದಾಗಿ ಸುಪಾರಿ ನೀಡಿ ಅದರಲ್ಲಿ 3 ಲಕ್ಷ ರೂ. ಮುಂಗಡ ಪಾವತಿಸಿದ್ದ. ಇನ್ನುಳಿದ 2 ಲಕ್ಷ ರೂ. ಕೆಲಸ ಮುಗಿಸಿದ ಮೇಲೆ ನೀಡುವುದಾಗಿ ಹೇಳಿದ್ದ ಎಂದು ಬಂಧನದ ಬಳಿಕ ಆರೋಪಿಗಳು ಬಾಯ್ಬಿಟ್ಟಿದ್ದರು. ಪುಟ 2

## ರೇಬೀಸ್ ಲಸಿಕೆ ಪಡೆದರೂ 7ರ ಬಾಲಕಿ ಸಾವು

**ತಿರುವನಂತಪುರಂ:** ರೇಬೀಸ್ ಲಸಿಕೆ ಪಡೆದರೂ ಚಿಕಿತ್ಸೆ ಪಡೆಯುತ್ತಿದ್ದ ಏಳು ವರ್ಷದ ಬಾಲಕಿ ಸಾವನ್ನಪ್ಪಿದ ಘಟನೆ ಕೇರಳದಲ್ಲಿ ನಡೆದಿದೆ.

ಕೊಲ್ಲಂನ ಕುನ್ನಿಕೋಡ್‌ನ ನಿಯಾ ಫೈಸಲ್ ಮೃತ ಬಾಲಕಿ. ರೇಬೀಸ್ ಪತ್ತೆಯಾದ ಬಳಿಕ ಆಕೆಯನ್ನು ವೆಂಟಿಲೇಟರ್‌ನಲ್ಲಿ ಇಟ್ಟು ಚಿಕಿತ್ಸೆ ನೀಡಲಾಗುತ್ತಿತ್ತು. ಈ ಸಾವಿನೊಂದಿಗೆ ಕಳೆದ ಒಂದು ತಿಂಗಳೊಳಗೆ ಕೇರಳದಲ್ಲಿ ರೇಬೀಸ್ ಸೋಂಕಿನಿಂದ ಸಾವನ್ನಪ್ಪಿದ ಮಕ್ಕಳ ಸಂಖ್ಯೆ ಮೂರಕ್ಕೆ ಏರಿದೆ.

ಏಪ್ರಿಲ್ 8 ರಂದು ಬಾಲಕಿ ಅಂಗಳದಲ್ಲಿ ಆಟವಾಡುತ್ತಿದ್ದಾಗ ಬೀದಿ ನಾಯಿ ಕಚ್ಚಿತ್ತು. ಅಂಗಳದಲ್ಲಿದ್ದ ಬಾತುಕೋಳಿ ಮೇಲೆ ದಾಳಿ ಮಾಡಲು ಮುಂದಾಗಿದ್ದಾಗ ಬಾಲಕಿ ರಕ್ಷಿಸಲು ಹೋಗಿದ್ದಳು. ಈ ವೇಳೆ



ನಾಯಿ ಬಾಲಕಿಯ ಮೊಣಕೈಗೆ ಕಚ್ಚಿತ್ತು. ಬಾಲಕಿಯನ್ನು ಕೂಡಲೇ ವಿಲಕ್ಕುಡಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ರೇಬೀಸ್ ಲಸಿಕೆಯ ಮೊದಲ ಡೋಸ್ ನೀಡಲಾಯಿತು. ನಂತರ ಏ.11 ಮತ್ತು 15 ರಂದು ಕ್ರಮವಾಗಿ ಎರಡನೇ ಮತ್ತು ಮೂರನೇ ಡೋಸ್ ನೀಡಲಾಯಿತು. ಅಂತಿಮ ಡೋಸ್ ಅನ್ನು ಮೇ 6 ರಂದು ನೀಡಲು ನಿಗದಿಪಡಿಸಲಾಗಿತ್ತು. ಪುಟ 2

### ಬೆಂಗಳೂರು ಮೆಟ್ರೋ ನಿಲ್ದಾಣದ ಆವರಣದಲ್ಲಿ ಉಗುಳಿದ ಪ್ರಯಾಣಿಕ

## ದಂಡ ವಿಧಿಸಿದ ಬಿಎಂಆರ್‌ಸಿಎಲ್

**ಬೆಂಗಳೂರು:** ಇತ್ತೀಚೆಗೆ ಓರ್ವ ಯುವತಿ ಮೆಟ್ರೋದಲ್ಲೇ ಕುಳಿತು ಆಹಾರ ಸೇವಿಸಿದ್ದ ಘಟನೆ ನಡೆದಿತ್ತು. ಬಳಿಕ ಬೆಂಗಳೂರು ಮೆಟ್ರೋ ರೈಲು ನಿಗಮ ಆ ಯುವತಿಗೆ 500 ರೂ ದಂಡ ವಿಧಿಸಿತ್ತು. ಅದೇ ರೀತಿಯಾಗಿ ಓರ್ವ ಪ್ರಯಾಣಿಕ ಮೆಟ್ರೋದಲ್ಲಿ ಕುಳಿತು ವಿಮಲ್ ಪಾನ್ ಮಸಾಲ ತಿನ್ನುತ್ತಿದ್ದ ವಿಡಿಯೋವೊಂದು ವೈರಲ್ ಆಗಿತ್ತು. ಸಹ ಪ್ರಯಾಣಿಕರು ಆತನನ್ನು ತರಾಟೆಗೆ ತೆಗೆದುಕೊಂಡಿದ್ದರು. ಮೆಟ್ರೋದಲ್ಲಿ ಈ ರೀತಿ ಮಾಡುವುದು ತಪ್ಪು ಎಂದೂ ಗೊತ್ತಿದ್ದರು ಕೆಲವರು ಹುಚ್ಚಾಟ ಮೆರೆಯುತ್ತಿದ್ದಾರೆ. ಇದೀಗ ಮತ್ತೊಂದು ಘಟನೆ ನಡೆದಿದೆ. ಮೆಟ್ರೊ ನಿಲ್ದಾಣದ ಆವರಣದಲ್ಲಿ ಉಗುಳಿದ ಪ್ರಯಾಣಿಕನಿಗೆ ಬಿಎಂಆರ್‌ಸಿಎಲ್ ದಂಡ ವಿಧಿಸಿದೆ.

**ಮೆಟ್ರೋ ಪ್ರಕಟಣೆಯಲ್ಲಿ ಏನಿದೆ?:** ಮೇ 2 2025ರ ಸಂಜೆ ಸುಮಾರು 6:30ಕ್ಕೆ ಗ್ರೀನ್ ಲೈನ್ ಕನಕಪುರ ರಸ್ತೆಯಲ್ಲಿರುವ ದೊಡ್ಡಕಲಸಂದ್ರ ಮೆಟ್ರೋ ನಿಲ್ದಾಣದ ಪ್ಲಾಟ್ ಫಾರ್ಮ್ 01ರ ಲಿಫ್ಟ್ ಬಳಿಯಲ್ಲಿ ಪಾನ್ ಮಸಾಲಾ ಉಗುಳುತ್ತಿದ್ದ ಪ್ರಯಾಣಿಕನನ್ನು ಪತ್ತೆ ಹಚ್ಚಿ ಮೆಟ್ರೋ ಅಧಿಕಾರಿಗಳು ದಂಡ ವಿಧಿಸಿರುವುದಾಗಿ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ತಿಳಿಸಿದೆ.




ಮೆಟ್ರೋ ಆವರಣದಲ್ಲಿ ಉಗುಳುವುದು ಮತ್ತು ಕಸದಂಚುಗಳನ್ನು ಎಸೆಯುವುದು ಪರಿಸರ ಹಾಳಾಗುವುದಲ್ಲದೆ, ಇತರೆ ಪ್ರಯಾಣಿಕರ ಆರೋಗ್ಯಕ್ಕೂ ಅಪಾಯವನ್ನು ಉಂಟುಮಾಡುತ್ತದೆ. ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ಸ್ವಚ್ಛ, ಆರೋಗ್ಯಕರ ಮತ್ತು ಸುರಕ್ಷಿತ ಸಾರ್ವಜನಿಕ ಸಾರಿಗೆಯ ವ್ಯವಸ್ಥೆಗಾಗಿ ಕಟಿಬದ್ಧವಾಗಿದೆ. ಪುಟ 2

## ಯುವತಿಯ ಹಿಂಬದಿ ಟಚ್ ಮಾಡಿ ಅಸಭ್ಯ ವರ್ತನೆ ತೋರಿದ ಎಂಬಿಎ ಪದವೀಧರ ಅರೆಸ್ಟ್

**ಬೆಂಗಳೂರು:** ನಗರದ ಮಾರತ್ತಹಳ್ಳಿಯಲ್ಲಿ ಯುವತಿಯ ಜೊತೆಗೆ ಅಸಭ್ಯ ವರ್ತನೆ ತೋರಿದ್ದ ವ್ಯಕ್ತಿಯನ್ನು ಬಂಧನ ಮಾಡಲಾಗಿದೆ. ಇಲ್ಲಿನ ದೇವರ ಬಿಸನಹಳ್ಳಿ ವಾಸಿಯಾಗಿರೋ ಶ್ರೀಕಾಂತ್ ಬಂಧಿತ ಬೀದಿ ಕಾಮಣ್ಣ. ಕಳೆದ ಏ.30ರಂದು ರಾತ್ರಿ 11:30 ಗಂಟೆ ಸುಮಾರಿಗೆ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಯುವತಿ ಕೆಲಸ ಮುಗಿಸಿ ಇಕೋ ಸ್ಪೇಸ್‌ನ ಮುಖ್ಯದ್ವಾರದ ಬಳಿ ನಡೆದುಕೊಂಡು ಬರುತ್ತಿದ್ದರು. ಈ ವೇಳೆ ಹಿಂದಿನಿಂದ ಬಂದ ವ್ಯಕ್ತಿ, ಯುವತಿಯ ಹಿಂಬದಿ ಡಚ್ ಮಾಡಿ ನಂತರ ಅಸಭ್ಯವಾಗಿ ವರ್ತಿಸಿ ಎಸ್ಕೇಪ್ ಆಗಿದ್ದ. ಈ ವೇಳೆ ಯುವತಿ ಜೋರಾಗಿ ಕೂಗಿಕೊಂಡು ಸಹಾಯಕ್ಕಾಗಿ ಕರೆದಿದ್ದರು. ಆದ್ರೂ ಕೂಡ ಯುವತಿಯ ಸಹಾಯಕ್ಕೆ ಯಾರೊಬ್ಬರೂ ಬಂದಿರಲಿಲ್ಲ ಅಂತ ಆಕೆ ಅಸಮಾಧಾನ ವ್ಯಕ್ತಪಡಿಸಿದ್ಲು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಮಾರತ್ತಹಳ್ಳಿ ಪೊಲೀಸರು, ಸ್ಥಳದಲ್ಲಿದ್ದ ಸಿಸಿಟಿವಿ ಪರಿಶೀಲಿಸಿ, ಅಲ್ಲಿದ್ದ ಸೆಕ್ಯೂರಿಟಿಗಳಿಂದ ಮಾಹಿತಿ ಕಲೆಹಾಕಿದ್ದರು. ತನಿಖೆ ಮುಂದುವರೆಸಿ ಆರೋಪಿ ಶ್ರೀಕಾಂತ್‌ನನ್ನ ಬಂಧಿಸಿದ್ದಾರೆ. ಆರೋಪಿ ಕೂಡ ಎಂಬಿಎ ಪದವೀಧರನಾಗಿದ್ದು ಖಾಸಗಿ ಕಂಪನಿಯಲ್ಲಿ ಕೆಲಸ ಮಾಡ್ತಿದ್ದ ಅನ್ನೋದು ಗೊತ್ತಾಗಿದೆ. ಸದ್ಯ ಆರೋಪಿಯನ್ನ ಬಂಧಿಸಿರುವ ಪೊಲೀಸರು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

## ಉಡುಪಿಗೆ ಆಗಮಿಸಿದ ಭೂಗತ ಪಾತಕಿ ಬನ್ನಂಜೆ ರಾಜಾ

**ಉಡುಪಿ:** ಪೆರೋಲ್ ಮೇಲೆ ಬಿಡುಗಡೆಯಾಗಿರುವ ಭೂಗತ ಪಾತಕಿ ಬನ್ನಂಜೆ ರಾಜಾ ಉಡುಪಿಗೆ ಆಗಮಿಸಿದ್ದಾನೆ. ತಂದೆ ಸುಂದರ ಶೆಟ್ಟಿಗಾರ ಅಂತ್ಯಸಂಸ್ಕಾರದಲ್ಲಿ ಭಾಗಿಯಾಗಬೇಕೆಂದು ಬನ್ನಂಜೆ, ಹೈಕೋರ್ಟ್‌ಗೆ ಪೆರೋಲ್ ಅರ್ಜಿ ಸಲ್ಲಿಸಿದ್ದ. ಕೋರ್ಟ್ ಪೆರೋಲ್ ನೀಡಿದ್ದು, ಬಿಗಿ ಪೊಲೀಸ್ ಭದ್ರತೆಯಲ್ಲಿ ಬನ್ನಂಜೆ ರಾಜಾನನ್ನು ಉಡುಪಿಗೆ ಕರೆತರಲಾಗಿದೆ. ಅಂತ್ಯಸಂಸ್ಕಾರ ಮತ್ತು ಅಪರಕ್ರಿಯೆಯಲ್ಲಿ ನಡೆಸಲಿದ್ದಾನೆ. ಬನ್ನಂಜೆ ರಾಜಾ ಒಟ್ಟು 23 ಪ್ರಕರಣಗಳಲ್ಲಿ ಜೀವಾವಧಿ ಶಿಕ್ಷೆಗೆ ಒಳಗಾಗಿದ್ದಾನೆ. ಈತನನ್ನು ಬೆಳಗಾವಿ ಹಿಂಡಲಗಾ ಜೈಲಿನಲ್ಲಿರಿಸಲಾಗಿದೆ.

ಈ ಕುರಿತು ಮಾತನಾಡಿರುವ ಉಡುಪಿ ಎಸ್‌ಪಿ ಡಾ. ಅರುಣ್ ಕುಮಾರ್, ಇತ್ತೀಚೆಗೆ ಬನ್ನಂಜೆ ರಾಜಾನ ತಂದೆ ಮೃತಪಟ್ಟಿದ್ದಾರೆ. ಬೆಳಗಾವಿ ಜೈಲಿನಿಂದ ಹೈಕೋರ್ಟಿಗೆ ಪೆರೋಲ್‌ಗೆ ಅರ್ಜಿ ಸಲ್ಲಿಸಿದ್ದರು. ಹೈಕೋರ್ಟ್ ಹಲವು ಷರತ್ತುಗಳನ್ನು ವಿಧಿಸಿ ಪೆರೋಲ್ ನೀಡಿದೆ. ಮೇ 3 ರಿಂ 14ನೇ ತಾರೀಖಿನವರೆಗೆ ಪೆರೋಲ್ ರಜೆ ನೀಡಲಾಗಿದೆ. ಸಹಚರರ ಜೊತೆ ಯಾವುದೇ ಕೃತ್ಯದಲ್ಲಿ ಭಾಗಿಯಾಗುವಂತಿಲ್ಲ. ಮೊಬೈಲ್, ಇಂಟರ್ನೆಟ್ ಬಳಸುವಂತಿಲ್ಲ. ಮನೆಯನ್ನು ಬಿಟ್ಟು ಹೊರಗೆ ಬರುವಂತಿಲ್ಲ. ಬನ್ನಂಜೆ ರಾಜಾ ಅಂತ್ಯಸಂಸ್ಕಾರದಲ್ಲಿ ಮಾತ್ರ ಭಾಗಿಯಾಗಬೇಕು ಎಂದು ಷರತ್ತು ವಿಧಿಸಲಾಗಿದೆ. ಮೇ 14 ರಂದು ಮತ್ತೆ ಬೆಳಗಾವಿಗೆ ಆತನನ್ನು ಶಿಫ್ಟ್ ಮಾಡುತ್ತೇವೆ ಎಂದು ತಿಳಿಸಿದ್ದಾರೆ.



## ಸುಹಾಸ್ ಶೆಟ್ಟಿ ಬೆನ್ನಲ್ಲೇ ಮಂಗಳೂರಲ್ಲಿ ಮತ್ತೊಬ್ಬ ಹಿಂದೂ ಮುಖಂಡನ ಹತ್ಯೆಗೆ ಸ್ಕೆಚ್



**ಮಂಗಳೂರು:** ಸುಹಾಸ್ ಶೆಟ್ಟಿ ಬೆನ್ನಲ್ಲೇ ಮಂಗಳೂರಲ್ಲಿ ಮತ್ತೊಬ್ಬ ಹಿಂದೂ ಮುಖಂಡನ ಹತ್ಯೆಗೆ ಸಂಚು ರೂಪಿಸಲಾಗಿದೆ. ಭರತ್ ಕುಮ್ಡೇಲ್‌ಗೆ ಜೀವ ಬೆದರಿಕೆ ಇದ್ದು, ಡೇಟ್ ಫಿಕ್ಸ್ ಮಾಡಿ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಹರಿದಾಡುತ್ತಿದೆ.

ಹಿಂದೂ ಮುಖಂಡ ಭರತ್ ಕುಮ್ಡೇಲ್‌ಗೆ ಜೀವ ಬೆದರಿಕೆ ಹಾಕಲಾಗಿದೆ. '5/5/2025 ರಾತ್ರಿ 9:30ಕ್ಕೆ ನಿನ್ನ ಸ್ಥಳದಲ್ಲೇ ಕೊಲೆ' ಮಾಡುವುದಾಗಿ ಪೋಸ್ಟ್ ಹರಿಬಿಡಲಾಗಿದೆ. ಸುಹಾಸ್ ಶೆಟ್ಟಿ ಪೋಟೋಗೆ ರೈಟ್ ಚಿಹ್ನೆ ಹಾಕಿ ಹಂತಕರು ವಿಕೃತಿ ಮೆರೆದಿದ್ದರು.

ಎಸ್‌ಡಿಪಿಐ ಮುಖಂಡ ಅಶ್ರಫ್ ಕಲಾಯಿ ಹತ್ಯೆಯ ಪ್ರಮುಖ ಆರೋಪಿ ಭರತ್ ಕುಮ್ಡೇಲು. 2017ರ ಜೂನ್ 21 ರಂದು ಅಶ್ರಫ್ ಹತ್ಯೆಯಾಗಿತ್ತು. ಬಂಟ್ವಾಳದ ಬೆಂಜನಪದವು ಎಂಬಲ್ಲಿ ಅಶ್ರಫ್ ಬರ್ಬರವಾಗಿ ಹತ್ಯೆಗೀಡಾಗಿದ್ದ. ಎಸ್‌ಡಿಪಿಐನಲ್ಲಿ ಅಶ್ರಫ್ ಮುಂಚೂಣಿಯಲ್ಲಿದ್ದ. ಆತನ ಹತ್ಯೆ ಬಳಿಕ ಪ್ರತೀಕಾರವಾಗಿ ಬಂಟ್ವಾಳದ ಶರತ್ ಮಡಿವಾಳ ಹತ್ಯೆಯಾಗಿತ್ತು.

ಸುಹಾಸ್ ಶೆಟ್ಟಿ ಹತ್ಯೆ ಬೆನ್ನಲ್ಲೇ ಶರಣ್ ಪಂಪ್ವೆಲ್, ಭರತ್ ಕುಮ್ಡೇಲ್‌ಗೆ ಜೀವ ಬೆದರಿಕೆ ಹಾಕಲಾಗಿದೆ. ಮುಂದಿನ ಟಾರ್ಗೆಟ್ ಶರಣ್ ಪಂಪ್ವೆಲ್ ಎಂದು ಪೋಸ್ಟ್ ಹರಿಬಿಡಲಾಗಿದೆ. ಪೊಲೀಸ್ ಇಲಾಖೆಯ ಕ್ರಮದ ನಡುವೆ ದ್ವೇಷ ಕಾರುವ ಪೋಸ್ಟ್ ಹಾಕಲಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಹಿಂದೂ ಮುಖಂಡರಿಗೆ ಜೀವ ಬೆದರಿಕೆ ಒಡ್ಡಲಾಗಿದೆ. ವಿಹೆಚ್‌ಪಿ ಮುಖಂಡ ಶರಣ್ ಪಂಪ್ವೆಲ್ ಹಾಗೂ ಭಜರಂಗದಳ ಮುಖಂಡ ಭರತ್ ಕುಮ್ಡೇಲ್‌ಗೆ ಜೀವಬೆದರಿಕೆ ಬಂದಿದೆ.

## ಅಂಬೇಡ್ಕರ್‌ರನ್ನ ಸೋಲಿಸಿದ್ದು ಕಾಂಗ್ರೆಸ್ ಅಲ್ಲ ಎಂದು ಸಾಬೀತಾದ್ರೆ, ರಾಜೀನಾಮೆಗೆ ಸಿದ್ಧ: ಛಲವಾದಿ

**ಬೆಂಗಳೂರು:** ಅಂಬೇಡ್ಕರ್‌ರನ್ನ ಸೋಲಿಸಿದ್ದು ಕಾಂಗ್ರೆಸ್ ಅಲ್ಲ ಎಂದು ಸಾಬೀತು ಪಡಿಸಿದರೆ ನಾನು ಪರಿಷತ್ ವಿಪಕ್ಷ ನಾಯಕನ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧ ಎಂದು ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.



ಅಂಬೇಡ್ಕರ್‌ರನ್ನು ಸೋಲಿಸಿದ್ದು ಕಮ್ಯೂನಿಸ್ಟ್ ಪಕ್ಷದ ಡಾಂಗೇ ಮತ್ತು ಸಾವರ್ಕರ್ ಎಂಬ ಖರ್ಗೆಯವರ ಹೇಳಿಕೆ ವಿಚಾರವಾಗಿ ಮಾಧ್ಯಮದವರೊಂದಿಗೆ ಮಾತನಾಡಿದರು. ಈ ಬಗ್ಗೆ ಈಗಾಗಲೇ ಜೈರಾಮ್ ರಮೇಶ್, ಪ್ರಿಯಾಂಕ್ ಖರ್ಗೆ, ಸಿದ್ದರಾಮಯ್ಯ ಹಾಗೂ ಈಗ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಈ ನಾಲ್ವರೂ ಅಂಬೇಡ್ಕರ್‌ರನ್ನ ಸೋಲಿಸಿದ್ದು ಕಾಂಗ್ರೆಸ್ ಅಲ್ಲ ಅನ್ನೋದನ್ನು ಸಾಬೀತು ಪಡಿಸಲಿ. ಅವರು ಸಾಬೀತು ಪಡಿಸಿದರೆ ನಾನು ಪರಿಷತ್ ವಿಪಕ್ಷ ನಾಯಕ ಸ್ಥಾನಕ್ಕೆ ರಾಜೀನಾಮೆ ಕೊಡಲು ಸಿದ್ಧ. ಅಷ್ಟೇ ಅಲ್ಲ, ಸಾಬೀತು ಮಾಡಿದವರಿಗೆ ನನ್ನ ಸ್ವಂತ ಸಂಬಳದಿಂದ 1 ಲಕ್ಷದ ಒಂದು ರೂ. ಬಹುಮಾನ ಕೊಡ್ತೇನೆ. ಇಲ್ಲದಿದ್ದರೆ ಜೈರಾಮ್ ರಮೇಶ್, ಪ್ರಿಯಾಂಕ್ ಖರ್ಗೆ, ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ ರಾಜೀನಾಮೆ ಕೊಡ್ತಾರಾ ಎಂದು ಸವಾಲ್ ಹಾಕಿದರು.

ಒಳ ಮೀಸಲಾತಿ ಮಾಡುವ ಯೋಗ್ಯತೆ ಇಲ್ಲ. ಮಾಡುವಂತ ಮೋಸಕ್ಕೆ ಜನರು ನಿಮಗೆ ಬುದ್ಧಿ ಕಲಿಸ್ತಾರೆ. ಅಂಬೇಡ್ಕರ್‌ಗೆ ಗೌರವ ಸಿಕ್ಕಿದ್ದು ಬಿಜೆಪಿಯವರಿಂದ, ಅವರು ಸತ್ತಾಗ ಆರಡಿ ಮೂರಡಿ ಜಾಗವನ್ನು ಕೊಟ್ಟಿಲ್ಲ. ಕಾಂಗ್ರೆಸ್‌ನವರು ಸತ್ತಾಗ ನೂರಾರು ಎಕ್ರೆ ಜಾಗ ಕೊಟ್ಟಿದ್ದೀರಾ. ದೇಶದ ದಲಿತರ ಅಗ್ರಗಣ್ಯ ನಾಯಕರಂತೆ ಎಐಸಿಸಿ ಅಧ್ಯಕ್ಷ ಸ್ಥಾನದಲ್ಲಿ ರಬ್ಬರ್ ಸ್ಟ್ಯಾಂಪ್ ಆಗಿ ಕೂತಿದ್ದೀರಿ. ಎಐಸಿಸಿ ಅಧ್ಯಕ್ಷರೇ ನೀವು ಇನ್ನೂ ಗುಲಾಮಗಿರಿ ಮಾಡ್ತಿದ್ದೀರಿ ಎಂದು ವಾಗ್ದಾಳಿ ನಡೆಸಿದರು.

ಕೆಪಿಎಸ್‌ಸಿ ಪರೀಕ್ಷಾರ್ಥಿಗಳು ಮಧ್ಯರಾತ್ರಿ 12 ಗಂಟೆವರೆಗೆ ಬಂದು ಅಡ್ಮಿಷನ್ ಟಿಕೆಟ್ ತಗೊಳ್ಳಿ ಎಂದು ಎಲ್.ಕೆ.ಅತೀಕ್ ಸಭೆಯಲ್ಲಿ ಹೇಳಿದ್ದಾರಂತೆ. ಕೆಪಿಎಸ್‌ಸಿಗೂ ಅತೀಕ್ ಅವರಿಗೂ ಏನು ಸಂಬಂಧ? ಅತೀಕ್ ಎಲ್ಲರದರಲ್ಲೂ ಮೂಗು ತೂರಿಸ್ತಾರೆ ಅಂತ ಅಧಿಕಾರಿಗಳೇ ಹೇಳ್ತಾರೆ. ಸಿಎಂಗೆ ಅತೀಕ್ ಮೇಲೆ ಬಹಳ ಪ್ರೀತಿ. ಅತೀಕ್ ಅವರಿಗೇ ಮುಖ್ಯಮಂತ್ರಿ ಸ್ಥಾನವನ್ನು ಕೊಟ್ಟುಬಿಡಿ. ಆಗ ಎಲ್ಲದರಲ್ಲೂ ಅವರು ಮೂಗು ತೂರಿಸೋದು ನಿಲ್ಲುತ್ತದೆ ಎಂದು ಹೇಳಿದರು.

## ಫಾಜಿಲ್ ಕುಟುಂಬ ಸರ್ಕಾರ ನೀಡಿದ್ದ ಪರಿಹಾರದ ಹಣವನ್ನು ಸುಹಾಸ್ ಕೊಲೆಗೆ ಬಳಸಿದೆ: ಸುನಿಲ್ ಕುಮಾರ್ ಆರೋಪ

**ಬೆಂಗಳೂರು:** ಫಾಜಿಲ್ ಕುಟುಂಬ ಸರ್ಕಾರ ನೀಡಿದ ಪರಿಹಾರದ ಹಣವನ್ನು ಸುಹಾಸ್ ಶೆಟ್ಟಿ ಕೊಲೆಗೆ ಬಳಸಿಕೊಂಡಿದೆ ಎಂದು ಬಿಜೆಪಿ ಶಾಸಕ ಸುನಿಲ್ ಕುಮಾರ್ ಗಂಭೀರ ಆರೋಪ ಮಾಡಿದ್ದಾರೆ.



ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಶಾಸಕರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಫಾಜಿಲ್ ಕುಟುಂಬಕ್ಕೆ 25 ಲಕ್ಷ ರೂ. ಪರಿಹಾರ ನೀಡಿತ್ತು. ಈ ಪರಿಹಾರದ ಹಣವನ್ನು ಫಾಜಿಲ್ ಕುಟುಂಬ ಕೊಲೆಗೆ ಬಳಸಿಕೊಂಡಿದೆ. ಸುಹಾಸ್ ಶೆಟ್ಟಿ ಹತ್ಯೆಗೆ ಫಾಜಿಲ್ ಸೋದರ 5 ಲಕ್ಷ ರೂ. ಸುಪಾರಿ ನೀಡಿದ್ದು ಪೊಲೀಸ್ ತನಿಖೆಯಿಂದ ಸಾಬೀತಾಗಿದೆ ಎಂದು ಆರೋಪಿಸಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಫಾಜಿಲ್ ಕುಟುಂಬಕ್ಕೆ 25 ಲಕ್ಷ ರೂ. ಪರಿಹಾರ ನೀಡಿತ್ತು. ಈ ಪರಿಹಾರದ ಹಣವನ್ನು ಫಾಜಿಲ್ ಕುಟುಂಬ ಕೊಲೆಗೆ ಬಳಸಿಕೊಂಡಿದೆ. ಸುಹಾಸ್ ಶೆಟ್ಟಿ ಹತ್ಯೆಗೆ ಫಾಜಿಲ್ ಸೋದರ 5 ಲಕ್ಷ ರೂ.ಸುಪಾರಿ ನೀಡಿದ್ದು ಪೊಲೀಸ್ ತನಿಖೆಯಿಂದ ಸಾಬೀತಾಗಿದೆ.

ಸರ್ಕಾರ ನೀಡಿದ ಈ ಪರಿಹಾರ ಇನ್ನೆಷ್ಟು ಕೊಲೆಗೆ ಬಳಕೆಯಾಗಬೇಕು? ಮೊದಲು ಬಡ್ಡಿ ಸಹಿತ ಈ ಹಣ ವಸೂಲಿಯಾಗಲಿ. ಸರ್ಕಾರ ರಚಿಸುವ ಆಂಟಿ ಕಮ್ಯುನಲ್ ಫೋರ್ಸ್ (ಎಸಿಎಫ್) ಅಸ್ತಿತ್ವಕ್ಕೆ ಬಂದ ತಕ್ಷಣ ಮೊದಲು ಮಾಡಬೇಕಾದ ಕೆಲಸ ಇದಾಗಲಿ. ಇಲ್ಲವಾದರೆ ಎಸಿಎಫ್ ರಚನೆಯ ಉದ್ದೇಶ ಹಿಂದುತ್ವದ ದಮನ ಎಂಬುದು ಸಾಬೀತಾಗುತ್ತದೆ ಎಂದು ಹೇಳಿದ್ದಾರೆ.

ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಅವರನ್ನು ಬಜ್ಪೆಯಲ್ಲಿ ಭೀಕರವಾಗಿ ಹತ್ಯೆ ಮಾಡಲಾಯಿತು. ಫಾಜಿಲ್ ಹತ್ಯೆ ಪ್ರತೀಕಾರವಾಗಿ ಈ ಕೊಲೆ ನಡೆದಿದೆ ಎಂದು ಪೊಲೀಸರ ತನಿಖೆಯಿಂದ ತಿಳಿದುಬಂದಿದೆ. ಪ್ರಕರಣ ಸಂಬಂಧ 8 ಆರೋಪಿಗಳನ್ನು ಪೊಲೀಸರು ಬಂಧಿಸಿದ್ದು, ವಿಚಾರಣೆ ನಡೆಸುತ್ತಿದ್ದಾರೆ.

## ಬಡ್ಡಿ ಸಮೇತ ತೀರಿಸದೇ ಹೋದ್ರೆ ನಾನು ದೇವೇಗೌಡ್ರ ಮಗನೇ ಅಲ್ಲ

**ಹಾಸನ:** ನಾನು ಸಮಯಕ್ಕಾಗಿ ಕಾಯ್ತಾ ಇದಿನಿ, ಎಲ್ಲವನ್ನೂ ಬಡ್ಡಿ ಸಮೇತ ತೀರಿಸದೇ ಹೋದ್ರೆ, ನಾನು ದೇವೇಗೌಡರ ಮಗನೇ ಅಲ್ಲ ಎಂದು ಮಾಜಿಸಚಿವ ಹೆಚ್.ಡಿ ರೇವಣ್ಣ ಗುಡುಗಿದ್ದಾರೆ.



ಹಾಸನದ ದ್ಯಾಪಲಾಪುರ ಗ್ರಾಮದಲ್ಲಿ ಶ್ರೀ ಆಂಜನೇಯ ಸ್ವಾಮಿ ದೇವಾಲಯದ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಈ ವೇಳೆ, ಕೆಲವರು ಹೇಳ್ತಾರೆ ದೇವೇಗೌಡರದು, ರೇವಣ್ಣ ಅವರದ್ದು ಮುಗಿತು ಅಂತಾರೆ. ಈ ಜಿಲ್ಲೆಗೆ ದೇವೇಗೌಡರ ಕೊಡುಗೆ ಏನೆಂದು ಜನರಿಗೆ ಗೊತ್ತಿದೆ ಎಂದಿದ್ದಾರೆ. ಕೆಲವು ಅಧಿಕಾರಿಗಳು ರೇವಣ್ಣ ಹಾಗೂ ದೇವೇಗೌಡರದು ಮುಗೀತು ಎಂದು ತಿಳಿದುಕೊಂಡಿದ್ದಾರೆ. ಹಿಂದೆ ಕೂಡ ಜಿಲ್ಲೆಯಲ್ಲಿ ಎಲ್ಲಾ ಸ್ಥಾನ ಸೋತಿದ್ದೆವು. ಬಳಿಕ ಐದೇ ವರ್ಷಕ್ಕೆ ದೇವೇಗೌಡರು ಅಧಿಕಾರಕ್ಕೆ ಬಂದಿದ್ದರು. ಹಾಸನಕ್ಕೆ ದೇವೇಗೌಡರ ಕೊಡುಗೆ ಏನು ಅಂತಾರೆ. ರೈಲ್ವೆ ಯೋಜನೆ, ಇಂಜಿನಿಯರಿಂಗ್, ಮೆಡಿಕಲ್ ಕಾಲೇಜು, ನಸಿರ್ಂಗ್ ಕಾಲೇಜು ಮಾಡಿದ್ದು ಯಾರು? ಹಾಸನ ಜಿಲ್ಲೆಯ ಶಿಕ್ಷಣಕ್ಕೆ ಕುಮಾರಸ್ವಾಮಿ ಐದು ಸಾವಿರ ಕೋಟಿ ರೂ. ಕೊಟ್ಟಿದ್ರು ಎಂದಿದ್ದಾರೆ. ಕಾಂಗ್ರೆಸ್‌ನವರು ಹಾಸನ-ಮೈಸೂರು ರೈಲ್ವೆ ಯೋಜನೆ ಸ್ಥಗಿತ ಮಾಡಿದ್ದರು. ಆದರೆ ದೇವೇಗೌಡರು ಪ್ರಧಾನಿಯಾಗಿ ಹತ್ತೆ ತಿಂಗಳಿಗೆ ಆ ಯೋಜನೆ ಮಾಡಿದ್ರು. ಕಾಂಗ್ರೆಸ್‌ನವರು ಈ ಜಿಲ್ಲೆಯಲ್ಲಿ ಸುಳ್ಳು ಹೇಳಿಕೊಂಡು ರಾಜಕಾರಣ ಮಾಡುತ್ತಿದ್ದಾರೆ. ಈ ಜಿಲ್ಲೆ ಲೂಟಿಕೋರರ ಕೈ ಸೇರಿದೆ. ನಾನೂ ಇಲ್ಲೇ ಇರ್ತಿನೆ, ಇದೆಲ್ಲಾ ಎಷ್ಟು ದಿನ ಇರುತ್ತದೆ ನೋಡೋಣ. ಈ ದೇಶ ಉಳಿಯಬೇಕಾದರೆ ಮೋದಿಯವರು ಇರಲೇಬೇಕು. ಅವರಿಗೆ ನಮ್ಮ ಪಕ್ಷದ ಸಂಪೂರ್ಣ ಬೆಂಬಲ ಇದೆ ಎಂದಿದ್ದಾರೆ.

## ಕೋಮುದ್ವೇಷ ಭಾಷಣ ಆರೋಪ ಶಾಸಕ ಹರೀಶ್ ಪೂಂಜಾ ವಿರುದ್ಧ ಎಫ್‌ಐಆರ್

**ಮಂಗಳೂರು:** ಮುಸ್ಲಿಂ ಧರ್ಮದ ವಿರುದ್ಧ ಅವಹೇಳನಕಾರಿ ಹಾಗೂ ಪ್ರಚೋದನಕಾರಿ ಭಾಷಣ ಆರೋಪದಡಿ ಬೆಳ್ತಂಗಡಿ ವಿಧಾನಸಭಾ ಬಿಜೆಪಿ ಶಾಸಕ ಹರೀಶ್ ಪೂಂಜಾ ವಿರುದ್ಧ ಎಫ್‌ಐಆರ್ ದಾಖಲಾಗಿದೆ.



ಶನಿವಾರ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ತೆಕ್ಕಾರು ಗೋಪಾಲಕೃಷ್ಣ ದೇವಸ್ಥಾನದ ಬ್ರಹ್ಮಕಲಶೋತ್ಸವದಲ್ಲಿ ಕೋಮು ಪ್ರಚೋದನಕಾರಿ ಭಾಷಣ ಮಾಡಿದ್ದಾರೆ ಎಂದು ಆರೋಪಿಸಿ ತೆಕ್ಕಾರು ನಿವಾಸಿ ಇಬ್ರಾಹಿಂ.ಎಸ್.ಬಿ ದೂರು ದಾಖಲಿಸಿದ್ದಾರೆ.

ಧರ್ಮ, ಧರ್ಮಗಳ ನಡುವೆ ದ್ವೇಷ ಬಿತ್ತುವ ಭಾಷಣ ಮಾಡಿದ್ದಾರೆ ಎಂದು ಉಪ್ಪಿನಂಗಡಿ ಪೊಲೀಸ್ ಠಾಣೆಯಲ್ಲಿ ಬಿಎನ್‌ಎಸ್ ಕಾಯ್ದೆಯಡಿ 196, 352(2) ಪ್ರಕರಣ ದಾಖಲಾಗಿದೆ.

## ರೌಡಿಯಿಂದ ಫೈರಿಂಗ್

ಅಸಲಿಗೆ ಮೂರು ದಿನಗಳ ಹಿಂದೆ ಗಾಳಿಯಲ್ಲಿ ಗುಂಡು ಹಾರಿಸಲಾಗಿದ್ದು, ಯಾವ ಗನ್ ಎನ್ನುವುದು ಮಾತ್ರ ನಿಗೂಢವಾಗಿದೆ.

ಈ ನಡುವೆ ಭದ್ರಾವತಿಯ ಮುಖ್ಯ ರಸ್ತೆಯಲ್ಲಿ ಪ್ರಮೋದ್ ಅಲಿಯಾಸ್ ಗಾಂಧಿ ರೌಡಿ ಗ್ಯಾಂಗ್ ಅಟ್ಟಾಡಿಸಿಕೊಂಡು ರೌಡಿ ಶೀಟರ್ ವಿಶ್ವ ಅಲಿಯಾಸ್ ಮುದ್ದೆ ಮೇಲೆ ಮಚ್ಚು, ಲಾಂಗ್‌ನಿಂದ ಅಟ್ಯಾಕ್ ಮಾಡಿತ್ತು. ಆದರೆ ಅದೃಷ್ಟ ಚೆನ್ನಾಗಿತ್ತು. ದಾಳಿಯಲ್ಲಿ ವಿಶ್ವ ಜಸ್ಟ್ ಮಿಸ್ ಆಗಿದ್ದ.

ವಿಶ್ವ ಮೇಲೆ ರೌಡಿ ಗ್ಯಾಂಗ್ ಅಟ್ಯಾಕ್ ಮಾಡಲು ಕಾರಣ ಅಂದರೆ ಪ್ರಮೋದ್ ಅಲಿಯಾಸ್ ಗಾಂಧಿ ಎನ್ನುವ ರೌಡಿಶೀಟರ್ ಮೇಲೆ ರೌಡಿ ವಿಶ್ವ, ಬಿಯರ್ ಬಾಟಲ್‌ನಿಂದ ಹಲ್ಲೆ ಮಾಡಿದ್ದ. ಈ ಸೇಡು ತೀರಿಸಿಕೊಳ್ಳಲು ಪ್ರಮೋದ್ ಹಾಡುಹಗಲೇ ಮಚ್ಚಿನಿಂದ ವಿಶ್ವನ ಮೇಲೆ ದಾಳಿಗೆ ಯತ್ನಿಸಿದ್ದ. ಈ ದೃಶ್ಯಗಳು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿತ್ತು.

**ಪ್ರತೀಕಾರ ತೀರಿಸಿಕೊಳ್ಳಲು ಮಚ್ಚಿಗೆ ಪೂಜೆ:** ರೌಡಿಗಳು ಓಪನ್ ಆಗಿ ಹಾಡುಹಗಲೇ ಬೀದಿಯಲ್ಲಿ ಗಲಾಟೆ ಮಾಡಿಕೊಂಡಿದ್ದರು. ಭದ್ರಾವತಿಯ ಹಳೇ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕೇಸ್ ದಾಖಲು ಆಗಿತ್ತು. ಇನ್ನೂ ಭದ್ರಾವತಿಯ ನಗರದ ದೇವಸ್ಥಾನ ಒಂದರಲ್ಲಿ ರೌಡಿಶೀಟರ್ ವಿಶ್ವನು ದೇವಸ್ಥಾನದಲ್ಲಿ ಮಚ್ಚನ್ನು ಅರ್ಚಕರಿಂದ ಪೂಜೆ ಮಾಡಿಸಿದ್ದ. ಈ ಮೂಲಕ ರೌಡಿ ಗಾಂಧಿ ವಿರುದ್ಧ ಪ್ರತೀಕಾರ ತೀರಿಸಿಕೊಳ್ಳಲು ಶಪಥ ಮಾಡಿದ್ದನಂತೆ. ಈ ಎರಡು ಘಟನೆಗಳು ಭದ್ರಾವತಿ ನಗರದ ಜನರನ್ನು ಬೆಚ್ಚಿಬೀಳಿಸಿವೆ. ಹೀಗೆ ಅವಳಿ ನಗರದಲ್ಲಿ ರೌಡಿಗಳಿಗೆ ಖಾಕಿಯ ಯಾವುದೇ ಭಯವಿಲ್ಲದಂತಾಗಿದೆ.

ಹೀಗೆ ರೌಡಿಗಳ ಹಾವಳಿ ಅವಳಿ ನಗರದಲ್ಲಿ ದಿನದಿಂದ ದಿನಕ್ಕೆ ಜಾಸ್ತಿ ಆಗುತ್ತಿದೆ. ಖಾಕಿ ಭಯವಿಲ್ಲದೆ ರೌಡಿಗಳ ಹಾರಾಟ ಜೋರಾಗಿದೆ. ಶಿವಮೊಗ್ಗ ಮತ್ತು ಭದ್ರಾವತಿಯಲ್ಲಿ ಈ ಮೂರು ಘಟನೆಗಳು ರೌಡಿಗಳ ರೌಡಿಸಂ ಯಾವ ಮಟ್ಟಕ್ಕೆ ಇದೆ ಎನ್ನುವುದಕ್ಕೆ ಸಾಕ್ಷಿ ಎನ್ನುವಂತಿವೆ. ಈ ಓಪನ್ ರೌಡಿಸಂಗೆ ಶಿವಮೊಗ್ಗ ಪೊಲೀಸರು ಕಡಿವಾಣ ಹಾಕುತ್ತಾರಾ ಕಾದುನೋಡಬೇಕಿದೆ.

## ಭಾರೀ ಬದಲಾವಣೆ!

ಬದಲಾವಣೆ ತರಲು ಶಿಕ್ಷಣ ಇಲಾಖೆ ಮುಂದಾಗಿದೆ.

ಮುಂದಿನ ವರ್ಷದಿಂದ SSLC, PUC ವಿದ್ಯಾರ್ಥಿಗಳಿಗೆ ಪಾಸಿಂಗ್ ಕಡಿತಗೊಳಿಸಲು ಶಿಕ್ಷಣ ಇಲಾಖೆ ಸಿದ್ಧತೆ ಮಾಡಿಕೊಂಡಿದೆ. ಮುಂದಿನ ವರ್ಷದಿಂದ ಪಾಸಿಂಗ್ ಮಾರ್ಕ್ಸ್ 33 ಇರಲಿದೆ. ಪಾಸಿಂಗ್ ಅಂಕಗಳನ್ನು ಕಡಿಮೆ ಮಾಡುವ ಬಗ್ಗೆ ಶಿಕ್ಷಣ ಇಲಾಖೆ ಹಂತ ಹಂತವಾಗಿ ಚಿಂತನೆ ನಡೆಸಲಾಗುತ್ತಿದೆ.

ಇನ್ಮುಂದೆ ಪಾಸಿಂಗ್ ಮಾರ್ಕ್ಸ್ 35 ಅಲ್ಲ 33!

ಪ್ರಸ್ತುತ ಪಿಯುಸಿ ಹಾಗೂ ಎಸ್‌ಎಸ್‌ಎಲ್‌ಸಿ 2 ಪರೀಕ್ಷೆಗಳಲ್ಲೂ 35 ಅಂಕಗಳು ಪಾಸಿಂಗ್ ಮಾರ್ಕ್ಸ್ ಆಗಿದೆ. ಈ ಅಂಕಗಳನ್ನು 33 ಅಂಕಕ್ಕೆ ಇಳಿಸುವ ಬಗ್ಗೆ ಶಿಕ್ಷಣ ತಜ್ಞರಿಂದ ವರದಿ ಪಡೆಯಲಾಗಿದೆ. ಬೇರೆ ರಾಜ್ಯಗಳು ಹಾಗೂ ಕೇಂದ್ರದ ಬೋರ್ಡ್ ಗಳಲ್ಲಿ ಇದ್ದಂತೆ ಉತ್ತೀರ್ಣ ಅಂಕಗಳನ್ನು ರಾಜ್ಯದಲ್ಲಿಯೂ ಜಾರಿಗೊಳಿಸಲು ಯೋಜನೆ ರೂಪಿಸಲಾಗಿದೆ.

**ಕನ್ನಡ ಭಾಷೆ 125 ಅಂಕದ ಬದಲು 100 ಅಂಕ:** ಇದರ ಜೊತೆಗೆ, ಕನ್ನಡ ವಿಷಯದ 125 ಅಂಕಗಳನ್ನು 100 ಅಂಕಗಳಿಗೆ ಇಳಿಸುವ ಮತ್ತು ಹಿಂದಿ ಭಾಷೆಯ ಪಾಸಿಂಗ್ ಮಾರ್ಕ್ಸ್ 20 ಅಂಕಕ್ಕೆ ಇಳಿಸುವ ಬಗ್ಗೆ ಚಿಂತನೆ ನಡೆಯುತ್ತಿದೆ ಎನ್ನುವ ಮಾಹಿತಿ ಹೊರಬಿದ್ದಿದೆ.

2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಈ ನಿಯಮ ಬದಲಾವಣೆ ಕುರಿತು ಸರ್ಕಾರದ ಹಂತದಲ್ಲಿ ಚರ್ಚೆ ನಡೆಯುತ್ತಿದೆ. ಈ ಕುರಿತು ಶಿಕ್ಷಣ ಸಚಿವ ಮಧು ಬಂಗಾರಪ್ಪ ಸಹಮತ ತಿಳಿಸಿದ್ದಾರೆ.

ನಮ್ಮ ರಾಜ್ಯದಲ್ಲಿ ಮಾತ್ರ ಉತ್ತೀರ್ಣ ಅಂಕ ಹೆಚ್ಚು

ಈಗಾಗಲೇ ಕಾನೂನು ತಿದ್ದುಪಡಿ ಮಾಡಲು ಶಿಕ್ಷಣ ಇಲಾಖೆ ಅಧಿಕಾರಿಗಳು ಸಿದ್ಧತೆ ನಡೆಸಿದ್ದಾರೆ. ಬೇರೆ ರಾಜ್ಯಗಳಲ್ಲಿ ಕಡಿಮೆ ಉತ್ತೀರ್ಣ ಅಂಕಗಳಿರೋದರಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತಿದ್ದು, ಹೆಚ್ಚು ವಿದ್ಯಾರ್ಥಿಗಳು ಪಾಸ್ ಆಗುತ್ತಿದ್ದಾರೆ. ನಮ್ಮ ರಾಜ್ಯದಲ್ಲಿ ಉತ್ತೀರ್ಣ ಅಂಕಗಳು ಹೆಚ್ಚು ಇರುವುದರಿಂದ ವಿದ್ಯಾರ್ಥಿಗಳಿಗೆ ಸಮಸ್ಯೆಯಾಗುತ್ತಿದೆ.

ಹೀಗಾಗಿ, ರಾಜ್ಯದಲ್ಲಿಯೂ ಒಂದೇ ಅಂಕಗಳನ್ನು ಜಾರಿಗೆ ತರುವ ಬಗ್ಗೆ ಚರ್ಚೆ ಜೋರಾಗಿದೆ. ಹೀಗಾದರೆ, ಉತ್ತೀರ್ಣ ಅಂಕಗಳು ಕಡಿಮೆಯಾಗುವ ಸಾಧ್ಯತೆ ಇದೆ ಎನ್ನಲಾಗ್ತಿದೆ.

- **ಕೆವಿ, ಸಿಬಿಎಸ್‌ಇ, ಐಸಿಎಸ್‌ಇ ಬೋರ್ಡ್ ಸೇರಿದಂತೆ ಕೇಂದ್ರದ ಬೋರ್ಡ್ ಗಳಲ್ಲಿ ಉತ್ತೀರ್ಣ ಅಂಕ 33 ಇದೆ**
- **ಕೇಂದ್ರ ಬೋರ್ಡ್ ಅಲ್ಲದೆ ತಮಿಳುನಾಡು, ಕೇರಳಾ ಸೇರಿ ಬೇರೆ ಬೇರೆ ರಾಜ್ಯಗಳಲ್ಲೂ ಉತ್ತೀರ್ಣ ಅಂಕ 33 ಇದೆ**
- **33 ಅಂಕಗಳು ಬೇರೆ ರಾಜ್ಯ, ಕೇಂದ್ರದ ಬೋರ್ಡ್ ನಲ್ಲಿ ಇರೋದ್ರಿಂದ ನಮ್ಮ ರಾಜ್ಯದ ವಿದ್ಯಾರ್ಥಿಗಳಿಗೆ ಇದರಿಂದ ನಷ್ಟವಾಗ್ತಿದೆ**
- **35 ಅಂಕ ಸದ್ಯ ರಾಜ್ಯದಲ್ಲಿ ಉತ್ತೀರ್ಣ ಅಂಶಗಳು ಇವೆ. ಇದರಿಂದ ರಾಜ್ಯದ ಮಕ್ಕಳಿಗೆ ಪರೀಕ್ಷಾ ಹಂತದಲ್ಲಿ ತೊಂದರೆ ಆಗ್ತಿದೆ**
- **ಹೀಗಾಗಿ ರಾಜ್ಯದಲ್ಲಿ 35 ಅಂಕ ಇರೋ ಉತ್ತೀರ್ಣ ಅಂಕವನ್ನ 33ಕ್ಕೆ ಇಳಿಸಲು ಶಿಕ್ಷಣ ಇಲಾಖೆ ಸಿದ್ಧತೆ**

## ಬೆಟಾಲಿಯನ್ ಸೇರ್ಪಡೆ?

ಕಳೆದ ವರ್ಷ ಬಾಂಗ್ಲಾದೇಶದಲ್ಲಿ ಶೇಖ್ ಹಸೀನಾ ಸರ್ಕಾರದ ಪತನ ಹಾಗೂ ಏ.22ರಂದು ನಡೆದ ಪಹಲ್ಗಾಮ್ ಉಗ್ರರ ದಾಳಿಯ ನಂತರ ಭದ್ರತಾ ದೃಷ್ಟಿಯಿಂದ ಬಿಎಸ್‌ಎಫ್‌ಗೆ ಬಲ ಹೆಚ್ಚಿಸುತ್ತಿದೆ. ಕೇಂದ್ರ ಹಣಕಾಸು ಸಚಿವಾಲಯದ ಅನುಮೋದನೆ ಸೇರಿದಂತೆ ಕೆಲವು ಅಂತಿಮ ಅನುಮೋದನೆಗಳು ಬಾಕಿಯಿದ್ದು, ಶೀಘ್ರದಲ್ಲೇ ಮಂಜೂರಾಗುವ ನಿರೀಕ್ಷೆಯಿದೆ.

ಜಮ್ಮು ಮತ್ತು ಪಂಜಾಬ್‌ನ ಭಾರತ-ಪಾಕಿಸ್ತಾನ ಅಂತಾರಾಷ್ಟ್ರೀಯ ಗಡಿಯಲ್ಲಿ ಭದ್ರತೆಯನ್ನು ಬಲಪಡಿಸಲು ಜಮ್ಮುವಿನಲ್ಲಿ ಒಂದು ವಲಯ ಹಾಗೂ ಬಾಂಗ್ಲಾದೇಶ ಗಡಿಯ ಉತ್ತಮ ಕಣ್ಗಾವಲುಗಾಗಿ ಎರಡನೇ ವಲಯ ಮಿಜೋರಾಂನಲ್ಲಿ ಸ್ಥಾಪನೆಯಾಗಲಿದೆ ಎಂದು ತಿಳಿಸಿದೆ.

## 30 ನಿಮಿಷ ಲೈಟ್ ಆಫ್

ಮಾಕ್ ಡ್ರಿಲ್ ನಡೆಸುವ ಉದ್ದೇಶದಿಂದ ಪಂಜಾಬ್ ರಾಜ್ಯ ವಿದ್ಯುತ್ ನಿಗಮ ಲಿಮಿಟೆಡ್ 30 ನಿಮಿಷಗಳ ಕಾಲ ವಿದ್ಯುತ್ ಕಡಿತಗೊಳಿಸಿತ್ತು. ಗಡಿಭಾಗದಲ್ಲಿರುವ ಜನರು ಯಾವುದೇ ಕಾರಣಕ್ಕೂ ಈ ಸಂದರ್ಭದಲ್ಲಿ ಲೈಟ್ ಉರಿಸದಂತೆ ಮನವಿ ಮಾಡಲಾಗಿತ್ತು. ಜೊತೆಗೆ ಲೌಡ್ ಸ್ಪೀಕರ್ ಮೂಲಕ ಗ್ರಾಮಗಳಿಗೆ ತೆರಳುವಂತೆ ಘೋಷಣೆ ಮಾಡಲಾಯಿತು. ಮಾಕ್ ಡ್ರಿಲ್ ನಡೆದ 30 ನಿಮಿಷಗಳ ಕಾಲ ನಿರಂತರವಾಗಿ ಹೂಟರ್‌ಗಳು ಸದ್ದು ಮಾಡುತ್ತಿದ್ದವು.

ಹಿರಿಯ ಅಧಿಕಾರಿಗಳ ಆದೇಶದಂತೆ, ದೀಪಗಳನ್ನು ಸಂಪೂರ್ಣವಾಗಿ ಆರಿಸಲಾಗಿತ್ತು. ಯಾವುದೇ ವಾಹನ ಲೈಟ್ ಗಳನ್ನು ಆನ್ ಮಾಡದಂತೆ ಸೂಚಿಸಲಾಗಿತ್ತು. ಇನ್ನೂ ಭದ್ರತಾ ದೃಷ್ಟಿಯಿಂದ ಪಂಜಾಬ್ ಪೊಲೀಸರು ಪ್ರಮುಖ ಸ್ಥಳಗಳಲ್ಲಿ ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸಿದ್ದಾರೆ

## ಭಯೋತ್ಪಾದನೆ ಜೀವಂತ

ಯುರೋಪ್‌ನಲ್ಲಿ ಚರ್ಚುಗಳು ವಸ್ತುಸಂಗ್ರಹಾಲಯಗಳಾಗಿ ಬದಲಾಗುತ್ತಿದ್ದರೆ ಮುಸ್ಲಿಮರು ಎಲ್ಲೆಡೆ ಮಸೀದಿಗಳನ್ನು ನಿರ್ಮಿಸುವಲ್ಲಿ ನಿರತರಾಗಿದ್ದಾರೆ. ಈಗಾಗಲೇ ಸಾವಿರಾರು ಮಸೀದಿಗಳು ನಿರ್ಮಾಣವಾಗಿದ್ದರೂ ಮತ್ತಷ್ಟು ನಿರ್ಮಾಣ ಮಾಡಲಾಗುತ್ತಿದೆ. ಈ ಮೂಲಕ ಮತ್ತಷ್ಟು ಜಿಹಾದಿಗಳು ತಯಾರಾಗುತ್ತಾರೆ. ಯಾವುದೇ ಮದರಸಾಗಳು ಇರಬಾರದು. ಮಕ್ಕಳು ಒಂದು ಪುಸ್ತಕವನ್ನು ಮಾತ್ರ ಓದಬಾರದು, ಎಲ್ಲಾ ಪುಸ್ತಕಗಳನ್ನು ಓದಬೇಕು ಎಂದು ಅಭಿಪ್ರಾಯಪಟ್ಟರು.

ಪ್ರತಿಯೊಂದು ನಾಗರಿಕ ದೇಶವೂ ಏಕರೂಪ ನಾಗರೀಕ ಸಂಹಿತೆಯನ್ನು ಹೊಂದಿರಬೇಕು ಮತ್ತು ನಾನು ಇದನ್ನು ಬೆಂಬಲಿಸುತ್ತೇನೆ. ಸಂಸ್ಕೃತಿ, ಧರ್ಮ ಅಥವಾ ಸಂಪ್ರದಾಯದ ಹೆಸರಿನಲ್ಲಿ ಮಹಿಳೆಯರ ಭದ್ರತೆಯನ್ನು ರಾಜಿ ಮಾಡಿಕೊಂಡರೆ ನಾವು ಆ ಸಂಸ್ಕೃತಿಯನ್ನು ಪ್ರಶ್ನಿಸಬೇಕು. ತನ್ನ ಜನಸಂಖ್ಯೆಯ ಅರ್ಧದಷ್ಟು ಜನರನ್ನು ರಕ್ಷಿಸಲು ಸಾಧ್ಯವಾಗದ ಸಮಾಜವು ವಿಫಲ ಸಮಾಜವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ನಾನು ಅಮೆರಿಕದ ಖಾಯಂ ನಿವಾಸಿಯಾಗಿದ್ದು, 10 ವರ್ಷಗಳ ಕಾಲ ಅಲ್ಲಿ ವಾಸಿಸುತ್ತಿದ್ದೆ. ಆದರೆ ನಾನು ಯಾವಾಗಲೂ ಹೊರಗಿನವನಂತೆ ಭಾಸವಾಗುತ್ತಿತ್ತು. ನಾನು ಕೋಲ್ಕತ್ತಾಗೆ ಬಂದಾಗ ಮಾತ್ರ ನನಗೆ ಮನೆಯಲ್ಲಿರುವಂತೆ ಭಾಸವಾಯಿತು. ಪಶ್ಚಿಮ ಬಂಗಾಳದಿಂದ ಹೊರಹಾಕಲ್ಪಟ್ಟ ನಂತರವೂ ದೆಹಲಿಯಲ್ಲಿ ನನಗೆ ಮತ್ತೊಂದು ಮನೆ ಸಿಕ್ಕಿತು. ನನ್ನ ಸ್ವಂತ ದೇಶಕ್ಕೆ ಸಾಧ್ಯವಾಗದ ಒಂದು ರೀತಿಯ ಆತ್ಮೀಯತೆಯ ಭಾವನೆಯನ್ನು ಈ ದೇಶ ನನಗೆ

### ಮೊದಲನೇ ಪುಟದಿಂದ...

ನೀಡಿದೆ ಎಂದು ಅವರು ಹೇಳಿದರು.

ಬಾಂಗ್ಲಾದೇಶದ ದೇಶದ ಮಹಿಳೆಯರು ಎಲ್ಲಾ ಮೂಲಭೂತ ಹಕ್ಕುಗಳಿಂದ ವಂಚಿತರಾಗಿದ್ದಾರೆ ಎಂದು ಈ ವೇಳೆ ವಿಷಾದ ವ್ಯಕ್ತಪಡಿಸಿದರು.

**ಢಾಕಾದಲ್ಲಿ ಏನಾಗಿತ್ತು?:** ಇಸ್ಲಾಮಿಕ್ ಸ್ಟೇಟ್‌ನ ಐವರು ಉಗ್ರರು ಜುಲೈ 2016 ರಲ್ಲಿ ಪ್ರವಾಸಿಗರನ್ನು ಒತ್ತೆಯಾಳಾಗಿ ಇಟ್ಟುಕೊಂಡು ದಾಳಿ ನಡೆಸಿದ್ದರು. ಬಾಂಗ್ಲಾದೇಶದ 7, ಇಟಲಿಯ 9, ಜಪಾನಿನ 9, ಭಾರತದ ಒಬ್ಬರು ಸೇರಿದಂತೆ 24 ಮಂದಿಯನ್ನು ಉಗ್ರರು ಹತ್ಯೆಗೈದಿದ್ದರು.

## ಭದ್ರತೆ ಹೆಚ್ಚಳ

ಈ ಜೈಲುಗಳಲ್ಲಿ ಪ್ರಸ್ತುತ ಭಯೋತ್ಪಾದಕರು ಹಾಗೂ ಭೂಗತ ಲೋಕದ ಕೊಲೆ ಪಾತಕಿಗಳಿದ್ದಾರೆ. ಅವರು ದಾಳಿಗಳಲ್ಲಿ ನೇರವಾಗಿ ಭಾಗಿಯಾಗದಿದ್ದರೂ ಸಹ, ಲಾಜಿಸ್ಟಿಕಲ್ ಸಹಾಯ, ಆಶ್ರಯ ಮತ್ತು ಅವರ ಓಡಾಟ ಸುಗಮಗೊಳಿಸುವ ಮೂಲಕ ಭಯೋತ್ಪಾದಕರಿಗೆ ಬೆಂಬಲ ನೀಡುತ್ತಾರೆ.

26 ಜನರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದನಾ ತನಿಖೆಗೆ ಸಂಬಂಧಿಸಿದಂತೆ, ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಇತ್ತೀಚೆಗೆ ಸೇನಾ ವಾಹನ ದಾಳಿ ಪ್ರಕರಣಕ್ಕೂ ಸಂಬಂಧಿಸಿದ ನಿಸಾರ್ ಮತ್ತು ಮುಷ್ತಾಕ್ ಅವರನ್ನು ವಿಚಾರಣೆಗೆ ಒಳಪಡಿಸಿತು.

ಗುಪ್ತಚರ ಮಾಹಿತಿಯ ನಂತರ, ಜೈಲುಗಳ ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಲಾಯಿತು ಮತ್ತು ಯಾವುದೇ ಅಹಿತಕರ ಘಟನೆ ನಡೆಯದಂತೆ ಕ್ರಮಗಳನ್ನು ಬಲಪಡಿಸಲಾಗಿದೆ. ಅಕ್ಟೋಬರ್ 2023 ರಲ್ಲಿ ಸಿಐಎಸ್ ಎಫ್ ಜಮ್ಮು ಮತ್ತು ಕಾಶ್ಮೀರ ಜೈಲುಗಳ ಭದ್ರತೆಯನ್ನು ಸಿಆರ್ ಪಿಎಫ್‌ನಿಂದ ವಹಿಸಿಕೊಂಡಿತು.

ಏಪ್ರಿಲ್ 22ರಂದು ಜಮ್ಮು ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯಲ್ಲಿರುವ ಪಹಲ್ಗಾಮ್‌ನಲ್ಲಿ ಉಗ್ರರು ದಾಳಿ ನಡೆಸಿ 26 ಅಮಾಯಕರನ್ನು ಹತ್ಯೆ ಮಾಡಿದ್ದರು. ಇದರ ಹೊಣೆಯನ್ನು ಲಷ್ಕರ್ ಎ ತೊಯ್ಬಾದ ಟಿಆರ್‌ಎಫ್ ಹೊತ್ತುಕೊಂಡಿತ್ತು. ಬಳಿಕ ಎಲ್ಲೆಡೆಯಿಂದ ಆಕ್ರೋಶ ವ್ಯಕ್ತವಾದ ನಂತರ ಹೇಳಿಕೆಯಿಂದ ಹಿಂದೆ ಸರಿದಿತ್ತು.

## ಬಿಎಂಆರ್‌ಸಿಎಲ್

ಸ್ವಚ್ಛತೆ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಎಲ್ಲ ಪ್ರಯಾಣಿಕರು ಸಹಕರಿಸಿ, ಇಂತಹ ಘಟನೆಗಳು ಸಂಭವಿಸಿದರೆ ತಕ್ಷಣವೇ ಮೆಟ್ರೋ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಬಿಎಂಆರ್‌ಸಿಎಲ್ ಮನವಿ ಮಾಡಿದೆ.

**ಮೆಟ್ರೋದಲ್ಲಿ ಊಟ ಮಾಡಿ ದಂಡ ತೆತ್ತ ಯುವತಿ:** ಬೆಂಗಳೂರಿನ ನಮ್ಮ ಮೆಟ್ರೋದಲ್ಲಿ ಮಾದಾವರ ಮೆಟ್ರೋ ನಿಲ್ದಾಣದಿಂದ ಮಾಗಡಿ ರಸ್ತೆ ಮೆಟ್ರೋ ನಿಲ್ದಾಣಕ್ಕೆ ಪ್ರಯಾಣಿಸುವಾಗ ಓರ್ವ ಯುವತಿ ಊಟ ಮಾಡಿದ್ದಕ್ಕಾಗಿ 500 ರೂ ದಂಡ ತೆತ್ತಿದ್ದಳು. ಯುವತಿ ಮೆಟ್ರೋದಲ್ಲೇ ಕುಳಿತು ಊಟ ಮಾಡುತ್ತಿದ್ದ ವಿಡಿಯೋ ಕೂಡ ವೈರಲ್ ಆಗಿತ್ತು.

## 7ರ ಬಾಲಕಿ ಸಾವು

ಎರಡನೇ ಡೋಸ್ ಪಡೆದ ಕೆಲ ದಿನಗಳಲ್ಲಿ ಆಕೆಗೆ ಜ್ವರ ಬಂದಿದೆ. ನಾಯಿ ಕಚ್ಚಿದ ಮೊಣಕೈಯಲ್ಲಿ ನೋವು ಅನುಭವಿಸಲು ಪ್ರಾರಂಭಿಸಿದಳು. ನಂತರ ಆಕೆಯನ್ನು ಪುನಲೂರು ತಾಲ್ಲೂಕು ಆಸ್ಪತ್ರೆಗೆ ದಾಖಲಿಸಲಾಯಿತು ಮತ್ತು ನಂತರ ವಿಶೇಷ ಆರೈಕೆಗಾಗಿ ಖಂಖಿ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು.

ಬಾಲಕಿಯನ್ನು ಕಚ್ಚಿದ್ದ ನಾಯಿಯನ್ನು ಸ್ಥಳೀಯ ನಿವಾಸಿಗಳು ಓಡಿಸಿದ್ದರೂ ಮರುದಿನ ಹತ್ತಿರದ ಹೊಲದಲ್ಲಿ ಅದು ಶವವಾಗಿ ಪತ್ತೆಯಾಗಿತ್ತು.

## ಖಾತೆ ಮೇಲೆ ಕಣ್ಣು!

**ಪ್ರತೀಕಾರಕ್ಕೆ ಪಣ:** ಫಾಝಿಲ್ ಹತ್ಯೆಯನ್ನು ಅರಗಿಸಿಕೊಳ್ಳಲಾಗದ ಪ್ರಭಾವಿ ಮುಸ್ಲಿಮರು ಪ್ರತೀಕಾರಕ್ಕಾಗಿ ಪಣ ತೊಟ್ಟಿದ್ದರು. ಪ್ರತೀಕಾರ ತೀರಿಸುವ ಯಾರಿಗಾದರೂ ಎಷ್ಟೇ ಹಣ ನೀಡಬೇಕಾದರೂ ನೀಡಲು ಸಿದ್ದರಿದ್ದರು. ಹತ್ಯೆ ನಡೆಸುವವರಿಗೆ ಫಂಡಿಂಗ್ ಮಾಡಲು ಸಾಕಷ್ಟು ಜನ ಮುಂದೆ ಬಂದಿದ್ದರು. ಸುಹಾಸ್ ಹತ್ಯೆಯ ಪ್ಲಾನ್ ನಡೆಸುವ ವೇಳೆಯೇ 50 ಲಕ್ಷ ರೂ. ಹೆಚ್ಚು ಹಣ ಸಂಗ್ರಹವಾಗಿದೆ ಎಂಬ ಸ್ಫೋಟಕ ಮಾಹಿತಿ ತನಿಖೆ ವೇಳೆ ಬಹಿರಂಗಗೊಂಡಿದೆ.

ಎಲ್ಲಾ ಆರೋಪಿಗಳನ್ನು 14 ದಿನ ಪೊಲೀಸ್ ಕಸ್ಟಡಿಗೆ ಪಡೆದಿರುವ ತನಿಖಾಧಿಕಾರಿಗೆ ಲಕ್ಷ ಲಕ್ಷ ಫಂಡಿಂಗ್ ಆಗಿರುವ ಬಗ್ಗೆ ಸಾಕಷ್ಟು ಮಾಹಿತಿ ಸಿಕ್ಕಿದೆ. ಹೀಗಾಗಿ ವಿವಿಧ ಬ್ಯಾಂಕ್ ಖಾತೆಗಳನ್ನು ಪೊಲೀಸರು ಪರಿಶೀಲನೆ ನಡೆಸುತ್ತಿದ್ದು ವಿದೇಶದಿಂದಲೂ ಭಾರೀ ಪ್ರಮಾಣದಲ್ಲಿ ಫಂಡಿಂಗ್ ಆಗಿರುವ ವಿಚಾರ ಬೆಳಕಿಗೆ ಬಂದಿದೆ.

ಸುಹಾಸ್ ಶೆಟ್ಟಿ ಹತ್ಯೆಯ ಆರೋಪಿಗಳ ಬಂಧನದ ಬಳಿಕ ಕೇವಲ ಲಕ್ಷ ಸುಪಾರಿ ನೀಡಲಾಗಿತ್ತು ಎನ್ನುವುದು ಗೊತ್ತಾದಾಗಲೇ ಹಲವರು ಅನುಮಾನ ವ್ಯಕ್ತಪಡಿಸಿದ್ದರು. ಬೊಲೆರೋ ಪಿಕಪ್ ಮತ್ತು ಸ್ವಿಫ್ಟ್ ಕಾರಿನ ಮೌಲ್ಯ ಎರಡು ಸೇರಿದರೆ 10 ಲಕ್ಷರೂ. ಅಧಿಕ ಆಗುತ್ತದೆ. ಕೇವಲ 5 ಲಕ್ಷ ರೂ.ಗೆ ಈ ಹತ್ಯೆ ನಡೆದಿರುವ ಸಾಧ್ಯತೆ ಇಲ್ಲ ಎಂದು ಜನ ಅನುಮಾನ ವ್ಯಕ್ತಪಡಿಸಿದ್ದರು. ಈ ಅನುಮಾನ ನಿಜವಾಗಿದ್ದು ತನಿಖೆಯ ವೇಳೆ ಲಕ್ಷ ಲಕ್ಷ ಫಂಡಿಂಗ್ ಆಗಿರುವುದು ಬೆಳಕಿಗೆ ಬಂದಿದೆ.

## ಟ್ವಿಸ್ಟ್

ಮೇಲ್ನೋಟಕ್ಕೆ ಜಗದೀಶ್ ಅವರು ಅಪಘಾತದಲ್ಲಿ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ವಕೀಲ್ ಜಗದೀಶ್ ನೈಸ್ ರಸ್ತೆಯಲ್ಲಿ ತೆರಳುತ್ತಿದ್ದಾಗ ಅವರ ಕಾರಿಗೆ ಲಾರಿಯೊಂದು ಟಚ್ ಆಗಿದೆ. ಟಚ್ ಆಗುತ್ತಿದ್ದಂತೆ ಚಾಲಕ ಸ್ವಲ್ಪ ಮುಂದೆ ಹೋಗಿ ಲಾರಿ ನಿಲ್ಲಿಸಿದ್ದ. ಆಗ ಜಗದೀಶ್ ಕಾರು ನಿಲ್ಲಿಸಿ ಲಾರಿ ಚಾಲಕನ ಬಳಿಗೆ ಹೋಗಿದ್ದಾರೆ. ಈ ವೇಳೆ ಅವರಿಬ್ಬರ ಮಧ್ಯೆ ವಾಗ್ವಾದ ನಡೆದಿದೆ. ವಾಗ್ವಾದದ ಭರದಲ್ಲಿ ಜಗದೀಶ್ ಅರಿವಿಲ್ಲದೇ ನಡುರಸ್ತೆಗೆ ಹೋಗಿದ್ದಾರೆ. ಇದೇ ಸಮಯದಲ್ಲಿ ವೇಗವಾಗಿ ಬರುತ್ತಿದ್ದ ಲಾರಿಯ ಹಿಂಬದಿಯ ಭಾಗ ಜಗದೀಶ್‌ಗೆ ಟಚ್ ಆಗಿದೆ. ಇದರಿಂದ ತಕ್ಷಣ ಕೆಳಗೆ ಬಿದ್ದು, ತೀವ್ರ ರಕ್ತಸ್ರಾವವಾಗಿ ಸಾವನ್ನಪ್ಪಿದ್ದಾರೆ.

ಲಾರಿ ಚಾಲಕನಿಗೆ ಹಿಂಬದಿಗೆ ಏನೋ ತಾಗಿದೆ ಎಂದು ಅನಿಸಿದಾಗ, ಸುಮಾರು ಅರ್ಧ ಕಿ.ಮೀ ಮುಂದೆ ಹೋಗಿ ಲಾರಿ ನಿಲ್ಲಿಸಿದ್ದ. ಆದರೆ ಯಾರು ಲಾರಿಯ ಹಿಂದೆ ಬರದ ಕಾರಣ ಏನು ಆಗಿಲ್ಲ ಎಂದು ಹಾಗೆಯೇ ತೆರಳುತ್ತಾನೆ ಎಂದು ತನಿಖೆ ವೇಳೆ ಮಾಹಿತಿ ಲಭ್ಯವಾಗಿದೆ.

ಸದ್ಯ ಸಿಸಿಟಿವಿ ದೃಶ್ಯಾವಳಿಗಳ ಆಧಾರದ ಮೇಲೆ ಕೆಂಗೇರಿ ಪೊಲೀಸರು ಲಾರಿ ಚಾಲಕನನ್ನು ವಶಕ್ಕೆ ಪಡೆದು, ತನಿಖೆ ಮುಂದುವರಿಸಿದ್ದಾರೆ. ಇನ್ನೂ ಮೃತ ಜಗದೀಶ್ ಅವರ ಮರಣೋತ್ತರ ಪರೀಕ್ಷೆಯ ವರದಿ ಬರಬೇಕಿದೆ.

## ಕೈಗೊಳ್ಳಿ

ಭಾರತದ ಮೇಲೆ ಮತ್ತೊಮ್ಮೆ ದಾಳಿ ಮಾಡುವ ಮೊದಲು ಪಾಕಿಸ್ತಾನ 'ನೂರು ಬಾರಿ ಯೋಚಿಸುವಂತೆ' ಪ್ರಧಾನಿ ನರೇಂದ್ರ ಮೋದಿ ಅವರು ಬಲವಾದ ಕ್ರಮ ಕೈಗೊಳ್ಳಬೇಕೆಂದು ಅವರು ಒತ್ತಾಯಿಸಿದರು. ಭಯೋತ್ಪಾದಕ ದಾಳಿ ನಡೆಸಿದ್ದು ನಾವೇ ಎಂಬುದಕ್ಕೆ ಭಾರತ ಪುರಾವೆ ಕೊಡಲಿ, ಭಾರತವು ಪಾಕಿಸ್ತಾನದಲ್ಲಿ ಭಯೋತ್ಪಾದಕತೆ ಹರಡುತ್ತಿದೆ ಎಂಬುದಕ್ಕೆ ನಮ್ಮ ಬಳಿ ಸಾಕ್ಷ್ಯಗಳಿವೆ ಎಂದು ಪಾಕಿಸ್ತಾನ ಹೇಳಿದ್ದಕ್ಕೆ ಆಕ್ರೋಶ ವ್ಯಕ್ತಪಡಿಸುವ ಓವೈಸಿ ಪಾಕಿಸ್ತಾನ ನಾಚಿಕೆಯಿಲ್ಲದೆ ಪುರಾವೆ ಕೇಳುತ್ತಿದೆ ಎಂದರು.

ನಾವು ನಿಮ್ಮನ್ನು ಪಠಾಣ್‌ಕೋಟ್‌ಗೆ ಆಹ್ವಾನಿಸಿ ನಿಮ್ಮ ಭಯೋತ್ಪಾದಕರು ನಮ್ಮ ವಾಯುಪಡೆ ನೆಲೆಯ ಮೇಲೆ ಎಲ್ಲಿ ದಾಳಿ ಮಾಡಿದರು ಎಂಬುದನ್ನು ತೋರಿಸಲಿಲ್ಲವೇ ನೀವು ನಿಮ್ಮ ತಂಡವನ್ನು ಕಳುಹಿಸಿದ್ದೀರಿ ಅವರು ಅದನ್ನು ತಮ್ಮ ಕಣ್ಣಿನಿಂದಲೇ ನೋಡಿದ್ದಾರೆ, ಆದರೂ ನೀವು ಆ ಭಯೋತ್ಪಾದಕರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲಿಲ್ಲ.

ತನ್ನ ನೆಲದಿಂದ ಭಯೋತ್ಪಾದಕರು ಬಂದು ಭಾರತದಲ್ಲಿ ಜನರನ್ನು ಕೊಲ್ಲುತ್ತಾರೆ ಎಂದು ಪಾಕಿಸ್ತಾನ ಎಂದಿಗೂ ಒಪ್ಪಿಕೊಳ್ಳುವುದಿಲ್ಲ.ಪಾಕಿಸ್ತಾನವನ್ನು ಮನವೊಲಿಸಲು ಪ್ರಯತ್ನಿಸುವ ಸಮಯ ಮುಗಿದಿದೆ ಎಂದು ದೂರಿದರು.

ಪಾಕಿಸ್ತಾನವು ಭಾರತವನ್ನು ಎಂದಿಗೂ ಶಾಂತಿಯಿಂದ ಬದುಕಲು ಬಿಡುವುದಿಲ್ಲ, ಇಂದು ಅವರಿಗೆ ಸೂಕ್ತ ಉತ್ತರ ನೀಡುವ ಸಮಯ. ಆದ್ದರಿಂದ ಈ ಭಯೋತ್ಪಾದನೆಯ ವಿಷ ಶಾಶ್ವತವಾಗಿ ಕೊನೆಗೊಳಿಸಬೇಕಿದೆ ಎಂದರು.

ಪಹಲ್ಗಾಮ್ ನಲ್ಲಿ ಉಗ್ರರು ನಡೆಸಿದ ದಾಳಿಯಲ್ಲಿ 26 ಮಂದಿ ಅಮಾಯಕರು ಪ್ರಾಣ ಕಳೆದುಕೊಂಡಿದ್ದರು. ಲಷ್ಕರ್ ಎ ತೊಯ್ಬಾದ ಟಿಆರ್ ಎಫ್ ಈ ದಾಳಿ ಹೊಣೆ ಹೊತ್ತುಕೊಂಡಿತ್ತು.

## ಪಹಲ್ಗಾಮ್ ದಾಳಿ: ಜರ್ಮನಿಯಲ್ಲಿ ಹಿಂದೂ ಸಮುದಾಯದ ಒಗ್ಗಟ್ಟಿನ ಸಂದೇಶ ಸಾರಿದ ಭಾರತೀಯರು

**ಸ್ಟಟ್ ಗಾರ್ಟ್ :** ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ ಪ್ರಾಣ ಕಳೆದುಕೊಂಡಿರುವವರ ಸ್ಮರಣಾರ್ಥ ಸ್ಟಟ್ ಗಾರ್ಟ್ ನಲ್ಲಿ ಭಾರತೀಯ ಸಮುದಾಯವು ಶಾಂತಿಯುವ ಮೆರವಣಿಗೆಯನ್ನು ನಡೆಸಿತು. ಭಾರತೀಯ ಪರಿವಾರ್ ಬಿಡಬ್ಲ್ಯೂ ಬ್ಯಾನರ್ ಅಡಿಯಲ್ಲಿ, ಸ್ಟಟ್‌ಗಾರ್ಟ್‌ನಲ್ಲಿರುವ ಭಾರತೀಯ ವಲಸಿಗರು, ಭಾರತದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯಲ್ಲಿ ಮಡಿದ 26 ಮುಗ್ಧ ಜೀವಗಳಿಗೆ ಗೌರವ ಸಲ್ಲಿಸಲು ಸ್ಕ್ಲೋಸ್‌ಪ್ಲಾಟ್ಜ್‌ನಲ್ಲಿ ಶಾಂತಿಯುತ ಮೆರವಣಿಗೆಯನ್ನು ಭಾನುವಾರ ಆಯೋಜಿಸಿದ್ದರು.

ಸಂಜೆ 5 ಗಂಟೆಗೆ ಭಾರತೀಯ ಸಮುದಾಯದ 300 ಕ್ಕೂ ಹೆಚ್ಚು ಸದಸ್ಯರ ಆಗಮನದೊಂದಿಗೆ ಪ್ರಾರಂಭವಾಯಿತು. ಎಲ್ಲಾ ಭಾರತೀಯರು ಹಣೆಯ ಮೇಲೆ ತಿಲಕವನ್ನು ಹಾಕಿಕೊಂಡಿದ್ದರು. ಆದರೆ ಕಾರ್ಯಕ್ರಮಕ್ಕೆ ಸ್ವಾಗತ ಕೋಲು ಅಲ್ಲ ಬದಲಾಗಿ ಆಂತರಿಕ ಗೌರವ ಮತ್ತು ಸಾಂಸ್ಕೃತಿಕ ಏಕತೆಯ ಗಂಭೀರ ಸಂಕೇತವಾಗಿ ತಿಲಕ ಇಟ್ಟುಕೊಂಡಿದ್ದರು.

ಕಾರ್ಯಕ್ರಮದಲ್ಲಿ ಹಿಂದಿ ಮತ್ತು ಇಂಗ್ಲಿಷ್ ಎರಡರಲ್ಲೂ ಭಾಷಣಗಳು ನಡೆದವು, ನಂತರ ಶಾಂತಿ ಮಾರ್ಗ ಹಾಗೂ ಮೃತರ ಸ್ಮರಣಾರ್ಥ ಎರಡು ನಿಮಿಷಗಳ ಮೌನವನ್ನು ಆಚರಿಸಲಾಯಿತು. ಈ ಕಾರ್ಯಕ್ರಮದ ಅತ್ಯಂತ ಹೃದಯಸ್ಪರ್ಶಿ ಕ್ಷಣಗಳಲ್ಲಿ ಹನುಮಾನ್ ಚಾಲೀಸಾದ ಸಾಮೂಹಿಕ ಪಠಣವು ನಡೆಯಿತು. ಅದರ ಎಲ್ಲರಲ್ಲಿ ಧೈರ್ಯ, ನಂಬಿಕೆ ಮತ್ತು ಏಕತೆಯ ಭಾವವನ್ನು ಮತ್ತೊಮ್ಮೆ ಮೂಡಿಸಿತು. ಅಲ್ಲಿ ಪಾಲ್ಗೊಂಡವರು ಹಮ್ ಹೋಂಗೆ ಕಾಮಿಯಾಬ್ ಹಾಗೂ ರಾಷ್ಟ್ರಗೀತೆಯನ್ನು ಹಾಡಿದರು. ಈ ಮೆರವಣಿಗೆ ಸ್ಟಟ್‌ಗಾರ್ಟ್‌ನಲ್ಲಿರುವ ಹಿಂದೂ ಸಮುದಾಯದಿಂದ ಪ್ರಬಲ ಮತ್ತು ಒಗ್ಗಟ್ಟಿನ ಸಂದೇಶವನ್ನು ಸಾರಿತು. ಉಗ್ರರು ಪಹಲ್ಗಾಮ್ ನಲ್ಲಿ ನಡೆಸಿದ ದಾಳಿಯಲ್ಲಿ 26 ಮಂದಿ ಅಮಾಯಕರು ಪ್ರಾಣ ಕಳೆದುಕೊಂಡಿದ್ದಾರೆ. ಈ ದಾಳಿಯ ಹೊಣೆಯನ್ನು ಲಷ್ಕರ್ ಎ ತೊಯ್ಬಾದ ಟಿಆರ್ ಎಫ್ ಹೊತ್ತಿತ್ತು. ಈ ದಾಳಿಗೆ ಇಡೀ ವಿಶ್ವವೇ ಆಕ್ರೋಶ ವ್ಯಕ್ತಪಡಿಸಿದೆ. ಭಯೋತ್ಪಾದಕರ ವಿರುದ್ಧದ ಸಮರಕ್ಕೆ ಜತೆಯಾಗಿ ನಿಂತಿವೆ.

## ಕಿರುಕುಳಕ್ಕೆ ಬೇಸತ್ತು ವ್ಯಕ್ತಿ ಆತ್ಮಹತ್ಯೆಗೆ ಯತ್ನ

**ಹಾಸನ:** ಹೆಡ್ ಕಾನ್ಸ್ ಟೇಬಲ್ ನಿಂದಲೇ ಮೀಟರ್ ಬಡ್ಡಿ ದಂಧೆ ಕಿರುಕುಳಕ್ಕೆ ಬೇಸತ್ತು ವ್ಯಕ್ತಿ ಆತ್ಮಹತ್ಯೆಗೆ ಯತ್ನಿಸಿರುವಂತಹ ಘಟನೆ ಜಿಲ್ಲೆಯ ಸಕಲೇಶಪುರ ತಾಲೂಕಿನ ಬಾಳ್ಳುಪೇಟೆಯಲ್ಲಿ ನಡೆದಿದೆ. ಬಾಳ್ಳುಪೇಟೆಯ ಮೊಹಮ್ಮದ್ ತನ್ವೀರ್ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ವ್ಯಕ್ತಿ. ಹಾಸನ ಎಸ್ ಪಿ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೆಡ್ ಕಾನ್ಸ್ ಟೇಬಲ್ ಅರುಣ್ ವಿರುದ್ಧ ಮೀಟರ್ ಬಡ್ಡಿ ದಂಧೆ ಆರೋಪ ಕೇಳಿಬಂದಿದೆ. ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

**80 ಸಾವಿರ ರೂ.ಗೆ 2 ಲಕ್ಷ ರೂ ಬಡ್ಡಿ:** ಮೊಹಮ್ಮದ್ ತನ್ವೀರ್ 2 ವರ್ಷದ ಹಿಂದೆ ಕೋಳಿ ಅಂಗಡಿ ಮಾಡಲು ಹೆಡ್ ಕಾನ್ಸ್ ಟೇಬಲ್ ಅರುಣ್ ಬಳಿ ಸಾಲ ಪಡೆದಿದ್ದರು. 80 ಸಾವಿರ ರೂ ಹಣಕ್ಕೆ ವಾರಕ್ಕೆ 7,800 ರೂ. ಬಡ್ಡಿ ವಸೂಲಿ ಮಾಡಲಾಗುತ್ತಿತ್ತು. ತಿಂಗಳಿಗೆ 28 ಸಾವಿರ ರೂ. ಬಡ್ಡಿ ಕಟ್ಟಿ ತನ್ವೀರ್ ಹೈರಾಣಾಗಿದ್ದರು. 80 ಸಾವಿರ ರೂ.ಗೆ 2 ಲಕ್ಷ ರೂ ಬಡ್ಡಿ ಕಟ್ಟಿದ್ರೂ, ಬಿಡದೆ ಕಿರುಕುಳ ನೀಡುತ್ತಿರುವುದಾಗಿ ತನ್ವೀರ್ ಆರೋಪಿಸಿದ್ದಾರೆ.

ಸಂಜೆ ಮುಗಿಲು
ಸೋಮವಾರ
5.5.2025


## ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಶೇ. 73.71% ರಷ್ಟು ಫಲಿತಾಂಶ: ಜಿಲ್ಲೆಗೆ 9 ನೇ ಸ್ಥಾನ

# ಜಿಲ್ಲೆಯ ಇಬ್ಬರು ವಿದ್ಯಾರ್ಥಿನಿಯರು ರಾಜ್ಯಕ್ಕೆ ಟಾಪರ್

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದ್ದು ಬೆಂಗಳೂರು ಗ್ರಾಮಾಂತರ ಜಿಲ್ಲೆಯು ಶೇ. 73.71% ರಷ್ಟು ಫಲಿತಾಂಶ ಪಡೆಯುವ ಮೂಲಕ ರಾಜ್ಯದಲ್ಲಿ ಒಂಬತ್ತನೆಯ ಸ್ಥಾನ ಪಡೆದುಕೊಂಡಿದೆ. ಈ ಬಾರಿಯ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಮೊದಲ ಬಾರಿ ಪರೀಕ್ಷೆ ಎದುರಿಸಿದ 13643 ವಿದ್ಯಾರ್ಥಿಗಳ ಪೈಕಿ 10057 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇಕಡ 73.71 ರಷ್ಟು ಫಲಿತಾಂಶ ದೊರಕಿದೆ. ಪರೀಕ್ಷೆಗೆ ಒಟ್ಟು 6803 ಬಾಲಕರು ಹಾಜರಾಗಿದ್ದು, 4576 ಬಾಲಕರು ತೇರ್ಗಡೆಯಾಗುವ ಮೂಲಕ ಶೇ. 67.26 ರಷ್ಟು ಫಲಿತಾಂಶ ಪಡೆದಿದ್ದಾರೆ. 6840 ಬಾಲಕಿಯರು ಪರೀಕ್ಷೆಗೆ ಹಾಜರಾಗಿದ್ದು, 5481 ಬಾಲಕಿಯರು ತೇರ್ಗಡೆ ಹೊಂದುವ ಮೂಲಕ ಶೇ 80.13 ರಷ್ಟು ಫಲಿತಾಂಶ ದೊರಕಿದೆ. ನಗರ ಪ್ರದೇಶದ 8576 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 6459 ವಿದ್ಯಾರ್ಥಿಗಳು ತೇರ್ಗಡೆಯಾಗುವ ಮೂಲಕ ಶೇ 75.31 ರಷ್ಟು ಫಲಿತಾಂಶ ದೊರೆತಿದೆ. ಗ್ರಾಮೀಣ ಪ್ರದೇಶದ 5067 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 3598 ವಿದ್ಯಾರ್ಥಿಗಳು ತೇರ್ಗಡೆಯಾಗುವ ಮೂಲಕ ಶೇ 71.00 ರಷ್ಟು ಫಲಿತಾಂಶ ಸಿಕ್ಕಿದೆ.




**ಜಿಲ್ಲೆಯ ಇಬ್ಬರು ರಾಜ್ಯಕ್ಕೆ ಟಾಪರ್ ಗಳು ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಹೋಬಳಿಯ ನೀಲಗಿರೇಶ್ವರ ವಿದ್ಯಾನಿಕೇತನ ಪ್ರೌಢಶಾಲೆಯ ವಿದ್ಯಾರ್ಥಿ ಸಿ.ಭಾವನಾ ಹಾಗೂ ದೊಡ್ಡಬಳ್ಳಾಪುರ ಟೌನ್ ನ ಮೇಳೆಕೋಟೆ ಕ್ರಾಸ್ನಲ್ಲಿರುವ ಎಸ್.ಜಿ.ಸಿ.ಆರ್ ಶಾಲೆಯ ರಂಜಿತಾ ಎ.ಸಿ ಅವರು ಎಸ್ ಎಸ್. ಎಲ್.ಸಿ ಪರೀಕ್ಷೆಯಲ್ಲಿ 625 ಕ್ಕೆ 625 ಅಂಕಗಳನ್ನು ಪಡೆಯುವ ಮೂಲಕ ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಸಿ. ಭಾವನ. ನೀಲಗಿರೀಶ್ವರ ವಿದ್ಯಾನಿಕೇತನ ವಿಜಯಪುರ. ದೇವನಹಳ್ಳಿ ತಾಲ್ಲೂಕು. 625ಕ್ಕೆ 625.**

### ತಾಲ್ಲೂಕು ವಾರು ಫಲಿತಾಂಶ

**ದೇವನಹಳ್ಳಿ ತಾಲ್ಲೂಕಿನಲ್ಲಿ 3255 ವಿದ್ಯಾರ್ಥಿಗಳು ಹಾಜರಾಗಿದ್ದು 2550 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ. 78.34 ರಷ್ಟು ಫಲಿತಾಂಶ ಪಡೆದಿದ್ದಾರೆ.**
**ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ 3654 ವಿದ್ಯಾರ್ಥಿಗಳು ಹಾಜರಾಗಿದ್ದು 2561 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ. 70.08 ರಷ್ಟು ಫಲಿತಾಂಶ ಪಡೆದಿದ್ದಾರೆ.**
**ಹೊಸಕೋಟೆ ತಾಲ್ಲೂಕಿನಲ್ಲಿ 3625 ವಿದ್ಯಾರ್ಥಿಗಳು ಹಾಜರಾಗಿದ್ದು 2646 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ. 72.99 ರಷ್ಟು ಫಲಿತಾಂಶ ಪಡೆದಿದ್ದಾರೆ.**
**ನೆಲಮಂಗಲ ತಾಲ್ಲೂಕಿನಲ್ಲಿ 3109 ವಿದ್ಯಾರ್ಥಿಗಳು ಹಾಜರಾಗಿದ್ದು 2300 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ. 73.97 ರಷ್ಟು ಫಲಿತಾಂಶ ಪಡೆದಿದ್ದಾರೆ.**

> **“ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ನಮ್ಮ ಜಿಲ್ಲೆಗೆ ಉತ್ತಮವಾದ ಫಲತಾಂಶ ದೊರೆತಿದ್ದು, ಉತ್ತೀರ್ಣರಾದ ಎಲ್ಲಾ ಮಕ್ಕಳಿಗೆ ಅಭಿನಂದನೆಗಳು, ಇದರ ಹಿಂದಿರುವ ಎಲ್ಲಾ ಶಿಕ್ಷಕ ವೃಂದದವರಿಗೆ ಹಾಗೂ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗು ಅಭಿನಂದನೆ. ಎಸ್.ಎಸ್. ಎಲ್.ಸಿ ಪರೀಕ್ಷೆಗೆ ಸಾಕಷ್ಟು ಸಿದ್ಧತೆಗಳನ್ನು ನಡೆಸಿ ಯಾವುದೇ ಅಡೆತಡೆ ಇಲ್ಲದಂತೆ ಪರೀಕ್ಷೆ ಯಶಸ್ವಿಯಾಗಿ ನಡೆಸಲಾಯಿತು. ಜಿಲ್ಲೆಗೆ ಉತ್ತಮ ಫಲಿತಾಂಶ ಬಂದಿರುವುದು ಸಂತಸ ತಂದಿದೆ.**
>
> **| ಎ.ಬಿ ಬಸವರಾಜು ಜಿಲ್ಲಾಧಿಕಾರಿ**



> **“ ಈ ಬಾರಿಯ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಬಂದಿದ್ದು, ಉತ್ತಮ ಫಲಿತಾಂಶಕ್ಕಾಗಿ ವಿದ್ಯಾರ್ಥಿಗಳಿಗೆ ಸಾಕಷ್ಟು ತರಬೇತಿ ಕಾರ್ಯಕ್ರಮಗಳು, ಪಠ್ಯ ಕ್ರಮ, ವಿಶೇಷ ತರಗತಿಗಳು ಏರ್ಪಡಿಸಲಾಗಿತ್ತು. ಇದರಿಂದ ಉತ್ತಮ ಫಲಿತಾಂಶ ಬರಲು ಸಾಧ್ಯವಾಗಿದೆ. ಪಾಸಾದ ಎಲ್ಲಾ ವಿದ್ಯಾರ್ಥಿಗಳಿಗೂ ಅಭಿನಂದನೆ ಸಲ್ಲಿಸುತ್ತೇನೆ.**
>
> **| ಡಾ.ಕೆ.ಎನ್ ಅನುರಾಧ ಸಿ.ಇ.ಒ**

## ಎಸ್ಎಸ್ಎಲ್ಸಿ ಪಾಸಾದ ವಿದ್ಯಾರ್ಥಿಗಳಿಗೆ ಶುಭಾಶಯ

**ಬೆಂಗಳೂರು:** ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ ಗೋಪಾಲಯ್ಯನವರು ಶುಭಾಶಯ ಕೋರಿದ್ದಾರೆ. ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ರಾಜ್ಯದಲ್ಲೇ ಈ ವರ್ಷ ವಿದ್ಯಾರ್ಥಿನಿಯರು ಮೇಲ್ಗೈ ಸಾಧಿಸಿ ಮೊದಲನೇ ಸ್ಥಾನ ಗಳಿಸಿರುವುದು ಹೆಮ್ಮೆಯ ವಿಷಯ



ಅವರಿಗೆ ನನ್ನ ಹೃದಯಪೂರ್ವಕ ಶುಭಾಶಯಗಳು . ವಿದ್ಯಾರ್ಥಿಗಳು ಎರಡನೇ ಸ್ಥಾನ ಗಳಿಸಿದ್ದಾರೆ ಅವರಿಗೂ ನನ್ನ ಶುಭಾಶಯಗಳನ್ನು ತಿಳಿಸುತ್ತೇನೆ ಹಾಗೂ ಅನುತ್ತೀರ್ಣರಾದ ವಿದ್ಯಾರ್ಥಿಗಳು ಎದೆಗುಂದದೆ ಮುಂದಿನ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದು ಉತ್ತೀರ್ಣರಾಗಿ ಎಂದು ಹಾರೈಸಿದರು. ಪರೀಕ್ಷೆ ಎಂಬುದು ಒಂದು ಯುದ್ಧ ಯುದ್ಧಕ್ಕೆ ಹೋದವರೆಲ್ಲ ಗೆಲ್ಲಲು ಸಾಧ್ಯವಿಲ್ಲ ಸೋಲು ಗೆಲುವು ಎಂಬುದು ಮನುಷ್ಯನ ಜೀವನದಲ್ಲಿ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ, ಸೋತವರು ಒಂದು ದಿನ ಗೆಲ್ಲಲೇ ಬೇಕು, ವಿದ್ಯಾರ್ಥಿಗಳು ಒಂದು ಗುರಿಯನ್ನು ಇಟ್ಟುಕೊಂಡು ಛಲದಿಂದ ಮುನ್ನುಗಿದರೆ ಯಾವುದು ಅಸಾಧ್ಯವಿಲ್ಲ. ಇದನ್ನು ಮನಗಂಡು ವಿದ್ಯಾರ್ಥಿಗಳು ಫೇಲಾದೆ ಎಂಬುದನ್ನು ಮನಸ್ಸಿಗೆ ಹಚ್ಚಿಕೊಳ್ಳದೆ ಮುಂದಿನ ಪರೀಕ್ಷೆಯಲ್ಲಿ ಪಾಸ್ ಆಗುತ್ತೇನೆ ಎಂಬ ಆತ್ಮಸ್ಥೈರ್ಯ ದಿಂದ ಮುಂದೆ ಹೋದರೆ ಯಾವುದು ಅಸಾಧ್ಯವಲ್ಲ ಎಂದು ತಿಳಿಸಿದರು.

## ರೋಟರಿ ಆಂಗ್ಲ ಪ್ರೌಢಶಾಲೆ;ಕೇವಲ 3 ಅಂಕಗಳಿಂದ ರಾಜ್ಯದ ಟಾಪರ್ ಸ್ಥಾನ ಕಳೆದುಕೊಂಡ ವಿದ್ಯಾರ್ಥಿನಿ

**ವಿಜಯಪುರ:** ಇಲ್ಲಿನ ರೋಟರಿ ಶಾಲೆಯ ತನುಶ್ರೀ ಎಂಬ ವಿದ್ಯಾರ್ಥಿನಿ ಕೇವಲ 3 ಅಂಕಗಳಿಂದ ರಾಜ್ಯದ ಟಾಪರ್ ಸ್ಥಾನದಿಂದ ವಂಚಿತಳಾಗಿರುತ್ತಾಳೆ. ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ 625 ಕ್ಕೆ 622 ಅಂಕಗಳನ್ನು ಪಡೆದಿರುತ್ತಾಳೆ. 2024 ಮತ್ತು 25ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ 28 ವಿದ್ಯಾರ್ಥಿಗಳಲ್ಲಿ 27 ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ. ಅವರಲ್ಲಿ ಎಂಟು ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ಪಡೆದಿರುತ್ತಾರೆ. 14 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, 5 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದು, ಶಾಲೆಯು ಶೇಕಡ 97 ರಷ್ಟು ಫಲಿತಾಂಶ ಪಡೆದಿರುತ್ತದೆ . ವಿದ್ಯಾರ್ಥಿನಿ ತನುಶ್ರೀ(622)ಶೇ.99.52, ವೈ.ಆರ್,ಪ್ರಫುಲ್ ಕುಮಾರ್ (605) ಶೇ.96.08, ಪಿ.ಪೂರ್ವಿತ (588)ಶೇ.94.08, ಕೆ.ವಿ.ಗ್ರೀಷ್ಮ (563)ಶೇ90.08, ಅಂಕಗಳನ್ನು ಪಡೆದು, ಶಾಲೆಗೆ ಕೀರ್ತಿ ತಂದಿರುತ್ತಾರೆ.

## ಶಂಕರಾಚಾರ್ಯ ಜಯಂತಿ

**ಬೆಂಗಳೂರು ಗ್ರಾಮಾಂತರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆದಿ ಶಂಕರ 'ಶ್ರೀ ಶಂಕರಾಚಾರ್ಯ' ಜಯಂತಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ಆಚರಿಸಲಾಯಿತು. ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ಶ್ರೀ ಶಂಕರಾಚಾರ್ಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು. ನಂತರ ಮಾತನಾಡಿ ಆದಿ ಶಂಕರ ಎಂದೇ ಪ್ರಸಿದ್ಧಿ ಪಡೆದಿರುವ ಶಂಕರಾಚಾರ್ಯರು ಅದ್ವೈತ ವೇದಾಂತಕ್ಕೆ ಅಡಿಪಾಯ ಹಾಕಿ ಹಿಂದೂ ಧರ್ಮವನ್ನು ಪುನರುಜ್ಜೀವನಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸಿದರು. ಅಂತಿಮ ಗುರಿಯನ್ನು ತಿಳಿಸಿಕೊಡುವುದೇ ವೇದಾಂತ ಎಂದು ಶಂಕರಾಚಾರ್ಯರು ವೇದಾಂತಕ್ಕೆ ಸ್ಪಷ್ಟತೆಯನ್ನು ತಂದುಕೊಟ್ಟರು. ಸಮಾನತೆಯ ದರ್ಶನವೇ ಅದ್ವೈತ ದರ್ಶನ ಎಂಬ ಮಾತನ್ನು ಲೋಕದಲ್ಲಿ ಸ್ಥಿರಗೊಳಿಸಿದವರು ಶಂಕರಾಚಾರ್ಯರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಶಾ, ಜಿಲ್ಲಾಧಿಕಾರಿಗಳ ಕಚೇರಿ ಸಹಾಯಕ ರಾಜೀವ್ ಸುಲೋಚನಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅನಿತ ಲಕ್ಷ್ಮೀ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ವಾರಸುದಾರರಿಲ್ಲದ ವಾಹನಗಳ ವರದಿ ಸಲ್ಲಿಕೆ

**ತಿಪಟೂರು:** ನಗರ ಠಾಣಾ ವ್ಯಾಪ್ತಿಯಲ್ಲಿ ವಾರಸುದಾರರು ಇಲ್ಲದೆ ನಿಲ್ಲಿಸಿರುವ ಈ ಕೆಳಕಂಡ ವಾಹನಗಳನ್ನು ನಗರ ಪೊಲೀಸ್ ಠಾಣೆ ಜಿ.ಎಸ್.ಸಿ ದಾಖಲಿಸಿಕೊಂಡು ನ್ಯಾಯಾಲಯಕ್ಕೆ ವರದಿ ಸಲ್ಲಿಸಲಾಗಿದೆ. ಹನ್ನೊಂದು ವಾಹನಗಳು ಈ ರೀತಿಯಿದ್ದು ವಾರಸುದಾರರು ಇದ್ದರೆ ಸೂಕ್ತ ದಾಖಲೆಗಳನ್ನು ಹದಿನೈದು ದಿನಗಳ ಒಳಗೆ ತಿಪಟೂರಿನ ಎಸ್‌ಸಿಜೆ ಮತ್ತು ಜೆಎಮ್‌ಎಫ್‌ಸಿ ನ್ಯಾಯಾಲಯಕ್ಕೆ ಸಲ್ಲಿಸಬಹುದೆಂದು ನಗರ ಠಾಣೆಯ ಆರಕ್ಷಕ ನಿರೀಕ್ಷಕ ವೆಂಕಟೇಶ್.ಸಿ ಪ್ರಕಟಣೆಗೆ ತಿಳಿಸಿದ್ದಾರೆ. ಕೆಎ 02 ಎಚ್.ಎ 2806, ಕೆಎ50.ಆರ್2517, ಕೆಎ 13. ಇಬಿ 7053, ನೊಂದಾಣಿಯಿಲ್ಲದ ಟಿವಿಎಸ್ ಎಕ್ಸಲ್, ಸುಜುಕಿ ಮ್ಯಾಕ್ಸ್ 100, ಯಮಹಾ ಕಂಪನಿಯ ಆರ್ ಎಕ್ಸ್ ಟಿವಿಎಸ್ ವಿಕ್ಟರ್, ಇಂಡಿಕಾ ಕಾರು ಕೆಎ.51. ಜೆ8002, ಕೆಎ04 ಎಚ್‌ಬಿ9184, ಎಪಿ02 ಎನ್300 ಈ ವಾಹನಗಳ ಸೂಕ್ತ ದಾಖಲೆ ನೀಡಿ ಪಡೆದುಕೊಳ್ಳಬಹುದೆಂದು ತಿಳಿಸಿದ್ದಾರೆ.

# ಚಿಕ್ಕಹೊನ್ನವಳ್ಳಿಯಲ್ಲಿ ಎನ್‌ಎಸ್‌ಎಸ್ ವಾರ್ಷಿಕ ಶಿಬಿರ

**ತಿಪಟೂರು:** ತಾಲ್ಲೂಕಿನ ಚಿಕ್ಕಹೊನ್ನವಳ್ಳಿ ಗ್ರಾಮದಲ್ಲಿ ಕಲ್ಪತರು ವಿದ್ಯಾ ಸಂಸ್ಥೆಯ ಪಲ್ಲಾಗಟ್ಟಿ ಅಡವಪ್ಪ ಕಲಾ ಮತ್ತು ವಾಣಿಜ್ಯ ಕಾಲೇಜು ವತಿಯಿಂದ ಏಳು ದಿನಗಳ ಕಾಲ ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರವನ್ನು ಆಯೋಜನೆ ಮಾಡಲಾಗಿದೆ.

ಮೊದಲ ದಿನದ ಕಾರ್ಯಕ್ರಮವನ್ನು ಕಾಲೇಜಿನ ಪ್ರಾಂಶುಪಾಲ ಟಿ.ಆರ್.ವಿಜಯಕುಮಾರಿ ಉದ್ಘಾಟಿಸಿ ಶಿಬಿರಾರ್ಥಿಗಳಿಗೆ ಎನ್‌ಎಸ್‌ಎಸ್ ಮುಖ್ಯಾಂಶವಾದ ಶಿಸ್ತು ಸಂಯಮ ಸಹಬಾಳ್ವೆ ಸಹಜೀವನ ಸಹಭೋಜನದ ಬಗ್ಗೆ ತಿಳಿಸಿದರು. ಅತಿಥಿ ರಂಗಪ್ಪ ಮಾತನಾಡಿ ಗ್ರಾಮದ ಸ್ವಚ್ಛತೆಗಿಂತ ಮನಸ್ಸಿನ ಸ್ವಚ್ಛತೆ ಕಾಪಾಡುವುದು ಇಂದಿನ ಅವಶ್ಯಕತೆಯಿದೆ ಎಂದರು.

ಗ್ರಾಮಸ್ಥರಾದ ರಂಗಪ್ಪ, ಬಾಬು ಪ್ರಸಾದ್, ಎನ್‌ಎಸ್‌ಎಸ್ ಅಧಿಕಾರಿಗಳಾದ ಲೋಕೇಶ್, ಶ್ರೀನಿವಾಸ್, ಲಾಲಟಾಕ್ಷ ಮೂರ್ತಿ, ಯೋಗನಂದ್ ಹಾಜರಿದ್ದರು. ಶಿಬಿರಾರ್ಥಿ ಚರಣ್ ರಾಜ್ ಕಾರ್ಯಕ್ರಮ ನಿರೂಪಿಸಿದರು.



## ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರ

**ಬೆಂಗಳೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು "Lakes-2025: Healthy Lakes, Healthy Lives: The Need for Conservation" ವಿಷಯದ ಕುರಿತು 2025ನೇ ಮೇ 22 ಮತ್ತು 23ರಂದು ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರವನ್ನು ಅಕಾಡೆಮಿಯ ಕಚೇರಿಯಲ್ಲಿ ಹಮ್ಮಿಕೊಂಡಿದೆ. ಈ ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿರುವರು. ಕಾರ್ಯಾಗಾರದಲ್ಲಿ ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಶೈಕ್ಷಣಿಕ ತಜ್ಞರು, ಯುವ ಉದ್ಯಮದಾರರು ಭಾಗವಹಿಸಬಹುದು. ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು Research Papers Presentation ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ Research Papers ಗಳಿಗೆ ನಗದು ಬಹುಮಾನವನ್ನು ನೀಡಲಾಗುವುದು. ಆಸಕ್ತ ಪ್ರತಿನಿಧಿಗಳು 2025ನೇ ಮೇ 17ರ ಒಳಗಾಗಿ ಗೂಗಲ್ ಫಾರಂ https://forms.gle/qYagXUbi6iAqUgaH7 ಮೂಲಕ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಗಾರ ಸಂಯೋಜಕರ ಮೊಬೈಲ್ ದೂರವಾಣಿ ಸಂ. 9845258894, 9620767819 9611198189 ಅಥವಾ ಅಕಾಡೆಮಿಯ ವೆಬ್ ಸೈಟ್ https://kstacademy.in ವೀಕ್ಷಿಸಬಹುದು ಎಮದು ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎ.ಎಂ.ರಮೇಶ್ ತಿಳಿಸಿದ್ದಾರೆ.

# ಪ್ರಯತ್ನ ಪಟ್ಟರೆ ಯಶಸ್ಸು ಸಾಧ್ಯ

## ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ಎಸ್. ತಂಗಡಗಿ ಅಭಿಮತ

**ಬೆಂಗಳೂರು:** ಸತತವಾಗಿ ಪ್ರಯತ್ನವನ್ನು ಮಾಡುತ್ತಿರಬೇಕು. ಸತತ ಪ್ರಯತ್ನ ಪಟ್ಟರೆ ಯಶಸ್ಸು ಸಾಧ್ಯ. ಇದಕ್ಕೆ ಭಗೀರಥರೇ ಸಾಕ್ಷಿ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ಎಸ್. ತಂಗಡಗಿ ಅವರು ತಿಳಿಸಿದರು.

ಇಂದು ನಯನ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಭಗೀರಥ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದ ಸಚಿವರು ಶಾಲಾ ಮಕ್ಕಳಿಗೆ ಭಗೀರಥ ಕಥೆಯ ಅವಶ್ಯಕತೆ ಇದೆ. ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳು ಅನುತ್ತೀರ್ಣರಾದರೆ ಮನೆ ಬಿಟ್ಟು ಹೋಗುವುದು, ಇನ್ನಿತರ ಅನಾಹುತವನ್ನು ಮಾಡಿಕೊಳ್ಳುತ್ತಾರೆ. ಇದರಿಂದ ಮನಸ್ಸಿಗೆ ನೋವುಂಟಾಗುತ್ತದೆ ಎಂದು ವಿಷಾದವನ್ನು ವ್ಯಕ್ತಪಡಿಸಿದ ಸಚಿವರು ಮಕ್ಕಳಿಗೆ ಭಗೀರಥ, ಮಹಾನ್ ಪುರುಷರ ಕಥೆಯನ್ನು ಪೋಷಕರು ಹೇಳಬೇಕು ಎಂದು ತಿಳಿಸಿದರು.

ಮಹಾತ್ಮರ ಜಯಂತಿಗಳನ್ನು ಸಮಾಜವು ಮಾಡಿದರೆ ಸಮಾಜಕ್ಕೆ ಮಾತ್ರ ಸೀಮಿತವಾಗುತ್ತದೆ. ಸರ್ಕಾರವು ಮಹಾಪುರುಷರ ಜಯಂತಿಯನ್ನು ಆಚರಿಸಿದರೆ ಎಲ್ಲಾ ಜನಾಂಗದವರಿಗೂ ಆಚರಿಸಬಹುದು ಎಂದು ಸರ್ಕಾರವೇ ಜಯಂತಿಗಳನ್ನು ಮಾಡುತ್ತಿದೆ ಎಂದರು.

ಪ್ರಸಕ್ತ ಸಾಲಿನಲ್ಲಿ ಉಪ್ಪಾರ ನಿಗಮಕ್ಕೆ 42 ಕೋಟಿ ಅನುದಾನ ನೀಡಲಾಗಿದೆ. 1600 ಕೋಟಿಗಳನ್ನು ನಿಗಮಗಳಿಗೆ ಒದಗಿಸಲಾಗಿದೆ.. ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಲ್ಲಿ ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಅಡಿಯಲ್ಲಿ



ಸಾಲ ಸೌಲಭ್ಯಗಳನ್ನು ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಬಸವಾದಿ ಶರಣರು, ಬುದ್ಧ, ಡಾ. ಬಾಬಾಸಾಹೇಬ್ ಅಂಬೇಡ್ಕರ್, ಸೇರಿದಂತೆ ಹಲವು ಮಹನೀಯರು ಯಾವುದೇ ಒಂದು ಧರ್ಮ ಮತ್ತು ಜಾತಿಗೆ ಸೀಮಿತವಾದವರಲ್ಲ. ಅವರು ಆಗಿನ ಕಾಲದಲ್ಲೇ ಸಮಸಮಾಜ ನಿರ್ಮಾಣದ ಚಿಂತನೆ ನಡೆಸಿದ್ದರು. ಅವರ ಆದರ್ಶವನ್ನು ನಾವು ಪಾಲಿಸಬೇಕು. ಸಮಾಜದಲ್ಲಿ ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಅಸಮಾನತೆ ಇರಬಾರದು. ಸಾಮಾಜಿಕ ನ್ಯಾಯ, ಸಮಾಜದ ಅಭಿವೃದ್ಧಿ, ಒಳಿತಿಗಾಗಿ ಮುಖ್ಯಮಂತ್ರಿಗಳು ಬದ್ದರಾಗಿದ್ದಾರೆ ಎಂದು ತಿಳಿಸಿದರು

ಹೊಸದುರ್ಗ ಭಗೀರಥ ಪೀಠದ ಪುರುಷೋತ್ತಮಾನಂದಪುರಿ ಸ್ವಾಮೀಜಿ ಮಾತನಾಡಿ ಮಹಾತ್ಮರು ಒಂದು ಸಮುದಾಯಕ್ಕೆ ಮಾತ್ರ ಸೀಮಿತವಲ್ಲ. ಅವರ ಸಾಧನೆ ಕೊಡುಗೆ ಲೋಕಕಲ್ಯಾಣಕ್ಕಾಗಿ. ಮಹಾತ್ಮರ ಆದರ್ಶ, ವಿಚಾರಗಳನ್ನು ಎಲ್ಲರೂ ಪರಿಪಾಲನೆ ಮಾಡಬೇಕೆಂಬ ಉದ್ದೇಶದಿಂದ ಮಹಾತ್ಮರ ಜಯಂತಿಯನ್ನು ಸರ್ಕಾರವು ಆಚರಿಸುತ್ತಿದೆ ಎಂದು ಹೇಳಿದರು.

ಭಗೀರಥ ಗುರುಪೀಠ 33 ಜಯಂತಿಗಳನ್ನು ಆಚರಿಸುತ್ತಿದೆ. ಆಯಾ ಸಮುದಾಯದ ಮುಖಂಡರು, ಗುರುಗಳನ್ನು ಕರೆಸಿ ಭಾವಚಿತ್ರಕ್ಕೆ ಗೌರವ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಭಗೀರಥರು ಇಕ್ವಾಷು ವಂಶದವರು. ಭಗೀರಥರು ಪಂಚಾಗ್ನಿ ತಪಸ್ಸು, ಒಂಟಿ ಕಾಲಿನಲ್ಲಿ ತಪಸ್ಸು, ನೀರಿನ ಒಳಗೆ ಕುಳಿತು ತಪಸ್ಸು ಮುಂತಾದ ತಪಸ್ಸನ್ನು ಆಚರಿಸಿ ತನ್ನ 60000 ಜನ ಪೂರ್ವಜರ ಮೋಕ್ಷಕ್ಕಾಗಿ ಭೂಮಿಗೆ ಗಂಗೆಯನ್ನು ಹರಿಸಿದರು ಎಂದು ತಿಳಿಸಿದರು.

ಉಪ್ಪಾರ ಸಮಾಜದವರು ದೇಶಕ್ಕೆ ಉಪ್ಪನ್ನು ಕೊಟ್ಟ ಸಮಾಜವಾಗಿದೆ. ತಾಯಿಗಿಂತ ಬಂಧುವಿಲ್ಲ ಉಪ್ಪಿಗಿಂತ ರುಚಿಯಿಲ್ಲ ಎಂಬ ಗಾದೆ ಇದೆ. ಭಗೀರಥ ಮಹರ್ಷಿಗಳ ಏಕ ಶಿಲಾ ಮೂರ್ತಿ ನಿರ್ಮಿಸಲು ಯೋಜನೆ ರೂಪಿಸಲಾಗಿದ್ದು ಇದರ ಕಾರ್ಯವು ಪ್ರಾರಂಭವಾಗಿದೆ ಎಂದು ತಿಳಿಸಿದರು.

ಹಚ್.ಕೆ.ಬಿ.ಕೆ ತಾಂತ್ರಿಕ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕ ಡಾ. ಸಂಗಮೇಶ ಎಸ್. ಗಣಿ ಭಗೀರಥ ಮಹರ್ಷಿಗಳ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಉಪ್ಪಾರ ಸಂಘದ ಪ್ರಧಾನ ಕಾರ್ಯದರ್ಶಿ ಯು. ವೆಂಕೋಬ, ಬೆಂಗಳೂರು ನಗರ ಜಿಲ್ಲೆಯ ಉಪ್ಪಾರ ಸಂಘದ ಅಧ್ಯಕ್ಷ ಎನ್. ಸುನೀಲ್ ಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರು ಕೆ.ಎಂ.ಗಾಯತ್ರಿ, ಜಯದೇವ ಹೃದ್ರೋಗ ಆಸ್ಪತ್ರೆ ನಿರ್ದೇಶಕ ಡಾ.ಕೆ.ಎನ್.ರವೀಂದ್ರನಾಥ್ ಸೇರಿದಂತೆ ಹಿರಿಯ ಗಣ್ಯರು ಉಪಸ್ಥಿತರಿದ್ದರು.



### ಬಸವ ಜಯಂತಿ

**ಬೆಂ.ಜಂಬುಸವಾರಿ ದಿಣ್ಣೆ ರಾಯಲ್ ಕೌಂಟಿ ಯಲ್ಲಿ ಅದ್ದೂರಿಯಾಗಿ ನಡೆದ ವಿಶ್ವಗುರು ಬಸವ ಜಯಂತಿ ಯನ್ನ ಆಚರಿಸಲಾಯಿತು ಮುಖ್ಯ ಅತಿಥಿಗಳಾಗಿ ನಟ, ನಿರ್ಮಾಪಕ, ಗಂಡಸಿ ಸದಾನಂದ ಸ್ವಾಮಿ, ಕಾರ್ಯಕ್ರಮದಲ್ಲಿ ಸೋಮಶೇಖರ್ ಕೆ.ಎನ್,ರವಿ, ಶಂಕ್ರಪ್ಪ, ಸಿದ್ದೇಶ್, ಶಿವಸ್ವಾಮಿ, ವಿರೂಪಾಕ್ಷ, ಮಹಾಂತೇಶ್ ಸೇರಿದಂತೆ ಅನೇಕ ಗಣ್ಯರು ಮತ್ತು ಮುಖಂಡರು ಭಾಗವಹಿಸಿದ್ದರು.**



**ಬೆಂ.ಪ್ರೈವೇಟ್ ಸ್ಕೂಲ್ ಅಂಡ್ ಚಿಲ್ಡ್ರನ್ ವೆಲ್ಫೇರ್ ಅಸೋಸಿಯೇಷನ್ ಕರ್ನಾಟಕದ ವತಿಯಿಂದ ಶಿಕ್ಷಕರಿಗೆ ಹೊಸ ಅವಕಾಶ ಕೌಶಲ್ಯಾ ತರಬೇತಿ ಕುರಿತಂತೆ ಪ್ರೆಸ್ ಕ್ಲಬ್ ನಲ್ಲಿ ಸುದ್ದಿ ಗೋಷ್ಠಿ ನಡೆಸಿ ಭಾರತ ಸರ್ಕಾರ ಅಭಿರುದ್ದಿ ಮತ್ತು ಉಧ್ಯಮಶೀಲತೆ ಸಚಿವಲಯದ ಅಡಿಯಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಕರ ತರಬೇತಿ ಬಗ್ಗೆ ಶಾಲಾ ಶಿಕ್ಷಕರು ಆನ್ ಲೈನ್ ನಲ್ಲಿ ನೋಂದಣಿ ಮಾಡಬಹುದು ಎಂದು ಪತ್ರಿಕಾ ಗೋಷ್ಠಿ ಯಲ್ಲಿ ಡಾ. ಆಷದ್ ಅಹ್ಮದ್, ಶಾಮಯಲ್, ಆಯಿಷಾ ಸೌದಗರ್,ಸಿ.ಎ ಶ್ರೀಕಾಂತ್,ಎಸ್, ಏನ್ ರೆಡ್ಡಿ,ಗಂಡಸಿ ಸದಾನಂದ ಸ್ವಾಮಿ, ಬಿಲಾಲ್, ಅಹ್ಮರ ಇಸ್ಲಾಂ, ಸವಿತ ಪಟೇಲ್, ಆಶಾ ಸುಲ್ತಾನ, ಜ್ಯೋತಿ ರಾವ್, ರಶ್ಮಿ ರಾಣಿ ಇದ್ದರು,**

## ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಪ್ರಮಾಣ ಗರಿಷ್ಠ 30 ಕ್ವಿಂಟಾಲ್ ಗೆ ಹೆಚ್ಚಳ

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿತ ರೈತರಿಂದ ರಾಗಿ ಖರೀದಿಸುವ ಪ್ರಮಾಣವನ್ನು ಹೆಚ್ಚಿಸಲಾಗಿದ್ದು, ಖರೀದಿ ಕೇಂದ್ರಗಳಿಗೆ ಇನ್ನೂ ನೀಡದ ರೈತರಿಂದ ಮಾತ್ರ ಪ್ರತಿ ಎಕರೆಗೆ 10 ಕ್ವಿಂಟಾಲ್ ನಂತೆ ಗರಿಷ್ಠ 30 ಕ್ವಿಂಟಾಲ್ ರಾಗಿಯನ್ನು ಖರೀದಿ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ಅವರು ತಿಳಿಸಿದ್ದಾರೆ.

ರಾಗಿ ಖರೀದಿ ಪ್ರಕ್ರಿಯೆಗೆ ಮಾರ್ಚ್ 01 ರಿಂದ ವಿಧ್ಯುಕ್ತವಾಗಿ ಚಾಲನೆ ನೀಡಲಾಗಿದ್ದು ಮಾರ್ಚ್ 03 ರಿಂದ ಜೂನ್ 30 ರವರೆಗೆ ರಾಗಿ ಖರೀದಿಯ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ.

ಜಿಲ್ಲೆಯ ಎಲ್ಲಾ ತಾಲ್ಲೂಕು ಖರೀದಿ ಕೇಂದ್ರಗಳಲ್ಲಿ ರಾಗಿ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದ್ದು, ನೋಂದಾಯಿತ ರೈತರು ಸಂಬಂಧಪಟ್ಟ ತಾಲ್ಲೂಕುಗಳ ಖರೀದಿ ಕೇಂದ್ರಗಳಿಗೆ ರಾಗಿಯನ್ನು ನಿಯಮಾನುಸಾರ ನೀಡಬಹುದಾಗಿರುತ್ತದೆ.

2024-25 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಮಾಡಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳಲ್ಲಿ ರಾಗಿ ಖರೀದಿ ಕೇಂದ್ರಗಳನ್ನು ತೆರೆದು, ರಾಗಿ ಬೆಳೆದಿರುವ ರೈತರಿಂದ ನಿಯಮಾನುಸಾರ ಅಗತ್ಯ ದಾಖಲೆಗಳನ್ನು ಪಡೆದು ನೋಂದಾಯಿಸಿಕೊಳ್ಳಲಾಗಿದೆ. ರಾಗಿ ಖರೀದಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ತಾಲ್ಲೂಕು ಖರೀದಿ ಅಧಿಕಾರಿಗಳು ದೇವನಹಳ್ಳಿ ತಾಲ್ಲೂಕಿನ ಎ.ಅಚ್ಯುತ (9900136687), ದೊಡ್ಡಬಳ್ಳಾಪುರ ತಾಲ್ಲೂಕಿನ ಎಚ್. ಎನ್. ನಾರಾಯಣ (9886141435), ನೆಲಮಂಗಲ ತಾಲ್ಲೂಕಿನ ವೈ.ಎಸ್.ನಾರಾಯಣ (9482991630), ಹೊಸಕೋಟೆ ತಾಲ್ಲೂಕಿನ ಶಿವಕುಮಾರ್ (9880361514) ಸಂಪರ್ಕಿಸಬಹುದಾಗಿದೆ.

# ಜನಗಣತಿಯೊಂದಿಗೆ ಜಾತಿಗಣತಿ ಸ್ವಾಗತಾರ್ಹ

**ವಿಜಯಪುರ:** 2026ರಲ್ಲಿ ಕೇಂದ್ರ ಸರ್ಕಾರ ಅಧಿಕೃತವಾಗಿ ಜನಗಣತಿಯ ಜೊತೆಗೆ ಜಾತಿಗಣತಿಯನ್ನು ಮಾಡಲು ನಿರ್ಧರಿಸಿರುವುದು ಸ್ವಾಗತಾರ್ಹ ಕ್ರಮವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಪ್ರಾಮಾಣಿಕ, ಸಾಮಾಜಿಕ ಬದ್ಧತೆಯ ನೇತೃತ್ವದ ಕೇಂದ್ರ ಸರ್ಕಾರ ಈ ಐತಿಹಾಸಿಕ ನಿರ್ಧಾರ ಕೈಗೊಂಡಿರುವುದು ಎಲ್ಲಾ ವರ್ಗದ ಜನತೆಯ ಮೆಚ್ಚುಗೆಗೆ ಕಾರಣವಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಬಿಜೆಪಿ ಒಬಿಸಿ ಮೋರ್ಚಾ ಅಧ್ಯಕ್ಷರಾದ ಕನಕರಾಜು ತಿಳಿಸಿದರು.

1931ರ ನಂತರ ಜಾತಿಗಣತಿ ನಡೆದಿರಲಿಲ್ಲ. ಜನಗಣತಿ ಮಾತ್ರ ನಡೆದಿತ್ತು. ಇದೀಗ ಸಾಮಾಜಿಕ ಅವಶ್ಯಕತೆಯ ನೈಜ ದತ್ತಾಂಶಗಳನ್ನು ಸಂಗ್ರಹಿಸಲು ಕೇಂದ್ರ ಸರ್ಕಾರ ಮುಂದಾಗಿದೆ. ಸತತವಾಗಿ ಐವತ್ತು ವರ್ಷಕ್ಕೂ ಮಿಗಿಲಾಗಿ ಕೇಂದ್ರದಲ್ಲಿ ಆಡಳಿತ ಮಾಡಿದ ಕಾಂಗ್ರೆಸ್ ಪಕ್ಷ ಈ ವಿಷಯದಲ್ಲಿ ನ್ಯಾಯ ಒದಗಿಸಲು ಯಾವ ಪ್ರಯತ್ನಗಳನ್ನು ಮಾಡಿರಲಿಲ್ಲ ಎಂದರು.

1951 ರಿಂದ ಪ್ರತಿ ಹತ್ತು ವರ್ಷಕ್ಕೊಮ್ಮೆ ಜನಗಣತಿ ನಡೆದಿದೆ. 1951, 1961, 1971, 1981, 1991 ಮತ್ತು 2011ರಲ್ಲಿ ಕೇಂದ್ರ ಸರ್ಕಾರ ಇದ್ದದ್ದು ಕಾಂಗ್ರೆಸ್ ನೇತೃತ್ವದಲ್ಲಿ. ಆರು ಸಲ ಅವಕಾಶ ಸಿಕ್ಕಾಗ ಏನು ಮಾಡದ ಕಾಂಗ್ರೆಸ್ ಪಕ್ಷ ಈಗ ಎರಡನೇಯ



ಅವಕಾಶದಲ್ಲಿಯೇ ಬಿಜೆಪಿ ಜಾತಿಗಣತಿಗೆ ಮುಂದಾಗಿರುವುದನ್ನು ಸಹಿಸುತ್ತಿಲ್ಲ ಎಂದರು. ಒಂದು ಕುಟುಂಬದ ನೇತೃತ್ವಕ್ಕೆ ಅಧಿಕಾರ ಬಿಟ್ಟುಕೊಟ್ಟಿದ್ದು ಕಾಂಗ್ರೆಸ್. ದೇಶ ಮೊದಲ ಬಾರಿಗೆ ಒಬಿಸಿ ಹಿನ್ನಲೆಯ ಪ್ರಧಾನಿಯ ಆಳ್ವಿಕೆ ಕಂಡಿದ್ದು ಬಿಜೆಪಿಯಿಂದ. ಎಲ್ಲ ಜನವರ್ಗಗಳ ಮೆಚ್ಚುಗೆಗೆ ಪಾತ್ರವಾಗಿರುವ ನರೇಂದ್ರ ಮೋದಿಯಂತಹವರ ನೇತೃತ್ವದಲ್ಲಿ ಮೂರನೇ ಬಾರಿಗೆ ದೇಶವನ್ನು ಮುನ್ನಡೆಸುತ್ತಿರುವುದನ್ನು ಕಾಂಗ್ರೆಸ್ ಪಕ್ಷಕ್ಕೆ ಸಹಿಸಲಾಗುತ್ತಿಲ್ಲ. ಹಾಗಾಗಿಯೇ ಜಾತಿಗಣತಿಯ ನೆಪದಲ್ಲಿ ಹಿಂದುಳಿದ ವರ್ಗಗಳನ್ನು ಎತ್ತಿಕಟ್ಟಿ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಕಾಂಗ್ರೆಸ್ ನಾಯಕರು ವಿಫಲ ಪ್ರಯತ್ನ ನಡೆಸಿದ್ದಾರೆ. ಪ್ರಧಾನಿ ಮೋದಿ ಅವರ ಜಾತಿಗಣತಿ ನಡೆಸುವ ನಿರ್ಧಾರ ಕಾಂಗ್ರೆಸ್ಸಿನ ಬುಡ ಅಲ್ಲಾಡಿಸಿದೆ ಎಂದರು. ಕರ್ನಾಟಕದಲ್ಲಿ ಸಿದ್ಧರಾಮಯ್ಯನವರ ಸರ್ಕಾರ ಜಾತಿಗಣತಿಯ ಹೆಸರಲ್ಲಿ ಹತ್ತು ವರ್ಷ ಕಾಲಹರಣ ಮಾಡಿದ್ದು ಮಾತ್ರವಲ್ಲ, ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ವರದಿ ಗೊಂದಲದ ಗೂಡಾಗಿದೆ. ಪ್ರವರ್ಗ 1ರಲ್ಲಿದ್ದ ಅತಿ ಹಿಂದುಳಿದ ಜಾತಿಗಳಿಗಿದ್ದ ಆರ್ಥಿಕ ಮಾನದಂಡವನ್ನು ಕಿತ್ತುಹಾಕಿ ಅನ್ಯಾಯ ಮಾಡಲಾಗಿದೆ. ನೂರಾರು ಸಣ್ಣ ಜಾತಿಗಳು ತಮ್ಮ ಸಂಖ್ಯೆಯ ಬಗ್ಗೆ ತಕರಾರು ಎತ್ತಿದ್ದಾರೆ. ಕಾಂಗ್ರೆಸ್‌ನ ಅನೇಕ ನಾಯಕರು ಬಹಿರಂಗವಾಗಿಯೇ ವಿರೋಧಿಸಿದ್ದಾರೆ. ಹಿಂದುಳಿದ ವರ್ಗಗಳ ನಾಯಕರಾದ ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಈ ವರದಿ ಹಳೆಯದಾಗಿದೆ. ಕಾಲಬಾಹಿರವಾದದ್ದು ಎಂದು ಟೀಕಿಸಿದ್ದಾರೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಜಾತಿಗಣತಿಯನ್ನು ತಮ್ಮ ಕುರ್ಚಿ ಉಳಿಸಿಕೊಳ್ಳಲು ರಾಜಕೀಯ ದಾಳವಾಗಿ ಬಳಸಿಕೊಳ್ಳುತ್ತಿದ್ದಾರೆ. ಅತಿಯಾದ ರಾಜಕೀಯದಿಂದಾಗಿ ಗೊಂದಲದ ಗೂಡಾಗಿರುವ ಕರ್ನಾಟಕದ ಜಾತಿಗಣತಿ ವರದಿಗೆ ಪರ್ಯಾಯವಾಗಿ ಕೇಂದ್ರ ಸರ್ಕಾರದ ಜಾತಿಗಣತಿ ವರದಿ ಬರಲಿದೆ. ಗೊಂದಲದ, ಅವೈಜ್ಞಾನಿಕ ವರದಿಗೆ ಪರ್ಯಾಯ ದಾರಿಯನ್ನು ತೋರಿಸಿರುವ ಪ್ರಧಾನಿ ನರೇಂದ್ರ ಮೋದಿರವರ ಕೇಂದ್ರ ಸರ್ಕಾರಕ್ಕೆ ಅಭಿನಂದನೆಗಳು. ಹಿಂದುಳಿದ ವರ್ಗಗಳ ಎಲ್ಲ ರೀತಿಯ ಸಾಮಾಜಿಕ ನ್ಯಾಯದ ಪ್ರಶ್ನೆಗಳಿಗೆ ಸಮರ್ಪಕ ಉತ್ತರ ಒದಗಿಸಲು ಬಿಜೆಪಿ ಬದ್ಧವಾಗಿದೆ ಎಂದರು.




### ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ

**ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಕಮಲಾನಗರ ಚಂದ್ರಪ್ಪ ವೃತ್ತದಲ್ಲಿ ಭೀಮ್ ಆರ್ಮಿ ವತಿಯಿಂದ ಆಯೋಜಿಸಿದ ಬಾಬಾ ಸಾಹೇಬ್ ಡಾ ,ಬಿ ಆರ್ ಅಂಬೇಡ್ಕರ್ ಅವರ 134 ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಬಿಬಿಎಂಪಿ ಮಾಜಿ ಸದಸ್ಯ ಶಿವರಾಜ್ ಬಿಜೆಪಿ ಮುಖಂಡ ಬಿ ಡಿ ಶ್ರೀನಿವಾಸ್ ಭೀಮ್ ಆರ್ಮಿ ಸದಸ್ಯರುಗಳಾದ ಪ್ರತಾಪ್, ಅನಿಲ್, ರವಿ ಕುಮಾರ್, ಮುತ್ತುರಾಜ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.**

## ಗುಣಮಟ್ಟವಲ್ಲದ ಔಷಧಿಗಳ ಬಳಕೆ ನಿಷೇಧ

**ಬೆಂಗಳೂರು:** ಕರ್ನಾಟಕ ಔಷಧ ಪರೀಕ್ಷಾ ಪ್ರಯೋಗಾಲಯದ ಸರ್ಕಾರಿ ವಿಶ್ಲೇಷಕರು, ಕೆಲವು ಔಷಧಿಗಳು/ ಕಾಂತಿವರ್ಧಕಗಳನ್ನು ಪರಿಶೀಲಿಸಿ ಉತ್ತಮ ಗುಣಮಟ್ಟವಲ್ಲ ಎಂದು ಘೋಷಿಸಿದ್ದಾರೆ. ಔಷಧ ತಯಾಕರಾದ ಮೆ.ಅಕೆಮ್ ಬಯೋಟೆಕ್, ಫ್ಲಾಟ್ ನಂ. 24, ಸಕೇಟರ್ -5, ಐ.ಐ.ಇ, ಸಿಡ್ಕ್ಯುಲ್, ಹರಿದ್ವಾರ (ಯು.ಕೆ) ಇವರ ಔಷಧಿ ನಿಮೆಸುಲೈಡ್ ಪ್ಯಾರಸೆಟಮೊಲ್ ಬೋಲಸ್ (ವೆಟ್) (ನಿ-ಯುಪಿ ಬೋಲಸ್), ಮೆ. ಸ್ವಾಸ್ ರೆಮಿಟಿಸ್, ವಿಲ್-ಬರ್ಸನ್, ಪಿ.ಓ-ಲೂದಿ ಮಜ್ರ, ತೇಸಿಲ್ -ಬಡ್ಡಿ ಡಿಸ್ಟ್. ಸೋಲನ್ (ಹೆಚ್.ಪಿ) -173205 ರ ಔಷಧಿ ವರ್ಮ್‌ಕಿಲ್ ಪ್ಲಸ್ (ಅಲ್‌ಬೆಂಡಜೋಲ್ ಅಂಡ್ ಐವರ್ಮೆಕ್ಟಿನ್ ಓರಲ್ ಸಸ್‌ಫೆನ್‌ಶನ್), ಮೆ.ವಿವೇಕ್ ಫಾರ್ಮಾಕೇಮ್ (ಇಂಡಿಯಾ) ಲಿಮಿಟೆಡ್, ಎನ್ಹೆಚ್-8, ಚಿಮನ್‌ಪುರ, ಅಮೇರ್, ಜಯ್‌ಪುರ್ -303102 ರ ಔಷಧಿ ಪ್ಯಾರಸೆಟಮೋಲ್ ಟ್ಯಾಬ್ಲೆಟ್ಸ್ ಐಪಿ 650 ಎಂಜಿ, ಮೆ. ಸರ್ಜ್ ಫಾಮಾಸ್ಯೂಟಿಕಲ್ಸ್ ಪ್ರೈ. ಲಿಮಿಟೆಡ್, ಪ್ಲಾಟ್ ನಂ.ಸಿ.-78 79,ಅಡಿಶಿನಲ್ ಎಂ.ಐ.ಡಿ.ಸಿ., ಜೆಜೂರಿ -412303, ತಾಲೂಕು, ಪುರಂದರ ಡಿಸ್ಟ್, ಪುಣೆ, ಮಹಾರಾಷ್ಟ್ರ, ಇಂಡಿಯಾ. ಇವರ ಔಷಧಿ ಗ್ಲಿಮಿಫೀರೈಡ್ 1 ಎಂಜಿ ಮೆಟ್‌ಫಾರ್‌ಮಿನ್ ಹೆಚ್‌ಸಿಎಲ್ 500 ಎಂಜಿ (ಸನ್‌ಟೈನಡ್ ರೀಲಿಸ್) ಟ್ಯಾಬ್ಲೆಟ್ಸ್ ಐಪಿ, ಮೆ.ಸ್ಪೂರ್ತಿ ಹರ್ಬಲ್ಸ್ ನಂ.299, ಎಸ್‌ಹೆಚ್1, ಕಲಕುಪಿ, ಎರ್‌ಪೋರ್ಟ್ ರೋಡ್, ಬೆಳಗಾಔಇ, ಕರ್ನಾಟಕ -591121 ರ ಔಷಧಿ ಸ್ಪೂರ್ತಿ ಅಲೋಗ್ರಾಮ್ ಪ್ಲೋರ್ ಸೋಪ್, ಮೆ. ಅಲೆಕ್ಸಾ ಫಾರ್ಮಾಸ್ಯೂಟಿಕಲ್ಸ್, ಫ್ಲಾಟ್ ನಂ.20, ಎಎಕ್ಸ್ಟ್ ಹೆಚ್‌ಪಿ ಎಸ್‌ಐಡಿಸಿ, ಇಂಡಸ್ಟ್ರೀಯಲ್ ಏರಿಯಾ, ಬಡ್ಡಿ ಡಿಸ್ಟ್ ಸೋಲನ್ (ಹೆಚ್.ಪಿ) ಅವರ ಔಷಧಿ ಅಕ್ರೆಮಾಕ್ಸ್ -500 (ಅಮೋಕ್ಸಿಲಿನ್ ಟ್ರೈಹೈಡ್ರೇಟ್ ಲ್ಯಾಕ್‌ಟಿಕ್ ಆಸಿಡ್ ಬ್ಯಾಸಿಸಲ್ ಕ್ಯಾಪ್ಸೂಲ್ಸ್), ಮೆ. ಗ್ನೋಸಿಸ್ ಫಾರ್ಮಾಸ್ಯೂಟಿಕಲ್ಸ್, ಪ್ರೈ. ಲಿಮಿಟೆಡ್, ನಾಹನ್ ರೋಡ್, ವಿಲೇಜ್ ಮೋಗಿನಂದ್, ಕಾಲಾ-ಅಂಬ್, ಡಿಸ್ಟ್, ಸಿರ್‌ಮೋರ್ (ಹೆಚ್.ಪಿ) -173030 ಇವರ ಔಷಧಿ ಕೆಟೋಕೋನಜೋಲ್ ಟ್ಯಾಬ್ಲೆಟ್ಸ್ ಐ,ಪಿ. 200 ಎಂಜಿ, ಮೆ.ಐಹೆಚ್‌ಎಲ್ ಲೈಫ್‌ಸೈನ್ಸ್ ಪ್ರೈ. ಲಿಮಿಟೆಡ್, ಅಟ್ ವಿಲೇಜ್ ಪಾನ್ವಾ, ತೇಸಿಲ್: ಕಾಸ್ರಾವಾಡ್, ಡಿಸ್ಟ್: ಕರ್ಗೋನ್ 451228 (ಎಂ.ಪಿ) ಇಂಡಿಯಾ ಇವರ ಔಷಧಿ ಕಂಪೌಂಡ್ ಸೋಡಿಯಂ ಲ್ಯಾಕ್ಟೆಟ್ ಇನ್‌ಜೆಕ್ಷನ್ ಐ.ಪಿ. (ರಿಂಗರ್ಸ್ ಲ್ಯಾಕ್ಟೆಟ್ ಸಲೂಷನ್ ಫಾರ್ ಇನ್‌ಜೆಕ್ಷನ್ ಐ.ಪಿ) (ಆರ್.ಎಲ್), ಮೆ.ಟ್ಯಾಲೆಂಟ್ ಹೆಲ್ತ್‌ಕೇರ್, 66-67, ಸ್ಕೇಟರ್-6ಎ, ಸಿಡ್ಕ್ಯುಲ್, ಐಐಇ, ಹರಿದ್ವಾರ -249403 (ಉತ್ತರಖಾಂಡ್) ಇವರ ಔಷಧಿ ಅಮಿಟ್ರಿಪ್ಟಿಲೈನ್ ಹೆಚ್ ಸಿಎಲ್ ಕ್ಲೋರ್ಡಿಯಾಜೆಪಾಕ್ಸೈ ಟ್ಯಾಬ್ಲೆಟ್ಸ್ ಯುಎಸ್‌ಪಿ(ಆಂಟೋಪಿಕ್ -ಪ್ಲಸ್), ಮೆ.ಐಶ್ವರ್ಯ ಲೈಫ್‌ಸೈನ್ಸ್ ಪ್ಲಾಟ್ ನಂ. ಇಂಡಸ್ಟ್ರಿಯಲ್ ಏರಿಯಾ, ವಿಪಿಓ-ಲೂದಿಮಜ್ರಾ, ಬಡ್ಡಿ, ಡಿಸ್ಟ್ -ಸೋಲನ್ (ಹೆಚ್.ಪಿ) -174101 ಇಂಡಿಯಾ ಇವರ ಔಷಧಿ ಸೋಡಿಯಂ ಕ್ಲೋರೈಡ್ ಇನ್‌ಜೆಕ್ಷನ್ ಐಪಿ (0.9% ಡಬ್ಲ್ಯೂ /ವಿ) ಎನ್‌ಎಸ್, ಮೆ.ಪ್ರೋಚೆಮ್ ಫಾರ್ಮಾಸ್ಯೂಟಿಕಲ್ಸ್ ಪ್ರೈ. ಲಿಮಿಟೆಡ್, 140-141, ಮಕ್ಕನ್ ಪುರ್. ಭಗ್ವಾನ್‌ಪುರ್, ರೋರ್ಕಿ, ಡಿಸ್ಟ್, ಹರಿದ್ವಾರ (ಯು. ಕೆ.)-247661 ಇವರ ಔಷಧಿ ಓಪ್ಲಾಕ್ಸಸಿನ್ ಓರ್ನಿಡಜೋಲ್ ಟ್ಯಾಬ್ಲೆಟ್ಸ್ ಐಪಿ (200ಎಂಜಿ+500ಎಂಜಿ) (ಪ್ರೋಕ್ಸೋ ಓಜ್), ಮೆ.ಭಾಗವತಿ ಮೇಡಿಕೇರ್ ಡಿವೈಸಸ್, 8, ಮಾರುತಿ ಇಂಡಸ್ಟ್ರಿಯಲ್ ಎಸ್ಟೇಟ್, ನಿಯರ್, ಸಿಂಧ್ವಾಯಿ ಮಾತಾ ಟೆಂಪಲ್, ಸಿ.ಟಿ.ಎಂ.-ರಾಮೋಲ್ ರೋಡ್, ಅಮೈವಾಡಿ, ಅಹಮದಾಬಾದ್-380026, ಗುಜರಾತ್ (ಇಂಡಿಯಾ) ಇವರ ಔಷಧಿ ಇನ್‌ಫ್ಯೂಷನ್ ಸೆಟ್- (ಬಿಎಂಡಿ) ಈ ಔಷಧಿಗಳನ್ನು /ಕಾಂತಿವರ್ಧಕಗಳನ್ನು ಗುಣಮಟ್ಟವಲ್ಲವೆಂದು ಘೋಷಿಸಿದ್ದಾರೆ. ಈ ಔಷಧಿಗಳನ್ನು / ಕಾಂತಿವರ್ಧಕಗಳನ್ನು ಔಷಧ ವ್ಯಾಪಾರಿಗಳು, ಸಗಟು ಔಷಧ ಮಾರಾಟಗಾರರು, ವೈದ್ಯರು, ಆಸ್ಪತ್ರೆ ಮತ್ತು ನರ್ಸಿಂಗ್ ಹೋಂನವರು ದಾಸ್ತಾನು ಮಾಡುವುದಗಲೀ, ಮಾರಾಟ ಮಾಡುವುದಾಗಲೀ ಅಥವಾ ಉಪಯೋಗಿಸುವುದಾಗಲೀ ಮಾಡಬಾರದು. ಯಾರಾದರೂ ಈ ಔಷಧಿಗಳ ದಾಸ್ತಾನು ಹೊಂದಿದ್ದಲ್ಲಿ ಕೂಡಲೇ ಸಂಬಂಧಪಟ್ಟ ಕ್ಷೇತ್ರದ ಔಷಧ ಪರಿವೀಕ್ಷಕರು ಅಥವಾ ಸಹಾಯಕ ಔಷಧ ನಿಯಂತ್ರಕರ ಗಮನಕ್ಕೆ ತರುವಂತೆ ಉಪ ಔಷಧನಿಯಂತ್ರಕರು ಮತ್ತು ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

## ಯಶಸ್ವಿನಿ.ಎನ್ ಅತ್ಯುನ್ನತ ಶ್ರೇಣಿ

**ಮೈಸೂರು:** ವಿದ್ಯಾರಣ್ಯಪುರಂನಲ್ಲಿರುವ ಸೆಂಟ್‌ಥಾಮಸ್ ಆಂಗ್ಲ ಮಾಧ್ಯಮ ಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಕುಮಾರಿ ಯಶಸ್ವಿನಿ.ಎನ್ ಅವರು ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ 625 ಕ್ಕೆ 579 ಅಂಕಗಳನ್ನು ಗಳಿಸಿ ಶೇ.92.64% ಪಡೆದುಅತ್ಯುನ್ನತ ಶ್ರೇಣಿಯಲ್ಲಿತೇರ್ಗಡೆ ಹೊಂದಿರುತ್ತಾರೆ.ಅಶೋಕಪುರಂ 12ನೇ ಕ್ರಾಸ್‌ನ ನಿವಾಸಿ ಯುವ ಮುಖಂಡರಾದಎಸ್.ಮಂಜುನಾಥ್ ಹಾಗೂ ವಿನುತಾ.ಸಿ ಅವರ ಪುತ್ರಿ.

## ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಅಧ್ಯಕ್ಷರ ಪ್ರವಾಸ

**ಬೆಂಗಳೂರು:** ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ ಅವರು ಮೇ 5 ರಂದು ಗದಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು,ಗದಗ ಜಿಲ್ಲಾ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಲಿರುವರು. ನಂತರ ದಾವಣಗೆರೆ ಜಿಲ್ಲೆಗೆ ಆಗಮಿಸಿ ದಾವಣಗೆರೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ನೂತನ ಕಚೇರಿಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಾತಿ ವ್ಯವಸ್ಥೆ ನಿಂತ ನೀರಿನಂತೆ : ಮುಖ್ಯಮಂತ್ರಿ ಸಿದ್ದರಾಮಯ್ಯ

# ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ

**ಬೆಂಗಳೂರು:** ಸಂವಿಧಾನ ರಕ್ಷಣೆ ಆದರೆ ನಮ್ಮ ಹಕ್ಕುಗಳೂ ರಕ್ಷಣೆಯಾಗುತ್ತವೆ. ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ. ಸಂವಿಧಾನಕ್ಕೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಯಲಹಂಕದಲ್ಲಿ14 ಅಡಿಗಳ ಬಾಬಾ ಸಾಹೇಬ್ ಅಂಬೇಡ್ಕರ್ ಕಂಚಿನ ಪ್ರತಿಮೆಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಅವರು, ನಮ್ಮ ದೇಶ, ನಮ್ಮ ಸಮಾಜಕ್ಕೆ ಅವಶ್ಯವಾಗಿದ್ದಂತಹ ಅತ್ಯುತ್ತಮ ಸಂವಿಧಾನವನ್ನು ನೀಡಿದವರು ಬಾಬಾ ಸಾಹೇಬ್ ಅಂಬೇಡ್ಕರ್. ಈ ದೇಶದ ಸಾಮಾಜಿಕ ಪರಿಸ್ಥಿತಿ, ಜಾತಿ ವ್ಯವಸ್ಥೆ ಅಂಬೇಡ್ಕರ್ ಅವರಿಗೆ ಅರ್ಥ ಆದ?ಟು ಬೇರೆಯವರಿಗೆ ಆಗಿರಲಿಲ್ಲವೆಂದರೆ ಅದು ಅತಿಶಯೋಕ್ತಿಯಲ್ಲ. ಜಾತಿ ವ್ಯವಸ್ಥೆ ಇದ್ದ?ಟು ಕಾಲ ಮೀಸಲಾತಿ ಇರಲೇಬೇಕು ಎಂಬುದನ್ನು ಅವರು ಬಲವಾಗಿ ನಂಬಿದ್ದರು ಎಂದರು.

ನಮ್ಮ ದೇಶದ ಜಾತಿ ವ್ಯವಸ್ಥೆಗೆ ಚಲನೆ ಇಲ್ಲ. ಆದರೆ ವರ್ಗಕ್ಕೆ ಚಲನೆಯಿದೆ. ನಮ್ಮ ಸಮಾಜದಲ್ಲಿ ಶ್ರೀಮಂತ ಬಡವನಾದರೂ, ಬಡವ ಶ್ರೀಮಂತನಾದರೂ ಕಡೆಯವರೆಗೂ ಉಳಿದು ಕೊಳ್ಳುವುದು ಹುಟ್ಟಿದ ಜಾತಿಯಲ್ಲಿ ಮಾತ್ರ. ಆದ್ದರಿಂದ ಈ ಜಾತಿ ವ್ಯವಸ್ಥೆ ನಿಂತ ನೀರಿನಂತೆ. ಇದನ್ನು ಮನಗಂಡಿದ್ದ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸ್ವಾತಂತ್ರ್ಯ ಯಶಸ್ಸನ್ನು ಕಾಣಬೇಕಾದರೆ ಈ ದೇಶದ ಅವಕಾಶ ವಂಚಿತರು, ಶೋಷಿತರು, ದೌರ್ಜನ್ಯಕ್ಕೆ ಒಳಗಾದವರಿಗೆಲ್ಲರಿಗೂ ಸಮಾನ ಅವಕಾಶಗಳು ದೊರೆತು ಅವರೆಲ್ಲರೂ ಸಾಮಾಜಿಕವಾಗಿ, ಆರ್ಥಿಕವಾಗಿ ಸಬಲರಾದಾಗ ಮಾತ್ರ ಸ್ವಾತಂತ್ರ್ಯಕ್ಕೆ ನಿಜವಾದ ಅರ್ಥ ಸಿಗುತ್ತದೆ ಎಂದು ಹೇಳಿದ್ದರು ಎಂದರು. ಸ್ವಾತಂತ್ರ್ಯಾ ನಂತರ ಒಬ್ಬ ವ್ಯಕ್ತಿ, ಒಂದು ಮತ ಜಾರಿಗೆ ಬಂದಿದೆ. ಇದು ಈ ದೇಶದ ರಾಷ್ಟ್ರಪತಿಗಳಿಗೂ ಒಂದೇ. ಒಬ್ಬ ಪೌರಕಾರ್ಮಿಕನಿಗೂ ಒಂದೇ. ಬಸವಣ್ಣನವರು ಹೇಳಿದ್ದು ಇದನ್ನೇ. ಅಂಬೇಡ್ಕರ್ ಅವರು ಕೂಡಾ ಬಸವಣ್ಣನವರ ವಚನಗಳನ್ನು ಓದಿದ್ದರು ಎಂಬುದು ಅವರ ಬರಹಗಳಿಂದ ತಿಳಿದು ಬರುತ್ತದೆ. ಸಮಾಜದಲ್ಲಿ ಯಾವ ಕೆಲಸವೂ ಮೇಲೂ ಅಲ್ಲ, ಕೀಳೂ ಅಲ್ಲ. ಎಲ್ಲವೂ ಸಮಾನ ಎಂದೇ ಪ್ರತಿಪಾದಿಸಿದರು ಎಂದರು. ನಮಗೆ ರಾಜಕೀಯ ಸ್ವಾತಂತ್ರ್ಯ ಸಿಕ್ಕಿದೆ ಆದರೆ ಸಾಮಾಜಿಕ ಆರ್ಥಿಕ ಸಿಕ್ಕಿಲ್ಲ. ಎಲ್ಲಿವರೆಗೂ ಇದು ಸಿಗುವುದಿಲ್ಲ ಅಲ್ಲಿಯವರೆಗೆ ಸಮಾಜದಲ್ಲಿ ಸಮಾನತೆ ಕಾಣಲು ಸಾಧ್ಯವಿಲ್ಲ. ನಮ್ಮ ಸರ್ಕಾರವು ಇದನ್ನೇ ನಂಬಿದ್ದು, ನಾವು ರೂಪಿಸುತ್ತಿರುವ ಕಾರ್ಯಕ್ರಮಗಳೂ ಇದೇ ಹಿನ್ನೆಲೆಯಿಂದ ಮೂಡಿಬಂದಿವೆ ಎಂದರು. ಜನರನ್ನು ಹಿಂದಕ್ಕೆ ಮಾತ್ರ ತಳ್ಳಬೇಡಿ. ಮುಂದಕ್ಕೆ ಎಳೆಯಲು ಪ್ರಯತ್ನ ಮಾಡಬೇಕು. ಮುಂದಕ್ಕೆ ಎಳೆಯಲು ಸಾಧ್ಯವಾಗದಿದ್ದರೆ ಅಲ್ಲೇ ಬಿಡಿ. ಆದರೆ ಹಿಂದಕ್ಕೆ ಮಾತ್ರ ತಳ್ಳಬೇಡಿ ಎಂದ ಮುಖ್ಯಮಂತ್ರಿಗಳು ಅಂಬೇಡ್ಕರ್ ಅವರು ತಾವು ಓದಿಕೊಂಡಿರುವುದು ಸ್ವಾರ್ಥಕ್ಕಾಗಿ ಅಲ್ಲ, ಅಸಮಾನತೆಯನ್ನು ಹೋಗಲಾಡಿಸಲು ಎಂದು ತಿಳಿಸಿದ್ದರು. ನಾವು ಸಾಧ್ಯವಾದಷ್ಟು ಮಟ್ಟಿಗೆ ಅವರ ತತ್ವಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ನಮ್ಮ ಸರ್ಕಾರ ಆರ್ಥಿಕವಾಗಿ, ಸಾಮಾಜಿಕವಾಗಿ ಜನರಲ್ಲಿ ಶಕ್ತಿ ತುಂಬಲು ಪಂಚ ಗ್ಯಾರಂಟಿಗಳನ್ನು ಜಾರಿ ಮಾಡಿದೆ. ಆರ್ಥಿಕವಾಗಿ ಶಕ್ತಿ ತುಂಬದಿದ್ದರೆ ಅಸಮಾನತೆ ಹೋಗಲಾಡಿಸಲು ಸಾಧ್ಯವಿಲ್ಲ. ಎಲ್ಲರನ್ನೂ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಬೇಕು. ಒಂದೇ ಬಾರಿಗೆ ಎಲ್ಲರನ್ನೂ ಮುಖ್ಯವಾಹಿನಿಗೆ ತರಲು ಸಾಧ್ಯವಾಗದಿದ್ದರೂ ಕ್ರಮೇಣವಾಗಿ ಮಾಡಲು ಪ್ರಯತ್ನ ಮಾಡಬೇಕು. ನಮ್ಮ ಹೋರಾಟ ನಿರಂತರವಾಗಿರಬೇಕು. ಅದಕ್ಕೆ ಬಾಬಾ ಸಾಹೇಬ್ ಅಂಬೇಡ್ಕರ್ ಶಿಕ್ಷಣ, ಸಂಘಟನೆ ಹಾಗೂ ಹೋರಾಟ ಎಂಬ ಮೂರು ಮಂತ್ರಗಳನ್ನು ಬಿಟ್ಟು ಹೋಗಿದ್ದಾರೆ. ಅಕ್ಷರ ಸಂಸ್ಕೃತಿಯಿಂದ ವಂಚಿತರಾದವರು ಶಿಕ್ಷಣವನ್ನು ಪಡೆದುಕೊಳ್ಳಲೇಬೇಕು. ಆಗ ಮಾತ್ರ ಸ್ವಾಭಿಮಾನ, ಜ್ಞಾನ ಬರಲು, ಸಂಘಟಿತರಾಗಲು ಸಾಧ್ಯವಾಗುತ್ತದೆ. ಅಂಬೇಡ್ಕರ್ ಅವರು ಅಂದಿನ ಕಾಲದಲ್ಲಿಯೇ ಎ?ೀ ಕ?ವಾದರೂ, ಮಾನಸಿಕ ತೊಂದರೆಯಾದರೂ ಶಿಕ್ಷಣವನ್ನು ಬಿಡಲಿಲ್ಲ. ಅಂಬೇಡ್ಕರ್ ಅವರೊಬ್ಬ ದೂರದೃಷ್ಟಿಯಿದ್ದ ನಾಯಕರು. ಅಂಥವರಿಗೆ ಮಾತ್ರ ನೂರು ವರ್ಷಗಳಲ್ಲಿ ಸಮಾಜದಲ್ಲಿ ಏನಾಗಬಹುದು ಎಂದು ಊಹಿಸಲು ಸಾಧ್ಯವಾಗುತ್ತದೆ ಎಂದರು.

ಎಸ್.ಆರ್.ವಿಶ್ವನಾಥ್ ಅವರು ಯಲಹಂಕದಲ್ಲಿ ಪಕ್ಷಾತೀತವಾಗಿ ಕೆಲಸ ಮಾಡುವುದಾಗಿ ಹೇಳಿರುವುದನ್ನು ಸ್ವಾಗತಿಸಿದ ಮುಖ್ಯಮಂತ್ರಿಗಳು, ಯಲಹಂಕದಲ್ಲಿ ದಲಿತರು ಹಿಂದುಳಿದವರೇ ಹೆಚ್ಚಿದ್ದು, ಎಲ್ಲರಿಗೂ ನ್ಯಾಯ ದೊರಕಿಸುವ ಕೆಲಸವನ್ನು ವಿಶ್ವನಾಥ್ ಮಾಡುತ್ತಿದ್ದಾರೆ. ವಿಶ್ವನಾಥ್ ಅವರ ಕ್ಷೇತ್ರಕ್ಕೆ ಅನುದಾನದ ಬೇಡಿಕೆಯನ್ನು ಪರಿಗಣಿಸಲಾಗುವುದು ಎಂದು ಮುಖ್ಯಮಂತ್ರಿಗಳು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.



### ಅಂಬೇಡ್ಕರ್ ಅವರ ವಿಚಾರಗಳು ಇನ್ನಷ್ಟು ಪಸರಿಸಲಿ

**ಸಮಗ್ರ ಸಾಮಾಜಿಕ ವ್ಯವಸ್ಥೆ ಬದಲಾಗಬೇಕು. ಅಂಬೇಡ್ಕರ್ ದಲಿತರಾಗಿ ಹುಟ್ಟಿದರೂ ಎಲ್ಲರ ನಾಯಕರಾಗಿದ್ದರು. ಸಾಮಾಜಿಕ ನ್ಯಾಯದಿಂದ ವಂಚಿತರಾದವರೆಲ್ಲರ ನಾಯಕರಾಗಿದ್ದರು. ಈ ದೇಶದಲ್ಲಿ ಅವರು ಹುಟ್ಟಿರವುದೇ ನಮಗೆ ಹೆಮ್ಮೆಯ ಸಂಗತಿ ಎಂದರು. ಅಂಬೇಡ್ಕರ್ ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ ಪ್ರತಿಮೆಗಳು ಸಂಕೇತಗಳಾದರೂ, ಇವುಗಳಿಂದ ಅಂಬೇಡ್ಕರ್ ಅವರ ವಿಚಾರಗಳು ಇನ್ನ?ಟ ಪಸರಿಸಲಿ ಎಂದರು.**

# ದೊಡ್ಡದ್ಯಾವರ ಜಾತ್ರಾ ಮಹೋತ್ಸವ

### ಶ್ರೀಬೀರೇಶ್ವರಸ್ವಾಮಿ ಶ್ರೀ ಸಿದ್ದೇಶ್ವರಸ್ವಾಮಿಗಳ ದೇವಸ್ಥಾನ

**ಕೋಲಾರ:** ಜಿಲ್ಲೆಯ ಮುಳಬಾಗಿಲು ತಾಲ್ಲೂಕು, ಉತ್ತನೂರು ಗ್ರಾಮದಲ್ಲಿ ಶತಮಾನಗಳಿಂದ ನೆಲೆಸಿರುವ ಶ್ರೀ ಬೀರೇಶ್ವರಸ್ವಾಮಿ ಶ್ರೀ ಸಿದ್ದೇಶ್ವರಸ್ವಾಮಿಗಳ ದೇವಸ್ಥಾನ ಅಸ್ಥಿತ್ವದಲ್ಲಿದ್ದು, ಈ ದೇವರುಗಳ ದೊಡ್ಡದ್ಯಾವರ ಜಾತ್ರಾ ಮಹೋತ್ಸವವನ್ನು 5ರವರೆಗೆ ಆಯೋಜಿಸಲಾಗಿದೆ .

ಇದು ಒಂದು ಐತಿಹಾಸಿಕ ,ಪಾರಂಪರಿಕ ಮತ್ತು ಧಾರ್ಮಿಕ ಕಾರ್ಯಕ್ರಮವಾಗಿದ್ದು ದಿನಾಂಕ 04/05/20225 ರಂದು11-30 ಪ್ರಮುಖ ಕಾರ್ಯಕ್ರಮಗಳಿದ್ದು, ಬೆಳಗ್ಗೆ 9 ಘಂಟೆಯಿಂದ 1.00 ಘಂಟೆ ವರೆಗೆ ಈ ಜಾತ್ರೆಯ ಆಕರ್ಷಣೆ ಕಾರ್ಯಕ್ರಮವಾದ ಭಕ್ತರ ತಲೆಯಮೇಲೆ ತೆಂಗಿನಕಾಯಿ ಪವಾಡ ಹಾಗೂ ವೇದಿಕೆ ಕಾರ್ಯಕ್ರಮ ನಡೆಯಿತು .

ಸಮಿತಿಯ ಅಧ್ಯಕ್ಷರಾದ ಸುರೇಶ್ ಮಾತನಾಡಿ ಐದು ವರ್ಷಗಳಿಗೆ ಒಮ್ಮೆ ನಡೆಯಬೇಕಾಗಿದ್ದ ದ್ಯಾವರ ಮಹೋತ್ಸವ ಕೋವಿಡ್ ಮತ್ತು ಇತರೆ ಕಾರಣಗಳಿಂದ ಸುಮಾರು ಹದಿಮೂರು ವರುಷದ ನಂತರ ನಡೆಯುತ್ತಿದ್ದು ಸುಮಾರು ಮುನ್ನೂರು ಕುಟುಂಬಗಳು ಕರ್ನಾಟಕ ಆಂಧ್ರ, ಮತ್ತು ತಮಿಳುನಾಡಿನಿಂದ ಬಂದಿದ್ದು ಹದಿನೈದು ದಿನಗಳಿಂದ ಪೂರ್ವತಯಾರಿ ನಡೆಸಿದ್ದು ಇಂದು ವಿಜೃಂಭಣೆಯಿಂದ ದ್ಯಾವರಗ್ಲಿಗೆ ಚಾಲನೆದೊರೆತಿದೆ

ಉತ್ತನೂರು ಗ್ರಾಮದಲ್ಲಿನಮ್ಮ ಸಮುದಾಯದ ಒಂದು ಮನೆಯೂ ಇಲ್ಲ ಆದರೂ ಊರಿನ ಹಿರಿಯರು ಉತ್ತನೂರು ಸ್ಷೀನಿವಾಸ್ , ಉತ್ತನೂರು ಪಂಚಸಾಯತಿ ,ವಿದ್ಯುತ್ ಇಲಾಖೆ ಮುಂತಾದವರು ಎಲ್ಲಾ ಸೌಕರ್ಯಗಳನ್ನು ಮಾಡಿದ್ದು ಅವರಿಗೆ ಧನ್ಯವಾದಗಳನ್ನು ತಿಳಿಸಿದರು.



ದ್ಯಾವರಗಳಿಗೆ ಬರುವ ಭಕ್ತಾಧಿಗಳಿಗೆ ವೆಂಕಟರಾಜನಹಳ್ಳಿ ಗ್ರಾಮಸ್ಥರು ,ಸಿದ್ದನಹಳ್ಳಿ ರಾಮಣ್ಣನವರ ಕುಟುಂಬಸ್ಥರು ಹೀಗೆ ಸುಮಾರು ಮುನ್ನೂರು ಗ್ರಾಮ ಮತ್ತು ಕುಟುಂಬಸ್ಥರು ಊಟದ ವ್ಯವಸ್ಥೆಯನ್ನು ಮಾಡಿದ್ದರು .

ಸಂಪ್ರದಾಯದಂತೆ ನಂದೀಶ್ವರರನ್ನು ಪೂಜಿಸಿ ವೀರಗಾಸೆ ಮತ್ತು ದೊಳ್ಳುಕುಣಿತದೊಂದಿಗೆ ದೇವರುಗಳ ಉತ್ಸವನಡೆಸಲಾಯಿತು .

ಈ ಕಾರ್ಯಕ್ರಮಕ್ಕೆ ಕುರುಬರಸಂಘದ ಜಿಲ್ಲಾ ಅಧ್ಯಕ್ಷರಾದ ತಂಬಿಹಳ್ಳಿ ಮುನಿಯಪ್ಪ ,ಉತ್ತನೂರು ಶ್ರೀನಿವಾಸ್,

ರಮೇಶ್ ,ಉತ್ತನೂರು ಪಂಚಾಯ್ತಿ ಉಪಾದ್ಯಕ್ಷರು ಚಂದ್ರಪ್ಪ , ಸಮಿತಿಯ ತಿಪ್ಪಯ್ಯ ,ಕಪ್ಪಯ್ಯ ,ಕಾರ್ಯದರ್ಶಿ ರಾಮಕೃಷ್ಣಪ್ಪ ,ಮಂಜುನಾಥ್ ,ನಾರಾಯಣಸ್ವಾಮಿ ,ವೆಂಕಟೇಶಪ್ಪ ,ಮುನಿವೆಂಕಟಪ್ಪ ಮತ್ತು ಸಮಿತಿಯ ಸದಸ್ಯರಿದ್ದರು.

# ರಾಜ್ಯ ಸರಕಾರವು ಒಳಮೀಸಲಾತಿ ಜಾರಿ ಸಂಬಂಧ ಕಾರ್ಯಪ್ರವೃತ್ತವಾಗಿದೆ

**ಚಿಕ್ಕಬಳ್ಳಾಪುರ :** ರಾಜ್ಯ ಸರಕಾರವು ಒಳಮೀಸಲಾತಿ ಜಾರಿ ಸಂಬಂಧ ಕಾರ್ಯಪ್ರವೃತ್ತವಾಗಿದೆ.ಈ ನಿಟ್ಟಿನಲ್ಲಿ ಮೇ 5ರಿಂದ 17ರವರೆಗೆ ನಡೆಯುವ ಪ.ಜಾತಿಗಳಲ್ಲಿ ಒಳಮೀಸಲಾತಿ ಕಲ್ಪಿಸುವ ಸಂಬಂಧದ ದತ್ತಾಂಶ ಸಂಗ್ರಹದ ವೇಳೆ ಮನೆಮನೆಗೆ ಬರುವ ಅಧಿಕಾರಿಗಳ ಬಳಿ ಜಾತಿ ಕಾಲಂ 61ರಲ್ಲಿ ಛಲವಾದಿ ಸಮುದಾಯ ತಪ್ಪದೆ ಹೊಲೆಯ ಎಂದು ನಮೂದು ಮಾಡಬೇಕೆ ಎಂದು ಕರ್ನಾಟಕ ಛಲವಾದಿ ಮಹಾಸಭಾದ ರಾಜ್ಯ ಸಂಘಟನಾ ಸಂಚಾಲಕ ಕೈವಾರ ಮಂಜುನಾಥ್ ಮನವಿ ಮಾಡಿದರು.

ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಶನಿವಾರ ನಡೆಸಿದ ಸುದ್ದಿಗೋಷ್ಟಿಯಲ್ಲಿ ಅವರು ಮಾತನಾಡಿದರು.ರಾಜ್ಯದ ಪರಿಶಿಷ್ಟಜಾತಿಗಳಲ್ಲಿ ಛಲವಾದಿ ಅಥವಾ ಹೊಲೆಯ ಸಮುದಾಯ ಬಹುಸಂಖ್ಯಾತರಾಗಿದ್ದರೂ ಪರಿಶಿಷ್ಟಜಾತಿ ಆದಿ ಕರ್ನಾಟಕ,ಆದಿ ದ್ರಾವಿಡ ಎಂದು ಬರೆಸಿರುವ ಕಾರಣ ಛಲವಾದಿ ಸಮುದಾಯದ ನಿಖರವಾದ ಮಾಹಿತಿ ಇಲ್ಲವಾಗಿದೆ. ಇದರಿಂದಾಗಿ ಮಾದಿಗ ಮತ್ತು ಹೊಲೆಯ ಸಮುದಾಯದ ನಡುವೆ ಜನಸಂಖ್ಯೆಯ ವಿಚಾರದಲ್ಲಿ ನಾವು ಹೆಚ್ಚು ನಾವು ಹೆಚ್ಚು ಎಂಬ ಅಪನಂಬಿಕೆ ಸೃಷ್ಟಿಯಾಗಿದೆ.ಇದು ತಪ್ಪಬೇಕಾದರೆ ಮೇ 5ರಿಂದ ನಡೆಯುವ ನಾಗಮೋಹನ್ದಾಸ್ ಸಮಿತಿಯ ದತ್ತಾಂಶ ಸಂಗ್ರಹದ ವೇಳೆ ಛಲವಾದಿ ಸಮುದಾಯ ತಪ್ಪದೆ ಜಾತಿ ಕಾಲಂನಲ್ಲಿ ಹೊಲೆಯ ಎಂದೇ ನಮೂದಿಸುವುದನ್ನು ಮರೆಯಬೇಡಿ ಎಂದು ಮನವಿ ಮಾಡಿದರು.ಛಲವಾದಿ ಸಮುದಾಯದ ಮುಖಂಡ ತ್ಯಾಗರಾಜ್ ಮಾತನಾಡಿ ಒಳಮೀಸಲಾತಿ ಸಂಬಂಧ ಜಸ್ಟೀಸ್ ಸದಾಶಿವ ಆಯೋಗ, ಕಾಂತರಾಜು ಆಯೋಗ ತಯಾರಿಸಿರುವ ವರದಿ ಸಂಪೂರ್ಣ ಅವೈಜ್ಞಾನಿಕವಾಗಿದೆ.ಇದನ್ನು ವಿರೋಧಿಸಿ ಸಾಕಷ್ಟು ಬಾರಿ ಛಲವಾದಿ ಸಮುದಾಯ ಪ್ರತಿಭಟನೆ ಮಾಡಿತ್ತು.ಇದರ ಭಾಗವಾಗಿ ಸರಕಾರ ಒಳಮೀಸಲಾತಿ ಜಾರಿ ಸಂಬಂಧ ನಾಗಮೋಹನ್ದಾಸ್ ಸಮಿತಿ ನೇಮಿಸಿತ್ತು.ಈ ಸಮಿತಿ ಒಳಮೀಸಲಾತಿ ಜಾರಿ ಸಂಬಂಧ ವೈಜ್ಞಾನಿಕವಾಗಿ ಮತ್ತೊಮ್ಮೆ ದತ್ತಾಂಶ ಸಂಗ್ರಹಕ್ಕೆ ಮುಂದಾಗಿರುವುದನ್ನು ಛಲವಾದಿ ಸಮುದಾಯ ಸ್ವಾಗತಿಸಲಿದೆ ಎಂದರು.ಮೇ 5ರಿಂದ 17ರವರೆಗೆ ನಡೆಯುವ ಜಾತಿಸಮೀಕ್ಷೆಯಲ್ಲಿ ನಮ್ಮ ಸಮುದಾಯದ ಪ್ರಜ್ಞಾವಂತರು,ಹೋರಾಟಗಾರರು,ಶಿಕ್ಷಿತರು ತಪ್ಪದೆ ಭಾಗವಹಿಸಿ ಜನರಲ್ಲಿ ಜಾಗೃತಿ ಮೂಡಿಸಿ ಜಾತಿ ಕಾಲಂನಲ್ಲಿ ತಪ್ಪದೆ ಹೊಲೆಯ ಎಂದು ನಮೂದಿಸಲು ನೆರವಾಗಬೇಕು. ಈಮುಖೇನ ಹೊಲೆಯ ಸಮುದಾಯದ ನಿಖರ ಮಾಹಿತಿ ತಿಳಿಯಲು ಸಹಾಯ ಮಾಡಬೇಕು ಎಂದು ಕೋರಿದರು. ಛಲವಾದಿಸಮುದಾಯದಸಿ.ವಿ.ಕೃಷ್ಣಪ್ಪ,ನಾರಾಯಣಸ್ವಾಮಿ,ಪಾಳ್ಯಕೆರೆ ವೆಂಕಟೇಶ್ ,ಕೆ.ಜಿ.ಶ್ರೀನಿವಾಸ್,ಸಿದ್ಧರಾಜು, ಜಿ.ಸಿ.ವೆಂಕಟೇಶ್ ,ಬಿ.ವಿ.ವೆಂಕಟೇಶ್,ವೆಂಕಟಕೃಷ್ಣ ಇದ್ದರು.



ವಿಜಯಪುರ ಶಾಂತಿನಗರದಲ್ಲಿರುವ ಮದೀನಾ ಕ್ಲಿನಿಕ್ ಸಮೀಪದಲ್ಲಿರುವ ಎಪಿಜೆ ಅಬ್ದುಲ್ ಕಲಾಂ ಇನ್ನೋವೇಶನ್ ಸೆಂಟರ್ ನಲ್ಲಿ ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ವಿಜಯಪುರ ಲೀಜನ್ ಆಶ್ರಯದಲ್ಲಿ ಕಾರ್ಮಿಕ ದಿನಾಚರಣೆಯಲ್ಲಿ ಕಾರ್ಮಿಕರಾದ ಬಾಬು ಕಲೀಮ್ ಮುಬಾರಕ್ ಆಲಿಯಸ್ ಪಿಳ್ಳು ರವರನ್ನು ಸನ್ಮಾನಿಸಿ ಗೌರವಿಸಲಾಯಿತು. ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ವಿಜಯಪುರ ಲೀಜನ್ ಅಧ್ಯಕ್ಷರಾದ ಅನಿಸ್ ಉರ್ ರೆಹಮನ್, ನಿಕಟಪೂರ್ವ ಅಧ್ಯಕ್ಷರಾದ ಕೆ ವೆಂಕಟೇಶ್, ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ವಿಜಯಪುರ ಲೀಜನ್ ಬುಸಿನೆಸ್ ಮ್ಯಾನೇಜ್ಮೆಂಟ್ ಅಧ್ಯಕ್ಷರಾದ ಜೆ.ಆರ್.ಮುನಿವೀರಣ್ಣ, ರಾಷ್ಟ್ರೀಯ ಸಂಯೋಜಕರಾದ ಜಯರಾಮ್, ವಿ ವೆಂಕಟೇಶ್, ರಾಷ್ಟ್ರೀಯ ಎನ್ ಡಿ (ಮ್ಯಾನೇಜ್ಮೆಂಟ್) ಡಾ. ಎಂ .ಶಿವಕುಮಾರ್, ಕಾರ್ಯದರ್ಶಿ ಎಸಿ ಆನಂದ್, ಯಲಿಯೂರು ತ್ಯಾಗರಾಜ್, ಸಹ ಕಾರ್ಯದರ್ಶಿ ಎಲ್ ವೆಂಕಟೇಶ್, ಸಂಘಟನಾ ಕಾರ್ಯದರ್ಶಿಯಾದ ಚಂದ್ರಪ್ಪ, ಬೇಕರಿ ಮಂಜುನಾಥ್, ಜಾವಿದ್, ವಿಜ್ಞಾನಿಗಳಾದ ಸಜ್ಜದ್, ಕರ್ನಾಟಕ ಪೊಲೀಸ್ ಇಲಾಖೆಯ ವಿಶ್ರಾಂತ ನೌಕರರಾದ ಗೋಪಾಲಪ್ಪ, ರಿಯಾಜ್ ಅಹಮದ್, ಬಾಬು, ಶಿವಕುಮಾರ್, ಮುಬಾರಕ್, ಶ್ರೀನಿವಾಸ್ ಉಪಸ್ಥಿತರಿದ್ದರು.



ವಿಜಯಪುರ ಗಾಂಧಿಚೌಕದಲ್ಲಿರುವ ಅ. ಶಿ. ವೈ. ನಗರ್ತ ಮಹಂತಿನ ಮಠ ಧರ್ಮಸಂಸ್ಥೆಯ ಆವರಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕದಳಿ ಮಹಿಳಾ ವೇದಿಕೆ ವತಿಯಿಂದ ಬಸವ ಜಯಂತಿ ಹಾಗೂ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಕೂಲಿ ಕಾರ್ಮಿಕರಾದ ಶ್ರೀ ಸುಬ್ಬರಾಯಪ್ಪ (ಮೋಟಪ್ಪ) - ತರಕಾರಿ ವ್ಯಾಪಾರಿಗಳಾದ ಶ್ರೀಮತಿ ರತ್ನಮ್ಮ ರವರಿಗೆ ಗೌರವ ಸಮರ್ಪಣೆ ಮಾಡಲಾಯಿತು. ಉದ್ಘಾಟನೆಯನ್ನು ಮಾಜಿ ಅಧ್ಯಕ್ಷರು ಹಾಲಿ ಸದಸ್ಯರು ಆದ ಎಂ.ಸತೀಶ್ ಕುಮಾರ್ ರವರು ನೆರವೇರಿಸಿದರು. ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರರು ರವರ ಬಗ್ಗೆ ಬೆಂಗಳೂರು ಅಲ್ಲಮ ಸಂಸ್ಥೆ ಸಂಸ್ಥಾಪಕಿ ವಿಶಾಲ ಆರಾಧ್ಯ ರವರು ಹಾಗೂ ಕಾರ್ಮಿಕರ ಮಹತ್ವದ ಬಗ್ಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಚಂದ್ರಶೇಖರ ಹಡಪದ್ ರವರು ಉಪನ್ಯಾಸ ನೀಡಿದರು. ಬಿ. ಸ್ವರ್ಣಗೌರಿ, ಚಿ. ಮಾ. ಸುಧಾಕರ್, ಡಿ. ಸಿ. ಚಿಕ್ಕಣ್ಣ, ವಿ. ವಿಶ್ವನಾಥ್ , ಆರ್. ಮುನಿರಾಜು, ಜೆ. ಆರ್. ಮುನಿವೀರಣ್ಣ, ಬೆ. ಕಾ. ಮೂರ್ತಿಶ್ವರಯ್ಯ ಹಾಗೂ ಕದಳಿ ಮಹಿಳಾ ವೇದಿಕೆ ಸದಸ್ಯರು ಉಪಸ್ಥಿತರಿದ್ದರು.

# ಗುರು- ಶಿಷ್ಯರ ಬಾಂಧವ್ಯ ಸದಾ ನೆನಪಿನಲ್ಲಿರಲಿ



**ಶಿರಾ :** ಗುರು ಕಲಿಸಿದ ವಿದ್ಯೆ ಕಲಿತು, ಜೊತೆಗೆ ಸಮಾಜದಲ್ಲಿ ಎಲ್ಲರನ್ನೂ ಗೌರವಿಸುವಂತಹ ಸಂಸ್ಕಾರ ಬೆಳಸಿಕೊಂಡ ಪ್ರತಿಯೊಬ್ಬ ವಿದ್ಯಾರ್ಥಿ ಕೂಡ ಎಷ್ಟೇ ದಶಕಗಳು ಕಳೆದರೂ ಗುರು- ಶಿಷ್ಯರ ಬಾಂಧವ್ಯ ಸದಾ ನೆನಪಿನಲ್ಲಿಟ್ಟುಕೊಳ್ಳುತ್ತಾರೆ. ಇಂತಹ ಹಳೆಯ ವಿದ್ಯಾರ್ಥಿಗಳು ಮುಂದಿನ ಯುವ ಪೀಳಿಗೆಗೆ ಆದರ್ಶವಾಗಬೇಕು ಎಂದು ನಿವೃತ್ತ ಮುಖ್ಯ ಶಿಕ್ಷಕ ಬಿ. ಎಲ್. ಅಶ್ವತ್ ನಾರಾಯಣ ಹೇಳಿದರು. ಶಿರಾ ತಾಲೂಕಿನ ಕರೇಜವನಹಳ್ಳಿ ಗ್ರಾಮದ ತೋಟದ ಮನೆಯಲ್ಲಿ ಕಠಾವೀರನಹಳ್ಳಿ ಶ್ರೀರಂಗನಾಥ ವಿದ್ಯಾಸಂಸ್ಥೆಯ 1984 – 85ನೇ ಸಾಲಿನ ಎಸ್ ಎಸ್ ಎಲ್ ಸಿ ಹಳೆಯ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾನುವಾರ ಆಯೋಜಿಸಿದ್ದ ಸ್ನೇಹಕೂಟ ಸಮಾರಂಭ ಉದ್ಘಾಟಿಸಿ ಮಾತನಾಡಿದರು 40 ವರ್ಷಗಳ ನಂತರ ನಾನು ಬೋಧನೆ ಮಾಡುತ್ತಿದ್ದ ಶಾಲೆಯಲ್ಲಿ ವಿದ್ಯೆ ಕಲಿತ ವಿದ್ಯಾರ್ಥಿಗಳು, ಇಂದು ಸ್ನೇಹ ಮಿಲನಗೊಂಡು ವೈಶಿಷ್ಟ್ಯ ಪೂರ್ಣ ಕ್ಷಣ ಒದಗಿಸಿರುವುದು ನಾನು ಕಲಿಸಿದ ವಿದ್ಯೆ ಸಾರ್ಥಕವಾಯಿತು ಎಂಬ ಮನೋಭಾವ ಮೂಡಿದೆ. ಇದೇ ರೀತಿ ತಮ್ಮ ಮಕ್ಕಳಿಗೆ, ಮೊಮ್ಮಕ್ಕಳಿಗೆ ಇಂತಹ ಸಂಸ್ಕಾರವನ್ನು ಕಲಿಸಿ ಪರಸ್ಪರ ಸ್ನೇಹ ಬಾಂಧವ್ಯವನ್ನು ಗಟ್ಟಿಗೊಳಿಸಿಕೊಳ್ಳುವಂತಹ ಹಾಗೂ ಸುಸಂಸ್ಕೃತ ಸಮಾಜ ನಿರ್ಮಾಣ ಮಾಡುವ ಸಂಕಲ್ಪ ಮಾಡಬೇಕು. ನಾನು ಕಲಿತ ಶಾಲೆಗೆ ನನ್ನದೊಂದು ಕೊಡುಗೆ ಎಂಬ ಭಾವನೆಯೊಂದಿಗೆ ಶಾಲೆಗಳಿಗೆ ಸಹಾಯಮಾಡುವಂತಹ ಹೃದಯ ವೈಶಾಲ್ಯತೆಯನ್ನು ಬೆಳೆಸಿಕೊಳ್ಳಬೇಕು ಎಂದರು. ನಿರುತ ಮುಖ್ಯ ಶಿಕ್ಷಕರಾದ ರಾಜಣ್ಣ, ಜಿ.ಕೆ. ರಂಗನಾಥ್, ಮುಖ್ಯ ಶಿಕ್ಷಕಿ ಕಲ್ಪನಾ, ಶಿಕ್ಷಕಿ ಮಂಜುಳಾ ಸೇರಿದಂತೆ ಕಠಾವೀರನಹಳ್ಳಿ ಶ್ರೀರಂಗನಾಥ ವಿದ್ಯಾಸಂಸ್ಥೆಯಲ್ಲಿ 1984 – 85 ನೇ ಸಾಲಿನಲ್ಲಿ ಎಸ್ ಎಸ್ ಎಲ್ ಸಿ ಯಲ್ಲಿ ವ್ಯಾಸಂಗ ಮಾಡಿದ ಎಲ್ಲಾ ಹಳೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಪಾಲನಹಳ್ಳಿ ಮಠದ ಶ್ರೀಸಿದ್ದರಾಜ ಸ್ವಾಮೀಜಿ ಕರೆ

# ಒಳಮೀಸಲಾತಿ ಜಾರಿಯಾದಲ್ಲಿ ಸೌಲಭ್ಯ

**ಚಿಕ್ಕಬಳ್ಳಾಪುರ:** ಮೇ.5ರಿಂದ ಜಾತಿ ಗಣತಿ ಆರಂಭವಾಗಲಿದ್ದು, ಈ ವೇಳೆ ಕಾಲಂ ನಂ 61ರಲ್ಲಿ ಮಾದಿಗ ಎಂದು ನಮೂದಿಸುವ ಮೂಲಕ ಸಮುದಾಯದ ಸಂಖ್ಯೆ ಮತ್ತು ಒಗ್ಗಟ್ಟನ್ನು ತೋರಿಸಬೇಕಿದೆ. ಇದರಿಂದ ಸಮುದಾಯಕ್ಕೆ ಸಿಗಬೇಕಾದ ಸೌಲಭ್ಯಗಳು ಸಿಗಲು ಸಹಕಾರಿಯಾಗಲಿದೆ ಎಂದು ಪಾಲನಹಳ್ಳಿ ಮಠದ ಶ್ರೀಸಿದ್ದರಾಜ ಸ್ವಾಮೀಜಿ ಕರೆ ನೀಡಿದರು.

ನಗರದ ಪತ್ರಕರ್ತರ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಮರ್ಪಕವಾಗಿ ದೊರೆಯುತ್ತಿಲ್ಲ. ಒಳಮೀಸಲಾತಿ ಜಾರಿಯಾದಲ್ಲಿ ಮಾತ್ರ ಸೌಲಭ್ಯ ಪರಿಪಕ್ವವಾಗಿ ಸಿಗಲು ಸಾಧ್ಯವಾಗಲಿದೆ. ಮೇ.5ರಂದು ನಡೆಯುವ ಜಾತಿ ಗಣತಿಯಲ್ಲಿ ಕಾಲಂ 61ರಲ್ಲಿ ಮಾದಿಗ ಎಂದು ಬರೆಸಬೇಕು. ಇದರಿಂದ ಸಮುದಾಯದ ಸರಿಯಾದ ಗಣತಿಯಿಂದ ದೊರೆಯುವ ಜೊತೆಗೆ ಸಮುದಾಯಕ್ಕೆ ಬಲ ದೊರೆಯಲಿದೆಯೆಂದು ನುಡಿದರು.

ಮಾದಿಗ ಸಮುದಾಯದಲ್ಲಿ ಅನಕ?ಷರಸ್ಥರು ಹೆಚ್ಚಿದ್ದಾರೆ. ಹೀಗಾಗಿ ಮಾದಿಗ ಎಂದು ಮಾತ್ರ ಬರೆಸಬೇಕು. ಹೀಗಾದಾಗ ಮಾತ್ರ ನ್ಯಾಯ ದೊರೆಯಲಿದೆ. ಮಾದಿಗ ಸಮುದಾಯ ಹೆಚ್ಚು ಜನಸಂಖ್ಯೆ ಹೊಂದಿದ್ದರೂ ಪ್ರಾತಿನಿಧ್ಯ ದೊರೆಯುತ್ತಿಲ್ಲ. ಕಾಲಂ ನಂಬರ್ 61ರಲ್ಲಿ ಮಾದಿಗ ಎಂದು ಬರೆಸಿ ಎಂದರು.

ಜಾತಿಗಣತಿಯಿಂದ ಶೈಕ್ಷಣಿಕ, ಸಾಮಾಜಿಕ, ರಾಜಕೀಯ ಮತ್ತು ಆರ್ಥಿಕವಾಗಿ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಮಾದಿಗ ಸಮುದಾಯ ಬಹುಸಂಖ್ಯಾತ ಸಮಾಜವಾಗಿದೆ. ಈ ಸಮುದಾಯಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ. ಸಮುದಾಯದ ಅಭಿವೃದ್ಧಿಗಾಗಿ ಜಾತಿಗಣತಿ ಸಹಕಾರಿಯಾಗಲಿದೆ. ಈವರೆಗೂ ಮಾದಿಗ ಸಮುದಾಯಕ್ಕೆ ಸಿಗಬೇಕಾದ ಸೌಲಭ್ಯಗಳು ಸಮರ್ಪಕವಾಗಿ ಸಿಗುತ್ತಿಲ್ಲ, ಸಮಾನತ್ವದ ಶಕ್ತಿ ಸಮುದಾಯಕ್ಕೆ ಬರಬೇಕು ಎಂದು ಹೋರಾಟಗಳು ನಡೆಯುತ್ತಿವೆ, ಈ ಹೋರಾಟಗಳಿಗೆ ಶಕ್ತಿ ಬರಬೇಕಾದರೆ ಜಾತಿ ಗಣತಿಯ ಕಾಲಂ 61ರಲ್ಲಿ ಎಲ್ಲರೂ ಮಾದಿಗ ಎಂದು ನಮೂದಿಸುವ ಮೂಲಕ ಸಮುದಾಯದ ಶಕ್ತಿ ತೋರಿಸುವಂತೆ ಹೇಳಿದರು.

ರಾಜ್ಯದಲ್ಲಿ ಮಾದಿಗ ಸಮುದಾಯ ಹಲವು ಹೆಸರುಗಳಲ್ಲಿ ವಿಭಜನೆಯಾಗಿದೆ. ಆದಿ ಕರ್ನಾಟಕ, ಅರುಂಧತಿ, ಆದಿದ್ರಾವಿಡ, ಆದಿಜಾಂಭವ ಸೇರಿ ಹಲವು ಹೆಸರುಗಳಿಂದ ಕರೆಯಲಾಗುತ್ತಿದೆ. ಇದರಿಂದ ಸಮುದಾಯದ ಸಮರ್ಪಕ ಸಂಖ್ಯೆ ಸಿಗದೆ ಸೌಲಭ್ಯ ವಂಚಿತರಾಗಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಆದರೆ ಜಾತಿ ಗಣತಿಯಲ್ಲಿ ಮಾದಿಗ ಎಂದು ಬರೆಸಿದರೆ ನಮ್ಮಲ್ಲಿರುವ ಬಹುಸಂಖ್ಯಾತ ಶಕ್ತಿ ಹೊರಹುಮ್ಮಲಿದೆ, ಒಗ್ಗಟ್ಟಿನ ಪ್ರದರ್ಶನವಾಗಲಿದೆ, ಎಲ್ಲ ರೀತಿಯ ಸೌಲಭ್ಯಗಳು ಸಿಗಲು ಕಾರಣವಾಗಲಿದೆ ಎಂದು ಹೇಳಿದರು.ಮಾಜಿ ಶಾಸಕಿ ಕೆ.ವಿ.ಅನಸೂಯಮ್ಮ, ಪತ್ರೇನಹಳ್ಳಿ ಕೃಷ್ಣ, ತಿರುಮಳಪ್ಪ, ವೆಂಕಟೇಶ್ ಇದ್ದರು.

ಸಂಜೆ ಮುಗಿಲು
ಸೋಮವಾರ
5.5.2025



# ಬೆಳೆಗೆ ನೀರು ಹಾಯಿಸಲು ಹೋದ ವೃದ್ಧ ರೈತನೊಬ್ಬ ಕಾಲು ಜಾರಿ ಬಾವಿಗೆ ಬಿದ್ದು ಸಾವು

**ಚಿಕ್ಕಬಳ್ಳಾಪುರ:** ಬೆಳೆಗೆ ನೀರು ಹಾಯಿಸಲು ಹೋದ ವೃದ್ಧ ರೈತನೊಬ್ಬ ಕಾಲು ಜಾರಿ ಬಾವಿಗೆ ಬಿದ್ದು, ನೀರಿನಲ್ಲಿ ಮುಳುಗಿ ಮೃತಪಟ್ಟಿರುವ ಘಟನೆ ನಗರ ಹೊರವಲಯದ ಅಗಲಗುರ್ಕಿ ಗ್ರಾಮದ ಬಳಿ ಶನಿವಾರ ಸಂಜೆ ನಡೆದಿದೆ. ಮೃತ ರೈತನನ್ನು ಮುನಿಕೃಷ್ಣಪ್ಪ (70) ಎಂದು ಗುರ್ತಿಸಲಾಗಿದೆ. ಮೃತ ರೈತ. ಮುನಿಕೃಷ್ಣಪ್ಪ ಪ್ರತಿನಿತ್ಯ ತ್ರೀ ಫೇಸ್ ವಿದ್ಯುತ್ ಬರುತ್ತಿದ್ದಂತೆ ತೋಟಕ್ಕೆ ತೆರಳಿ ಬೆಳೆಗೆ ನೀರು ಹಾಯಿಸುವುದು ಆತನ ಹವ್ಯಾಸ. ಶನಿವಾರ ಸಂಜೆಯೂ ಅದೇ ರೀತಿ ತೋಟಕ್ಕೆ ನೀರು ಹಾಯಿಸಲು ತ್ರಿಪೇಸ್ ವಿದ್ಯುತ್ ಬರುತ್ತಿದ್ದಂತೆ ತೆರಳಿದ್ದಾರೆ.ಅವರ ತೋಟದಲ್ಲಿ ಆಳವಾದ ಬಾವಿ ಇದ್ದು, ಈ ಬಾವಿಯಲ್ಲಿ40 ಅಡಿಗೂ ಹೆಚ್ಚು ನೀರು ತುಂಬಿದೆ. ಬಾವಿಯ ದಡದಲ್ಲಿಯೇ ನೀರಿನ ಪಂಪ್ ಚಾಲನೆ ಮಾಡುವ ಸ್ಟಾರ್ಟರ್ ಇದ್ದು, ಅದನ್ನು ಚಾಲನೆ ಮಾಡುವಾಗ ಆಕಸ್ಮಿಕವಾಗಿ ಕಾಲು ಜಾರಿ ಬಾವಿಗೆ ಬಿದ್ದು ಮೃತ ಪಟ್ಟಿದ್ದಾರೆ . ಸಂಜೆ ಆರು ಗಂಟೆಗೆ ತೋಟಕ್ಕೆ ಹೋದ ತಂದೆ ವಾಪಸ್ ಬಾರದ ಕಾರಣ ಮನೆಯಲ್ಲಿದ್ದ ಮಕ್ಕಳು ಗಾಬರಿಯಾಗಿ ತೋಟಕ್ಕೆ ಹೋಗಿ ನೋಡಿದ್ದಾರೆ. ಅಲ್ಲಿ ಕೂಗಿ ಕರೆದಿದ್ದಾರೆ. ಆದರೆ ಮುನಿಕೃಷ್ಣಪ್ಪನ ಸುಳಿವೇ ಇಲ್ಲ. ಕೊನೆಗೆ ಬಾವಿಯ ಬಳಿ ಬಂದು ನೋಡಿದಾಗಿ ಚಪ್ಪಲಿಗಳು ಇರುವುದನ್ನು ಕಂಡು ಅನುಮಾನಗೊಂಡು, ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರು ರಾತ್ರಿಯಾಗಿದ್ದ ಕಾರಣ ಕತ್ತಲಿನಲ್ಲಿ ಕಾರ್ಯಾಚರಣೆ ಮಾಡಲು ಸಾಧ್ಯವಾಗದೆ, ಬಾನುವಾರ ಬೆಳಗ್ಗೆ ಬಂದಿದ್ದಾರೆ. ತೋಟಕ್ಕೆ ಬಂದು ಪರಿಶೀಲನೆ ನಡೆಸಿದ ಪೊಲೀಸರಿಗೆ ಬಾವಿಯಲ್ಲಿ ಮುಳುಗಿ ಮುನಿಕೃಷ್ಣಪ್ಪ ಮೃತಪಟ್ಟಿರುವುದು ಬಹಿರಂಗವಾಗಿದೆ. ನಂತರ ಕಾರ್ಯಾಚರಣೆ ನಡೆಸಿ, ಮೃತದೇಹವನ್ನು ಮೇಲೆತ್ತಿದ್ದಾರೆ. ಆದರೆ ಮೋಟಾರು ಚಲಾಯಿಸಲು ಹೋದ ಮುನಿಕೃಷ್ಣಪ್ಪ ಅವರು ಚಪ್ಪಲಿಗಳನ್ನು ಯಾಕೆ ಬಿಟ್ಟು ಹೋದರು ಎಂಬ ಪ್ರಶ್ನೆ ಎದುರಾಗಿದೆ. ವಿದ್ಯುತ್ ವಿಚಾರದಲ್ಲಿ ರೈತರು ತುಂಬಾ ಜಾಗರೂಕರಾಗಿರುತ್ತಾರೆ. ಹಾಗಾಗಿ ಚಪ್ಪಲಿ ಇಲ್ಲದೆ ಯಾವುದೇ ವಿದ್ಯುತ್ ಕೆಲಸಕ್ಕೆ ಮುಂದಾಗಲ್ಲ. ಮುನಿಕೃಷ್ಣಪ್ಪ ಚಪ್ಪಲಿ ಬಿಟ್ಟು ಮೋಟಾರು ಚಲಾಯಿಸಲು ಯಾಕೆ ಹೋದರು ಎಂಬ ಪ್ರಶ್ನೆಗೆ ಉತ್ತರ ದೊರೆಯಬೇಕಿದೆ. ಇನ್ನು ಮೃತದೇವಹವನ್ನು ಮೇಲೆತ್ತಿರುವ ಪೊಲೀಸರು ಈ ಸಂಭಂದ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ. ಚಪ್ಪಲಿಗಳನ್ನು ಮೇಲೆ ಬಿಟ್ಟು ಹೇಗೆ ಕಾಲು ಜಾರಿ ಬಾವಿಗೆ ಬಿದ್ದರು ಎಂಬ ಬಗ್ಗೆ ಇದೀಗ ಪೊಲೀಸರು ಉತ್ತರ ಹುಡುಕಬೇಕಿದೆ.

# ಜಮೀನು ವಿಚಾರದಲ್ಲಿ ವ್ಯಕ್ತಿಯ ಭೀಕರ ಕೊಲೆ

**ಚಿಕ್ಕಬಳ್ಳಾಪುರ:** ಜಮೀನು ವಿವಾದ ಹಿನ್ನೆಲೆ ವ್ಯಕ್ತಿಯೊಬ್ಬರನ್ನು ಭೀಕರವಾಗಿ ಕೊಲೆ ಮಾಡಿರುವ ಘಟನೆ ತಾಲ್ಲೂಕಿನ ಪೋಶೆಟ್ಟಿಹಳ್ಳಿ ಗ್ರಾಮದಲ್ಲಿ ಭಾನುವಾರ ಬೆಳಗ್ಗೆ ನಡೆದಿದೆ.ಕೊಲೆಯಾದ ದುರ್ದೈವಿಯನ್ನು ಲಕ್ಷ್ಮೀನರಸಪ್ಪ(60) ಎಂದು, ಕೊಲೆ ಮಾಡಿದ ಆರೋಪಿಯನ್ನು ನಂದೀಶ್ (29) ಎಂದು ಗುರ್ತಿಸಲಾಗಿದೆ.ತಾಲ್ಲೂಕಿನ ಬಾಲಕುಂಟಹಳ್ಳಿ ಮೂಲದ ಮೃತ ಲಕ್ಷ್ಮೀನರಸಪ್ಪ ಕೆಇಬಿ ಗುತ್ತಿಗೆದಾರರಾಗಿ ಕೆಲಸ ಮಾಡಿಕೊಂಡಿದ್ದರು. ಭಾನುವಾರ ಬೆಳಗ್ಗೆ ಸುಮಾರು 11–40 ರ ಸುಮಾರಿನಲ್ಲಿ ಗಂಗಾಧರಯ್ಯನ ಪುತ್ರ, ನಂದೀಶ್ ಬಂದು ಮನೆಯಲ್ಲಿದ್ದ ಲಕ್ಷ್ಮೀನರಸಪ್ಪ ನನ್ನು ಅಲ್ಲಿಯೇ ಇದ್ದ ಕುಡುಗೋಲಿನಿಂದ ಕುತ್ತಿಗೆ ಮತ್ತು ದೇಹದ ಬಾಗಗಳಿಗೆ ಭೀಕರವಾಗಿ ಕೊಚ್ಚಿ ಕೊಲೆ ಮಾಡಿದ್ದಾನೆ.

ನಂದೀಶ್ ಮತ್ತು ಕೊಲೆಯಾದ ಲಕ್ಷ್ಮೀನರಸಪ್ಪನ ನಡುವೆ ಅದೇನು ಹಳೇ ದ್ವೇಷವಿದ್ದೋ ಇಲ್ಲವೇ ಆಸ್ತಿ ತಗಾದೆ ಇತ್ತೋ ಗೊತ್ತಿಲ್ಲ. ಇನ್ನು ಹೀಗೆ ಕೊಲೆ ಮಾಡಿದ ನಂದೀಶ ಎಲ್ಲಿಯೂ ಪರಾರಿಯಾಗಿಲ್ಲ. ಬದಲಿಗೆ ಪೋಶೆಟ್ಟಿಹಳ್ಳಿ ಗ್ರಾಮದ ಪಕ್ಕದಲ್ಲಿಯೇ ಇದ್ದ ಮರವೊಂದರ ನೆರಳಿನಲ್ಲಿ ಕುಳಿತು ಪೊಲೀಸರಿಗಾಗಿ ಕಾಯುತ್ತಿದ್ದನಂತೆ. ವಿಷಯ ತಿಳಿಯುತ್ತಿದ್ದಂತೆ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ದೌಡಾಯಿಸಿದ್ದು, ಕೊಲೆಯಾದ ಲಕ್ಷ್ಮೀನರಸಪ್ಪನ ಕುಟುಂಬಸ್ಥರೊಂದಿಗೆ ಕೊಲೆಗೆ ಕಾರಣಗಳನ್ನು ಕಲೆ ಹಾಕುವ ಪ್ರಯತ್ನ ಮಾಡಿದ್ದಾರೆ. ಆದರೆ ಮೃತನ ಮಗನಿಗಾಗಲೀ, ಆತನ ಪತ್ನಿಗಾಗಲೀ ಯಾಕೆ ಕೊಲೆ ನಡೆದಿದೆ ಎಂಬ ಸ್ಪಷ್ಟ ಮಾಹಿತಿ ನೀಡಿಲ್ಲ. ಆಸ್ತಿಗಾಗಿ ಕೊಲೆ ನಡೆದಿರಬಹುದು ಅಂತ ಲಕ್ಷ್ಮೀನರಸಪ್ಪನ ಪುತ್ರ ಹೇಳಿದ್ದಾನೆ.ಆದರೆ ಕೊಲೆ ಮಾಡೋದಕ್ಕೆ ಲಕ್ಷ್ಮೀನರಸಪ್ಪ ಮತ್ತು ನಂದೀಶನ ನಡುವೆ ವಿವಾದ ಏನಿತ್ತು, ಕೊಲೆಗಾರ ಮೃತನ ಕುಟುಂಬದ ಸಂಬಂಧಿಯೇ ಎಂಬಿತ್ಯಾದಿ ಪ್ರಶ್ನೆ ಕೇಳಿದರೆ ಅವರ ಕುಟುಂಬದವರು ಅಲ್ಲವೇ ಅಲ್ಲ ಅಂತಿದ್ದಾರೆ. ಹಾಗಾದರೆ ಅಲ್ಲಿ ಕೊಲೆ ನಡೆಯಲು ಕಾರಣವೇನು ಎಂಬ ಪ್ರಶ್ನೆಗೆ ಪೊಲೀಸರೇ ತನಿಖೆಯಿಂದ ಉತ್ತರ ಪಡೆಯಬೇಕಿದೆ. ಇನ್ನು ಈ ಸಂಬಂಧ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ವಿವಾದಿತ ಭೂಮಿ ಮಾರಾಟ ಮಾಡಿದ ಬಿಡಿಎ: ಮೂಲ ಭೂಮಾಲೀಕರ ಪರ ಕೋರ್ಟ್ ತೀರ್ಪು; ಅಡಕತ್ತರಿಯಲ್ಲಿ ಸಿಲುಕಿದ ನಿವಾಸಿಗಳು

**ಬೆಂಗಳೂರು:** ಬನಶಂಕರಿ 6ನೇ ಹಂತದ ಬಡಾವಣೆಯಲ್ಲಿ ಲೇಔಟ್ ನಲ್ಲಿರುವ ಹಲವು ನಿವೇಶನಗಳು ವ್ಯಾಜ್ಯದಲ್ಲಿವೆ. ಹೀಗಾಗಿ 300 ಕ್ಕೂ ಹೆಚ್ಚು ಸೈಟ್ ಗಳ ನಿವಾಸಿಗಳು, ತಮ್ಮ ಆಸ್ತಿಗಳಲ್ಲಿ ಮನೆಗಳನ್ನು ನಿರ್ಮಿಸುವುದನ್ನು ನಿಷೇಧಿಸಲಾಗಿದೆ.

22 ವರ್ಷಗಳ ಹಿಂದೆ ಬಿಡಿಎ ಈ ಬಡಾವಣೆ ನಿರ್ಮಾಣ ಮಾಡಿತು. 2002 ರಲ್ಲಿ ಹಂಚಿಕೆ ಮಾಡಲಾಗಿದೆ. ಒಂಬತ್ತು ವರ್ಷಗಳ ಹಿಂದೆ ಕೆಲವರು ಮನೆಗಳನ್ನು ನಿರ್ಮಿಸಿಕೊಂಡಿದ್ದಾರೆ. 2021 ಮತ್ತು 2024 ರ ನಡುವೆ ಹಾಗೂ ಇತ್ತೀಚಿನ ಬಿಡಿಎ ಹರಾಜಿನಿಂದ ಹಲವು ಮಂದಿ ಸೈಟ್ ಖರೀದಿಸಿದ್ದಾರೆ. ಈ ಪ್ರದೇಶವು ಸಂಪೂರ್ಣವಾಗಿ ಅಭಿವೃದ್ಧಿ ಹೊಂದಿದ್ದು, ನಿವಾಸಿ ಕ್ಷೇಮಾಭಿವೃದ್ಧಿ ಸಂಘವನ್ನು ಹೊಂದಿದೆ, ಆದರೆ ಈಗ ಭೂಮಿಯು ಮೂಲ ಭೂಮಾಲೀಕರಿಗೆ ಸೇರಿದೆ ಎಂದು ಘೋಷಿಸಲಾಗಿದೆ.

ಬಿಡಿಎ ತನ್ನ ಭೂಸ್ವಾಧೀನವನ್ನು ನ್ಯಾಯಾಲಯದಲ್ಲಿ ಸಮರ್ಥಿಸಿಕೊಳ್ಳಲು ವಿಫಲವಾಗಿದೆ . ಆದರೆ ವ್ಯಾಜ್ಯವಿರುವ ಸೈಟ್‌ಗಳನ್ನು ಹರಾಜು ಮಾಡುವುದನ್ನು ಮುಂದುವರೆಸಿದೆ ಎಂದು ನಿವಾಸಿಗಳು ಆರೋಪಿಸಿದ್ದಾರೆ, ಇದರಿಂದಾಗಿ ಅನೇಕ ಖರೀದಿದಾರರು ಅನಿಶ್ಚಿತರಾಗಿದ್ದಾರೆ ಮತ್ತು ಏಜೆನ್ಸಿಯ ಕಾರ್ಯನಿರ್ವಹಣೆಯ ಬಗ್ಗೆ ಗಂಭೀರ ಕಳವಳ ವ್ಯಕ್ತಪಡಿಸಿದ್ದಾರೆ. ಹಲವಾರು ನಿವಾಸಿಗಳಿಗೆ ತಮ್ಮ ಪ್ಲಾಟ್‌ಗಳು ಕಾನೂನು ವಿವಾದದಲ್ಲಿವೆ ಎಂದು ತಿಳಿದಿರಲಿಲ್ಲ, ಈಗ ತುರ್ತು ಕ್ರಮಕ್ಕೆ ಒತ್ತಾಯಿಸುತ್ತಿದ್ದಾರೆ.

ಭೂಮಾಲೀಕರಿಗೆ ರಾಜಕೀಯ ಬೆಂಬಲ ಇರುವುದರಿಂದ ನಾವು ಈ ವಿಷಯವನ್ನು ಅನಾಮಧೇಯವಾಗಿ ಎತ್ತುತ್ತಿದ್ದೇವೆ. ಆದರೆ ನಮ್ಮಲ್ಲಿ ನೂರಾರು ಜನರು ಇದರಿಂದ ಸಮಸ್ಯೆಯಲ್ಲಿ ಸಿಲುಕಿಕೊಂಡಿದ್ದೇವೆ. ಇದು ಸಾರ್ವಜನಿಕ ವೈಫಲ್ಯ. ಇದರ ನಂತರ ನಾವು ಬಿಡಿಎಯನ್ನು ಏಕೆ ನಂಬಬೇಕು? ಎಂದು ಅವರು ಹೇಳಿದರು.

ತಮ್ಮ ಕುಟುಂಬವು 2021 ರಲ್ಲಿ ಬಿಡಿಎ ಹರಾಜಿನ ಮೂಲಕ ಸೈಟ್ ಅನ್ನು ಖರೀದಿಸಿದೆ, 2022 ರಲ್ಲಿ ಅದನ್ನು ನೋಂದಾಯಿಸಿದೆ ಮತ್ತು ಫೆಬ್ರವರಿ 2025 ರಲ್ಲಿ ನಿರ್ಮಾಣ ಪ್ರಾರಂಭಿಸಿದೆ ಎಂದು 3 ನೇ ??ಬ್ಲಾಕ್‌ನ ಆಸ್ತಿ ಮಾಲೀಕರೊಬ್ಬರು ಹೇಳಿದರು.

ಈ ವರ್ಷದ ಜನವರಿಯಲ್ಲಿ ಹೈಕೋರ್ಟ್ ನೀಡಿರುವ ಆದೇಶವು ಬಿಡಿಎ ಸ್ವಾಧೀನವನ್ನು ರದ್ದುಗೊಳಿಸಿದೆ ಎಂದು ಸ್ಥಳೀಯ ಭೂಮಾಲೀಕರು ನಮಗೆ ತಿಳಿಸಿದರು, ಆದರೆ ನಾವು ಈಗಾಗಲೇ ಅಡಿಪಾಯ ಹಾಕಿದ್ದೇವೆ ಎಂದು ನಿವಾಸಿಯೊಬ್ಬರು ಅಳಲು ತೋಡಿಕೊಂಡಿದ್ದಾರೆ.

ಬನಶಂಕರಿ 6 ನೇ ಹಂತದ 2 ನೇ ಬ್ಲಾಕ್, 3 ನೇ ಬ್ಲಾಕ್ ಮತ್ತು 4 ಹೆಚ್ ಬ್ಲಾಕ್‌ನಲ್ಲಿರುವ 16 ಎಕರೆಗಳಿಗಿಂತ ಹೆಚ್ಚಿನ ಭೂಮಿಯನ್ನು ಮೂಲ ಭೂಮಾಲೀಕರು ಸಲ್ಲಿಸಿದ ಅರ್ಜಿಗಳ ನಂತರ ನ್ಯಾಯಾಲಯದ ಡಿನೋಟಿಫೈ ಮಾಡಿದೆ. ಬಿಡಿಎ ಲೇಔಟ್ ಅಭಿವೃದ್ಧಿಪಡಿಸಲು ವಿಫಲವಾಗಿದೆ ಮತ್ತು ಅವರು ಕೃಷಿ ಉದ್ದೇಶಗಳಿಗಾಗಿ ಭೂಮಿಯನ್ನು ಬಳಸುವುದನ್ನು ಮುಂದುವರೆಸಿದ್ದಾರೆ ಎಂದು ಅವರು ದೂರಿದ್ದಾರೆ.

ನ್ಯಾಯಾಲಯವು ಅವರ ಪರವಾಗಿ ತೀರ್ಪು ನೀಡಿತು, ಇದು 250 ರಿಂದ 300 ಕ್ಕೂ ಹೆಚ್ಚು ಸೈಟ್ ಮಾಲೀಕರ ಮೇಲೆ ಪರಿಣಾಮ ಬೀರಿದೆ. ನಮ್ಮಲ್ಲಿ ಅನೇಕರು ಈಗ ಅಸಹಾಯಕರಾಗಿದ್ದಾರೆ. ನಾವು ನಮ್ಮ ಮನೆಗಳನ್ನು ಕಟ್ಟಲು ಸಾಧ್ಯವಾಗುತ್ತಿಲ್ಲಲ್ಲ, ಮತ್ತು ನಾವು ಮಾರಾಟ ಮಾಡಲು ಸಹ ಸಾಧ್ಯವಿಲ್ಲ ಎಂದು ಮತ್ತೊಬ್ಬ ನಿವಾಸಿ ಹೇಳಿದರು. ಜನವರಿ 27 ರಿಂದ ಏಪ್ರಿಲ್ ವರೆಗೆ ಯಾವುದೇ ಪ್ರತಿಕ್ರಿಯೆ ಅಥವಾ ಕ್ರಮ ಬಂದಿಲ್ಲ.

## ಹೋಮ್ ಸೈನ್ಸ್ ಕಾಲೇಜಿನ, ನಲ್ಲಿ– ಸಿಲಿಂಡರ್ ಕದ್ದೊಯ್ದ ಖದೀಮರು

# ಆರು ತಿಂಗಳಲ್ಲಿ 2ನೇ ಘಟನೆ!

**ಬೆಂಗಳೂರು:** ರಾತ್ರಿ ವೇಳೆ ಭದ್ರತಾ ಸಿಬ್ಬಂದಿಯ ನಿದ್ದೆಯ ಲಾಭ ಪಡೆದ ಅಪರಿಚಿತ ದುಷ್ಕರ್ಮಿಗಳು ಫ್ರೀಡಂ ಪಾರ್ಕ್ ಪಕ್ಕದ ಪ್ಯಾಲೇಸ್ ರಸ್ತೆಯಲ್ಲಿರುವ ಹೋಮ್ ಸೈನ್ಸ್ ಕಾಲೇಜಿನ ಆವರಣಕ್ಕೆ ನುಗ್ಗಿ, ನಲ್ಲಿಗಳು ಮತ್ತು ಎರಡು ಸಿಲಿಂಡರ್‌ಗಳಂತಹ ವಸ್ತುಗಳನ್ನು ಕದ್ದು ಪರಾರಿಯಾಗಿದ್ದಾರೆ.

ಈ ಸಂಬಂಧ ಕಾಲೇಜಿನ ಪ್ರಾಂಶುಪಾಲರು ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಪೊಲೀಸ್ ದೂರು ದಾಖಲಿಸಿದ್ದಾರೆ. ಕಳೆದ ಆರು ತಿಂಗಳಲ್ಲಿ ಕ್ಯಾಂಪಸ್‌ನಲ್ಲಿ ವರದಿಯಾದ ಎರಡನೇ ಕಳ್ಳತನ ಇದಾಗಿದೆ. ಕ್ಯಾಂಪಸ್‌ಗೆ ಸುಮಾರು 15 ಸಿಸಿಟಿವಿ ಕ್ಯಾಮೆರಾಗಳ ಅಗತ್ಯವಿದೆ ಮತ್ತು ಪ್ರಸ್ತಾವನೆ ಇನ್ನೂ ಜಾರಿಗೆ ಬಂದಿಲ್ಲ.

ಮಾತನಾಡಿದ ಹೋಮ್ ಸೈನ್ಸ್ ಕಾಲೇಜಿನ ಪ್ರಾಂಶುಪಾಲರಾದ ಡಾ. ವಜೀಹಾ ಸುಲ್ತಾನ ಮುಂಭಾಗದ ಗೇಟ್‌ನಿಂದ ಅಥವಾ ಫ್ರೀಡಂ ಪಾರ್ಕ್‌ನ ಪಕ್ಕದಲ್ಲಿರುವ ಕಾಂಪೌಂಡ್ ಗೋಡೆಯಿಂದ ಅಥವಾ ಯಾರಾದರೂ ಕ್ಯಾಂಪಸ್ ಒಳಗೆ ಸುಲಭವಾಗಿ ಪ್ರವೇಶಿಸಬಹುದು ಎಂದು ಹೇಳಿದ್ದಾರೆ. ಈ ಘಟನೆ ಏಪ್ರಿಲ್ 27 ರಂದು ರಾತ್ರಿ ನಡೆದಿದೆ.

ಹಗಲು ಭದ್ರತಾ ಸಿಬ್ಬಂದಿ ತಿಪ್ಪೇಸ್ವಾಮಿ ಕೆಲಸಕ್ಕೆ ಬಂದು ರಾತ್ರಿ ಬೀಟ್ ಗಾರ್ಡ್ ಎಬ್ಬಿಸಿದಾಗ ಘಟನೆ ಬೆಳಕಿಗೆ ಬಂದಿದೆ. ಕಳ್ಳರು ಕೇವಲ ನಲ್ಲಿಗಳು ಮತ್ತು ಎರಡು ಸಿಲಿಂಡರ್‌ಗಳನ್ನು ಕದ್ದಿರುವುದು ಆಶ್ಚರ್ಯಕ್ಕೆ ಕಾರಣವಾಗಿದೆ. ಬೆಲೆಬಾಳುವ ಪ್ರಿಂಟರ್‌ಗಳು, ಕಂಪ್ಯೂಟರ್‌ಗಳು ಮತ್ತು ಇತರ ಬೆಲೆಬಾಳುವ ವಸ್ತುಗಳು ಇದ್ದವು, ಆದರೆ ಅವುಗಳನ್ನು ಕಳ್ಳರು ಮುಟ್ಟಿಲ್ಲ.

ಕಳೆದ ಡಿಸೆಂಬರ್‌ನಲ್ಲಿ ಇದೇ ರೀತಿಯ ಕಳ್ಳತನ ನಡೆದಿದ್ದು, ಆ ಸಮಯದಲ್ಲಿ ಆರೋಪಿಗಳು ರಸಾಯನಶಾಸ್ತ್ರ ಪ್ರಯೋಗಾಲಯ ಮತ್ತು ಆಹಾರ ಮತ್ತು ಪೌಷ್ಟಿಕಾಂಶ ಪ್ರಯೋಗಾಲಯದಿಂದ ನೀರಿನ ಟ್ಯಾಪ್‌ಗಳನ್ನು ಮಾತ್ರ ಕದ್ದಿದ್ದರು. ಉಕ್ಕಿನ ಟ್ಯಾಪ್‌ಗಳನ್ನು ಪ್ಲಾಸ್ಟಿಕ್ ಟ್ಯಾಪ್‌ಗಳಿಂದ ಬದಲಾಯಿಸಲಾಗಿತ್ತು. ಈಗ ಈ ಟ್ಯಾಪ್‌ಗಳನ್ನು ಸಹ ಕದ್ದಿದ್ದಾರೆ. ಕಳ್ಳತನದ ನಂತರ ಡಿಸೆಂಬರ್ ಮೊದಲ ವಾರದಲ್ಲಿ, ಪೊಲೀಸರಿಗೆ ದೂರು ನೀಡಲಾಗಿದೆ. ಪ್ರಸ್ತಾವನೆಯಲ್ಲಿರುವ ಸಿಸಿಟಿವಿಗಳಿಗಾಗಿ ವಿನಂತಿ ಮಾಡಲಾಗಿದೆ ಎಂದು ಪ್ರಾಂಶುಪಾಲರು ತಿಳಿಸಿದ್ದಾರೆ.

ಆರೋಪಿಗಳು ಬೋರ್ಡ್ ರೂಮ್ ಬೀಗಗಳನ್ನು ಕತ್ತರಿಸಿ ಕಾಲೇಜಿಗೆ ಪ್ರವೇಶಿಸಿದ್ದಾರೆ. ನಂತರ ಅವರು ಕಾಲೇಜು ಆವರಣದೊಳಗೆ ಸುತ್ತಾಡಿ ದೋಚಿದ್ದಾರೆ. ರಸಾಯನಶಾಸ್ತ್ರ ಪ್ರಯೋಗಾಲಯದ 15 ಮತ್ತು 16 ಕೊಠಡಿಗಳಿಂದ ಟ್ಯಾಪ್‌ಗಳನ್ನು ಕಳವು ಮಾಡಲಾಗಿದೆ.

ರಾತ್ರಿ ಕರ್ತವ್ಯದಲ್ಲಿದ್ದ ಸೆಕ್ಯೂರಿಟಿ ಗಾರ್ಡ್ ಮನೋಜ್‌ನನ್ನು ವಿಚಾರಣೆ ನಡೆಸಲಾಗುತ್ತಿದೆ. ಚಿಂದಿ ಆಯುವವರ ಕೈವಾಡದ ಬಗ್ಗೆ ಶಂಕೆ ವ್ಯಕ್ತವಾಗಿದೆ. ಒಮ್ಮೆ ಚಿಂದಿ ಆಯುವವರ ತಂಡ ಮುಖ ಮುಚ್ಚಿಕೊಂಡು ಕ್ಯಾಂಪಸ್‌ಗೆ ಪ್ರವೇಶಿಸಿತ್ತು ಮತ್ತು ಕಾವಲುಗಾರರನ್ನು ನೋಡಿ ಪರಾರಿಯಾಗಿದ್ದರು ಎಂದು ಹೇಳಲಾಗಿದೆ.

ಹಿಂದಿನ ಕಳ್ಳತನ ಪ್ರಕರಣದ ತನಿಖೆ ನಡೆಸಲಾಗುತ್ತಿದೆ. ಆರೋಪಿಗಳು ಬಾಗಿಲಿನ ಬೀಗಗಳನ್ನು ಕತ್ತರಿಸಲು ಆಕ್ಸಲ್ ಬ್ಲೇಡ್ ಬಳಸಿದ್ದಾರೆ. ಅದೇ ಬ್ಲೇಡ್‌ಗಳನ್ನು ಬಳಸಿ, ಪೈಪ್‌ಗಳಿಂದ ಐದು ನೀರಿನ ನಲ್ಲಿಗಳನ್ನು ಕತ್ತರಿಸಿದ್ದಾರೆ. ಅವರು ಬ್ಯಾಟರಿಗಳನ್ನು ಸಹ ಕದ್ದಿದ್ದಾರೆ. ಅವರು ಪ್ರಯೋಗಾಲಯಗಳಿಂದ ಬ್ಯಾಟರಿಗಳನ್ನು ಎಳೆದಿದ್ದಾರೆ ಮತ್ತು ಆಮ್ಲ ನೆಲದ ಮೇಲೆ ಚೆಲ್ಲಿದೆ. ಆರೋಪಿಗಳು ಕ್ಯಾಂಪಸ್ ಬಗ್ಗೆ ಚೆನ್ನಾಗಿ ತಿಳಿದುಕೊಂಡಿರಬೇಕು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಲೈಂಗಿಕ ಕಿರುಕುಳ; ಕಾಮುಕ ಬಂಧನ

**ಬೆಂಗಳೂರು:** ದೇವರಬೀಸನಹಳ್ಳಿಯ ಇಕೋ ವರ್ಲ್ಡ್ ಟೆಕ್ ಪಾರ್ಕ್‌ನ ಮುಖ್ಯ ದ್ವಾರದ ಬಳಿ ಮಹಿಳೆಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಮಾರತ್ತಹಳ್ಳಿ ಪೊಲೀಸರು ಖಾಸಗಿ ಕಂಪನಿಯ ಉದ್ಯೋಗಿಯನ್ನು ಭಾನುವಾರ ಬಂಧನಕ್ಕೊಳಪಡಿಸಿದ್ದಾರೆ. ಆರೋಪಿಯನ್ನು ದೇವರಬೀಸನಹಳ್ಳಿ ನಿವಾಸಿ ಶ್ರೀಕಾಂತ್ (32) ಎಂದು ಗುರುತಿಸಲಾಗಿದೆ, ಈತ ಎಂಬಿಎ ಪದವೀಧರನಾಗಿದ್ದು, ನಗರದ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಾನೆಂದು ತಿಳಿದುಬಂದಿದೆ. ಏಪ್ರಿಲ್ 30 ರಂದು ಭೋಗನಹಳ್ಳಿ ನಿವಾಸಿ 26 ವರ್ಷದ ಮಹಿಳೆಯೊಬ್ಬರು ಟೆಕ್ ಪಾರ್ಕ್‌ನ ಮುಖ್ಯ ದ್ವಾರದ ಬಳಿ ನಡೆದುಕೊಂಡು ಹೋಗುತ್ತಿದ್ದಾಗ ಘಟನೆ ನಡೆದಿತ್ತು. ದ್ವಿಚಕ್ರ ವಾಹನ ಚಲಾಯಿಸುತ್ತಿದ್ದ ಶ್ರೀಕಾಂತ್ ಹಿಂದಿನಿಂದ ಬಂದು ಮಹಿಳೆಗೆ ಬೆನ್ನಿಗೆ ಕೆಳಗೆ ಹೊಡೆದಿದ್ದಾನೆ. ನಂತರ ಮುಂದೆ ಹೋಗಿ ಮತ್ತೆ ಯೂಟರ್ನ್ ತೆಗೆದುಕೊಂಡು ಮತ್ತೊಮ್ಮೆ ಮಹಿಳೆಗೆ ಕಿರುಕುಳ ನೀಡಿ, ಪರಾರಿಯಾಗಿದ್ದಾನೆ. ಈ ವೇಳೆ ಸ್ಥಳೀಯರಾರೂ ನೆರವಿಗೆ ಬರಲಿಲ್ಲ ಎಂದು ದೂರಿನಲ್ಲಿ ಮಹಿಳೆ ಹೇಳಿದ್ದರು. ದೂರ ಹಿನ್ನೆಲೆಯಲ್ಲಿ ಮಾರತಹಳ್ಳಿ ಪೊಲೀಸರು ಆರೋಪಿ ಬಂಧಿಸಲು ವಿಶೇಷ ತಂಡಗಳನ್ನು ರಚಿಸಿದ್ದರು. ಇದರಂತೆ ಸ್ಥಳೀಯ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ ಆರೋಪಿಗಾಗಿ ಹುಡುಕಾಟ ನಡೆಸಿದ್ದ ಅಧಿಕಾರಿಗಳು, ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ಪುರುಷರ ವೇಷದಲ್ಲಿ ಕಳ್ಳತನ; ಆಟೋರಿಕ್ಷಾ ಚಾಲಕಿ ಸೇರಿ ಇಬ್ಬರು ಮಹಿಳೆಯರ ಬಂಧನ

**ಬೆಂಗಳೂರು:** ಬೆಂಗಳೂರು: ಸರಣಿ ಮನೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಬೊಮ್ಮನಹಳ್ಳಿ ಪೊಲೀಸರು ಆಟೋರಿಕ್ಷಾ ಚಾಲಕಿ ಸೇರಿದಂತೆ ಇಬ್ಬರು ಮಹಿಳೆಯರನ್ನು ಬಂಧಿಸಿದ್ದಾರೆ.

ಬೀಗ ಹಾಕಿದ ಮನೆಗಳನ್ನು ಗುರುತಿಸಿ ಚಿನ್ನಾಭರಣ ಕಳವು ಮಾಡುತ್ತಿದ್ದ ಆಟೋರಿಕ್ಷಾ ಚಾಲಕಿ ಸೇರಿದಂತೆ ಇಬ್ಬರನ್ನು ಬಂಧಿಸಲಾಗಿದೆ. ಡಿ.ಜೆ.ಹಳ್ಳಿಯ ಶಬರೀನ್ ತಾಜ್ (38), ನೀಲಂ (22) ಬಂಧಿತರು.

ಇಬ್ಬರೂ ಆರೋಪಿಗಳು ಕಳೆದ ಎರಡು ವರ್ಷಗಳಿಂದ ಸಕ್ರಿಯರಾಗಿದ್ದರು. ಆಟೋ ಚಾಲಕಿ ಬೀಗ ಹಾಕಿದ ಮನೆಗಳನ್ನು ಹುಡುಕುತ್ತಾ ಓಡಾಡುತ್ತಿದ್ದಳು. ಮನೆಯನ್ನು ಆಯ್ಕೆ ಮಾಡಿದ ನಂತರ, ಅವಳು ತನ್ನ ಪಾರ್ಟನರ್ ಜೊತೆ ಸೇರಿ ಕಳ್ಳತನ ಮಾಡುತ್ತಿದ್ದಳು. ಇಬ್ಬರಿಂದ 11 ಲಕ್ಷ ರೂ.ಗೂ ಹೆಚ್ಚು ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ಬೊಮ್ಮನಹಳ್ಳಿ ಮತ್ತು ಮೈಕೊ ಲೇಔಟ್ ಪೊಲೀಸ್ ವ್ಯಾಪ್ತಿಯಲ್ಲಿ ಕಳ್ಳತನ ಮಾಡಿದ್ದಾರೆ. ಅವರು ಕದ್ದ ಚಿನ್ನಾಭರಣಗಳನ್ನು ಡಿಜೆ ಹಳ್ಳಿ ಮತ್ತು ಟ್ಯಾನರಿ ರಸ್ತೆಯಲ್ಲಿರುವ ಆಭರಣ ಅಂಗಡಿಗಳಿಗೆ ಮಾರಾಟ ಮಾಡುತ್ತಿದ್ದರು,



ಆರೋಪಿಗಳಿಂದ ಸುಮಾರು 130 ಗ್ರಾಂ ಚಿನ್ನದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ. ಇಬ್ಬರೂ ಮಹಿಳೆಯರನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ. ಅಪರಾಧಕ್ಕೆ ಬಳಸಲಾಗಿದ್ದ ಕಾರನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಆರೋಪಿಗಳು ಗಾರ್ವೆಭಾವಿಪಾಳ್ಯದ ಮನೆಯೊಂದರಲ್ಲಿ ಮಾ.17ರಂದು ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿದ್ದರು. ಈ ಸಂಬಂಧ ದಾಖಲಾದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ವಿವಿಧ ಆಯಾಮಗಳಲ್ಲಿ ತನಿಖೆ ನಡೆಸಲಾಯಿತು.

ಏಪ್ರಿಲ್ 2 ರಂದು ಆಡುಗೋಡಿ ಟ್ರಾಫಿಕ್ ಸಿಗ್ನಲ್ ಬಳಿ ಇಬ್ಬರನ್ನು ಬಂಧಿಸಲಾಯಿತು. ಅವರನ್ನು ಒಂಬತ್ತು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ತೆಗೆದುಕೊಳ್ಳಲಾಯಿತು. ಅವರ ಮಾಹಿತಿಯ ಆಧಾರದ ಮೇಲೆ, ಆರೋಪಿಗಳು ಮಾರಾಟ ಮಾಡಿದ್ದ ಚಿನ್ನಾಭರಣಗಳನ್ನು ಹಿಂದಿರುಗಿಸುವಂತೆ ಆಭರಣ ಅಂಗಡಿ ಮಾಲೀಕರಿಗೆ ನೋಟಿಸ್ ನೀಡಲಾಗಿದೆ

# ಕಾರ್ಮಿಕರ ಹಕ್ಕುಗಳ ಕಾರ್ಯಾಗಾರ



**ಮೈಸೂರು:** ಮೈಸೂರಿನ ಮುಡಾ ಎದುರು ಜೆ. ಎಲ್.ಬಿ ರಸ್ತೆಯಲ್ಲಿರುವ ರೋಟರಿ ಸಂಭಾಂಗಣದಲ್ಲಿ ಕಾರ್ಮಿಕರ ಹಕ್ಕುಗಳ ಸೇವಾ ಸಮಿತಿ ವತಿಯಿಂದ ಕಾರ್ಮಿಕರ ಹಕ್ಕುಗಳ ದಿನಾಚರಣೆ ಪ್ರಯುಕ್ತ ಕಾರ್ಮಿಕರ ಹಕ್ಕುಗಳ ಕಾರ್ಯಗಾರ ಉದ್ಘಾಟನಾ ಸಮಾರಂಭವನ್ನು ನಡೆಸಲಾಯಿತು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮುಖ್ಯ ಕಾನೂನು ನೆರವು ಅಭಿರಕ್ಷಕರು ಎಂಎಸ್ ನವೀನ್ ಹಾಗೂ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಅಧ್ಯಕ್ಷರು ಡಾ.ರೇಣುಕಾಂಬ.ಸಿ ಮತ್ತು ವಕೀಲರು ಹಾಗೂ ಸ್ವಯಂಸೇವಕರು ಲೋಕೇಶ್ ಎನ್ ಮತ್ತು ಇ.ಎಸ್.ಐ ಇಲಾಖೆ ಉಮೇಶ್ ರವರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಮುಖ್ಯ ಅತಿಥಿಗಳಿಗೆ ಸನ್ಮಾನವನ್ನು ಮಾಡಲಾಯಿತು. ಈ ಸಂದರ್ಭದಲ್ಲಿ ಕಾರ್ಮಿಕರ ಹಕ್ಕುಗಳ ಸೇವಾ ಸಮಿತಿ ಸಂಸ್ಥಾಪಕ ಅಧ್ಯಕ್ಷರು ಡಾ. ಕಸ್ತೂರಿ ಚಂದ್ರು ಹಾಗೂ ರಾಜ್ಯಾಧ್ಯಕ್ಷರು ಶ್ರೀನಿವಾಸ. ಆರ್ ಮತ್ತು ಕಾರ್ಯಾಧ್ಯಕ್ಷರು ಡಾ. ತೇಜಸ್ ಪೃಥ್ವಿರಾಜ್ ಹಾಗೂ ಸಹ ಕಾರ್ಯದರ್ಶಿ ಡಾ. ಮೌಲ್ಯ ಜೈ ಕುಮಾರ್ ಮತ್ತು ಕಾರ್ಯದರ್ಶಿ ಡಾ. ಶಿವರಾಜು ಟಿ ಹಾಗೂ ಸಂಘಟನಾ ಕಾರ್ಯದರ್ಶಿ ಅಮೀನಾ ಬೇಗಂ ಮತ್ತು ಖಜಾಂಚಿ ಹೆಚ್ ಕೆ ಸ್ಫೂರ್ತಿ ಹಾಗೂ ನಿರ್ದೇಶಕರು ಡಾ. ನಟರಾಜು ಇನ್ನು ಮುಂತಾದವರು ಭಾಗಿಯಾಗಿದ್ದರು.

## ಪುಸ್ತಕ ಬಹುಮಾನಕ್ಕಾಗಿ ಜಾನಪದ ಕೃತಿಗಳ ಆಹ್ವಾನ

**ಬೆಂಗಳೂರು:** ಕರ್ನಾಟಕ ಜಾನಪದ ಅಕಾಡೆಮಿಯು 2024 ನೇ ಸಾಲಿನಲ್ಲಿ 1ನೇ ಜನವರಿ 2024 ರಿಂದ 31ನೇ ಡಿಸೆಂಬರ್ 2024ರ ವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ (ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತುಪಡಿಸಿ) ಕನಿ?ಟ 150 ಪುಟಗಳಿಗೂ ಮೇಲ್ಪಟ್ಟಿರುವಂತೆ ಜನಪದ ಗದ್ಯ, ಜನಪದ ಪದ್ಯ, ಜನಪದ ವಿಚಾರ–ವಿಮರ್ಶೆ–ಸಂಶೋಧನೆ, ಜನಪದ ಸಂಕೀರ್ಣ ಪ್ರಕಾರಗಳ ಜಾನಪದ ಕೃತಿಗಳನ್ನು ಪುಸ್ತಕ ಬಹುಮಾನಕ್ಕಾಗಿ ಆಹ್ವಾನಿಸಿದೆ. ಈ ನಾಲ್ಕು ಪ್ರಕಾರಗಳ ಲೇಖಕರು/ ಪ್ರಕಾಶಕರು/ ಸಂಪಾದಕರು ತಮ್ಮ ಒಂದು ಕೃತಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು–560002 ಇವರಿಗೆ 20ನೇ ಮೇ 2025 ರೊಳಗೆ ತಲುಪುವಂತೆ ಖುದ್ದಾಗಿ, ಕೊರಿಯರ್ ಅಥವಾ ಅಂಚೆ ಮೂಲಕ ಕಳುಹಿಸಿಕೊಡಲು ಕೋರಿದೆ. ಈ ಪುಸ್ತಕವು ತಜ್ಞರಿಂದ ಪ್ರಕಾರವಾರು ಆಯ್ಕೆಯಾದಲ್ಲಿ, ನಂತರ ಪುಸ್ತಕ ಬಹುಮಾನಕ್ಕೆ ಲೇಖಕರಿಂದ ಉಳಿದಂತೆ 03 ಪ್ರತಿಗಳನ್ನು ಮೌಲ್ಯಮಾಪಕರ ಪರಿಶೀಲನೆಗೆ ತರಿಸಿಕೊಳ್ಳಲಾಗುವುದು. ಈಗಾಗಲೇ ಪುಸ್ತಕ ಬಹುಮಾನ ಪಡೆದ ಸಂಪಾದಕರು / ಲೇಖಕರು ಪುಸ್ತಕ ಬಹುಮಾನ ಯೋಜನೆಗೆ ಕೃತಿಗಳನ್ನು ಮತ್ತೊಮ್ಮೆ ಕಳುಹಿಸಬಾರದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಮೇ 13 ರಿಂದ 21 ರವರೆಗೆ ಗಂಗಾ ತಾಯಿ ಜಾತ್ರಾ ಮಹೋತ್ಸವ

**ವಿಜಯಪುರ:** ಪಟ್ಟಣದ ಗ್ರಾಮ ದೇವತೆ, ಗಂಗಾತಾಯಿ ಅಮ್ಮನವರ 55ನೇ ವರ್ಷದ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ ಭಾನುವಾರದಂದು ಗಂಗಾ ತಾಯಿ ದೇವಾಲಯದ ಆವರಣದಲ್ಲಿ ಹಿಂದೂ ಜನಾಂಗದ ಮುಖಂಡರುಗಳ ನೇತೃತ್ವದಲ್ಲಿನಡೆಯಿತು. ಜಾತ್ರಾ ಮಹೋತ್ಸವದ ಕಾರ್ಯದರ್ಶಿ ಎನ್ ರುದ್ರಮೂರ್ತಿ ರವರು ಮಾತನಾಡಿ, ಮೇ 13 ಮಂಗಳವಾರದಿಂದ ಮೇ 21ರ



ಬುಧವಾರದವರೆಗೂ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಮೇ 19ರ ಸೋಮವಾರದಂದು ಜಲಗಂಗಮ್ಮನವರನ್ನು ತಂದು ದೇವಾಲಯದಲ್ಲಿ ಪ್ರತಿಷ್ಠಾಪಿಸಲಾಗುವುದು. ಮೇ 20ರ ಮಂಗಳವಾರದಂದು ಬೆಳಗಿನಿಂದ ಸಂಜೆವರೆಗೆ ದೀಪಾರತಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದ್ದು, 21ರ ಬುಧವಾರದಂದು ಸಾರ್ವಜನಿಕರಿಗೆ ಅನ್ನ ಸಂತರ್ಪಣೆ ಏರ್ಪಡಿಸಿದ್ದು, ಜಲಗಂಗಮ್ಮನವರನ್ನು ಬೀಳ್ಕೊಡುಗೆ ಮಾಡಲಾಗುವುದು. ಪಟ್ಟಣದ ಎಲ್ಲಾ ಹಿಂದೂ ಜನಾಂಗದವರು ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ಜಾತ್ರಾ ಮಹೋತ್ಸವದ ಅಧ್ಯಕ್ಷರಾದ ನಾಗರಾಜು, ಗೌರವಾಧ್ಯಕ್ಷರಾದ ಅನ್ನಪೂರ್ಣಮ್ಮ ಮುನಿಕೃಷ್ಣಪ್ಪ, ಸದಸ್ಯರುಗಳಾದ ಪಿ ಸಂಪತ್ ಕುಮಾರ್, ನವೀನ್, ಚೆನ್ನಕೃಷ್ಣ, ವೆಂಕಟೇಶ್, ಅಂಜನಪ್ಪ, ಆರ್. ಮುನಿರಾಜು, ಜೆ ಎಸ್ ರಾಮಚಂದ್ರಪ್ಪ, ಗುಂಡಣ್ಣ ಮತ್ತಿತರೆ ಮುಖಂಡರುಗಳು ಭಾಗವಹಿಸಿದ್ದರು.

## 9ರಿಂದ ಶ್ರೀಭೂತಪ್ಪ ಸ್ವಾಮಿ ಜಾತ್ರೆ

**ಪಟ್ಟನಾಯಕನಹಳ್ಳಿ :** ಶಿರಾ ತಾಲೂಕಿನ ಗೌಡಗೆರೆ ಹೋಬಳಿಯ ಚಂಗಾವರ ಗ್ರಾಮದ ಶ್ರೀಭೂತಪ್ಪ ಸ್ವಾಮಿ ಜಾತ್ರಾ, ಮಹೋತ್ಸವ ಮೇ 9.ರ ಶುಕ್ರವಾರ ದಿಂದ ಮೇ 11 ರ ಭಾನುವಾರದವರೆಗೆ ನಡೆಯಲಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀ ಭೂತಪ್ಪ ಸ್ವಾಮಿ ದೇವರ ಕೃಪಾಶೀರ್ವಾದಕ್ಕೆ ಪಾತ್ರರಾಗಬೇಕು. ಮೂರು ದಿನಗಳ ಕಾಲ ನಡೆಯುವ ಜಾತ್ರಾ, ಮಹೋತ್ಸವದಲ್ಲಿ ರಸಮಂಜರಿ, ನಗೆ ಹಬ್ಬ ಸೇರಿದಂತೆ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ ಶ್ರೀ ಭೂತಪ್ಪ ಸ್ವಾಮಿ ದೇವರ ಜಾತ್ರಾ, ಮಹೋತ್ಸವ ಯಶಸ್ವಿಗೊಳಿಸುವಂತೆ ಶಿರಾ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶಿವು ಚಂಗಾವರ ಮನವಿ ಮಾಡಿದರು. ಮೇ 9ರ ಶುಕ್ರವಾರ ಸಂಜೆ 6 ಗಂಟೆಗೆ ಶ್ರೀ ಅಂಭಾದೇವಿ ಎಲೆ ಪೂಜೆ, ರಾತ್ರಿ 8 ಗಂಟೆಗೆ ರಸಮಂಜರಿ ಕಾರ್ಯಕ್ರಮ. ಮೇ 10 . ಶನಿವಾರ ಬೆಳಿಗ್ಗೆ ಶ್ರೀ ಭೂತಪ್ಪ ಸ್ವಾಮಿಗೆ ಗಂಗಾಪೂಜೆ, ಮಧ್ಯಾಹ್ನ 2 ಗಂಟೆಗೆ ಮಣೆವು ಸೇವೆ, ರಾತ್ರಿ 8 ಗಂಟೆಗೆ ಸುಧಾ ಬರಗೂರು ತಂಡದಿಂದ ನಗೆ ಹಬ್ಬ. ಮೇ 11 ಭಾನುವಾರ ಬೆಳಿಗ್ಗೆ 5.ಗಂಟೆಗೆ ಶ್ರೀ ಭೂತಪ್ಪ ಸ್ವಾಮಿ ಗೆ ಮಹಾ ಮಂಗಳಾರತಿ ಹಾಗೂ ಬೇಟೆ ಕಾರ್ಯಕ್ರಮ ನಡೆಯಲಿದೆ. ಈ ಸಂದರ್ಭದಲ್ಲಿ ಡಿ ಎಂ ಪಿ ಕರಿಯಣ್ಣ, ರಮೇಶ್ ಗೌಡ, ಪಿ ಹೆಚ್ ಗೌಡ, ರಾಮಚಂದ್ರಪ್ಪ, ಪರಮೇಶ್, ರುದ್ರಪ್ಪ, ಪೂಜಾ ಜಯಪ್ಪ, ಶಿವಣ್ಣ, ವಿಜಯಕುಮಾರ ಸೇರಿದಂತೆ ಹಲವಾರು ಮುಖಂಡರು ಇದ್ದರು.

## 5ರಿಂದ ಉಚಿತ ಯೋಗ ಶಿಬಿರ

**ಬೆಂಗಳೂರು:** ಶ್ರೀ ಜಯಚಾಮರಾಜೇಂದ್ರ ಸರ್ಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆ ಹಾಗೂ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ವತಿಯಿಂದ, ಬೆಂಗಳೂರಿನ ಆನಂದ್‌ರಾವ್ ವೃತ್ತದ ಧನ್ವಂತರಿ ರಸ್ತೆಯಲ್ಲಿರುವ ಶ್ರೀ ಜಯಚಾಮರಾಜೇಂದ್ರ ಸರ್ಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆಯ ಯೋಗ ವಿಭಾಗದಲ್ಲಿ 2025ನೇ ಮೇ 5 ರಿಂದ 31ರ ವರೆಗೆ ಬೆಳಿಗ್ಗೆ 7.30 ಗಂಟೆಯಿಂದ 8.30 ಗಂಟೆಯವರೆಗೆ ರೋಗಿಗಳಿಗೆ ಮತ್ತು ಸಾರ್ವಜನಿಕರಿಗೆ ಉಚಿತ ಯೋಗಾಸನ, ಪ್ರಾಣಾಯಾಮ, ಧ್ಯಾನ ತರಗತಿಗಳನ್ನು, ವಿಶೇಷವಾಗಿ ಅಸ್ತಮ ಖಾಯಿಲೆಯ ಜಲನೇತಿ ಬಗ್ಗೆ ಉಪನ್ಯಾಸ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತರು ಈ ಉಚಿತ ಯೋಗ ಶಿಬಿರದಲ್ಲಿ ಭಾಗವಹಿಸಿ ಪ್ರಯೋಜನವನ್ನು ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ತಿಕ್, ಮೊಬೈಲ್ ದೂರವಾಣಿ ಸಂ. 98459 86119 ನ್ನು ಸಂಪರ್ಕಿಸಬಹುದು ಎಂದು ಶ್ರೀ ಜಯಚಾಮರಾಜೇಂದ್ರ, ಸರ್ಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಆರ್ಥಿಕ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾದ ಹೊಸ ವಾಹನಗಳ ಚಾಲನೆಗೆ ಹಸಿರು ನಿಶಾನೆ ಹಾಗೂ ಅನುಕಂಪ ಆಧಾರಿತ ನೇಮಕಾತಿ ಆದೇಶ ವಿತರಣಾ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೀಪ ಬೆಳಗಿಸುವುದರ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಅಬಕಾರಿ ಇಲಾಖೆಯ ಸಚಿವರಾದ ಆರ್.ಬಿ.ತಿಮ್ಮಾಪುರ, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕ ರಿಜ್ವಾನ್ ಅರ್ಷದ್ ಮತ್ತಿತರರು ಉಪಸ್ಥಿತರಿದ್ದರು.

# ಚನ್ನಬಸವೇಶ್ವರ ಸ್ವಾಮಿ ರಥೋತ್ಸವ

**ಹುಳಿಯಾರು:** ಹುಳಿಯಾರು ಹೋಬಳಿ ಕೆಂಕೆರೆ ಗ್ರಾಮದ ಇತಿಹಾಸ ಪ್ರಸಿದ್ಧ ಶ್ರೀಚನ್ನಬಸವೇಶ್ವರ ಸ್ವಾಮಿಯ ರಥೋತ್ಸವ ಬುಧವಾರ ವಿವಿಧ ಧಾರ್ಮಿಕ ಕೈಂಕರ್ಯಗಳೊಂದಿಗೆ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿ ಜರುಗಿತು. ಬಸವ ಜಯಂತಿ ಹಿನ್ನೆಲೆ ಚನ್ನಬಸವೇಶ್ವರ ಸ್ವಾಮಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು, ಸ್ವಾಮಿಯನ್ನು ಬಸವನ ಉತ್ಸವ ಹಾಗೂ ಧ್ವಜದ ಕುಣಿತದೊಂದಿಗೆ ಮೆರವಣಿಗೆಯಲ್ಲಿ ಕರೆತಂದು, ಗಣಪತಿ ಪೂಜೆ, ಪುಣ್ಯಾಹ, ದಿಕ್ ಬಲಿ ಹರಣ ಮತ್ತು ಅಷ್ಟೋತ್ತರ ಪೂಜೆ ಮುಂತಾದ ಪೂಜಾ ಕೈಂಕರ್ಯದೊಂದಿಗೆ ಆರಂಭವಾದ ಶ್ರೀ ಸ್ವಾಮಿಯವರ ಮಹಾ ರಥೋತ್ಸವಕ್ಕೆ ದೇವಸ್ಥಾವದ ಸಮಿತಿ ಸದಸ್ಯರು ಹಾಗೂ ಗ್ರಾಮಸ್ಥರು ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲಾಯಿತು. ರಂಗು ರಂಗಿನ ಬಾವುಟಗಳು, ತಳಿರು ತೋರಣಗಳು, ಎಳನೀರಿನ ಗೊಂಚಲುಗಳು, ಬಾಳೆಗೊನೆ, ಕೊಬ್ಬರಿಹಾರ ಹಾಗೂ ಹೂವಿನ ಹಾರಗಳಿಂದ ಶೃಂಗಾರಗೊಂಡು, ಮಂಗಳ ವಾದ್ಯಗಳೊಂದಿಗೆ ಸಾಗಿಬಂದ ಅದ್ದೂರಿ, ಆಕರ್ಷಕ, ವೈಭವದ ಮಹಾ ರಥೋತ್ಸವವನ್ನು ಗ್ರಾಮಸ್ಥರು ಜಯ ಘೋಷದೊಂದಿಗೆ ರಥ ಎಳೆದು ಸಂಭ್ರಮಿಸಿದರು. 3 ವರ್ಷಗಳ ನಂತರ ನಡೆಯುತ್ತಿರುವ ರಥೋತ್ಸವ ವೀಕ್ಷಿಸಲು ಬಿಸಿಲ ಝಳವನ್ನೂ ಲೆಕ್ಕಿಸದೆ ಜನಸಾಗರವೇ ಹರಿದು ಬಂದಿತ್ತು. ಭಕ್ತರು ಅನತಿ ದೂರದಿಂದಲೇ ಬಾಳೆ ಹಣ್ಣು ಹಾಗೂ ನಾಣ್ಯಗಳನ್ನು ರಥದ ಕಡೆ ಎಸೆಯುವ ಮೂಲಕ ತಮ್ಮ ಭಕ್ತಿಬಾವ ಸಮರ್ಪಿಸದರು. ನಂತರ ಭಕ್ತರು ಶ್ರೀ ಸ್ವಾಮಿಯವರಿಗೆ ಹಣ್ಣು–ಕಾಯಿ ಪೂಜೆ ಮಾಡಿಸಿಕೊಂಡು ಹಿಂದಿರುಗಿದರು. ಜಾತ್ರೆಗೆ ಆಗಮಿಸಿದ್ದ ಭಕ್ತಾಧಿಗಳಿಗೆ ಪಾನಕ, ಪನಿವಾರ ಹಾಗೂ ಉಪಹಾರ ವ್ಯವಸ್ಥೆ ಕಲ್ಪಿಸಿದ್ದರು.



# ಸಂಜೆ ಟಿಪ್ಸ್

## ಏರ್‌ಟೆಲ್‌ನಿಂದ ಹೊಸ ಪ್ಲಾನ್ಸ್ ಪರಿಚಯ

ಭಾರತಿ ಏರ್ಟೆಲ್ ತನ್ನ ಗ್ರಾಹಕರಿಗಾಗಿ ಐಆರ್ ಪೋರ್ಟ್ಫೋಲಿಯೊವನ್ನು ಮತ್ತಷ್ಟು ಸರಳ, ಹೆಚ್ಚು ಅಗ್ಗ ಮತ್ತು ಸಂಪೂರ್ಣವಾಗಿ ತಡೆ-ರಹಿತವನ್ನಾಗಿಸಲು ಹೊಸ ಪ್ಲಾನ್ಸ್ ಪ್ರಕಟಿಸಿದೆ. ಸಂಸ್ಥೆಯು 189 ದೇಶಗಳಾದ್ಯಂತ ಅನಿಯಮಿತ ಡೇಟಾ ಒದಗಿಸುವ ಭಾರತದ ಮೊಟ್ಟಮೊದಲ ಅನಿಯಮಿತ ಐಆರ್ ಪ್ಲಾನ್ಸ್ ಅನ್ನು ಅನಾವರಣಗೊಳಿಸಿದೆ. ಹೆಚ್ಚುವರಿಯಾಗಿ, ದೀರ್ಘಕಾಲದವರೆಗೆ ಅನಿವಾಸಿ ಸಮುದಾಯದವರಿಗಾಗಿ, ಏರ್ಟೆಲ್ ಒಂದು-ವರ್ಷದ ವ್ಯಾಲಿಡಿಟಿಯೊಂದಿಗೆ ರೂ. 4000 ಗಳಿಗಾಗಿ ವಿಶಿಷ್ಟ ರಿಚಾರ್ಜ್ ಪ್ಲಾನ್ ಅನ್ನು ಪರಿಚಯಿಸಿದೆ. ಪ್ಲಾನ್ ಮೂಲಕ ಗ್ರಾಹಕರು ವಿದೇಶದಲ್ಲಿದ್ದಾಗ 5ಜಿಬಿ ಡೇಟಾ ಮತ್ತು 100 ವಾಯ್ಸ್ ನಿಮಿಷಗಳನ್ನು ಪಡೆಯುವುದರ ಜೊತೆಗೆ ಅವರು ಭಾರತದಲ್ಲಿದ್ದಾಗಲೂ ಸಹ ಅದೇ ಪ್ಲಾನ್ ಬಳಸಬಹುದು ಮತ್ತು ಪ್ರತಿದಿನ 1.5 ಜಿಬಿ ಡೇಟಾ ಮತ್ತು ಅನಿಯಮಿತ ಕರೆ ಲಾಭಗಳನ್ನು ಸಹ ಪಡೆಯಬಹುದಾಗಿದೆ. ಈ ಪ್ಲಾನ್ ಮೂಲಕ ಗ್ರಾಹಕರು 189 ದೇಶಗಳಾದ್ಯಂತ ಎಲ್ಲಿಯಾದರೂ ತಡೆ-ರಹಿತ ಸಂಪರ್ಕ ಅನುಭವವನ್ನು ಪಡೆಯಬಹುದು ಮತ್ತು ಭಾರತದಲ್ಲಿದ್ದಾಗ ಸಹ ಯಾವುದೇ ಪ್ರತ್ಯೇಕ ರಿಚಾರ್ಜ್ ಇಲ್ಲದೆ ಅದೇ ಸಂಖ್ಯೆಯನ್ನು ಬಳಸಬಹುದು. ಭಾರತಿ ಏರ್ಟೆಲ್ ಅವರ ಕನೆಕ್ಟೆಡ್ ಹೋಮ್ಸ್‌ನ ಮಾರ್ಕೆಟಿಂಗ್ ನಿರ್ದೇಶಕರು ಮತ್ತು ಸಿಇಒ ಆಗಿರುವ ಸಿದ್ಧಾರ್ಥ್ ಶರ್ಮಾ ಅವರು ಈ ಕುರಿತು ಮಾತನಾಡಿ, ''ಏರ್ಟೆಲ್ ನಲ್ಲಿ, ನಾವು ನಮ್ಮ ಗ್ರಾಹಕರ ಜೀವನವನ್ನು ಹೆಚ್ಚು ಸರಳವಾಗಿಸಲು ಪ್ರಯತ್ನಿಸುತ್ತೇವೆ. ಈ ಮೂಲಕ ನಾವು ಅವರಿಗೆ ಹೆಚ್ಚಿನ ಮೌಲ್ಯ ಹಾಗೂ ಅನುಕೂಲತೆಯನ್ನು ಒದಗಿಸುತ್ತೇವೆ ಎಂದರು.

## ನಿಮಗಿದು ಗೊತ್ತೇ

ಎಂ. ವೆಂಕಟೇಶ್ ಶೇಷಾದ್ರಿ

**20. ಯಾವ ಮುಖ್ಯಮಂತ್ರಿಯ ಆಡಳಿತಾವಧಿಯಲ್ಲಿ ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ಮರುನಾಮಕರಣ ಮಾಡಲಾಯಿತು**

ಉತ್ತರ: ಡಿ ದೇವರಾಜ ಅರಸು (1973)

## ಪಾಕ ಶಾಲೆ

### ಮೊಸರು ಸಾರು



### ಬೇಕಿರುವ ಸಾಮಗ್ರಿ

ಮೊಸರು 1/2 ಲೀಟರ್ ತೆಂಗಿನ ತುರಿ 1 ಕಪ್ ಹಸಿ ಮೆಣಸು 4-5 ಜೀರಿಗೆ 1 ಚಮಚ ಅರಿಶಿಣ ಪುಡಿ 1/ 2 ಚಮಚ ಬೆಳ್ಳುಳ್ಳಿ 3-4 ಎಸಳು ರುಚಿಗೆ ತಕ್ಕ ಉಪ್ಪು ಒಗ್ಗರಣೆಗೆ 1 ಚಮಚ ಎಣ್ಣೆ ಒಣ ಮೆಣಸು 2 ಸ್ವಲ್ಪ ಸಾಸಿವೆ ಕರಿಬೇವು ಸ್ವಲ್ಪ ಮೆಂತೆ

### ಮಾಡುವ ವಿಧಾನ

ನೀವು ತೆಂಗಿನ ತುರಿಗೆ ಜೀರಿಗೆ, ಬೆಳ್ಳುಳ್ಳಿ , ಅರಿಶಿಣ ಹಾಕಿ ನುಣ್ಣನೆ ರುಬ್ಬಿಕೊಳ್ಳಿ. ಈ ನೀವು ಸಾರು ಪಾತ್ರೆಗೆ ಒಂದು ಗ್ಲಾಸ್ ನೀರು ಹಾಕಿ ಅದರಲ್ಲಿ ಹಸಿ ಮೆಣಸು 2 ಭಾಗ ಮಾಡಿ ಹಾಕಿ ನೀರು ಕುದಿಯುತ್ತಾ ಆವಿಯಾಗುತ್ತಾ ಬರುವಾಗ ರುಬ್ಬಿದ ತೆಂಗಿನಕಾಯಿ ಮಿಶ್ರಣ ಹಾಕಿ. ರುಚಿಗೆ ತಕ್ಕ ಉಪ್ಪು ಸೇರಿಸಿ ಮಿಶ್ರಣ ಕುದಿ ಬರುವಾಗ ಗ್ಯಾಸ್ ಆಫ್ ಮಿಶ್ರಣ ಸ್ವಲ್ಪ ತಣ್ಣಗಾಗಲು ಬಿಡಿ ಅದೇ ಸಮಯದಲ್ಲಿ ಮೊಸರಿಗೆ 2-3 ಹಸಿ ಮೆಣಸು ಹಾಕಿ ಮಿಕ್ಸಿಯಲ್ಲಿ ರುಬ್ಬಿ ನಂತರ ಕುದಿಸಿ ತಣ್ಣಗಾಗಲು ಇಟ್ಟ ಮಿಶ್ರಣಕ್ಕೆ ಮೊಸರು ಸೇರಿಸಿ(ಸಾರು ಬಿಸಿ ಇರಬಾರದು, ಹಾಗೆಯೇ ತುಂಬಾನೇ ತಣ್ಣಗಿರಲೂ ಬಾರದು) ಒಗ್ಗರಣೆ ಮಾತ್ರೆಗೆ ಎಣ್ಣೆ ಹಾಕಿ ಬಿಸಿ ಮಾಡಿ ಎಣ್ಣೆ ಬಿಸಿಯಾದಾಗ ಸಾಸಿವೆ ಹಾಕಿ, ಸಾಸಿವೆ ಚಟ್‌ಪಟ್ ಶಬ್ದ ಮಾಡುವಾಗ ಸ್ವಲ್ಪ ಮೆಂತೆ ಹಾಕಿ ನಂತರ ಒಣ ಮೆಣಸು, ಕರಿಬೇವು ಹಾಕಿ ಒಗ್ಗರಣೆ ಸೇರಿಸಿದರೆ ಮೊಸರು ಸಾರು ರೆಡಿ.

## ಯೂರಿಕ್ ಆಮ್ಲದ ಮಟ್ಟ ಕಡಿಮೆ ಮಾಡಬೇಕೇ

### ಹೆಲ್ತ್ ಟಿಪ್ಸ್



ಯೂರಿಕ್ ಆಮ್ಲವು ತ್ಯಾಜ್ಯ ಉಪಉತ್ಪನ್ನವಾಗಿದೆ. ಪ್ಯೂರಿನ್ ಎಂಬ ರಾಸಾಯನಿಕವು ವಿಭಜನೆಯಾದಾಗ ಇದು ದೇಹದಲ್ಲಿ ರೂಪುಗೊಳ್ಳುತ್ತದೆ. ಅದೇ ಸಮಯದಲ್ಲಿ, ನಮ್ಮ ದೇಹದಲ್ಲಿನ ಸುಮಾರು 30% ಪ್ಯೂರಿನ್ ನಾವು ಸೇವಿಸುವ ಆಹಾರದಿಂದ ಬರುತ್ತದೆ ಎಂದು ಆರೋಗ್ಯ ತಜ್ಞರು ಹೇಳುತ್ತಾರೆ. ಅಂದರೆ, ಯೂರಿಕ್ ಆಮ್ಲವನ್ನು ತೊಡೆದುಹಾಕಲು ಆಹಾರದಲ್ಲಿ ಪ್ಯೂರಿನ್ ಹೊಂದಿರದ ಆಹಾರಗಳನ್ನು ಸೇರಿಸಿಕೊಳ್ಳುವುದು ಮುಖ್ಯ.

ನೀವು ಕಡಿಮೆ ಪ್ಯೂರಿನ್‌ಗಳನ್ನು ಸೇವಿಸಿದರೆ, ನಿಮ್ಮ ಯೂರಿಕ್ ಆಮ್ಲದ ಮಟ್ಟಗಳು ಕಡಿಮೆಯಾಗುವ ಸಾಧ್ಯತೆಯಿದೆ. ಇದೇ ಕಾರಣದಿಂದ ಯೂರಿಕ್ ಆಮ್ಲದಿಂದ ಬಳಲುತ್ತಿರುವ ಜನರು ಯಾವುದೇ ವಸ್ತುವನ್ನು ಸೇವಿಸುವ ಮೊದಲು ಅದರ ಪ್ರಯೋಜನಗಳು ಮತ್ತು ಹಾನಿಗಳನ್ನು ತಿಳಿದುಕೊಳ್ಳುವುದು ಸರಿ ಎಂದು ಪರಿಗಣಿಸುತ್ತಾರೆ.

ಯೂರಿಕ್ ಆಮ್ಲದ ಸಾಮಾನ್ಯ ಮಟ್ಟವು ವಯಸ್ಕ ಮಹಿಳೆಯರಲ್ಲಿ 2.5 ರಿಂದ 6 ಮಿಗ್ರಾಂ/ಡಿಎಲ್ ಮತ್ತು ವಯಸ್ಕ ಪುರುಷರಲ್ಲಿ 3.5 ರಿಂದ 7 ಮಿಗ್ರಾಂ/ಡಿಎಲ್ ಇರಬೇಕು. ಇದಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿದ್ದರೆ, ವ್ಯಕ್ತಿಗೆ ಹಲವು ವಿಧಗಳಲ್ಲಿ ಹಾನಿ ಮಾಡಲು ಪ್ರಾರಂಭಿಸುತ್ತದೆ. ಹೆಚ್ಚಿನ ಯೂರಿಕ್ ಆಮ್ಲದ ಮಟ್ಟವನ್ನು ಹೈಪರ್ಯುರಿಸೆಮಿಯಾ ಎಂದು ಕರೆಯಲಾಗುತ್ತದೆ.

ಈರುಳ್ಳಿ ಮೇಲಿನ ಸಂಶೋಧನೆಯ ಫಲಿತಾಂಶಗಳು ವಿಶೇಷವಾಗಿ ಕೆಂಪು ಈರುಳ್ಳಿ ಸೇವನೆಯು ಯೂರಿಕ್ ಆಮ್ಲದ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ತೋರಿಸುತ್ತದೆ, ಜೊತೆಗೆ ಸಂಧಿವಾತದ ಸಂದರ್ಭದಲ್ಲಿ ಈರುಳ್ಳಿ ತಿನ್ನುವುದು ಸಹ ಪ್ರಯೋಜನಕಾರಿಯಾಗಿದೆ. ಹೆಲ್ತ್ ಡೆಸ್ಕ್ ವರದಿಯ ಪ್ರಕಾರ, ಯೂರಿಕ್ ಆಸಿಡ್ ಸ್ಥಿತಿಯ ಮೇಲೆ ಈರುಳ್ಳಿಯ ಪರಿಣಾಮದ ಕುರಿತು ಸಂಶೋಧನೆ ನಡೆಸಲಾಯಿತು. ಇದಕ್ಕಾಗಿ, ಕೆಲವು ಇಲಿಗಳಿಗೆ ಸತತ 7 ದಿನಗಳವರೆಗೆ ಈರುಳ್ಳಿ ಸಾರವನ್ನು ನೀಡಲಾಯಿತು. ಹೆಚ್ಚಿನ ಯೂರಿಕ್ ಆಮ್ಲದ ಮಟ್ಟ (ಹೈಪರ್ಯುರಿಸೆಮಿಯಾ) ಹೊಂದಿರುವ ಇಲಿಗಳು ಸ್ವಲ್ಪ ಸಮಯದವರೆಗೆ ಸೀರಮ್ ಯೂರಿಕ್ ಆಮ್ಲದ ಮಟ್ಟದಲ್ಲಿ ಇಳಿಕೆಯನ್ನು ತೋರಿಸಿದವು.

ಇದಲ್ಲದೆ, ಮತ್ತೊಂದು ಅಧ್ಯಯನವು ಸಹ ಇದೇ ರೀತಿಯ ಫಲಿತಾಂಶಗಳನ್ನು ಕಂಡುಕೊಂಡಿದೆ. ಈರುಳ್ಳಿ ಕಡಿಮೆ ಪ್ಯೂರಿನ್ ಹೊಂದಿರುವ ಆಹಾರವಾಗಿದೆ, ಆದ್ದರಿಂದ ಇದು ಯೂರಿಕ್ ಆಮ್ಲದ ಮಟ್ಟವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

## ನ್ಯಾಚುರಲ್ ಹೇರ್ ಡೈ

### ಬ್ಯೂಟಿ ಟಿಪ್ಸ್



ವಯಸ್ಸಾಗುವ ಮುನ್ನವೇ ಕೂದಲು ಬೆಳ್ಳಗಾದರೆ, ಕೂದಲು ಕಪ್ಪಾಗಿ ಕಾಣಲು ಬಣ್ಣ ಹಾಕುವುದು ಸರಿ. ಆದರೆ ಕೂದಲು ಕಪ್ಪಾಗಿದ್ದರೂ ಕೆಲವರು ಕೆಂಪು, ಕಂದು, ಹಸಿರು ಹೀಗೆ ನಾನಾ ಬಣ್ಣಗಳನ್ನು ತಲೆಗೆ ಹಚ್ಚಿಕೊಳ್ಳುತ್ತಾರೆ. ಹೌದು, ಕೂದಲಿಗೆ ಬಣ್ಣ ಹಾಕುವುದೆಂದರೆ ಕೆಲವರಿಗೆ ಭಾರೀ ಪ್ರೀತಿ. ಏಕೆಂದರೆ ಬಣ್ಣಗಳು ಅವರ ಲುಕ್ಕನ್ನೇ ಬದಲಾಯಿಸುತ್ತವೆ. ಜನಸಂದಣಿ ಪ್ರದೇಶದಲ್ಲಿದ್ದರೂ ನಿಮ್ಮನ್ನು ಎದ್ದು ಕಾಣುವಂತೆ ಮಾಡುತ್ತದೆ.

ನಿಮಗೆ ಕೂದಲಿನ ಬಣ್ಣ ಆ ಸಮಯಕ್ಕೆ ಖುಷಿ ಕೊಡಬಹುದು, ಆದರೆ ಆ ಬಣ್ಣಗಳಲ್ಲಿ ವಿಷಕಾರಿ ರಾಸಾಯನಿಕಗಳು ಮತ್ತು ಅಪಾಯಕಾರಿ ಸಿಂಥೆಟಿಕ್ಸ್ ಮಿಶ್ರಣ ಮಾಡಿರುತ್ತಾರೆ. ಇದು ನಿಮ್ಮ ಕೂದಲಿಗೆ ನಾನಾ ರೀತಿಯಲ್ಲಿ ಹಾನಿಯನ್ನುಂಟು ಮಾಡುತ್ತದೆ. ಆದ್ದರಿಂದ ಕೂದಲಿಗೆ ಬಣ್ಣ ಹಾಕಲು ಇಷ್ಟಪಡುವವರು ಇನ್ನು ಮುಂದೆ ಮನೆಗಳಲ್ಲಿ ಸುಲಭವಾಗಿ ಲಭ್ಯವಿರುವ ಈ ಪದಾರ್ಥಗಳನ್ನು ಉಪಯೋಗಿಸಿಕೊಂಡು ನ್ಯಾಚುರಲ್ ಹೇರ್ ಡೈ ತಯಾರಿಸಿ. ನೀವು ಲೈಟ್ ಹೇರ್ ಶೇಡ್ ಇಷ್ಟಪಡುತ್ತಿದ್ದರೆ, ಕ್ಯಾಮೊಮೈಲ್ ಚಹಾ ಆಯ್ಕೆ ಮಾಡಿಕೊಳ್ಳಿ. ಇದರಿಂದ ಬಣ್ಣವನ್ನು ತಯಾರಿಸಲು ನೀವು ಮೊದಲು ನೀರಿನಲ್ಲಿ ಒಂದು ಕಪ್ ಕ್ಯಾಮೊಮೈಲ್ ಹೂಗಳನ್ನು ಕುದಿಸಬೇಕು. ನಂತರ ಒಂದು ಗಂಟೆಗಳ ಕಾಲ ಬಿಡಬೇಕು. ಈ ಮಧ್ಯೆ ನಿಮ್ಮ ಕೂದಲನ್ನು ಚೆನ್ನಾಗಿ ತೊಳೆಯಿರಿ. ನಂತರ ತಯಾರಿಸಿದ ಚಹಾವನ್ನು ನಿಮ್ಮ ಒದ್ದೆಯಾದ ಕೂದಲಿನ ಮೇಲೆ ಕನಿಷ್ಠ 10 ಬಾರಿ ಹಾಕಿ, ಸುಮಾರು 16 ನಿಮಿಷಗಳ ಕಾಲ ಬಿಟ್ಟು, ನಂತರ ಕೂದಲನ್ನು ತೊಳೆಯಿರಿ. ನಿಮ್ಮ ಕೂದಲು ಗಾಢ ಬಣ್ಣ ಬರಬೇಕೆಂದರೆ ವಾರಕ್ಕೊಮ್ಮೆಯಾದರೂ ಈ ಪ್ರಕ್ರಿಯೆಯನ್ನು ಪುನರಾವರ್ತಿಸಿ. ಬ್ಲಾಕ್ ಟೀ ಕುಡಿಯುವುದರಿಂದ ಸಾಕಷ್ಟು ಅನೇಕ ಆರೋಗ್ಯ ಪ್ರಯೋಜನಗಳಿವೆ ಎಂಬುದು ನಿಮಗೆಲ್ಲರಿಗೂ ಗೊತ್ತಿರುವ ವಿಚಾರ.

ಹಾಗೆಯೇ ಇದು ಕೂದಲಿಗೆ ಉತ್ತಮ ಬಣ್ಣ ಬರಲು ಸಹಾಯ ಮಾಡುತ್ತದೆ. ಬ್ಲಾಕ್ ಟೀ ಟ್ಯಾನಿಕ್ ಆಮ್ಲದಿಂದ ಕೂಡಿದ್ದು, ಅದು ಕಾಲಾನಂತರದಲ್ಲಿ ನಿಮ್ಮ ಕೂದಲನ್ನು ಕಪ್ಪಾಗಿಸುತ್ತದೆ. ಆದ್ದರಿಂದ ನೀವು ಮಾಡಬೇಕಾಗಿರುವುದು ಇಷ್ಟು. 5 ಚಮಚ ಅಥವಾ 5 ಟೀ ಬ್ಯಾಗ್‌ಗಳನ್ನು ಬಳಸಿ, ಕೆಲವು ಕಪ್'ಗಳಷ್ಟು ಸ್ಟ್ರಾಂಗ್ ಕಪ್ಪು ಚಹಾವನ್ನು ತಯಾರಿಸಿ. ಇದು ತಣ್ಣಗಾದ ಮೇಲೆ ನಿಮ್ಮ ಕೂದಲಿನ ಮೇಲೆ ಹಾಕಿ, ಸುಮಾರು 30 ನಿಮಿಷಗಳವರೆಗೆ ನೆನೆಯಲು ಬಿಡಿ. ನಂತರ ಬೆಚ್ಚಗಿನ ನೀರಿನಿಂದ ತೊಳೆಯಿರಿ.



## ಸಾರಾ ತೆಂಡೂಲ್ಕರ್ ಡೇಟಿಂಗ್ ವಿಚಾರ ಮತ್ತೆ ಮುನ್ನಲೆಗೆ

ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ ಅವರ ಪುತ್ರಿ ಸಾರಾ ತೆಂಡೂಲ್ಕರ್ ಪ್ರಸ್ತುತ ಸುದ್ದಿಯಲ್ಲಿದ್ದಾರೆ. ವೈಯಕ್ತಿಕ ಜೀವನಕ್ಕೆ ಸಂಬಂಧ ಪಟ್ಟಂತೆ ಸಾರಾ ಸದ್ಯ ಸದ್ದು ಮಾಡುತ್ತಿದ್ದಾರೆ. ಕಳೆದ ಕೆಲವು ದಿನಗಳಿಂದ ಸಾರಾ ಮತ್ತು ಕ್ರಿಕೆಟಿಗ ಶುಭಮನ್ ಗಿಲ್ ನಡುವೆ ಬ್ರೇಕ್ ಅಪ್ ಆಗಿದೆ ಎಂಬ ವದಂತಿಗಳು ಹಬ್ಬಿದ್ದವು. ಈಗ, ಸಂಬಂಧ ಮುರಿದುಹೋಗಿರುವವ ಮಾತುಗಳು ಕೇಳಿಬರುತ್ತಿರುವಾಗಲೇ, ಸಾರಾ ಮತ್ತೆ ಪ್ರೀತಿಯಲ್ಲಿ ಬಿದ್ದಿದ್ದಾರೆ ಎಂಬ ಸುದ್ದಿ ವೈರಲ್ ಆಗುತ್ತಿದೆ. ಆಕೆಯ ಹೆಸರು ಈಗ ಒಬ್ಬ ನಟನ ಜೊತೆ ತಳುಕು ಹಾಕಿಕೊಳ್ಳಲಾಗುತ್ತಿದೆ.

ಸಾರಾ ತೆಂಡೂಲ್ಕರ್ ಅವರ ಹೆಸರು ಬಾಲಿವುಡ್ ನಟ ಸಿದ್ಧಾಂತ್ ಚತುರ್ವೇದಿ ಅವರೊಂದಿಗೆ ತಳುಕು ಹಾಕಿಕೊಳ್ಳಲಾಗುತ್ತಿದೆ. ಇಬ್ಬರೂ ಹಲವಾರು ಬಾರಿ ಒಟ್ಟಿಗೆ ಕಾಣಿಸಿಕೊಂಡ ನಂತರ, ಅವರ ಸ್ನೇಹದ ಬಗ್ಗೆ ಚರ್ಚೆಗಳು ಪ್ರಾರಂಭವಾಗಿವೆ. ಫಿಲ್ಮ್‌ಫೇರ್ ನೀಡಿದ ಮಾಹಿತಿಯ ಪ್ರಕಾರ, ಸಿದ್ಧಾಂತ್ ಮತ್ತು ಸಾರಾ ಪರಸ್ಪರ ಡೇಟಿಂಗ್ ಮಾಡುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ಈ ಸ್ನೇಹ ಇನ್ನೂ ಆರಂಭಿಕ ಹಂತದಲ್ಲಿದೆ ಮತ್ತು ಇಬ್ಬರೂ ಪರಸ್ಪರ ಜೊತೆಯಲ್ಲಿ ಓಡಾಡುತ್ತಾ, ಆನಂದಿಸುತ್ತಿದ್ದಾರೆ ಎಂದು ಅವರ ಆಪ್ತ ಮೂಲಗಳು ತಿಳಿಸಿವೆ. ಇಬ್ಬರೂ ತಮ್ಮ ಸಂಬಂಧವನ್ನು ಖಾಸಗಿಯಾಗಿಡಲು ಪ್ರಯತ್ನಿಸುತ್ತಿದ್ದಾರೆ ಎಂದು ವರದಿಯಾಗಿದೆ.

ಈ ಹಿಂದೆ, ಸಾರಾ ಅವರ ಹೆಸರು ಭಾರತೀಯ ಕ್ರಿಕೆಟಿಗ ಶುಭಮನ್ ಗಿಲ್ ಅವರೊಂದಿಗೆ ತಳುಕು ಹಾಕಿಕೊಂಡಿತ್ತು. ಆದಾಗ್ಯೂ, ಸ್ವಲ್ಪ ಸಮಯದ ನಂತರ, ಶುಭ್ಮನ್ ಅವರು ಪ್ರಸ್ತುತ ಯಾರೊಂದಿಗೂ ಸಂಬಂಧ ಹೊಂದಿಲ್ಲ ಎಂದು ಸ್ಪಷ್ಟಪಡಿಸಿದ್ದರು. ಇದಲ್ಲದೆ, ಇಬ್ಬರೂ ಇನ್ಸ್ಟಾಗ್ರಾಮ್ನಲ್ಲಿ ಒಬ್ಬರನ್ನೊಬ್ಬರು ಅನ್‌ಫಾಲೋ ಮಾಡಿದ್ದಾರೆ, ಇದನ್ನು ಅಭಿಮಾನಿಗಳು ತಕ್ಷಣ ಗಮನಿಸಿ ಈ ಚರ್ಚೆ ಶುರು ಮಾಡಿದ್ದಾರೆ.

ಸಿದ್ಧಾಂತ್ ಸೂಪರ್‌ಹಿಟ್ ಚಿತ್ರ 'ಗಲ್ಲಿ ಬಾಯ್' ಮೂಲಕ ಬಾಲಿವುಡ್‌ಗೆ ಪಾದಾರ್ಪಣೆ ಮಾಡಿದ್ದರು. ರಣವೀರ್ ಸಿಂಗ್ ಅವರೊಂದಿಗೆ ಕೆಲಸ ಮಾಡುವಾಗ ಅವರ ಅಭಿನಯವು ಹೆಚ್ಚು ಮೆಚ್ಚುಗೆ ಪಡೆಯಿತು. ಅದಾದ ನಂತರ, ಅವರು 'ಬುನಿಯಾ ಆದಿಲ್' ಮತ್ತು 'ಫೋನ್ ಭೂತ್' ಚಿತ್ರಗಳಲ್ಲಿಯೂ ಕಾಣಿಸಿಕೊಂಡರು. ಅವರ 'ಯುದ್ಧ್' ಚಿತ್ರ ಇತ್ತೀಚೆಗೆ ಬಿಡುಗಡೆಯಾಯಿತು, ಆದರೆ ಅದು ಚೆನ್ನಾಗಿ ಗಳಿಸಲಿಲ್ಲ. ಈಗ ಸಿದ್ಧಾಂತ್ 'ಧಡಕ್ 2' ಚಿತ್ರದಲ್ಲಿ ತೃಪ್ತಿ ದಿಮ್ರಿ ಜೊತೆ ಕಾಣಿಸಿಕೊಳ್ಳಲಿದ್ದಾರೆ. ಇದಲ್ಲದೆ, ಅವರು ಮುಂಬರುವ ಚಿತ್ರ 'ದಿಲ್ ಕಾ ದರ್ವಾಜಾ ಖೋಲ್ ನಾ ಡಾರ್ಲಿಂಗ್' ನಲ್ಲಿ ಜಯಾ ಬಚ್ಚನ್ ಮತ್ತು ವಾಮಿಕಾ ಗಬ್ಬಿ ಅವರೊಂದಿಗೆ ಕೆಲಸ ಮಾಡುತ್ತಿದ್ದಾರೆ. ಈ ಎರಡೂ ಚಿತ್ರಗಳ ಬಿಡುಗಡೆ ದಿನಾಂಕ ಇನ್ನೂ ಘೋಷಣೆಯಾಗಿಲ್ಲ. ಸಾರಾ ತೆಂಡೂಲ್ಕರ್ ಬಾಲಿವುಡ್‌ಗೆ ಪಾದಾರ್ಪಣೆ ಮಾಡದಿದ್ದರೂ, ಸಾಮಾಜಿಕ ಮಾಧ್ಯಮದಲ್ಲಿ ಅವರಿಗೆ ಅಪಾರ ಅಭಿಮಾನಿಗಳಿದ್ದಾರೆ. ಅವರು ತಮ್ಮ ಸೌಂದರ್ಯ ಮತ್ತು ಸೊಗಸಾದ ನೋಟದಿಂದಾಗಿ ಮಾಡೆಲಿಂಗ್‌ನಲ್ಲಿ ಸಕ್ರಿಯರಾಗಿದ್ದಾರೆ. ಸಾರಾ ಪ್ರಸ್ತುತ ಕೆಲವು ಬ್ರಾಂಡ್ ಜಾಹೀರಾತುಗಳಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ ಮತ್ತು ಅವರು ಬಾಲಿವುಡ್‌ಗೆ ಪಾದಾರ್ಪಣೆ ಮಾಡುತ್ತಾರೆಯೇ ಎಂದು ಅಭಿಮಾನಿಗಳು ಇದೀಗ ಅವಳ ಎಂಟ್ರಿಗೆ ಕಾಯುತ್ತಿದ್ದಾರೆ.

## ಸಮಂತಾ ನಿರ್ಮಾಣದ 'ಶುಭಂ' ಚಿತ್ರದ ಸಾಂಗ್ ರಿಲೀಸ್



ಸಮಂತಾ ನಿರ್ಮಾಣದ 'ಶುಭಂ' ಸಿನಿಮಾದ ಸಾಂಗ್ ರಿಲೀಸ್ ಆಗಿದೆ. ಇದರ ಪ್ರಮೋಷನಲ್ ಹಾಡಿನಲ್ಲಿ ಸಮಂತಾ ಕೂಡ ಹೆಜ್ಜೆ ಹಾಕಿದ್ದಾರೆ. ಯೂಟ್ಯೂಬ್‌ನಲ್ಲಿ ಈ ಚಿತ್ರದ ಹಾಡು ಭರ್ಜರಿ ವಿವ್ಸ್ ಗಿಟ್ಟಿಸಿಕೊಳ್ತಿದೆ.

ಹೊಸ ಪ್ರತಿಭೆಗಳಿಗೆ ಅವಕಾಶ ಕೊಡಬೇಕು ಎಂಬ ನಿಟ್ಟಿನಲ್ಲಿ ಸಮಂತಾ ಚಿತ್ರ ನಿರ್ಮಾಣ ಸಂಸ್ಥೆ ಶುರು ಮಾಡಿದ್ದಾರೆ. ಈ ನಿರ್ಮಾಣ ಸಂಸ್ಥೆಯ ಮೂಲಕ 'ಶುಭಂ' ಚಿತ್ರವನ್ನು ನಟಿ ನಿರ್ಮಾಣ ಮಾಡಿ ಹೊಸ ಪ್ರತಿಭೆಗಳಿಗೆ ಅವಕಾಶ ನೀಡಿದ್ದಾರೆ. ಹೀಗಾಗಿ ವಿಶೇಷ ಪಾತ್ರ ಮಾಡುವ ಮೂಲಕ ಚಿತ್ರತಂಡ ಸಾಥ್ ನೀಡಿದ್ದಲ್ಲದೇ ಈಗ ಹಾಡೋದಕ್ಕೆ ಹೆಜ್ಜೆ ಹಾಕಿದ್ದಾರೆ. 'ಜನ್ಮ ಜನ್ಮಮಲಾ ಬಂಧಂ' ಹಾಡಿನಲ್ಲಿ ಹೊಸ ಪ್ರತಿಭೆಗಳ ಜೊತೆ ಸಮಂತಾ ಕೂಡ ಡ್ಯಾನ್ಸ್ ಮಾಡಿದ್ದಾರೆ. ಮಸ್ತ್ ಆಗಿ ಹೆಜ್ಜೆ ಹಾಕಿರೋ ನಟಿಯನ್ನು ನೋಡಿ ಫ್ಯಾನ್ಸ್ ಖುಷಿಪಟ್ಟಿದ್ದಾರೆ. ನಿಮ್ಮಗೋಸ್ಕರ ಈ ಚಿತ್ರವನ್ನು ನಾವು ನೋಡ್ತೀವಿ ಎಂದೆಲ್ಲಾ ಸೋಷಿಯಲ್ ಮೀಡಿಯಾದಲ್ಲಿ ಕಾಮೆಂಟ್ ಮಾಡಿದ್ದಾರೆ.

'ಶುಭಂ' ಚಿತ್ರ ಹಾರರ್ ಕಾಮಿಡಿ ಶೈಲಿಯಲ್ಲಿ ಮೂಡಿ ಬಂದಿದೆ. ಹೊಸದಾಗಿ ಮದುವೆಯಾದ ಗಂಡಸರು, ತಮ್ಮ ಹೆಂಡ್ತಿಯನ್ನು ಕಂಟ್ರೋಲ್‌ನಲ್ಲಿ ಇಡಬೇಕು ಎಂದು ಬಯಸುತ್ತಾರೆ. ಆದರೆ ಅದು ನಡೆಯೋದು ರಾತ್ರಿ 9 ಗಂಟೆವರೆಗೂ ಮಾತ್ರವೇ ಆಗಿರುತ್ತದೆ. ಏಕೆಂದರೆ 9 ಗಂಟೆಗೆ ಶುರುವಾಗುವ ಸೀರಿಯಲ್ ನೋಡೋದ್ರಿಂದ ಪತ್ನಿಯರೆಲ್ಲ ಹೇಗೆ ದೆವ್ವ ಆಗುತ್ತಾರೆ. ಇದೇ ಈ ಸಿನಿಮಾ ಇಂಟೆಸ್ಟಿಂಗ್ ಕಥೆಯಾಗಿದೆ. ಇದರಲ್ಲಿ ನಟಿ ಸಮಂತಾ ಮಂತ್ರವಾದಿ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಧಾರಾವಾಹಿಗೂ, ದೆವ್ವದ ಕಾಟಕ್ಕೂ ಏನು ಸಂಬಂಧ ಎಂಬುದನ್ನು ತಿಳಿಯುವ ಕೌತುಕ ಪ್ರೇಕ್ಷಕರಲ್ಲಿ ಮೂಡಿದೆ. ಮೇ 9ರಂದು ಸಮಂತಾ ನಿರ್ಮಾಣದ 'ಶುಭಂ' ಸಿನಿಮಾ ಬಿಡುಗಡೆ ಆಗಲಿದೆ. ಅದರಲ್ಲಿ ನಟಿ ಅತಿಥಿ ಪಾತ್ರ ನಿರ್ವಹಿಸಿದ್ದಾರೆ.

## ಏಪ್ರಿಲ್2025ರಲ್ಲಿ ಹೋಂಡಾ ಮೋಟಾರ್ ಸೈಕಲ್ ಸ್ಕೂಟರ್ಇಂಡಿಯಾ 4,80,896 ಯುನಿಟ್‌ಗಳ ಮಾರಾಟ



ಹೋಂಡಾ ಮೋಟಾರ್ ಸೈಕಲ್ ಮತ್ತು ಸ್ಕೂಟರ್ ಇಂಡಿಯಾ ಏಪ್ರಿಲ್ 2025ರ ಮಾರಾಟ ಅಂಕಿಅಂಶಗಳನ್ನು ಪ್ರಕಟಿಸಿದೆ.

ಏಪ್ರಿಲ್ 2025ರಲ್ಲಿ ಕಂಪನಿಯ ಒಟ್ಟು ಮಾರಾಟ 4,80,896 ಯುನಿಟ್‌ಗಳಾಗಿದ್ದು, ಇದರಲ್ಲಿ ದೇಶೀಯ ಮಾರಾಟ 4,22,931 ಯುನಿಟ್ಗಳು ಮತ್ತು ರಫ್ತು 57,965 ಯುನಿಟ್ಗಳು ಸೇರಿವೆ.

ಉತ್ಪನ್ನ: ಎಚ್.ಎಂ.ಎಸ್.ಐ, ಸುಧಾರಿತ ಹೊಸ ವೈಶಿಷ್ಟಗಳೊಂದಿಗೆ Dio 125ನ ನವೀಕರಿಸಿದ OBD2B ಕಂಪ್ಲೈಂಟ್ ಆವೃತ್ತಿಗಳನ್ನು ಪರಿಚಯಿಸಿತು. ಇದಲ್ಲದೆ, 2025 CB350, CB350 H'ness ಮತ್ತು CB350RS ಬಿಡುಗಡೆಯೊಂದಿಗೆ ಕಂಪನಿಯ ಪ್ರೀಮಿಯಂ ಮೋಟಾರ್ ಸೈಕಲ್ ಪೋರ್ಟ್‌ಫೋಲಿಯೊವನ್ನು ಮತ್ತಷ್ಟು ಬಲಪಡಿಸಲಾಗಿದ್ದು, ಇವು ಆಕರ್ಷಕ ಹೊಸ ಬಣ್ಣಗಳನ್ನು ಒಳಗೊಂಡಿವೆ. ಜಾಗತಿಕ ಮಾರುಕಟ್ಟೆಯ ಕ್ರಿಯೆಯೊಂದಿಗೆ ಹೊಂದಿಕೊಂಡು, ಎಚ್.ಎಂ.ಎಸ್.ಐ 2018ರಿಂದ 2020ರ ನಡುವೆ ತಯಾರಿಸಿದ ಕೆಲವು ಘಟಕಗಳಿಗೆ ತನ್ನ CB350RS ಮೋಟಾರ್ಸೈಕಲ್ಗಾಗಿ ಸ್ವಯಂ ಪ್ರೇರಿತ ಹಿಂಪಡೆಯುವಿಕೆಯನ್ನು ಸಹ ಘೋಷಿಸಿತು.

**ರಸ್ತೆ ಸುರಕ್ಷತೆ:** ಎಚ್.ಎಂ.ಎಸ್.ಐ ಭಾರತದಾದ್ಯಂತರಸ್ತೆ ಸುರಕ್ಷತೆ ಕುರಿತು ಅರಿವು ಹಾಗೂ ಜಾಗೃತಿ ಮೂಡಿಸುತ್ತ, 12 ಸ್ಥಳಗಳಲ್ಲಿ ಅಭಿಯಾನಗಳನ್ನು ಉತ್ತೇಜಿಸಿತು - ನವಸಾರಿ (ಗುಜರಾತ್), ಯೋಲ್‌ಕ್ಯಾಂಟ್. (ಹಿಮಾಚಲ ಪ್ರದೇಶ), ರಾಜಪಾಳಯಂ (ತಮಿಳುನಾಡು), ರಾಂಚಿ (ಜಾರ್ಖಂಡ್), ಬೆಂಗ್ಲುಬಿ (ಪಶ್ಚಿಮ ಬಂಗಾಳ), ಗ್ವಾಲಿಯರ್ (ಮಧ್ಯಪ್ರದೇಶ), ಪುಣೆ (ಮಹಾರಾಷ್ಟ್ರ), ವಾರಣಾಸಿ (ಉತ್ತರ ಪ್ರದೇಶ), ಅನಂತಪುರ (ಆಂಧ್ರ ಪ್ರದೇಶ), ತಿರುವಳ್ಳೂರು (ತಮಿಳುನಾಡು), ಜೈಪುರ (ರಾಜಸ್ಥಾನ) ಮತ್ತು ನವದೆಹಲಿ. ಹೆಚ್ಚುವರಿಯಾಗಿ, ಎಚ್.ಎಂ.ಎಸ್.ಐ ಹೈದರಾಬಾದ್ನಲ್ಲಿರುವತನ್ನ ಸಂಚಾರತರಬೇತಿ ಪಾರ್ಕ್ನ 10 ನೇ ವಾರ್ಷಿಕೋತ್ಸವವನ್ನು ಆಚರಿಸಿತು.

**ಸಿಎಸ್‌ಆರ್:** ಹೋಂಡಾಇಂಡಿಯಾ ಫೌಂಡೇಶನ್ (ಎಚ್ಐಎಫ್) ಶಿಲ್ಲಾಂಗ್ನಲ್ಲಿ ತರಬೇತಿಕಾರ್ಯಕ್ರಮದ ಯಶಸ್ವಿ ಸಮಾರೋಪ ಗುರುತಿಸಲು ಮೇಘಾಲಯದ ಶಿಲ್ಲಾಂಗ್ನಲ್ಲಿ ಪ್ರಾಜೆಕ್ಟ್ ಬುನಿಯಾಡ್ನ ಸಮಾರೋಪ ಸಮಾರಂಭ ನಡೆಸಿತು. ಇದು ಅರ್ಥಪೂರ್ಣ ಉದ್ಯೋಗಾವಕಾಶಗಳಿಗೆ ದಾರಿ ಮಾಡಿಕೊಟ್ಟಿತು. 30 ಫಲಾನುಭವಿಗಳು ವೃತ್ತಿಕುರಿತಾದ ಉದ್ಯೋಗ ಪತ್ರಗಳನ್ನು ಸ್ವೀಕರಿಸಿದರು.

**ಮೋಟಾರ್ ಸ್ಪೋರ್ಟ್ಸ್:** ಏಪ್ರಿಲ್2025ರಲ್ಲಿ ಮೋಟೋಜಿಪಿ ಕತಾರ್ ಮತ್ತು ಸ್ಪೇನ್ನಲ್ಲಿ ನಡೆಯಿತು. ಕತಾರ್‌ಜಿಪಿಯಲ್ಲಿ ಮರಿನಿ ಹೆಚ್ಚಿನ ಅಂಕಗಳನ್ನು ಗಳಿಸಿದರು. ಕಳೆದ ವರ್ಷಕ್ಕಿಂತತನ್ನ ಅಂಕಗಳನ್ನು ದ್ವಿಗುಣಗೊಳಿಸಿರುವ ಲುಕಾ ಮರಿನಿ ಪ್ರಭಾವಶಾಲಿ ಸ್ಪಾನಿಷ್ ಗ್ರಾಂಡ್ ಪ್ರಿಕ್ಸ್‌ಅನ್ನು ಒಟ್ಟುಗೂಡಿಸಿ ಸತತ ನಾಲ್ಕು ಟಾಪ್‌ಟೆನ್ ಸ್ಥಾನಗಳನ್ನು ಗಳಿಸಿದರು. ಜೋನ್ ಮಿರ್ ಮತ್ತೆ ಉತ್ತಮ ಪ್ರದರ್ಶನ ತೋರಲು ಯತ್ನಿಸಿದರೂ ಕೊನೆಯಲ್ಲಿ ನಿಯಂತ್ರಣ ಕಳೆದುಕೊಂಡರು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

**ಮೇಷ:** ಅತಿಯಾದ ಒಳ್ಳೆಯತನ, ಸ್ಥಿರಾಸ್ತಿ ತಗಾದೆ, ಬೇಜವಾಬ್ದಾರಿತನದಿಂದ ಸಂಕಷ್ಟ, ಮನಸ್ಸಿಗೆ ಬಾಧೆ, ಆರೋಗ್ಯ ಸಮಸ್ಯೆ.

**ವೃಷಭ:** ಮಿತ್ರರಿಂದ ನಷ್ಟ, ಪಾಲುದಾರಿಕೆ ವ್ಯವಹಾರದಲ್ಲಿ ಕಿರಿಕಿರಿ, ನಿದ್ರಾಭಂಗ, ಕುಟುಂಬದಲ್ಲಿ ಆತಂಕ.

**ಮಿಥುನ:** ಅನ್ಯ ಜನರಲ್ಲಿ ವೈಮನಸ್ಸು, ಅನಾವಶ್ಯಕ ಮಾತುಗಳಿಂದ ದೂರವಿರಿ, ಆದಾಯ ಕಡಿಮೆ ಖರ್ಚು ಜಾಸ್ತಿ.

**ಕಟಕ:** ಪುಣ್ಯಕ್ಷೇತ್ರ ದರ್ಶನ, ದೂರಾಲೋಚನೆ, ಅನಾರೋಗ್ಯ, ಸಣ್ಣಪುಟ್ಟ ವಿಚಾರಗಳಿಂದ ಮನಸ್ತಾಪ.

**ಸಿಂಹ:** ಮನೆಯಲ್ಲಿ ಸಂತಸ, ಹಿರಿಯರಲ್ಲಿ ಭಕ್ತಿ, ಉತ್ತಮ ವಹಿವಾಟು, ನಿರುದ್ಯೋಗಿಗಳಿಗೆ ಉದ್ಯೋಗ ಅವಕಾಶ.

**ಕನ್ಯಾ:** ಶತ್ರುಗಳಿಂದ ತೊಂದರೆ, ಅಧಿಕ ಖರ್ಚು, ಚಂಚಲ ಮನಸ್ಸು, ಉದ್ಯೋಗದಲ್ಲಿ ಬಡ್ತಿ, ಪರರ ಧನಪ್ರಾಪ್ತಿ.

**ತುಲಾ:** ಬಂದು ಮಿತ್ರರ ಭೇಟಿ, ಅನ್ಯ ಜನರಲ್ಲಿ ಪ್ರೀತಿ, ವಿವಾಹ ಯೋಗ, ಶರೀರದಲ್ಲಿ ತಳಮಳ, ಪರಸ್ತ್ರೀಯಿಂದ ತೊಂದರೆ.

**ವೃಶ್ಚಿಕ:** ಕೆಲಸ ಕಾರ್ಯಗಳಲ್ಲಿ ವಿಘ್ನ, ಸ್ಥಳ ಬದಲಾವಣೆ, ಹಣಕಾಸಿನ ತೊಂದರೆ, ವಾಹನದಿಂದ ಕಂಟಕ, ಮಾನಸಿಕ ಅಶಾಂತಿ.

**ಧನಸ್ಸು:** ಮಾನಸಿಕ ಒತ್ತಡ, ಪರಸ್ತ್ರೀ ಸಹವಾಸ, ಸೌಜನ್ಯದಿಂದ ವರ್ತಿಸಿ, ವ್ಯರ್ಥ ಧನ ಹಾನಿ, ಅನೇಕ ವಿಷಯಗಳಲ್ಲಿ ತೊಂದರೆ.

**ಮಕರ:** ಅತಿಯಾದ ಭಯ, ವಾದ ವಿವಾದ, ಮಿತ್ರರ ಬೆಂಬಲ, ಅತಿಯಾದ ಆತ್ಮವಿಶ್ವಾಸ ಒಳ್ಳೆಯದಲ್ಲ, ಅಕಾಲ ಭೋಜನ.

**ಕುಂಭ:** ಹಿತ ಶತ್ರು ಬಾಧೆ, ಎಷ್ಟೇ ಒತ್ತಡವಿದ್ದರೂ ವಿವೇಚನೆ ಕಳೆದುಕೊಳ್ಳಬೇಡಿ, ಮಾತಾಪಿತರಲ್ಲಿ ಪ್ರೀತಿ.

**ಮೀನ:** ವಿಧೇಯತೆಯೇ ಯಶಸ್ಸಿನ ಮೆಟ್ಟಿಲು, ಅನಾವಶ್ಯಕ ವೆಚ್ಚ, ಕಾರ್ಯ ವಿಕಲ್ಪ, ಪರರಿಗೆ ಸಹಾಯ, ಮಹಿಳೆಯರಿಗೆ ಶುಭ.

## ವಿಶ್ವ ಕೈ ನೈರ್ಮಲ್ಯ ದಿನ

ನಾವು ಮೇ 5 ರಂದು ವಿಶ್ವ ಕೈ ನೈರ್ಮಲ್ಯ ದಿನವನ್ನು ಆಚರಿಸುತ್ತಿದ್ದೇವೆ. ನಮ್ಮ ಸುತ್ತಲಿನ ಸೂಕ್ಷ್ಮಜೀವಿಗಳಿಂದ ಉಂಟಾಗುವ ಹಲವಾರು ಮಾರಕ ಮತ್ತು ಅಪಾಯಕಾರಿ ರೋಗಗಳಿವೆ. ಅವೆಲ್ಲವೂ ಒಂದಲ್ಲ ಒಂದು ರೀತಿಯಲ್ಲಿ ನಮ್ಮೊಳಗೆ ಪ್ರವೇಶಿಸಲು ಪ್ರಯತ್ನಿಸುತ್ತಿವೆ, ಅದು ನಮ್ಮ ಕೈಗಳ ಮೂಲಕ ಸುಲಭವಾಗಿ ಸಂಭವಿಸಬಹುದು. ಕೈ ನೈರ್ಮಲ್ಯವು ಅಂತಹ ಸೂಕ್ಷ್ಮಜೀವಿಗಳ ದಾಳಿಯ ವಿರುದ್ಧ ಅತ್ಯುತ್ತಮ ರಕ್ಷಣೆಯಾಗಿದೆ. ಇದನ್ನು ಅರ್ಥಮಾಡಿಕೊಂಡ ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯೂಎಚ್‌ಒ) ಆರೋಗ್ಯ ರಕ್ಷಣೆಯಲ್ಲಿ ಕೈ ನೈರ್ಮಲ್ಯದ ಮಹತ್ವವನ್ನು ಹರಡಲು ಅಭಿಯಾನವನ್ನು ಪ್ರಾರಂಭಿಸಿತು.

ಮಾರಕ ರೋಗಗಳು ಯಾವಾಗಲೂ ನಮ್ಮ ಜಗತ್ತನ್ನು ಪೀಡಿಸುತ್ತಿವೆ. ಕೆಲವು ವಿಜ್ಞಾನಿಗಳು ಪ್ರಮುಖ ಸಾಮೂಹಿಕ ಅಳಿವಿನ ಘಟನೆಗಳಲ್ಲಿ ಒಂದು ಸೂಕ್ಷ್ಮಜೀವಿಗಳಿಂದ ಉಂಟಾಗಿರಬಹುದು ಎಂದು ನಂಬುತ್ತಾರೆ. ನಾವು ಒಂದನ್ನು ಎದುರಿಸುತ್ತೇವೆ ಮತ್ತು ಇದ್ದಕ್ಕಿದ್ದಂತೆ ಇನ್ನೊಂದು ಕಾಣಿಸಿಕೊಳ್ಳುತ್ತದೆ. ಇದು ನಮ್ಮ ಸಮಾಜದ ಆರಂಭದಿಂದಲೂ ನಡೆಯುತ್ತಿದೆ. ಬ್ಯಾಕ್ಟೀರಿಯಾ ಮತ್ತು ವೈರಸ್‌ಗಳು ಕೈ ತೊಳೆಯುವುದನ್ನು ನಾವು ಕಂಡುಹಿಡಿಯುವವರೆಗೂ ನಮ್ಮ ಶವಗಳ ಮೇಲೆ ಬಹಳ ಸಮಯದಿಂದ ನೃತ್ಯ ಮಾಡುತ್ತಿವೆ.

ಅನೇಕ ಧಾರ್ಮಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಕೈ ತೊಳೆಯುವುದು ಸೇರಿದೆ. ಆದರೆ 1846 ರವರೆಗೆ ನಾವು ಕೈ ತೊಳೆಯುವುದು ಮತ್ತು ರೋಗ ಹರಡುವಿಕೆಯ ನಡುವಿನ ಸಂಬಂಧವನ್ನು ಎಂದಿಗೂ ಮಾಡಲಿಲ್ಲ. ಇಗ್ನಾಜ್ ಸೆಮ್ಮೆಲ್ವೀಸ್ ಹಂಗೇರಿಯನ್ ವೈದ್ಯರಾಗಿದ್ದು, ಅವರು ಕೈ ನೈರ್ಮಲ್ಯ ಮತ್ತು ರೋಗ ಹರಡುವಿಕೆಯ ನಡುವಿನ ಸಂಬಂಧವನ್ನು ಗಮನಿಸಿದರು. ಅವರ ಆಸ್ಪತ್ರೆಯ ಹೆರಿಗೆ ವಾರ್ಡ್‌ನಲ್ಲಿ ಹೆರಿಗೆಯಾಗುವ ಮಹಿಳೆಯರು ಪಕ್ಕದ ವಾರ್ಡ್‌ಗಿಂತ ಜ್ವರದಿಂದ ಸಾಯುವ ಸಾಧ್ಯತೆ ಹೆಚ್ಚು ಎಂದು ಅವರು ಗಮನಿಸಿದರು. ಪಕ್ಕದ ಹೆರಿಗೆ ವಾರ್ಡ್ ಅನ್ನು ಶುಶ್ರೂಷಕಿಯರೇ ನಡೆಸುತ್ತಿದ್ದರು. ಹೆರಿಗೆ ವಾರ್ಡ್‌ಗೆ ಭೇಟಿ ನೀಡುವ ವೈದ್ಯರು ಹೆಚ್ಚಾಗಿ ಶವಪರೀಕ್ಷೆಗಳನ್ನು ನಡೆಸುತ್ತಿದ್ದರು ಮತ್ತು ಬಹುಶಃ ಅವರ ಕೈಯಲ್ಲಿ ಶವದ ಕಣಗಳನ್ನು ಹೊತ್ತೊಯ್ಯುತ್ತಿದ್ದರು ಎಂದು ಸೆಮ್ಮೆಲ್‌ವೈಸ್ ಕಂಡುಕೊಂಡರು. ಶುಶ್ರೂಷಕಿಯರು ಶವಪರೀಕ್ಷೆಗಳನ್ನು ನಡೆಸಲಿಲ್ಲ ಮತ್ತು ಅವರ ಕೈಗಳು ಸ್ವಚ್ಛವಾಗಿದ್ದವು. ಸೆಮ್ಮೆಲ್‌ವೈಸ್ ಕ್ಲೋರಿನ್‌ನೊಂದಿಗೆ ಕೈ ತೊಳೆಯುವಿಕೆಯನ್ನು ಜಾರಿಗೆ ತಂದಾಗ, ಸಾವಿನ ಸಂಖ್ಯೆ ತೀವ್ರವಾಗಿ ಕಡಿಮೆಯಾಯಿತು. ಆದಾಗ್ಯೂ, ದುಃಖಕರವೆಂದರೆ, ಈ ವಿಧಾನವು ವೈದ್ಯಕೀಯ ಸಮುದಾಯದಲ್ಲಿ ಜನಪ್ರಿಯವಾಗಲಿಲ್ಲ.

1980 ರಲ್ಲಿ, ಆಹಾರದಿಂದ ಹರಡುವ ಸಾಂಕ್ರಾಮಿಕ ರೋಗಗಳು ಸಂಭವಿಸಿದಾಗ, ಯುನೈಟೆಡ್ ಸ್ಟೇಟ್ಸ್ ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ (ಸಿ.ಡಿ.ಸಿ.) ಕೈ ತೊಳೆಯುವ ಮಹತ್ವವನ್ನು ಅರಿತುಕೊಂಡರು. ಅವರು ಕೈ ತೊಳೆಯುವ ಅಭ್ಯಾಸವನ್ನು ಪ್ರಾರಂಭಿಸಿದರು. ಈ ಬಾರಿ, ಎಲ್ಲರೂ ಇದನ್ನು ಅನುಸರಿಸಿದರು. ಇತ್ತೀಚಿನ ವರ್ಷಗಳಲ್ಲಿ, ಕೈ ತೊಳೆಯಲು ಸೋಪಿನ ಬಳಕೆಯು ಸಂಪೂರ್ಣ ಜನಪ್ರಿಯತೆಯನ್ನು ಗಳಿಸಿದೆ. ಸೋಪುಗಳು ಈ ಅಭ್ಯಾಸವನ್ನು ಪರಿಣಾಮಕಾರಿ ಮತ್ತು ವೆಚ್ಚ-ಪರಿಣಾಮಕಾರಿಯನ್ನಾಗಿ ಮಾಡಿದವು.

# ಶ್ರೀರಾಮನನ್ನು ಅವಮಾನಿಸಿ ಬಿಜೆಪಿಯ ಕೆಂಗಣ್ಣಿಗೆ ಗುರಿಯಾದ ರಾಹುಲ್ ಗಾಂಧಿ



ನವದೆಹಲಿ:ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿ ನಡೆದ ಬಳಿಕ ಕಾಂಗ್ರೆಸ್ ನಾಯಕರ ನೀಡುತ್ತಿರುವ ಕೆಲವೊಂದು ಹೇಳಿಕೆಗಳು ಬಿಜೆಪಿ ನಾಯಕರ ಆಕ್ರೋಶಕ್ಕೆ ಕಾರಣವಾಗುತ್ತಿದೆ. ಇದೀಗ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಶ್ರೀರಾಮನನ್ನು ಅವಮಾನಿಸಿ ಬಿಜೆಪಿಯ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ಶ್ರೀರಾಮನನ್ನು ಕಾಲ್ಪನಿಕ ಎಂದು ಕರೆದಿರುವ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ತೀವ್ರ ವಾಗ್ದಾಳಿ ನಡೆಸಿದೆ. ಹಿಂದೂಗಳನ್ನು ಮತ್ತು ಶ್ರೀರಾಮನನ್ನು ಅವಮಾನಿಸುವುದು ಕಾಂಗ್ರೆಸ್‌ನ ಚಾಳಿ ಎಂದು ಬಿಜೆಪಿ ನಾಯಕರು ಟೀಕಿಸಿದ್ದಾರೆ. ಅಮೆರಿಕದ ಬ್ರೌನ್ ವಿಶ್ವವಿದ್ಯಾಲಯದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಶ್ರೀರಾಮ ಸೇರಿದಂತೆ ಭಾರತೀಯ ದೇವತೆಗಳನ್ನು ಕಾಲ್ಪನಿಕ ವ್ಯಕ್ತಿಗಳೆಂದು ಹೇಳಿದ್ದರು. ಈ ಹೇಳಿಕೆ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಬಿಜೆಪಿ ನಾಯಕರ ಕೆಂಗಣ್ಣಿಗೆ ಗುರಿಯಾಗಿದೆ.

ವೈರಲ್ ಆಗಿರುವ ವಿಡಿಯೊ ಕ್ಲಿಪ್‌ನಲ್ಲಿ ರಾಹುಲ್ ಗಾಂಧಿ, ಎಲ್ಲರೂ ಕಾಲ್ಪನಿಕ ವ್ಯಕ್ತಿಗಳು. ಶ್ರೀರಾಮನು ಆ ರೀತಿಯ ವ್ಯಕ್ತಿ. ಅಲ್ಲಿ ಅವನು ಕ್ಷಮಿಸುತ್ತಿದ್ದನು, ಅವನು ಕರುಣಾಮಯಿಯಾಗಿದ್ದನು ಎಂದು ಹೇಳಿರುವುದು ಸೆರೆಯಾಗಿದೆ. ಈ ವಿಡಿಯೋ ವೈರಲ್ ಆಗುತ್ತಿದ್ದಂತೆ ಹಲವಾರು ಭಾರತೀಯ ಜನತಾ ಪಕ್ಷದ ನಾಯಕರು ರಾಹುಲ್ ಗಾಂಧಿಯವರನ್ನು ಟೀಕಿಸಲು ಪ್ರಾರಂಭಿಸಿದ್ದಾರೆ. ಈ ವಿಡಿಯೋದ ಒಂದು ಭಾಗವನ್ನು ಹಂಚಿಕೊಂಡ ಬಿಜೆಪಿ ವಕ್ತಾರ ಶೆಹಜಾದ್ ಪೂನವಾಲಾ, ಭಗವಾನ್ ರಾಮನ ಅಸ್ತಿತ್ವವನ್ನು ಅನುಮಾನಿಸಿದ್ದಕ್ಕಾಗಿ ದೇಶವು ಗಾಂಧಿಯವರನ್ನು ಎಂದಿಗೂ ಕ್ಷಮಿಸುವುದಿಲ್ಲ ಎಂದು ಹೇಳಿದ್ದಾರೆ.

# ಇಂಡಿಗೋ ಫ್ಲೈಟ್ ನಲ್ಲಿ ಮಹಿಳಾ ಸಿಬ್ಬಂದಿಗೆ ಲೈಂಗಿಕ ದೌರ್ಜನ್ಯ

**ಶಿರಡಿ:** ದೆಹಲಿಯಿಂದ ಶಿರಡಿಗೆ ಆಗಮಿಸುತ್ತಿದ್ದ ಇಂಡಿಗೋ ವಿಮಾನದಲ್ಲಿ ಪ್ರಯಾಣಿಕನೋರ್ವ ಮಹಿಳಾ ಸಿಬ್ಬಂದಿಗೆ ಅಸಭ್ಯವಾಗಿ ಸ್ಪರ್ಶಿಸಿ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಕೇಳಿಬಂದಿದ್ದು, ಆತನ ವಿರುದ್ಧ ಪ್ರಕರಣ ದಾಖಲಾಗಿದೆ. ಈ ಘಟನೆ ಶುಕ್ರವಾರ (ಮೇ 2) ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ.

ಆರೋಪಿಯನ್ನು ರಾಜಸ್ಥಾನದ ಚುರು ಜಿಲ್ಲೆಯ ಸಂದೀಪ್ ಸುಮೇರ್ ಸಿಂಗ್ ಎಂದು ಗುರುತಿಸಲಾಗಿದೆ. ವಿಮಾನದ ಮಹಿಳಾ ಸಿಬ್ಬಂದಿಯಿಂದ ಈ ಕುರಿತಂತೆ ಫೋನ್ ಕರೆ ಸ್ವೀಕರಿಸುತ್ತಿದ್ದಂತೆ ಇಂಡಿಗೋ ಪ್ರತಿನಿಧಿ ಸಂತೋಷ್ ಚೌರೆ ಅವರು ರಹತಾ ಪೊಲೀಸ್ ಠಾಣೆಯಲ್ಲಿ ಈ ಕುರಿತಂತೆ ದೂರು ನೀಡಿದರು. ಈ ಆರೋಪಿಯ ಹೆಸರು ಸಂದೀಪ್ ಸುಮೇರ್ ಸಿಂಗ್ ಆಗಿದ್ದು, ಈತನದ್ದು ರಾಜಸ್ಥಾನದ ಚುರು ಜಿಲ್ಲೆ ಎಂದು ತಿಳಿಯಿತು ಎಂದು ವರದಿಯಾಗಿದೆ.

ನವದೆಹಲಿಯಿಂದ ಶಿರಡಿಗೆ ಇಂಡಿಗೋ ಫ್ಲೈಟ್ ನಲ್ಲಿ ಪ್ರಯಾಣಿಸುತ್ತಿದ್ದ ಸಂದರ್ಭದಲ್ಲಿ ಸಂದೀಪ್ ಎರಡು ಬಾರಿ ತನ್ನನ್ನು ಅಸಭ್ಯವಾಗಿ ಸ್ಪರ್ಶಿಸಿದರು ಎಂದು ಇಂಡಿಗೋ ಸಂಸ್ಥೆಗೆ ಸಂತ್ರಸ್ತ ಮಹಿಳಾ ಸಿಬ್ಬಂದಿ ದೂರು ನೀಡಿದರು. ಈ ಹಿನ್ನೆಲೆ ವಿಮಾನ ಶಿರಡಿಯ ಅಂತಾರಾಷ್ಟ್ರೀಯ ಏರ್ ಪೋರ್ಟ್ ತಲುಪುವ ಮುನ್ನವೇ ಸಂಸ್ಥೆಯ ಪ್ರತಿನಿಧಿ ಸಂತೋಷ್ ಚೌರೆ ಅವರು ರಹತಾ ಪೊಲೀಸ್ ಠಾಣೆಗೆ ದೌಡಾಯಿಸಿ ದೂರು ದಾಖಲಿಸಿದರು.

# ಭಾರತ ಶಸ್ತ್ರಾಸ್ತ್ರ ಕಾರ್ಖಾನೆಗಳ ಉದ್ಯೋಗಿಗಳಿಗೆ ರಜೆ ರದ್ದು

**ಮಧ್ಯ ಪ್ರದೇಶ/ಮಹಾರಾಷ್ಟ್ರ:** ಪಹಲ್ಗಾಮ್ ಹತ್ಯಾಕಾಂಡಕ್ಕೆ ಪ್ರತೀಕಾರ ತೀರಿಸಿಕೊಳ್ಳುವ ಸಿದ್ಧತೆಯಲ್ಲಿರುವ ಭಾರತ, ತನ್ನ ಸಶಸ್ತ್ರ ಪಡೆಗಳನ್ನು ಸಜ್ಜು ಮಾಡುತ್ತಿದೆ. ಈ ಪಡೆಗಳಿಗೆ ಬೇಕಾದ ಶಸ್ತ್ರಾಸ್ತ್ರಗಳನ್ನು ಸಿದ್ಧಪಡಿಸುವ ದೇಶದಲ್ಲಿನ ಕಾರ್ಖಾನೆಗಳ ಉದ್ಯೋಗಿಗಳಿಗೆ ರಜೆ ರದ್ದು ಮಾಡಲಾಗಿದೆ. ಮಹಾರಾಷ್ಟ್ರದ ಚಂದ್ರಾಪುರ ಜಿಲ್ಲೆಯಲ್ಲಿನ ಚಂದಾ ಆರ್ಡನೆನ್ಸ್ ಕಾರ್ಖಾನೆ, ಮಧ್ಯ ಪ್ರದೇಶದ ಜಬಲ್ಪುರದಲ್ಲಿನ ಶಸ್ತ್ರಾಸ್ತ್ರ ಕಾರ್ಖಾನೆಯ ಉದ್ಯೋಗಿಗಳಿಗೆ ತಮ್ಮ ರಜೆಯನ್ನು ಮುಂದಕ್ಕೆ ಹಾಕಿಕೊಳ್ಳುವಂತೆ ಸೂಚಿಸಲಾಗಿದೆ. ತಕ್ಷಣಕ್ಕೆ ಜಾರಿಯಲ್ಲಿರುವಂತೆ ಎಲ್ಲ ರೀತಿಯ ರಜೆಗಳು ರದ್ದಾಗಲಿವೆ ಎಂದು ಕಾರ್ಖಾನೆಗಳ ಆಡಳಿತ ಮಂಡಳಿ ಸುತ್ತೋಲೆ ಹೊರಡಿಸಿದೆ. ಮಹಾರಾಷ್ಟ್ರದ ಚಂದ್ರಾಪುರ ಜಿಲ್ಲೆಯ ಚಂದಾ ಆರ್ಡನೆನ್ಸ್ ಕಾರ್ಖಾನೆಯು ಶುಕ್ರವಾರ ರಜೆ ರದ್ದು ಮಾಡಿರುವ ಬಗ್ಗೆ ಸುತ್ತೋಲೆ ಹೊರಡಿಸಿದೆ. ರಾಷ್ಟ್ರೀಯ ಭದ್ರತೆ ಮತ್ತು ಕಾರ್ಯಾಚರಣೆಯ ತುರ್ತುಸ್ಥಿತಿಯ ಹಿತದೃಷ್ಟಿಯಿಂದ ಎಲ್ಲಾ ಉದ್ಯೋಗಿಗಳ ರಜೆಗಳನ್ನು ರದ್ದುಗೊಳಿಸಲಾಗಿದೆ. ಈಗಾಗಲೇ ರಜೆಯಲ್ಲಿರುವ ಮತ್ತು ರಜೆ ಪಡೆಯಲಿರುವ ಉದ್ಯೋಗಿಗಳು ಕರ್ತವ್ಯಕ್ಕೆ ಕಡ್ಡಾಯವಾಗಿ ಹಾಜರಾಗಬೇಕು ಎಂದು ಅದರಲ್ಲಿ ಸೂಚಿಸಿದೆ. ಮುನಿಷನ್ಸ್ ಇಂಡಿಯಾ ಲಿಮಿಟೆಡ್ (ಎಂಐಎಲ್) ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರ ಆದೇಶದಂತೆ, ತಕ್ಷಣದಿಂದಲೇ ಎಲ್ಲ ರೀತಿಯ ರಜೆಗಳು ರದ್ದಾಗಲಿವೆ. ಎಲ್ಲಾ ಉದ್ಯೋಗಿಗಳು ತಪ್ಪದೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಬೇಕು. ಈ ನಿರ್ಣಾಯಕ ಅವಧಿಯಲ್ಲಿ ರಾಷ್ಟ್ರೀಯ ಭದ್ರತೆ ಮತ್ತು ದೇಶ ಸೇವೆಗಾಗಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಸುತ್ತೋಲೆಯಲ್ಲಿ ಉಲ್ಲೇಖಿಸಲಾಗಿದೆ. ತುರ್ತು ಸಂದರ್ಭಗಳು ಹೊರತುಪಡಿಸಿ, ಬೇರಾವುದೇ ವಿಷಯಗಳಿಗೆ ರಜೆ ಇರುವುದಿಲ್ಲ ಎಂದೂ ತಿಳಿಸಲಾಗಿದೆ.

# ಗಡಿದಾಟಿ ಭಾರತದ ಒಳಗೆ ಬಂದ ಪಾಕ್ ಸೈನಿಕ: ಹೈ ಅಲರ್ಟ್

**ರಾಜಸ್ಥಾನ:** ಗಡಿಯಲ್ಲಿ ಪಾಕಿಸ್ತಾನಿ ಸೈನಿಕನನ್ನು ಗಡಿ ಭದ್ರತಾ ಪಡೆ ಸಿಬ್ಬಂದಿ ಬಂಧಿಸಿದ್ದು, ವಿಚಾರಣೆ ನಡೆಸುತ್ತಿದೆ. ಬಂಧಿತ ಪಾಕಿಸ್ತಾನಿ ಸೈನಿಕನ ವಿವರಗಳನ್ನು ಬಹಿರಂಗಪಡಿಸಲಾಗಿಲ್ಲ. ಗಡಿ ಭದ್ರತಾ ಪಡೆ ಪಾಕಿಸ್ತಾನಿ ಸೈನಿಕನನ್ನು ವಶಕ್ಕೆ ಪಡೆದಿದೆ ಎಂದು ಮೂಲಗಳು ತಿಳಿಸಿವೆ. ಏಪ್ರಿಲ್ 22, 2025 ರಂದು, ಜಮ್ಮು ಮತ್ತು ಕಾಶ್ಮೀರದ ಜನಪ್ರಿಯ ಪ್ರವಾಸಿ ತಾಣವಾದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಪ್ರವಾಸಿಗರ ಮೇಲೆ ದಾಳಿ ಮಾಡಿದರು. ಈ ದಾಳಿಯಲ್ಲಿ 26 ಅಮಾಯಕರು ಸಾವನ್ನಪ್ಪಿದ್ದರು. ಈ ಕ್ರೂರ ದಾಳಿಯು ಭಾರತ ಸೇರಿದಂತೆ ವಿಶ್ವದಾದ್ಯಂತ ಆಕ್ರೋಶಕ್ಕೆ ಕಾರಣವಾಗಿದೆ. ಪಾಕಿಸ್ತಾನ ಮೂಲದ ಲಷ್ಕರ್-ಎ-ತೊಯ್ಬಾ ಸಂಘಟನೆ ಭಾಗ ರೆಸಿಸ್ಟೆನ್ಸ್ ಫ್ರಂಟ್ ಈ ದಾಳಿಯ ಹೊಣೆಯನ್ನು ಹೊತ್ತುಕೊಂಡಿದೆ. ಈ ದಾಳಿಯಲ್ಲಿ ಪಾಕಿಸ್ತಾನದ ಕೈವಾಡವಿದೆ ಎಂದು ಭಾರತ ಆರೋಪಿಸುತ್ತಲೇ ಬಂದಿದೆ. ಇದರ ಜೊತೆಗೆ, ಪಾಕಿಸ್ತಾನದ ವಿರುದ್ಧ ಗಟ್ಟಿ ನಿರ್ಧಾರವನ್ನು ಭಾರತ ಸರ್ಕಾರ ಕೈಗೊಂಡಿದೆ. ಇದರಿಂದಾಗಿ ಎರಡೂ ದೇಶಗಳ ನಡುವೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಭಯೋತ್ಪಾದಕರು ಮತ್ತು ಅವರನ್ನು ಬೆಂಬಲಿಸುವವರ ವಿರುದ್ಧ ಸೂಕ್ತ ಪ್ರತಿಕ್ರಿಯೆ ನೀಡುವುದಾಗಿ ಭಾರತ ಭರವಸೆ ನೀಡಿದೆ. ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವಲ್ಲಿ ಭಾರತಕ್ಕೆ ವಿಶ್ವದಾದ್ಯಂತದ ಹಲವಾರು ದೇಶಗಳು ಬೆಂಬಲ ವ್ಯಕ್ತಪಡಿಸಿವೆ. ಪರಿಣಾಮವಾಗಿ, ಎರಡೂ ದೇಶಗಳು ಸೇನಾ ಕಾರ್ಯಾಚರಣೆಗಳನ್ನು ತೀವ್ರಗೊಳಿಸಿವೆ. ಯಾವುದೇ ಸಮಯದಲ್ಲಿ ಯುದ್ಧ ನಡೆಯಬಹುದು ಎಂದು ನಿರೀಕ್ಷಿಸಲಾಗಿದೆ.



# ರೇಬೀಸ್ ಲಸಿಕೆ ಪಡೆದರೂ ಚಿಕಿತ್ಸೆ ಪಡೆಯುತ್ತಿದ್ದ 7ರ ಬಾಲಕಿ ಸಾವು

**ತಿರುವನಂತಪುರಂ:** ರೇಬೀಸ್ ಲಸಿಕೆ ಪಡೆದರೂ ಚಿಕಿತ್ಸೆ ಪಡೆಯುತ್ತಿದ್ದ ಏಳು ವರ್ಷದ ಬಾಲಕಿ ಸಾವನ್ನಪ್ಪಿದ ಘಟನೆ ಕೇರಳದಲ್ಲಿ ನಡೆದಿದೆ. ಕೊಲ್ಲಂನ ಕುನ್ನಿಕೋಡ್‌ನ ನಿಯಾ ಫೈಸಲ್ ಮೃತ ಬಾಲಕಿ. ರೇಬೀಸ್ ಪತ್ತೆಯಾದ ಬಳಿಕ ಆಕೆಯನ್ನು ವೆಂಟಿಲೇಟರ್‌ನಲ್ಲಿ ಇಟ್ಟು ಚಿಕಿತ್ಸೆ ನೀಡಲಾಗುತ್ತಿತ್ತು. ಈ ಸಾವಿನೊಂದಿಗೆ ಕಳೆದ ಒಂದು ತಿಂಗಳೊಳಗೆ ಕೇರಳದಲ್ಲಿ ರೇಬೀಸ್ ಸೋಂಕಿನಿಂದ ಸಾವನ್ನಪ್ಪಿದ ಮಕ್ಕಳ ಸಂಖ್ಯೆ ಮೂರಕ್ಕೆ ಏರಿದೆ. ಏಪ್ರಿಲ್ 8 ರಂದು ಬಾಲಕಿ ಅಂಗಳದಲ್ಲಿ ಆಟವಾಡುತ್ತಿದ್ದಾಗ ಬೀದಿ ನಾಯಿ ಕಚ್ಚಿತ್ತು. ಅಂಗಳದಲ್ಲಿದ್ದ ಬಾತುಕೋಳಿ ಮೇಲೆ ದಾಳಿ ಮಾಡಲು ಮುಂದಾಗಿದ್ದಾಗ ಬಾಲಕಿ ರಕ್ಷಿಸಲು ಹೋಗಿದ್ದಳು. ಈ ವೇಳೆ ನಾಯಿ ಬಾಲಕಿಯ ಮೊಣಕೈಗೆ ಕಚ್ಚಿತ್ತು. ಬಾಲಕಿಯನ್ನು ಕೂಡಲೇ ವಿಲಕ್ಕುಡಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ರೇಬೀಸ್ ಲಸಿಕೆಯ ಮೊದಲ ಡೋಸ್ ನೀಡಲಾಯಿತು. ನಂತರ ಏ.11 ಮತ್ತು 15 ರಂದು ಕ್ರಮವಾಗಿ ಎರಡನೇ ಮತ್ತು ಮೂರನೇ ಡೋಸ್ ನೀಡಲಾಯಿತು. ಅಂತಿಮ ಡೋಸ್ ಅನ್ನು ಮೇ 6 ರಂದು ನೀಡಲು ನಿಗದಿಪಡಿಸಲಾಗಿತ್ತು. ಎರಡನೇ ಡೋಸ್ ಪಡೆದ ಕೆಲ ದಿನಗಳಲ್ಲಿ ಆಕೆಗೆ ಜ್ವರ ಬಂದಿದೆ. ನಾಯಿ ಕಚ್ಚಿದ ಮೊಣಕೈಯಲ್ಲಿ ನೋವು ಅನುಭವಿಸಲು ಪ್ರಾರಂಭಿಸಿದಳು. ನಂತರ ಆಕೆಯನ್ನು ಪುನಲೂರು ತಾಲ್ಲೂಕು ಆಸ್ಪತ್ರೆಗೆ ದಾಖಲಿಸಲಾಯಿತು ಮತ್ತು ನಂತರ ವಿಶೇಷ ಆರೈಕೆಗಾಗಿ SAT ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು. ಬಾಲಕಿಯನ್ನು ಕಚ್ಚಿದ್ದ ನಾಯಿಯನ್ನು ಸ್ಥಳೀಯ ನಿವಾಸಿಗಳು ಓಡಿಸಿದ್ದರೂ ಮರುದಿನ ಹತ್ತಿರದ ಹೊಲದಲ್ಲಿ ಅದು ಶವವಾಗಿ ಪತ್ತೆಯಾಗಿತ್ತು.

# ಭಾರತಕ್ಕೆ ಉಪದೇಶಕರಿಗಿಂತ ಸಹಭಾಗಿಗಳು ಬೇಕು: ಜೈಶಂಕರ್



**ನವದೆಹಲಿ:** ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು, ಯುನೈಟೆಡ್ ಸ್ಟೇಟ್ಸ್ ಹೆಚ್ಚು ಸ್ವಾವಲಂಬಿಯಾಗುತ್ತಿದ್ದರೆ, ಯೂರೋಪ್ ಬದಲಾಗುತ್ತಿರುವ ಬಹುಕೇಂದ್ರಿತ ವಿಶ್ವಕ್ಕೆ ಹೊಂದಿಕೊಳ್ಳಲು ಒತ್ತಡವನ್ನು ಎದುರಿಸುತ್ತಿದೆ ಎಂದು ಹೇಳಿದ್ದಾರೆ. ಭಾರತವು ಉಪದೇಶಕರಿಗಿಂತ ಸಹಭಾಗಿಗಳನ್ನು ಬಯಸುತ್ತದೆ, ವಿಶೇಷವಾಗಿ ತಾವು ಪ್ರಚಾರ ಮಾಡುವ ಸಲಹೆಗಳನ್ನು ತಮ್ಮ ದೇಶದಲ್ಲಿ ಅನುಸರಿಸದವರಿಂದ ಉಪದೇಶ ಬೇಡ ಎಂದು ಅವರು ಒತ್ತಿ ಹೇಳಿದ್ದಾರೆ. ಆರ್ಕ್ಟಿಕ್ ಸರ್ಕಲ್ ಇಂಡಿಯಾ ಫೋರಮ್ 2025 ರಲ್ಲಿ ಭಾನುವಾರ ಮಾತನಾಡಿದ ಜೈಶಂಕರ್, ನಾವು ಈಗ ಒಂದು ಗಾತ್ರ ಮತ್ತು ಹಂತವನ್ನು ತಲುಪಿದ್ದೇವೆ, ಅಲ್ಲಿ ವಿಶ್ವದ ಯಾವುದೇ ಮೂಲೆಯಲ್ಲಿ ಗಮನಾರ್ಹವಾದ ಘಟನೆಯು ನಮಗೆ ಪರಿಣಾಮ ಬೀರುತ್ತದೆ. ಯುನೈಟೆಡ್ ಸ್ಟೇಟ್ಸ್ ಇಂದು ದೀರ್ಘಕಾಲದಿಂದಲೂ ಹೆಚ್ಚು ಸ್ವಾವಲಂಬಿಯಾಗಿದೆ. ಯೂರೋಪ್ ಈಗ ಬದಲಾವಣೆಗೆ ಒತ್ತಡವನ್ನು ಎದುರಿಸುತ್ತಿದೆ. ಬಹುಕೇಂದ್ರಿತ ವಿಶ್ವದ ಸತ್ಯಾಂಶವು ಅದಕ್ಕೆ ತಟ್ಟುತ್ತಿದೆ, ಆದರೆ ಅದು ಇನ್ನೂ ಸಂಪೂರ್ಣವಾಗಿ ಹೊಂದಿಕೊಂಡಿಲ್ಲ. ಅಮೆರಿಕವು ತನ್ನ ನಿಲುವನ್ನು ನಾಟಕೀಯವಾಗಿ ಬದಲಾಯಿಸಿದೆ. ಚೀನಾವು ತನ್ನ ಕಾರ್ಯವನ್ನು ಮುಂದುವರೆಸುತ್ತಿದೆ. ನಾವು ಒಂದು ಸ್ಪರ್ಧಾತ್ಮಕ ಕ್ಷೇತ್ರವನ್ನು ಕಾಣಲಿದ್ದೇವೆ, ಇದು ಸುಲಭವಾಗಿರಲಾರದು. ಇದು ಹೆಚ್ಚು ಸ್ಪರ್ಧಾತ್ಮಕ ಮತ್ತು ತೀವ್ರ ಸ್ಪರ್ಧೆಯ ವಿಶ್ವವಾಗಿದೆ, ಎಂದು ತಿಳಿಸಿದರು.

ನಾವು ವಿಶ್ವವನ್ನು ನೋಡುವಾಗ, ಸಹಭಾಗಿಗಳನ್ನು ಹುಡುಕುತ್ತೇವೆ, ಉಪದೇಶಕರನ್ನಲ್ಲ. ವಿಶೇಷವಾಗಿ, ತಾವು ವಿದೇಶದಲ್ಲಿ ಉಪದೇಶಿಸುವುದನ್ನು ತಮ್ಮ ದೇಶದಲ್ಲಿ ಅನುಸರಿಸದ ಉಪದೇಶಕರನ್ನು ನಾವು ಬಯಸುವುದಿಲ್ಲ. ಯೂರೋಪ್‌ನ ಕೆಲವು ಭಾಗಗಳು ಇನ್ನೂ ಈ ಸಮಸ್ಯೆಯೊಂದಿಗೆ ಹೋರಾಡುತ್ತಿವೆ. ಯೂರೋಪ್ ಈಗ ವಾಸ್ತವಿಕತೆಯ ಪರೀಕ್ಷೆಯ ವಲಯಕ್ಕೆ ಪ್ರವೇಶಿಸಿದೆ. ಅವರು ಈಗ ಮುಂದಡಿಯಿಡಬೇಕೇ ಎಂಬುದನ್ನು ನಾವು ಕಾದು ನೋಡಬೇಕು, ಎಂದು ಜೈಶಂಕರ್ ಹೇಳಿದರು. ನಾವು ಸಹಭಾಗಿತ್ವವನ್ನು ಅಭಿವೃದ್ಧಿಪಡಿಸಬೇಕಾದರೆ, ಪರಸ್ಪರ ಒಡನಾಟ, ಸಂವೇದನೆ, ಹಿತಾಸಕ್ತಿಯ ಸಮಾನತೆ ಮತ್ತು ವಿಶ್ವ ಹೇಗೆ ಕಾರ್ಯನಿರ್ವಹಿಸುತ್ತದೆ ಎಂಬುದರ ಅರಿವು ಇರಬೇಕು, ಎಂದು ಅವರು ಸೇರಿಸಿದರು.

# ದೆಹಲಿ-ಟೆಲ್ ಅವಿವ್ ಏರ್ ಇಂಡಿಯಾ ವಿಮಾನ ಅಬುಧಾಬಿಯಲ್ಲಿ ಲ್ಯಾಂಡ್

**ಟೆಲ್ ಅವಿವಾ:** ಇಸ್ರೇಲ್‌ನ ಪ್ರಮುಖ ಅಂತರರಾಷ್ಟ್ರೀಯ ದ್ವಾರವಾದ ಬೆನ್ ಗುರಿಯನ್ ವಿಮಾನ ನಿಲ್ದಾಣದ ಬಳಿ ಕ್ಷಿಪಣಿ ದಾಳಿ ನಡೆದಿದೆ. ದಾಳಿಯಲ್ಲಿ ಹಲವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ದಾಳಿ ಬಳಿಕ ದೆಹಲಿಯಿಂದ ಟೆಲ್ ಅವೀವ್‌ಗೆ ಪ್ರಯಾಣಿಸುತ್ತಿದ್ದ ಏರ್ ಇಂಡಿಯಾ ವಿಮಾನವನ್ನು ಭಾನುವಾರ ಅಬುಧಾಬಿಗೆ ತಿರುಗಿಸಲಾಗಿದೆ. ಏರ್ ಇಂಡಿಯಾ ತನ್ನ ಗ್ರಾಹಕರು ಮತ್ತು ಸಿಬ್ಬಂದಿಗಳ ಸುರಕ್ಷತೆಗೆ ಆದ್ಯತೆ ನೀಡುವ ಸಲುವಾಗಿ ಮೇ 6 ರವರೆಗೆ ಎಲ್ಲಾ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಯೆಮನ್‌ನ ಹೌತಿ ಬಂಡುಕೋರರು ಇಸ್ರೇಲ್ ಕಡೆಗೆ ಹಾರಿಸಿದ ಕ್ಷಿಪಣಿ ಬೆನ್ ಗುರಿಯನ್ ವಿಮಾನ ನಿಲ್ದಾಣದ ಬಳಿ ಅಪ್ಪಳಿಸಿತು, ಇದರಿಂದಾಗಿ ಆಕಾಶದೆತ್ತರಕ್ಕೆ ಹೊಗೆಯ ರಾಶಿ ಹಬ್ಬಿದೆ. ವಿಮಾನದ ಮಾರ್ಗ ಬದಲಾವಣೆ ಕುರಿತು ಏರ್ ಇಂಡಿಯಾ ಅಧಿಕೃತ ಮಾಹಿಯನ್ನು ನೀಡಿದ್ದು, ಇಂದು ಬೆಳಿಗ್ಗೆ ಬೆನ್ ಗುರಿಯನ್ ವಿಮಾನ ನಿಲ್ದಾಣದಲ್ಲಿ ನಡೆದ ಘಟನೆಯ ನಂತರ ದೆಹಲಿಯಿಂದ ಟೆಲ್ ಅವೀವ್‌ಗೆ ಮೇ 4, 2025 ರಂದು ಹಾರುತ್ತಿದ್ದ ಏರ್



ಇಂಡಿಯಾ ವಿಮಾನ AI139 ಅನ್ನು ಅಬುಧಾಬಿಗೆ ತಿರುಗಿಸಲಾಯಿತು. ವಿಮಾನವು ಸಾಮಾನ್ಯವಾಗಿ ಅಬುಧಾಬಿಯಲ್ಲಿ ಇಳಿದಿದೆ ಮತ್ತು ಶೀಘ್ರದಲ್ಲೇ ದೆಹಲಿಗೆ ಹಿಂತಿರುಗಲಿದೆ. ನಮ್ಮ ಗ್ರಾಹಕರು ಮತ್ತು ಸಿಬ್ಬಂದಿಯ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಟೆಲ್ ಅವೀವ್‌ಗೆ ಮತ್ತು ಅಲ್ಲಿಂದ ನಮ್ಮ ಕಾರ್ಯಾಚರಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮೇ 6, 2025 ರವರೆಗೆ ಸ್ಥಗಿತಗೊಳಿಸಲಾಗುತ್ತದೆ ಎಂದು ಏರ್ ಇಂಡಿಯಾ ಹೇಳಿಕೆಯಲ್ಲಿ ತಿಳಿಸಿದೆ.

ಬೋಯಿಂಗ್ 787 ವಿಮಾನವು ಟೆಲ್ ಅವಿವ್ ವಿಮಾನ ನಿಲ್ದಾಣದಲ್ಲಿ ಇಳಿಯಲು ನಿಗದಿಪಡಿಸಿದ ಒಂದು ಗಂಟೆಗೂ ಮುನ್ನ ಈ ಘಟನೆ ಸಂಭವಿಸಿದೆ. ಕ್ಷಿಪಣಿ ದಾಳಿಯ ಹಿನ್ನೆಲೆಯಲ್ಲಿ, ಭಾನುವಾರ ನಿಗದಿಯಾಗಿದ್ದ ಟೆಲ್ ಅವಿವ್‌ನಿಂದ ದೆಹಲಿಗೆ ಹಿಂದಿರುಗುವ ಏರ್ ಇಂಡಿಯಾ ವಿಮಾನವನ್ನು ರದ್ದುಗೊಳಿಸಲಾಗಿದೆ ಎಂದು ತಿಳಿದು ಬಂದಿದೆ.

# ಇಮ್ರಾನ್ ಖಾನ್, ಬಿಲಾವಲ್ ಭುಟ್ಟೋ ಎಕ್ಸ್ ಖಾತೆಗಳಿಗೆ ಭಾರತದಲ್ಲಿ ನಿರ್ಬಂಧ

**ಹೊಸದಿಲ್ಲಿ:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಳಿಕ ಕೈಗೊಳ್ಳಲಾಗಿರುವ ಸರಣಿ ಡಿಜಿಟಲ್ ಕ್ರಮಗಳ ಭಾಗವಾಗಿ ಭಾರತ ಸರಕಾರವು ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಮತ್ತು ಮಾಜಿ ವಿದೇಶಾಂಗ ಸಚಿವ ಬಿಲಾವಲ್ ಭುಟ್ಟೋ ಅವರ ಎಕ್ಸ್ ಖಾತೆಗಳನ್ನು ನಿರ್ಬಂಧಿಸಿದೆ. ಈ ವಾರದ ಆರಂಭದಲ್ಲಿ ಪಾಕಿಸ್ತಾನದ ಮಾಹಿತಿ ಮತ್ತು ಪ್ರಸಾರ ಸಚಿವ ಅತಾವುಲ್ಲಾ ತರಾರ್ ಅವರ ಎಕ್ಸ್ ಖಾತೆಯನ್ನೂ ಭಾರತದಲ್ಲಿ ನಿರ್ಬಂಧಿಸಲಾಗಿತ್ತು. ಭಾರತವು ಪಾಕಿಸ್ತಾನದ ಮೇಲೆ ಮಿಲಿಟರಿ ದಾಳಿಯನ್ನು ನಡೆಸಲು ಸಜ್ಜಾಗಿದೆ ಎಂಬ ವಿಶ್ವಾಸಾರ್ಹ ಗುಪ್ತಚರ ಮಾಹಿತಿ ಸರಕಾರದ ಬಳಿಯಿದೆ ಎಂದು ತರಾರ್ ಸಾಮಾಜಿಕ ಜಾಲತಾಣಗಳಲ್ಲಿ ಹೇಳಿಕೊಂಡಿದ್ದರು. ಅವರ ಈ ಹೇಳಿಕೆ ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳನ್ನು ಇನ್ನಷ್ಟು ಹದಗೆಡಿಸಿತ್ತು. ರಾಜಕೀಯ ನಾಯಕರೊಂದಿಗೆ ನಟಿಯರಾದ ಹಾನಿಯಾ ಆಮಿರ್ ಮತ್ತು ಮಹಿರಾ ಖಾನ್,ಜನಪ್ರಿಯ ಗಾಯಕ ಆತಿಫ್ ಅಸ್ಲಾಂ ಸೇರಿದಂತೆ ಹಲವಾರು ಪಾಕಿಸ್ತಾನಿ ಸೆಲೆಬ್ರಿಟಿಗಳ ಇನ್ಸ್ಟಾಗ್ರಾಂ ಖಾತೆಗಳನ್ನು ಭಾರತದಲ್ಲಿ ನಿರ್ಬಂಧಿಸಲಾಗಿದೆ. ಈ ಹಿಂದೆ ಕೇಂದ್ರ ಸರಕಾರವು ಪ್ರತಿಷ್ಠಿತ ಸುದ್ದಿಸಂಸ್ಥೆಗಳು ಮತ್ತು ಮಾಜಿ ಕ್ರಿಕೆಟಿಗ ಶೋಯೆಬ್ ಅಖ್ತರ್ ಸೇರಿದಂತೆ ಹಲವಾರು ಪಾಕಿಸ್ತಾನಿ ಯೂಟ್ಯೂಬ್ ಚಾನೆಲ್ಗಳನ್ನೂ ನಿಷೇಧಿಸಿತ್ತು.



# ಯುದ್ಧ ಭುಗಿಲೆದ್ದರೆ ಇಂಗ್ಲೆಂಡ್‌ಗೆ ಹೋಗುತ್ತೇನೆ: ಪಾಕ್ ಸಂಸದ

**ಇಸ್ಲಾಮಾಬಾದ್:** ಒಂದು ವೇಳೆ ಭಾರತದ ಜೊತೆ ಯುದ್ಧ ಭುಗಿಲೆದ್ದರೆ ಇಂಗ್ಲೆಂಡಿಗೆ ಓಡಿ ಹೋಗುವುದಾಗಿ ಪಾಕಿಸ್ತಾನದ ಸಂಸದ ಶೇರ್ ಅಫ್ಜಲ್ ಖಾನ್ ಮರ್ವಾತ್ ನೀಡಿರುವ ಹೇಳಿಕೆ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

ಒಂದು ವೇಳೆ ಯುದ್ಧ ಭುಗಿಲೆದ್ದರೆ ಭಾರತದ ವಿರುದ್ಧ ಆಯುಧ ಕೈಗೆತ್ತಿಕೊಳ್ಳುವಿರಾ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅಫ್ಜಲ್ ಖಾನ್ 'ಯುದ್ಧ ಭುಗಿಲೆದ್ದರೆ ಇಂಗ್ಲೆಂಡಿಗೆ ಹೋಗುತ್ತೇನೆ' ಎಂದುತ್ತರಿಸಿದ್ದಾರೆ.

ಪಾಕಿಸ್ತಾನದ ರಾಷ್ಟ್ರೀಯ ಅಸೆಂಬ್ಲಿಯ ಸದಸ್ಯರಾದ ಅಫ್ಜಲ್ ಮಾಜಿ ಪ್ರಧಾನಿ ಇಮ್ರಾನ್ಖಾನ್ ಅವರ ನಿಕಟವರ್ತಿಯಾಗಿದ್ದಾರೆ. ಉಭಯ ದೇಶಗಳ ನಡುವಿನ ಉದ್ವಿಗ್ನತೆಯನ್ನು ಕಡಿಮೆಗೊಳಿಸಲು ಕಡಿಮೆಗೊಳಿಸುವ ಕ್ರಮ ಕೈಗೊಳ್ಳಬೇಕೆಂದು ಭಾರತೀಯ ಪ್ರಧಾನಿ ನರೇಂದ್ರ ಮೋದಿಯನ್ನು ಆಗ್ರಹಿಸುವಿರಾ ಎಂಬ ಪ್ರಶ್ನೆಗೆ ಅಫ್ಜಲ್ ಖಾನ್ ' ನಾನು ಹೇಳಿದೊಡನೆ ಹಿಂದೆ ಸರಿಯಲು ಮೋದಿಯೇನು ನನ್ನ ಚಿಕ್ಕಮ್ಮನ ಮಗನೇ ಎಂದು ಉತ್ತರಿಸಿರುವುದಾಗಿ ವರದಿಯಾಗಿದೆ.



# ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್‌ಗೆ ಜೈಲಿನಲ್ಲಿ ಸೇನಾ ಮೇಜರ್‌ನಿಂದ ಅತ್ಯಾಚಾರ!

**ಕರಾಚಿ :** ಇಮ್ರಾನ್ ಖಾನ್ ಮೇಲೆ ಪಾಕ್ ಸೇನಾ ಮೇಜರ್ ಜೈಲಿನಲ್ಲಿ ಅತ್ಯಾಚಾರ ಎಸಗಿದ ಸುದ್ದಿ ವೈರಲ್ ಆಗುತ್ತಿದೆ. ಈ ಸುದ್ದಿ ಸಾಮಾಜಿಕ ಜಾಲತಾಣಗಳಲ್ಲಿ ಸಂಚಲನ ಮೂಡಿಸಿದೆ. ಇಮ್ರಾನ್ ಖಾನ್ ಎಚ್‌ಐವಿ ಪಾಸಿಟಿವ್ ಎಂದು ವರದಿಯಾಗಿದೆ.

ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆ ನಿರಂತರವಾಗಿ ಹೆಚ್ಚುತ್ತಿದೆ. ಈ ಮಧ್ಯೆ, ಸಾಮಾಜಿಕ ಮಾಧ್ಯಮದಲ್ಲಿ ಒಂದು ಸುದ್ದಿ ಬಹಳ ವೇಗವಾಗಿ ವೈರಲ್ ಆಗುತ್ತಿದೆ. ಈ ಸುದ್ದಿ ಸಂಚಲನ ಸೃಷ್ಟಿಸಿದೆ. ಹೌದು, ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಮೇಲೆ ಅತ್ಯಾಚಾರ ನಡೆದಿದೆ ಎಂದು ಹೇಳಲಾಗುತ್ತಿದೆ. ಇಮ್ರಾನ್ ಖಾನ್ ಜೈಲಿನಲ್ಲಿದ್ದು, ಈ ಸಮಯದಲ್ಲಿ ಪಾಕಿಸ್ತಾನಿ ಸೇನಾ ಮೇಜರ್ ಅವರ ಮೇಲೆ ಅತ್ಯಾಚಾರ ಎಸಗಿದ್ದಾರೆ. @JIX5A ಖಾತೆಯಿಂದ ಹಂಚಿಕೊಳ್ಳಲಾಗಿದೆ.



ಸಾಮಾಜಿಕ ಮಾಧ್ಯಮದಲ್ಲಿ ಒಂದು ಪತ್ರ ವೈರಲ್ ಆಗುತ್ತಿದೆ. ಇದರಲ್ಲಿ ಪಾಕ್ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಜೈಲಿನಲ್ಲಿ ಅತ್ಯಾಚಾರಕ್ಕೊಳಗಾಗಿದ್ದಾರೆ ಎಂದು ಹೇಳಲಾಗುತ್ತಿದೆ. ಇದನ್ನು ಕೆಲವು ಪಾಕಿಸ್ತಾನಿ ಸಾಮಾಜಿಕ ಮಾಧ್ಯಮ ಖಾತೆಗಳು ದೃಢಪಡಿಸುತ್ತಿವೆ ಮತ್ತು ಕೆಲವು ತನಿಖಾ ವರದಿಗಳು ಸಹ ಇದನ್ನು ಬಹಿರಂಗಪಡಿಸುತ್ತಿವೆ.

ಸಾಮಾಜಿಕ ಮಾಧ್ಯಮ ವೇದಿಕೆ X ನಲ್ಲಿ, ಇಮ್ರಾನ್ ಖಾನ್ ಮೇಲಿನ ಅತ್ಯಾಚಾರದ ಸುದ್ದಿ ನಿಜವೆಂದು ಹೇಳಲಾಗುತ್ತಿದೆ. ''ಇಮ್ರಾನ್ ಖಾನ್ ಅವರನ್ನು ಪಾಕಿಸ್ತಾನಿ ಸೇನಾ ಮೇಜರ್ ಒಬ್ಬರು ಅತ್ಯಾಚಾರ ಮಾಡಿದ್ದಾರೆ. ಪಾಕಿಸ್ತಾನಿ ಕೈದಿಗಳಲ್ಲಿ ಪುರುಷರ ಮೇಲಿನ ಲೈಂಗಿಕ ದೌರ್ಜನ್ಯ ಸಾಮಾನ್ಯವಾಗಿದೆ. ಅವರು ವ್ಯಕ್ತಿಯ ಹೆಮ್ಮೆ ಮತ್ತು ಘನತೆಯನ್ನು ಕಸಿದುಕೊಳ್ಳಲು ಇದನ್ನು ಮಾಡುತ್ತಾರೆ'' ಎಂದು ಮಾಜಿ ಹ್ಯಾಂಡಲ್ ಒಬ್ಬರು ಬರೆದಿದ್ದಾರೆ.

# ಬಂದರುಗಳ ಪ್ರವೇಶ ನಿಷೇಧಿಸಿದ ಪಾಕಿಸ್ತಾನ

**ಇಸ್ಲಾಮಾಬಾದ್/ನವದೆಹಲಿ:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತವು, ಪಾಕಿಸ್ತಾನದ ಮೇಲೆ ಹಲವು ಕಠಿಣ ಕ್ರಮಗಳನ್ನು ಜರುಗಿಸಿದೆ. ಅಲ್ಲಿಂದ ಬರುವ ಸರಕುಗಳ ಆಮದು ಮತ್ತು ಪಾಕಿಸ್ತಾನಿ ಹಡಗುಗಳಿಗೆ ಭಾರತದ ಬಂದರುಗಳ ಪ್ರವೇಶವನ್ನು ನಿಷೇಧಿಸಿದೆ. ಇದಕ್ಕೆ ಪ್ರತಿಯಾಗಿ ಪಾಕಿಸ್ತಾನವೂ ತನ್ನ ಬಂದರುಗಳಿಗೆ ಬರುವ ಭಾರತದ ಹಡಗುಗಳಿಗೆ ನಿರ್ಬಂಧ ವಿಧಿಸಿದೆ.

ಈ ಬಗ್ಗೆ ಪಾಕಿಸ್ತಾನದ ಕಡಲ ವ್ಯವಹಾರಗಳ ಸಚಿವಾಲಯ ಅಧಿಸೂಚನೆ ಹೊರಡಿಸಿದ್ದು, ಶನಿವಾರ ರಾತ್ರಿಯಿಂದಲೇ ಅನ್ವಯಿಸುವಂತೆ ಯಾವುದೇ ಭಾರತೀಯ ನೌಕೆಗಳು ಪಾಕಿಸ್ತಾನದ ಬಂದರಿಗೆ ಭೇಟಿ ನೀಡಲು ಅನುಮತಿಸುವುದಿಲ್ಲ. ಪಾಕಿಸ್ತಾನದ ಹಡಗುಗಳು ಭಾರತೀಯ ಬಂದರಿನಲ್ಲಿ ನಿಲ್ಲುವಂತಿಲ್ಲ ಎಂದು ಆದೇಶಿಸಿದೆ.

ಕಡಲ ಸಾರ್ವಭೌಮತ್ವ, ಆರ್ಥಿಕ ಹಿತಾಸಕ್ತಿಗಳು, ರಾಷ್ಟ್ರೀಯ ಭದ್ರತೆ ಮತ್ತು ಪ್ರಸ್ತುತ ಎರಡೂ ರಾಷ್ಟ್ರಗಳ ನಡುವಿನ ಉದ್ವಿಗ್ನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಭಾರತೀಯ ಹಡಗುಗಳನ್ನು ನಿಷೇಧಿಸುವ ಕ್ರಮವನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಕೈಗೊಂಡಿರುವುದಾಗಿ ಪಾಕಿಸ್ತಾನದ ಕಡಲ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಏಪ್ರಿಲ್ 22ರಂದು ನಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ-ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಾಗಿದೆ. ಶತ್ರುದೇಶಕ್ಕೆ ಬಿಸಿ ಮುಟ್ಟಿಸುವ ಕ್ರಮವಾಗಿ ಅಲ್ಲಿಂದ ಆಮದಾಗುವ ಎಲ್ಲ ವಸ್ತುಗಳು, ಇಮೇಲ್ , ಸರಕುಗಳ ಮೇಲೆ ನಿರ್ಬಂಧ ಹೇರಿರುವುದಾಗಿ ಭಾರತ ಘೋಷಿಸಿತ್ತು. ಪಾಕಿಸ್ತಾನದ ವಿಮಾನಗಳು ಭಾರತದ ವಾಯುಸೀಮೆಯನ್ನು ಬಳಸುವಂತಿಲ್ಲ ಎಂದೂ ಸೂಚಿಸಿತ್ತು.



### ಪಾಕಿಸ್ತಾನದ ವಿರುದ್ಧ ಕ್ರಮಕ್ಕೆ ಸಿದ್ಧತೆ

# ವಾಯುಪಡೆ ಮುಖ್ಯಸ್ಥರನ್ನು ಭೇಟಿಯಾದ ಮೋದಿ

**ನವದೆಹಲಿ:** ಜಮ್ಮು ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಉಗ್ರ ದಾಳಿಯ ಬಳಿಕ ಭಾರತ ಹಾಗೂ ಪಾಕಿಸ್ತಾನದ ನಡುವೆ ಉದ್ವಿಗ್ನತೆ ಸೃಷ್ಟಿಯಾಗಿದೆ. ಭಾರತ ಯಾವ ಸಮಯದಲ್ಲಿ ಬೇಕಾದರೂ ತಮ್ಮ ಮೇಲೆ ಯುದ್ಧ ನಡೆಸಬಹುದು ಎಂದು ನಿದ್ರೆ ಬಿಟ್ಟು ಪಾಕಿಸ್ತಾನ ಆಲೋಚನೆಯಲ್ಲಿ ತೊಡಗಿದೆ. ವಾಯುಪಡೆ ಮುಖ್ಯಸ್ಥ ಅಮರ್ ಪ್ರೀತ್ ಸಿಂಗ್ ಭಾನುವಾರ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾದರು. ಪಾಕಿಸ್ತಾನದೊಂದಿಗಿನ ಕಲಹದ ಮಧ್ಯೆ ಈ ಸಭೆಯನ್ನು ಮಹತ್ವದ್ದಾಗಿ ಪರಿಗಣಿಸಲಾಗುತ್ತಿದೆ. ಶನಿವಾರದಂದು ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಅವರು ಪ್ರಧಾನಿಯನ್ನು ಭೇಟಿಯಾಗಿದ್ದರು.

ಕೆಲವು ದಿನಗಳ ಹಿಂದೆ ಪ್ರಧಾನಿ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಂತರ, ವಾಯುಪಡೆಯ ಮುಖ್ಯಸ್ಥರು ಮತ್ತು ಪ್ರಧಾನಿ ಮೋದಿ ನಡುವಿನ ಈ ಸಭೆ ನಡೆಯಿತು. ಆ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ (ಸಿಡಿಎಸ್) ಜನರಲ್ ಅನಿಲ್ ಚೌಹಾಣ್ ಮತ್ತು ಮೂರು ಸಶಸ್ತ್ರ ಪಡೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು. ಆ ಸಭೆಯಲ್ಲಿ



ರಾಷ್ಟ್ರೀಯ ಭದ್ರತಾ ಸಲಹೆಗಾರ (ಎನ್‌ಎಸ್‌ಎ) ಅಜಿತ್ ದೋವಲ್ ಕೂಡ ಉಪಸ್ಥಿತರಿದ್ದರು.

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕ ದಾಳಿ ನಡೆದ ಒಂದು ದಿನದ ನಂತರ ಭದ್ರತೆ ಕುರಿತ ಸಂಪುಟ ಸಮಿತಿ (ಸಿಸಿಎಸ್) ಸಭೆ ನಡೆಯಿತು . ಪಹಲ್ಗಾಮ್ ದಾಳಿಯಲ್ಲಿ 26 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಭಯೋತ್ಪಾದನೆಯನ್ನು ಹತ್ತಿಕ್ಕುವ ಭಾರತದ ರಾಷ್ಟ್ರೀಯ ಸಂಕಲ್ಪವನ್ನು ಸರ್ಕಾರ ಪುನರುಚ್ಚರಿಸಿದೆ. ಭಯೋತ್ಪಾದಕ ದಾಳಿಗೆ ಕಾರಣರಾದವರು ಮತ್ತು ಸಂಚುಕೋರರಿಗೆ ಕಠಿಣ ಶಿಕ್ಷೆ ವಿಧಿಸಲಾಗುವುದು ಎಂದು ಸರ್ಕಾರ ಹೇಳಿದೆ.

ಭಾರತದ ಪ್ರತಿಕ್ರಿಯೆಯ ರೀತಿ, ಉದ್ದೇಶಗಳು ಮತ್ತು ಸಮಯವನ್ನು ನಿರ್ಧರಿಸಲು ಸರ್ಕಾರವು ಸಶಸ್ತ್ರ ಪಡೆಗಳಿಗೆ ಸಂಪೂರ್ಣ ಕಾರ್ಯಾಚರಣಾ ಸ್ವಾತಂತ್ರ್ಯವನ್ನು ನೀಡಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಸರ್ಕಾರ ಸರ್ವಪಕ್ಷ ಸಭೆ ಕರೆದಿತ್ತು.

ಭಯೋತ್ಪಾದಕರ ವಿರುದ್ಧ ಸರ್ಕಾರ ತೆಗೆದುಕೊಳ್ಳುವ ಯಾವುದೇ ಕ್ರಮಕ್ಕೆ ವಿರೋಧ ಪಕ್ಷಗಳು ಸಂಪೂರ್ಣ ಬೆಂಬಲ ನೀಡಿವೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಯಶಸ್ವಿ ಚುನಾವಣೆಗಳು ಮತ್ತು ಆರ್ಥಿಕ ಅಭಿವೃದ್ಧಿಯತ್ತ ಪ್ರಗತಿ ಸಾಧಿಸಿದ ನಂತರ ಈ ದಾಳಿ ನಡೆದಿದೆ ಎಂದು ವರದಿಯಾಗಿದೆ.

ಗಡಿಯಾಚೆಗಿನ ಭಯೋತ್ಪಾದನೆಯನ್ನು ಬೆಂಬಲಿಸುತ್ತಿರುವ ಪಾಕಿಸ್ತಾನಕ್ಕೆ ಬಲವಾದ ಸಂದೇಶ ರವಾನಿಸಲು ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ಇದರಲ್ಲಿ ಸಿಂಧೂ ನದಿ ನೀರು ಒಪ್ಪಂದವನ್ನು ಅಮಾನತುಗೊಳಿಸುವುದೂ ಸೇರಿದೆ. ಪಾಕಿಸ್ತಾನ ತನ್ನ ಕೃತ್ಯಗಳಿಗೆ ತಕ್ಕ ಉತ್ತರ ಪಡೆಯುತ್ತದೆ ಎಂದು ಸರ್ಕಾರ ಸ್ಪಷ್ಟವಾಗಿ ಹೇಳಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಟೋಬಿ' ನಟಿಗೆ ಬೇಡಿಕೆ ಸೌತ್ ಸಿನಿಮಾಗಳಲ್ಲಿ ಚೈತ್ರಾ ಆಚಾರ್ ಬ್ಯುಸಿ



ಕನ್ನಡದ ನಟಿಯರಾದ ರಶ್ಮಿಕಾ ಮಂದಣ್ಣ, ಶ್ರೀಲೀಲಾ, ರುಕ್ಮಿಣಿ ವಸಂತ್ ಅವರಂತೆ ಚೈತ್ರಾ ಆಚಾರ್ ಕೂಡ ಸೌತ್‌ನತ್ತ ಮುಖ ಮಾಡಿದ್ದಾರೆ. ಕನ್ನಡದ ಜೊತೆಗೆ ದಕ್ಷಿಣದ ಸಿನಿಮಾದಲ್ಲೂ ಮಿಂಚಲು ಅವರು ರೆಡಿಯಾಗಿದ್ದಾರೆ.

ಟೋಬಿ, ಸಪ್ತಸಾಗರದಾಚೆ ಎಲ್ಲೋ ಸೈಡ್ ಬಿ ಚಿತ್ರಗಳಲ್ಲಿ ಗುರುತಿಸಿಕೊಂಡ್ಮೇಲೆ ತಮಿಳಿನಿಂದ ಚೈತ್ರಾಗೆ ಉತ್ತಮ ಅವಕಾಶಗಳು ಅರಸಿ ಬಂದಿವೆ. ಬ್ಯಾಕ್ ಟು ಬ್ಯಾಕ್ ಚಿತ್ರಗಳಲ್ಲಿ ನಟಿ ಬ್ಯುಸಿಯಾಗಿದ್ದಾರೆ.

ಶಿವಣ್ಣ, ಡಾಲಿ, ಭಾವನಾ ಮೆನನ್, ಐಶ್ವರ್ಯಾ ರಾಜೇಶ್ ನಟನೆಯ 'ಉತ್ತರಕಾಂಡ' ಚಿತ್ರದಲ್ಲಿ ಚೈತ್ರಾ ಕೂಡ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಸದ್ಯದಲ್ಲೇ ಈ ಚಿತ್ರದ ರಿಲೀಸ್ ಬಗ್ಗೆ ಮಾಹಿತಿ ಸಿಗಲಿದೆ.

ಪ್ರತಿಭಾನ್ವಿತ ನಟ ರಾಜ್ ಬಿ ಶೆಟ್ಟಿ ಹೊಸ ಚಿತ್ರಕ್ಕೂ ಚೈತ್ರಾ ನಾಯಕಿಯಾಗಿದ್ದಾರೆ. ಟೋಬಿ ಬಳಿಕ ಮತ್ತೆ ಈ ಜೋಡಿ ಜೊತೆಯಾಗಿ ನಟಿಸಲಿದ್ದಾರೆ. ಒಂದಿಷ್ಟು ಚಿತ್ರಗಳ ಮಾತುಕತೆ ನಡೆಯುತ್ತಿದೆ.

ತಮಿಳು ನಟ ಸಿದ್ಧಾರ್ಥ್ ನಟನೆಯ `3BHK' ಚಿತ್ರಕ್ಕೆ ಚೈತ್ರಾ ನಾಯಕಿಯಾಗಿದ್ದಾರೆ. ಈ ಸಿನಿಮಾದ ಶೂಟಿಂಗ್ ಭರದಿಂದ ನಡೆಯುತ್ತಿದೆ. ಇವರೊಂದಿಗೆ ಶರತ್ ಕುಮಾರ್, ದೇವಯಾನಿ ಸೇರಿದಂತೆ ಅನೇಕರು ನಟಿಸುತ್ತಿದ್ದಾರೆ. ಇದರ ಜೊತೆ ತಮಿಳಿನ ನಟ ಶಶಿಕುಮಾರ್ ಜೊತೆಗೂ ಅವರು ತೆರೆಹಂಚಿಕೊಂಡಿದ್ದಾರೆ. ಮತ್ತೊಂದು ಹೆಸರಿಡದ ಹೊಸ ಚಿತ್ರಕ್ಕೂ ಅವರು ಆಯ್ಕೆ ಆಗಿದ್ದಾರೆ. ಒಟ್ನಲ್ಲಿ ಕನ್ನಡದ ಜೊತೆ ತಮಿಳಿನಲ್ಲೂ ಮಿಂಚಲು 'ಟೋಬಿ' ಬೆಡಗಿ ರೆಡಿಯಾಗಿದ್ದಾರೆ. ರಶ್ಮಿಕಾ, ಶ್ರೀಲೀಲಾರಂತೆಯೇ ಸೌತ್‌ನಲ್ಲಿ ಚೈತ್ರಾ ಮೋಡಿ ಮಾಡ್ತಾರಾ? ಎಂದು ಕಾದುನೋಡಬೇಕಿದೆ.



# ಚಂದನವನ ಫಿಲ್ಮ್ ಕ್ರಿಟಿಕ್ಸ್ ಅಕಾಡೆಮಿ ಪ್ರಶಸ್ತಿ ನಾಮಿನೇಷನ್ ಪ್ರಕಟ

ಚಂದನವನ ಫಿಲ್ಮ್ ಕ್ರಿಟಿಕ್ಸ್ ಅಕಾಡೆಮಿ 2025ರ ಆರನೇ ವರ್ಷದ ಪ್ರಶಸ್ತಿಗಳಿಗೆ ನಾಮ ನಿರ್ದೇಶನಗಳನ್ನು ಘೋಷಿಸಲಾಗಿದ್ದು, 2024ರಲ್ಲಿ ತೆರೆಕಂಡ ಅತ್ಯುತ್ತಮ ಕನ್ನಡ ಚಿತ್ರಗಳನ್ನು ಆಯ್ಕೆ ಮಾಡಿ, ಅವುಗಳಲ್ಲಿ 29 ವಿಭಾಗದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಐವತ್ತಕ್ಕೂ ಹೆಚ್ಚು ಸಿನಿಮಾ ಪತ್ರಕರ್ತರು ಈ ನಾಮ ನಿರ್ದೇಶನದ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದು, ಮತದಾನದ ಮೂಲಕ ಆಯ್ಕೆ ಮಾಡಿದ್ದಾರೆ.

ಈ ವರ್ಷ ಪ್ರಶಸ್ತಿಗಳನ್ನು ಐದು ವಿಭಾಗಗಳಲ್ಲಿ ವಿಂಗಡಿಸಲಾಗಿದ್ದು, ಚೊಚ್ಚಲ ಪ್ರಶಸ್ತಿಗಳು, ತಾಂತ್ರಿಕ ವಿಭಾಗ, ಸಂಗೀತ ವಿಭಾಗ ನಟನೆ ಮತ್ತು ಬರವಣಿಗೆ ಹಾಗೂ ತೀರ್ಪುಗಾರರ ಪ್ರಶಸ್ತಿಗಳನ್ನು ಒಳಗೊಂಡಿವೆ. ಮತ್ತೊಂದು ವಿಶೇಷ ಅಂದರೆ, ಈ ವರ್ಷದಿಂದ ಕನ್ನಡ ಸಿನಿಮಾ ರಂಗಕ್ಕೆ ಗಮನಾರ್ಹ ಕೊಡುಗೆ ನೀಡಿರುವವರಿಗೆ ಹಂಸಲೇಖ ಅವರ ಹೆಸರಿನಲ್ಲಿ ಜೀವಮಾನ ಸಾಧನೆ (ಚಿನ್ನದ ಪದಕ) ಗೌರವವನ್ನು ಪರಿಚಯಿಸಲಾಗುತ್ತಿದೆ.

ಭಾನುವಾರ ಸಂಜೆ ನಡೆದ ಟ್ರೋಫಿ ಅನಾವರಣ ಮತ್ತು ನಾಮ ನಿರ್ದೇಶನಗಳ ಘೋಷಣೆ ಸಮಾರಂಭಕ್ಕೆ ಖ್ಯಾತ ನಟ ಅಜಯ್ ರಾವ್ ಮತ್ತು ನಟಿ ಮೇಘನಾ ಗಾಂವ್ಕರ್ ಅತಿಥಿಯಾಗಿ ಆಗಮಿಸಿದ್ದರು. ಹೊಸದಾಗಿ ವಿನ್ಯಾಸಗೊಳಿಸಿದ್ದ ಆರನೇ ವರ್ಷದ ಟ್ರೋಫಿಯನ್ನು ಅನಾವರಣಗೊಳಿಸಿದರು. 2025ರ ಪ್ರಶಸ್ತಿಗಳಿಗೆ ನಾಮ ನಿರ್ದೇಶನಗಳನ್ನು ಘೋಷಿಸಿದರು. ಅತ್ಯುತ್ತಮ ನಟ ಪ್ರಶಸ್ತಿಗಾಗಿ ಶಿವರಾಜ್ ಕುಮಾರ್ (ಭೈರತಿ ರಣಗಲ್), ಕಿಚ್ಚ ಸುದೀಪ್ (ಮ್ಯಾಕ್ಸ್) ಗಣೇಶ್ (ಕೃಷ್ಣಂ ಪ್ರಣಯ ಸಖಿ), ಶ್ರೀಮುರಳಿ (ಭಗೀರ)



ಮತ್ತು ದುನಿಯಾ ವಿಜಯ್ (ಭೀಮಾ) ನಾಮನಿರ್ದೇಶನಗೊಂಡಿದ್ದಾರೆ.

ಅತ್ಯುತ್ತಮ ನಟಿ ಪ್ರಶಸ್ತಿಗಾಗಿ ಬಿಂದು ಶಿವರಾಮ್ (ಕೆರೆಬೇಟೆ), ರೋಶನಿ ಪ್ರಕಾಶ್ (ಮರ್ಫಿ), ಚೈತ್ರಾ ಆಚಾರ್ (ಬ್ಲಿಂಕ್), ರುಕ್ಮಿಣಿ ವಸಂತ್ (ಬಘೀರ) ಮತ್ತು ನಿಶ್ವಿಕಾ ನಾಯ್ಡು (ಕರಟಕ ದಮನಕ) ಪಾತ್ರಗಳ ನಟನೆಗಾಗಿ ನಾಮನಿರ್ದೇಶನಗೊಂಡಿದ್ದಾರೆ. ಅತ್ಯುತ್ತಮ ಚಿತ್ರ ವಿಭಾಗದಲ್ಲಿ ಭೀಮಾ ಹದಿನೇಳೆಂಟು, ಫೋಟೋ, ಮ್ಯಾಕ್ಸ್ ಮತ್ತು ಶಾಖಾಹಾರಿ ಚಿತ್ರಗಳು ನಾಮನಿರ್ದೇಶನಗೊಂಡಿವೆ.

ಅತ್ಯುತ್ತಮ ಚೊಚ್ಚಲ ನಟ ಪ್ರಶಸ್ತಿಗಾಗಿ ಯುವರಾಜ್ ಕುಮಾರ್, ಸಮರ್ಜಿತ್ ಲಂಕೇಶ್, ಅಜಯ್ ಪೃಥ್ವಿ, ರೋಹಿತ್ ಮತ್ತು ರಾಕೇಶ್ ದಳವಾಯಿ ಪೈಪೋಟಿ ನಟಿಸಿದ್ದಾರೆ. ಅತ್ಯುತ್ತಮ ಸಂಗೀತ ನಿರ್ದೇಶನ ವಿಭಾಗದಲ್ಲಿ ಅರ್ಜುನ್ ಜನ್ಯ (ಕೃಷ್ಣಂ ಪ್ರಣಯ ಸಖಿ), ಚರಣ್ ರಾಜ್ (ಭೀಮ), ಬಿ. ಅಜನೀಶ್ ಲೋಕನಾಥ್ (ಮ್ಯಾಕ್ಸ್), ವೀರ್ ಸಮರ್ಥ (ಒಂದು ಸರಳ ಪ್ರೇಮಕಥೆ) ಮತ್ತು ವಿ.ಹರಿಕೃಷ್ಣ (ಕರಟಕ ದಮನಕ) ನಾಮನಿರ್ದೇಶನಗೊಂಡಿದ್ದಾರೆ.

ಈ ಪ್ರಶಸ್ತಿ ಪ್ರದಾನ ಸಮಾರಂಭವು 11 ಮೇ 2025ರಂದು ಸಂಜೆ ನಡೆಯಲಿದ್ದು, ಸಿನಿಮಾ ರಂಗದ ಸಾಕಷ್ಟು ಕಲಾವಿದರು, ತಂತ್ರಜ್ಞರು ಭಾಗಿಯಾಗಲಿದ್ದಾರೆ. 2025ನೇ ಸಾಲಿನ ಪ್ರಶಸ್ತಿ ಸಮಾರಂಭಕ್ಕೆ ಮುಖ್ಯ ಪ್ರಾಯೋಜಕರಾಗಿ ಯುಮಿ ವೆಂಚರ್ಸ್ ಸಹ ಪ್ರಯೋಜಕರಾಗಿ ಟರ್ಬೋಸ್ಟಿಲ್ ಮತ್ತು ಕಾವೇರಿ ಹಾಸ್ಪಿಟಲ್ ಜೊತೆಯಾಗಿದ್ದಾರೆ.

# ಫಾರ್ಮ್‌ಹೌಸ್‌ನಲ್ಲಿ ದರ್ಶನ್ ಪತ್ನಿ ರಿಲ್ಯಾಕ್ಸ್– ಕುದುರೆ ಜೊತೆ ವಿಜಯಲಕ್ಷ್ಮಿ ಪೋಸ್

ದರ್ಶನ್ ಪತ್ನಿ ವಿಜಯಲಕ್ಷ್ಮಿ ಅವರು ರಿಲ್ಯಾಕ್ಸ್ ಮೂಡ್‌ನಲ್ಲಿದ್ದಾರೆ. ಮೈಸೂರಿನ ಫಾರ್ಮ್‌ಹೌಸ್‌ನಲ್ಲಿ ಕಾಲ ಕಳೆದಿದ್ದಾರೆ. ಇದೀಗ ಬಿಳಿ ಕುದುರೆಯೊಂದಿಗೆ ಕ್ಲಿಕ್ಕಿಸಿರುವ ಫೋಟೋವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.



ದರ್ಶನ್ ನಟನೆಯ 'ಡೆವಿಲ್' ಶೂಟಿಂಗ್ ಹಾಗೂ ಪ್ರತಿ ಕಾರ್ಯಕ್ರಮದಲ್ಲಿಯೂ ಜೊತೆಯಾಗಿರುವ ವಿಜಯಲಕ್ಷ್ಮಿ ಬಿಡುವು ಸಿಕ್ಕ ಹಿನ್ನೆಲೆ ಮೈಸೂರಿನ ಫಾರ್ಮ್‌ಹೌಸ್‌ನಲ್ಲಿ ಖುಷಿಯಿಂದ ಕಾಲ ಕಳಿದ್ದಾರೆ. ಬಿಳಿ ಕುದುರೆ ಜೊತೆ ನಿಂತು ಖುಷಿಯಿಂದ ಪೋಸ್ ನೀಡಿದ್ದಾರೆ. ಅವರ ಈ ಫೋಟೋಗಳು ದರ್ಶನ್ ಫ್ಯಾನ್ಸ್ ಪೇಜ್‌ನಲ್ಲಿ ವೈರಲ್ ಆಗುತ್ತಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬೇಲ್ ಮೇಲೆ ದರ್ಶನ್ ಹೊರಬಂದ್ಮೇಲೆ ಪತಿಯ ವ್ಯವಹಾರವನ್ನು ವಿಜಯಲಕ್ಷ್ಮಿ ಅವರೇ ನೋಡಿಕೊಳ್ತಿದ್ದಾರೆ. ದರ್ಶನ್‌ಗೆ ಎಲ್ಲೇ ಶೂಟಿಂಗ್ ಇದ್ರೂ ಅಥವಾ ಯಾವುದೇ ಕಾರ್ಯಕ್ರಮ ಆಗಿದ್ರೂ ಪತ್ನಿ ಅಥವಾ ಸಹೋದರ ದಿನಕರ್ ಜೊತೆಯಾಗಿರುತ್ತಾರೆ. ಅಂದಹಾಗೆ, 'ಡೆವಿಲ್' ಸಿನಿಮಾದಲ್ಲಿ ಜೊತೆ ರಚನಾ ರೈ, ವಿನಯ್ ಗೌಡ, ಶರ್ಮಿಳಾ ಮಾಂಡ್ರೆ ನಟಿಸುತ್ತಿದ್ದಾರೆ. 'ತಾರಕ್' ಡೈರೆಕ್ಟರ್ ಮಿಲನಾ ಪ್ರಕಾಶ್ 'ಡೆವಿಲ್'ಗೆ ನಿರ್ದೇಶನ ಮಾಡುತ್ತಿದ್ದಾರೆ.



# ಚಿರಂಜೀವಿ ಜೊತೆ ನಟಿಸಲು ಅಬ್ಬಬ್ಬಾ 18 ಕೋಟಿ ಡಿಮ್ಯಾಂಡ್ ಮಾಡಿದ್ರಾ ನಯನತಾರಾ?

ಸೌತ್ ನಟಿ ನಯನತಾರಾಗೆ 40 ವರ್ಷವಾದ್ರೂ ಚಿತ್ರರಂಗದಲ್ಲಿ ಅವರಿಗೆ ಬೇಡಿಕೆಯಿದೆ. ಇದೀಗ ಚಿರಂಜೀವಿ ಜೊತೆ ನಟಿಸಲು 18 ಕೋಟಿ ಸಂಭಾವನೆಗೆ ನಟಿ ಡಿಮ್ಯಾಂಡ್ ಮಾಡಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಷಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಡೈರೆಕ್ಟರ್ ಅನಿಲ್ ರವಿಪುಡಿ ನಿರ್ದೇಶನದ ಮತ್ತು ಮೆಗಾಸ್ಟಾರ್ ಚಿರಂಜೀವಿ ಕಾಂಬಿನೇಷನ್ ಚಿತ್ರದಲ್ಲಿ ನಟಿಸಲು ನಯನತಾರಾಗೆ ಅವಕಾಶ ಅರಸಿ ಬಂದಿದೆ. ಪ್ರಮುಖ ಪಾತ್ರದಲ್ಲೇ ನಟಿಸಲು ಅವರಿಗೆ ಆಫರ್ ನೀಡಲಾಗಿದೆ. ಹೀಗಾಗಿ ಈ ಚಿತ್ರದಲ್ಲಿ ನಟಿಸಲು 18 ಕೋಟಿ ರೂ. ಸಂಭಾವನೆಯನ್ನು ನಯನತಾರಾ ಡಿಮ್ಯಾಂಡ್ ಮಾಡಿದ್ದಾರೆ ಎನ್ನಲಾಗಿದೆ. ಅವರ ಸಂಭಾವನೆ ವಿಚಾರ ಕೇಳಿ ಸಿನಿಮಾ ಮಂದಿ ಶಾಕ್ ಆಗಿದ್ದಾರೆ. ಈ ವಿಚಾರ ಚಿತ್ರರಂಗದಲ್ಲಿ ಹಾಟ್ ಟಾಪಿಕ್ ಆಗಿದೆ.

ನಯನತಾರಾ ಕೇಳಿದಷ್ಟು ಸಂಭಾವನೆಯನ್ನು ನೀಡಲು ಚಿತ್ರತಂಡ ಒಪ್ಪಿಕೊಂಡಿದೆಯಾ. ಅವರು ಈ ಚಿತ್ರದ ಭಾಗವಾಗ್ತಾರಾ? ಎಂಬುದನ್ನು ಚಿತ್ರತಂಡ ತಿಳಿಸುವವರೆಗೂ ಕಾದುನೋಡಬೇಕಿದೆ.

ಅಂದಹಾಗೆ, ಈ ಹಿಂದೆ 'ಜವಾನ್' ಚಿತ್ರದಲ್ಲಿ ಶಾರುಖ್ ಖಾನ್ ಜೊತೆ ನಟಿಸಲು 10 ಕೋಟಿ ರೂ. ಸಂಭಾವನೆ ನಟಿ ಪಡೆದಿದ್ದರು ಎನ್ನಲಾದ ಸುದ್ದಿ ಹರಿದಾಡಿತ್ತು.



### ಮತ್ತೆ ಕೈಕೊಟ್ಟ ಪಂತ್: ತವರಿನಲ್ಲಿ ಗೆದ್ದ ಪಂಜಾಬ್

# ಪ್ಲೇ ಆಫ್ ಹಾದಿ ಬಹುತೇಕ ಖಚಿತ

**ಧರ್ಮಶಾಲಾ:** ಸಂಘಟಿತ ಬೌಲಿಂಗ್, ಬ್ಯಾಟಿಂಗ್ ಪ್ರದರ್ಶನದ ನೆರವಿನಿಂದ ಪಂಜಾಬ್ ಕಿಂಗ್ಸ್ ತಂಡವು ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ 37 ರನ್‌ಗಳ ಭರ್ಜರಿ ಗೆಲುವು ಸಾಧಿಸಿದೆ.

ಈ ಮೂಲಕ 11 ಪಂದ್ಯಗಳಲ್ಲಿ 7ರಲ್ಲಿ ಗೆಲುವು ಸಾಧಿಸಿ 15 ಅಂಕ ಪಡೆದಿರುವ ಪಂಜಾಬ್ ಪ್ಲೇ ಆಫ್ ಹಾದಿಯನ್ನು ಬಹುತೇಕ ಖಚಿತಪಡಿಸಿಕೊಂಡಿದೆ. ಇತ್ತ 11 ಪಂದ್ಯಗಳಲ್ಲಿ ಕೇವಲ 5ರಲ್ಲಿ ಮಾತ್ರ ಗೆಲುವು ಸಾಧಿಸಿರುವ ಲಕ್ನೋ ಸೂಪರ್ ಜೈಂಟ್ಸ್ 10 ಅಂಕಗಳೊಂದಿಗೆ 7ನೇ ಸ್ಥಾನದಲ್ಲೇ ಉಳಿದಿದೆ. ಅಲ್ಲದೇ ಪ್ಲೇ ಆಫ್ ಹಾದಿ ಬಹುತೇಕ ಮುಚ್ಚಿದಂತಾಗಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 236 ರನ್ ಗಳಿಸಿತ್ತು. ಬೃಹತ್ ಮೊತ್ತದ ಗುರಿ ಬೆನ್ನಟ್ಟಿದ ಲಕ್ನೋ ಅಗ್ರ ಕ್ರಮಾಂಕದ ಬ್ಯಾಟರ್‌ಗಳ ವೈಫಲ್ಯದಿಂದ ನಿಗದಿ ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 199 ರನ್‌ಗಳಿಸಿ ಸೋಲೊಪ್ಪಿಕೊಂಡಿತು.

ಪಂಜಾಬ್ ಕಿಂಗ್ಸ್ ನೀಡಿದ 237 ರನ್ ಗಳ ಗುರಿ ಬೆನ್ನಟ್ಟಿದ ಲಕ್ನೋಗೆ ಆರಂಭಿಕ ಆಘಾತ ಎದುರಾಯಿತು. ಮಾರ್ಕ್ರಮ್ 13 ರನ್ ಗಳಿಸಿ ಔಟಾದರೆ ಮಿಚೆಲ್ ಮಾರ್ಷ್ ಶೂನ್ಯಕ್ಕೆ ಔಟಾದರು. ಸ್ಫೋಟಕ ಬ್ಯಾಟಿಂಗ್ ಮಾಡುತ್ತಿದ್ದ ನಿಕೋಲಸ್ ಪೂರನ್ ಸಹ 6 ರನ್ ಗಳಿಗೆ ಔಟಾಗಿದ್ದು ಲಕ್ನೋ ತೀವ್ರ ಹಿನ್ನಡೆಯಾಗುವಂತೆ ಮಾಡಿತು. ಆದರೆ ಆಯೂಷ್ ಬದೋನಿ ಸ್ಫೋಟಕ ಬ್ಯಾಟಿಂಗ್ ಮಾಡಿದ್ದು 74 ರನ್ ಗಳಿಸಿದ್ದು ತಂಡದ ಗೆಲುವಿಗೆ ಸಾಕಷ್ಟು ಪ್ರಯತ್ನಿಸಿದರು. ಆದರೆ ಲಕ್ನೋ ಅಂತಿಮವಾಗಿ 7 ವಿಕೆಟ್ ನಷ್ಟಕ್ಕೆ 199 ರನ್ ಗಳಿಸಲಷ್ಟೇ ಶಕ್ತವಾಯಿತು.



ಪಂಜಾಬ್‌ಗೆ ಆರಂಭದಲ್ಲೇ ಪ್ರಿಯಾಂಶ್ ಆರ್ಯ (1) ವಿಕೆಟ್ ನಷ್ಟವಾಯಿತು. ಆದರೆ ಜೋಶ್ ಇಂಗ್ಲಿಷ್ (30) ಜೊತೆ ಸೇರಿದ ಪ್ರಭಸಿಮ್ರನ್ ತಂಡವನ್ನು ಮುನ್ನಡೆಸಿದರು. ವಿಕೆಟ್‌ನ ಒಂದು ತುದಿಯಿಂದ ನೆಲಕಚ್ಚಿ ಆಟವಾಡಿದ ಪ್ರಭಸಿಮ್ರನ್‌ಗೆ ನಾಯಕ ಶ್ರೇಯಸ್ ಅಯ್ಯರ್ ಅವರಿಂದಲೂ ಉತ್ತಮ ಬೆಂಬಲ ದೊರಕಿತು. ಶ್ರೇಯಸ್ ಕೇವಲ 25 ಎಸೆತಗಳಲ್ಲಿ ನಾಲ್ಕು ಬೌಂಡರಿ ಹಾಗೂ ಎರಡು ಸಿಕ್ಸರ್ ನೆರವಿನಿಂದ 45 ರನ್ ಗಳಿಸಿದರು. ಅತ್ತ ಪ್ರಭಸಿಮ್ರನ್ ಎಸೆತಗಳಲ್ಲಿ ಅರ್ಧಶತಕ ಪೂರ್ಣಗೊಳಿಸಿದರು. ಇನಿಂಗ್ಸ್‌ನ ಕೊನೆಯಲ್ಲಿ ರನ್ ಗತಿ ಏರಿಸುವ ಭರದಲ್ಲಿ ಪ್ರಭಸಿಮ್ರನ್ ವಿಕೆಟ್ ಒಪ್ಪಿಸಿದರು. ಇದರಿಂದಾಗಿ ಶತಕ ಗಳಿಸುವ ಅವಕಾಶ ತಪ್ಪಿತು. 48 ಎಸೆತಗಳನ್ನು ಎದುರಿಸಿದ ಪ್ರಭಸಿಮ್ರನ್ 7 ಸಿಕ್ಸರ್ ಹಾಗೂ 6 ಬೌಂಡರಿಗಳ ನೆರವಿನಿಂದ 91 ರನ್ ಗಳಿಸಿದರು.

ಇನ್ನುಳಿದಂತೆ ಶಶಾಂಕ್ ಸಿಂಗ್ 15 ಎಸೆತಗಳಲ್ಲಿ ಅಜೇಯ 33 ರನ್ ಗಳಿಸಿ (4 ಬೌಂಡರಿ, 1 ಸಿಕ್ಸರ್) ಅಬ್ಬರಿಸಿದರು. ಮಾರ್ಕಸ್ ಸ್ಟೋಯಿನಸ್ ಸಹ ಅಜೇಯ 15 ರನ್ ಗಳ ಕಾಣಿಕೆ (1 ಸಿಕ್ಸರ್, 1 ಬೌಂಡರಿ) ನೀಡಿದರು.

ಲಖನೌ ಪರ ಆಕಾಶ್ ಮಹಾರಾಜ್ ಸಿಂಗ್ ಹಾಗೂ ದಿಗೇಶ್ ರಾಠಿ ತಲಾ ಎರಡು ವಿಕೆಟ್ ಗಳಿಸಿದರು.

# ರೋಚಕ ಪಂದ್ಯದಲ್ಲಿ ಕೆಕೆಆರ್‌ಗೆ 1 ರನ್ ಜಯ

**ಕೋಲ್ಕತ್ತಾ:** ಕೊನೆಯವರೆಗೂ ಜಿದ್ದಾಜಿದ್ದಿಯಿಂದ ಕೂಡಿದ್ದ ಪಂದ್ಯದಲ್ಲಿ ಕೋಲ್ಕತ್ತಾ ನೈಟ್‌ರೈಡರ್ಸ್ ತಂಡವು ರಾಜಸ್ಥಾನ್ ರಾಯಲ್ಸ್ ವಿರುದ್ಧ 1 ರನ್‌ಗಳ ರೋಚಕ ಗೆಲುವು ಸಾಧಿಸಿದೆ. ಈ ಮೂಲಕ 11 ಪಂದ್ಯಗಳಲ್ಲಿ 5ರಲ್ಲಿ ಗೆಲುವು ಸಾಧಿಸಿರುವ ಕೆಕೆಆರ್ 11 ಅಂಕಗಳೊಂದಿಗೆ ಪ್ಲೇ ಆಫ್ ಕನಸನ್ನು ಜೀವಂತವಾಗಿರಿಸಿಕೊಂಡಿದೆ.



ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಕೆಕೆಆರ್ ನಿಗದಿತ 20 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು ರಾಜಸ್ಥಾನ್ ರಾಯಲ್ಸ್‌ಗೆ 207 ರನ್‌ಗಳ ಗುರಿ ನೀಡಿತು. ಈ ಗುರಿಯನ್ನು ಬೆನ್ನಟ್ಟಿದ ಆರ್‌ಆರ್ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 205 ರನ್ ಗಳಿಸಿ ಸೋಲೊಪ್ಪಿಕೊಂಡಿತು.

ರಾಜಸ್ಥಾನದ ಪರ ರಿಯಾನ್ ಪರಾಗ್ 45 ಎಸೆತಗಳಲ್ಲಿ 6 ಬೌಂಡರಿ, 8 ಸಿಕ್ಸರ್ ಸಿಡಿಸಿ 95 ರನ್ ಕಲೆ ಹಾಕಿದರು. ಯಶಸ್ವಿ ಜೈಸ್ವಾಲ್ 21 ಎಸೆತಗಳಲ್ಲಿ 1 ಸಿಕ್ಸರ್ 5 ಬೌಂಡರಿ ನೆರವಿನಿಂದ 34 ರನ್, ಶಿಮ್ರಾನ್ ಹೆಟ್ಮೆಯರ್ 23 ಎಸೆತಗಲ್ಲಿ 29 ರನ್, ಶುಭಂ ದುಬೆ 14 ಎಸೆತಗಳಲ್ಲಿ 25 ರನ್ ಕಲೆ ಹಾಕಿದರು.

ಕೆಕೆಆರ್ ಪರ ವರುಣ್ ಚಕ್ರವರ್ತಿ 2, ಹರ್ಷಿತ್ ರಾಣಾ 2, ಮೊಯಿನ್ ಅಲಿ 2, ವೈಭವ್ ಅರೋರಾ 1 ವಿಕೆಟ್ ಕಬಳಿಸಿದರು.

ಕೆಕೆಆರ್ ಪರ ಆಂಡ್ರೆ ರಸೆಲ್ 25 ಎಸೆತಗಳಲ್ಲಿ ಅಜೇಯ 57 ರನ್ ಗಳಿಸಿ ಬೃಹತ್ ಮೊತ್ತಕ್ಕೆ ನೆರವಾದರು. ಅಜಿಂಕ್ಯ ರಹಾನೆ 30, ಅಂಗ್‌ಕ್ರಿಸ್ ರಘುವಂಶಿ 44, ರಹ್ಮನುಲ್ಲಾ ಗುರ್ಬಜ್ 35 ರನ್ ಗಳಿಸಿ ತಂಡದ ಮೊತ್ತ ಹೆಚ್ಚಿಸಿದರು.

ಬ್ಯಾಟಿಂಗ್ ಆರಂಭಿಸಿದ ಕೆಕೆಆರ್ ಕೇವಲ 13 ರನ್‌ಗಳಾಗುವಷ್ಟರಲ್ಲಿ ಮೊದಲ ವಿಕೆಟ್ ಕಳೆದುಕೊಂಡಿತು. ಸುನಿಲ್ ನರೈನ್ ಕೇವಲ ಯುಧ್ವೀರ್ ಸಿಂಗ್ ಬೌಲಿಂಗ್‌ನಲ್ಲಿ ಕ್ಲೀನ್ ಬೌಲ್ಡ್ ಆದರು. 2ನೇ ವಿಕೆಟ್‌ಗೆ ರೆಹ್ಮನುಲ್ಲಾ ಗುರ್ಬಜ್ ಹಾಗೂ ಅಜಿಂಕ್ಯ ರಹಾನೆ 56 ರನ್ ಗಳಿಸಿದರು. ಗುರ್ಬಜ್ 25 ಎಸೆತಗಳಲ್ಲಿ 4 ಬೌಂಡರಿ, 1 ಸಿಕ್ಸರ್ ಸಹಿತ 35 ರನ್ ಗಳಿಸಿ ತೀಕ್ಷಣ ಬೌಲಿಂಗ್‌ನಲ್ಲಿ ಹೆಟ್ಮೆಯರ್‌ಗೆ ಕ್ಯಾಚ್ ನೀಡಿದರು. ನಂತರ ರಹಾನೆ ಜೊತೆಗೂಡಿದ ರಘುವಂಶಿ ನಿಧಾನವಾಗಿ ವಿಕೆಟ್ ಉಳಿಸಿಕೊಂಡು 31 ಎಸೆತಗಳಲ್ಲಿ 42 ರನ್‌ಗಳ ಜೊತೆಯಾಟ ಆಡಿದರು.

ರಹಾನೆ 24 ಎಸೆತಗಳಲ್ಲಿ 2 ಬೌಂಡರಿ, 2 ಸಿಕ್ಸರ್ ಸಹಿತ 30 ರನ್ ಗಳಿಸಿದರೆ, ರಘುವಂಶಿ 31 ಎಸೆತಗಳಲ್ಲಿ 5 ಬೌಂಡರಿ ಸಹಿತ 44 ರನ್ ಗಳಿಸಿದರು. ರಘುವಂಶಿ ರಸೆಲ್ ಜೊತೆಗೆ 61 ರನ್‌ಗಳ ಜೊತೆಯಾಟ ಆಡಿದರು.

ಆರ್‌ಆರ್ ಪರ ಜೋಫ್ರಾ ಆರ್ಚರ್, ಯುದ್ವೀರ್ ಸಿಂಗ್, ಮಹೇಶ್ ತೀಕ್ಷಣ, ರಿಯಾನ್ ಪರಾಗ್ ತಲಾ ಒಂದೊಂದು ವಿಕೆಟ್ ಕಬಳಿಸಿದರು.

# ಸಮಾಜಘಾತುಕ ಶಕ್ತಿಗಳನ್ನು ಮಟ್ಟಹಾಕಲು ಒಂದು ವಿಶೇಷಪಡೆ ಅಗತ್ಯ

**ಹಾವೇರಿ:** ಸಮಾಜಘಾತಕ ಶಕ್ತಿಗಳನ್ನು ಮಟ್ಟಹಾಕಲು ಹಾಗೂ ಪತ್ತೆ ಹಚ್ಚಲು ಒಂದು ವಿಶೇಷ ಪಡೆಯ ಅಗತ್ಯವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಹಾನಗಲ್ ತಾಲೂಕಿನ ಅಕ್ಕಿಆಲೂರಿನಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ, ಕರಾವಳಿಯಲ್ಲಿ ಕೋಮು ಹಿಂಸೆ ನಿಗ್ರಹ ಕಾರ್ಯಪಡೆ ರಚಿಸಲು ಸರ್ಕಾರ ಮುಂದಾಗಿರುವ ಬಗ್ಗೆ ಗೃಹ ಸಚಿವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುತ್ತೇವೆ ಎಂದಿದ್ದಾರೆ.

ಫಾಜಿಲ್ ಹತ್ಯೆಯಾದಾಗ ಸರ್ಕಾರ 25 ಲಕ್ಷ ರೂ. ಪರಿಹಾರ ನೀಡಿತ್ತು. ಅದೇ ಪರಿಹಾರದ ಹಣದಲ್ಲಿ ಸಹೋದರ ಸುಹಾಸ್ ಶೆಟ್ಟಿ ಹತ್ಯೆಗೆ ಸುಪಾರಿ ನೀಡಿದ್ದಾರೆ ಎಂದು ಪೊಲೀಸರು ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದರು. ಸರ್ಕಾರದ ಹಣ ದುರ್ಬಳಕೆಯಾಗಿದೆಯೇ ಎಂಬ ಸುದ್ದಿಗಾರ ಪ್ರಶ್ನೆಗೆ, ಈ ಬಗ್ಗೆ ನನಗೆ ತಿಳಿದಿಲ್ಲ. ದಿನೇಶ್ ಗುಂಡೂರಾವ್



ಹಾಗೂಪರಮೇಶ್ವರ್ ಇಬ್ಬರೂ ಮಂಗಳೂರಿಗೆ ಭೇಟಿ ನೀಡಿದ್ದಾರೆ. ಅವರೊಂದಿಗೆ ಮಾತನಾಡಿದ ನಂತರ ಈ ಬಗ್ಗೆ ಪ್ರತಿಕ್ರಿಯೆ ನೀಡುತ್ತೇನೆ ಎಂದಿದ್ದಾರೆ.

ಜಾತಿಗಣತಿಯನ್ನು ಮಾಡಿಸುವ ಮೂಲಕ ಸಿದ್ದರಾಮಯ್ಯ ಜಾತಿ ಜಾತಿಗಳ ನಡುವೆ ಸಂಘರ್ಷಕ್ಕೆ ಎಡೆಮಾಡಿಕೊಡುತ್ತಿದ್ದಾರೆ ಎಂದು ಟೀಕೆ ಮಾಡುತ್ತಿದ್ದವರು, ಕೇಂದ್ರ ಸರ್ಕಾರ ಜಾತಿಗಣತಿ ಮಾಡಿಸುವುದನ್ನು ಮುಕ್ತ ಮನಸ್ಸಿನಿಂದ ಸ್ವಾಗತ ಮಾಡುತ್ತಿದ್ದಾರೆ. ಶಂಖದಿಂದ ಬಂದರೆ ಮಾತ್ರ ತೀರ್ಥ ಎಂಬಂತಾಗಿದೆ. ಮೊದಲು ರಾಜಕೀಯವಾಗಿ ಹೇಳುತ್ತಿದ್ದರು. ವಾಸ್ತವ ಆಧಾರದ ಮೇಲೆ ಹೇಳುತ್ತಿರಲಿಲ್ಲ ಎಂದು ಅರ್ಥವಾಗುತ್ತದೆ ಎಂದು ಹೇಳಿದ್ದಾರೆ.

ಪಾಕಿಸ್ತಾನದ ವಿಚಾರದಲ್ಲಿ ಕಾಂಗ್ರೆಸ್ ಇಬ್ಬಗೆಯ ನೀತಿಯನ್ನು ಅನುಸರಿಸುತ್ತಿದೆ ಎಂಬ ಮಾಜಿ ಪ್ರಧಾನಿ ದೇವೇಗೌಡರ ಹೇಳಿಕೆ ವಿಚಾರವಾಗಿ, ದೇವೇಗೌಡರು ಬಿಜೆಪಿ ಸೇರುವ ಮುನ್ನ ನರೇಂದ್ರ ಮೋದಿಯವರ ಬಗ್ಗೆ ಏನು ಮಾತನಾಡುತ್ತಿದ್ದರು? ಈಗ ಏನು ಮಾತನಾಡುತ್ತಿದ್ದಾರೆ? ಇಬ್ಬಗೆಯ ನೀತಿ ಅವರಿಗೆ ಇದೆ ಎಂದು ಕುಟುಕಿದರು.

# ಕಾಶ್ಮೀರದ ವಿಚಾರದಲ್ಲಿ ಪ್ರಧಾನಿಗಳು ಬಿಗಿ ಕ್ರಮ ತೆಗೆದುಕೊಂಡಿದ್ದಾರೆ

**ಹಾಸನ:** ಕಾಶ್ಮೀರದ ವಿಚಾರದಲ್ಲಿ ಪ್ರಧಾನಮಂತ್ರಿಗಳು ಬಹಳ ಬಿಗಿ ಕ್ರಮ ತೆಗೆದುಕೊಂಡಿದ್ದಾರೆ. ಈ ವಿಷಯದಲ್ಲಿ ರಾಷ್ಟ್ರದ ಎಲ್ಲಾ ರಾಜಕೀಯ ಪಕ್ಷಗಳು ಐಕ್ಯತೆಯನ್ನು ತೋರಿಸಿದ್ದಾರೆ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಹೇಳಿದರು.



ಅವರು ಹಾಸನ ಜಿಲ್ಲೆಯ ದ್ಯಾಪಲಾಪುರ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಶ್ರೀ ಆಂಜನೇಯಸ್ವಾಮಿ ದೇವಾಲಯ ಉದ್ಘಾಟನಾ ಮಹೋತ್ಸವ ಹಾಗೂ ಮಹಾಕುಂಭಾಭಿಷೇಕ ಕಾರ್ಯಕ್ರಮಕ್ಕೆ ಆಗಮಿಸಿದ್ದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ದೇಶದ 150 ಕೋಟಿ ಜನ, ಏಕಮುಖವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ತೀರ್ಮಾನಕ್ಕೆ ಬದ್ಧರಾಗಿರಬೇಕು. ಆಗ ಮಾತ್ರ ಇಂತಹ ದುರ್ಘಟನೆ ನಡೆಯುವುದಿಲ್ಲ ಎಂದರು.

ಪಹಲ್ಗಾಮ್‌ನಲ್ಲಿ 26 ಪ್ರವಾಸಿಗರನ್ನು ಹತ್ಯೆ ಮಾಡಿದ್ದಾರೆ. ಇದರಲ್ಲಿ ಒಬ್ಬ ವಿದೇಶಿಗ. ನಮ್ಮ ದೇಶದ 25 ಜನರು ಇದ್ದು, ನಿಷ್ಕರುಣೆಯಿಂದ ಅವರನ್ನು ಹತ್ಯೆ ಮಾಡಿದಂತಹ ಉಗ್ರಗಾಮಿಗಳನ್ನು ಸಂಪೂರ್ಣವಾಗಿ ನಾಶ ಮಾಡುವವರೆಗೂ ಪ್ರಧಾನಮಂತ್ರಿಗಳು ಏನೆಲ್ಲಾ ಕ್ರಮ ತೆಗೆದುಕೊಳ್ಳಬೇಕು ತೆಗೆದುಕೊಂಡಿದ್ದಾರೆ. ಈ ವಿಷಯದಲ್ಲಿ ನನ್ನ ಅನುಭವದಿಂದ ಅಭಿಪ್ರಾಯವನ್ನು ತಿಳಿಸಿದ್ದೇನೆ ಎಂದು ಹೇಳಿದರು.

ಇದು ಸೂಕ್ಷ್ಮವಾದ ವಿಚಾರ. ಇದರ ಕುರಿತು ಕೇಂದ್ರ ಕೈಗೊಳ್ಳುವ ಕ್ರಮಕ್ಕೆನನ್ನದು, ನನ್ನ ಪಕ್ಷದ್ದು ಪೂರ್ಣ ಬೆಂಬಲವಿದೆ ಎಂದು ಈಗಾಗಲೇ ಹೇಳಿದ್ದೇನೆ. ಮುಂದೆ ಕೂಡ ಏನು ಕ್ರಮ ತೆಗೆದುಕೊಳ್ಳುತ್ತಾರೋ ಆ ಕ್ರಮಕ್ಕೆ ಇಡೀ ದೇಶ ಪಕ್ಷ ಭೇದ ಇಲ್ಲದೇ ಎಲ್ಲರೂ ಒಗ್ಗಟ್ಟಾಗಿ ಬೆಂಬಲ ನೀಡಬೇಕು. ಮುಂದೆ ಇಂತಹ ದುಷ್ಕೃತ್ಯ ನಡೆಯಬಾರದು. ಅವರಿಗೆ ಪಾಠ ಕಲಿಸಬೇಕು ಎಂದು ಪ್ರಧಾನಮಂತ್ರಿಗಳು ಪ್ರತಿಜ್ಞೆ ಮಾಡಿದ್ದು, ಅವರ ಹಿಂದೆ ನಿಲ್ಲುತ್ತೇವೆ ಎಂದರು.

ಮೊದಲು ಕಾಂಗ್ರೆಸ್ ನಾಯಕರು ಸಹಮತವನ್ನು ವ್ಯಕ್ತಪಡಿಸಿದ್ದರು. ಮಧ್ಯೆ ಸ್ವಲ್ಪ ಒಡಕು ಶಬ್ದ ಬಂದ ಮೇಲೆ ಪುನಃ ಅವರು ಈ ವಿಷಯದಲ್ಲಿ ಐಕ್ಯತೆ ಬಗ್ಗೆ ಪ್ರತಿಪಾದನೆ ಮಾಡಿದ್ದಾರೆ ಎಂದು ಹೇಳಿದರು.

# ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣ ಎನ್‌ಐಎ ತನಿಖೆ ಅಗತ್ಯ ಇಲ್ಲ

**ಬೆಂಗಳೂರು:** ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಕೊಲೆ ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳ ತನಿಖೆಗೆ ಕೊಡುವ ಅಗತ್ಯವಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.



ಬೆಂಗಳೂರಿನಲ್ಲಿ ಮಾತನಾಡಿದ ಪರಮೇಶ್ವರ್, ಸುಹಾಸ್ ಶೆಟ್ಟಿ ಕೊಲೆ ಪ್ರಕರಣ ಎನ್‌ಐಎಗೆ ವಹಿಸಲು ಬಿಜೆಪಿ ನಾಯಕರು ಹೇಳುತ್ತಿರುವುದು ಅವರ ಅಭಿಪ್ರಾಯ. ನಮ್ಮ ಪೊಲೀಸ್ ಇಲಾಖೆ ಸಮರ್ಥವಾಗಿ ಕೆಲಸ ಮಾಡುತ್ತಿದೆ. ಎಂಟು ಜನರನ್ನು ಪ್ರಕರಣದಲ್ಲಿ ಬಂಧಿಸಲಾಗಿದೆ. ತನಿಖೆ ಚೆನ್ನಾಗಿ ನಡೆಯುತ್ತಿದೆ ಎಂಬುದು ನಮ್ಮ ಅಭಿಪ್ರಾಯ. ಹಾಗಾಗಿ ಈ ಪ್ರಕರಣ ಎನ್‌ಐಎಗೆ ಕೊಟ್ಟಿಲ್ಲ ಅದರ ಅಗತ್ಯ ಇಲ್ಲ ಎಂದರು.

ಸುಹಾಸ್ ಶೆಟ್ಟಿ ಕುಟುಂಬಕ್ಕೆ ಸರ್ಕಾರದಿಂದ ಭೇಟಿ ನೀಡಿ ಯಾರೂ ಸಾಂತ್ವನ ಹೇಳದ ವಿಚಾರ ಬಗ್ಗೆ ಮಾತಾಡಿದ ಪರಮೇಶ್ವರ್, ಇದು ಒಂದು ಕೊಲೆ ಪ್ರಕರಣ. ಸುಹಾಸ್ ಶೆಟ್ಟಿ ಮೇಲೆ ಐದು ಕೇಸ್‌ಗಳು ಅವರ ಮೇಲಿವೆ. ಹಾಗಾಗಿ ನಾವು ಹಾಗೂ ಭೇಟಿ ಕೊಟ್ಟಿಲ್ಲ. ಆದರೆ ಸುಹಾಸ್ ಶೆಟ್ಟಿ ಕುಟುಂಬಕ್ಕೆ ನ್ಯಾಯ ಕೊಡಿಸುವ ಕೆಲಸ ಸರ್ಕಾರ ಮಾಡಲಿದೆ ಎಂದು ಪರಮೇಶ್ವರ್ ಭರವಸೆ ನೀಡಿದರು.

ಇದು ಪ್ರತೀಕಾರಕ್ಕೆ ನಡೆದಿದೆಯಾ ಇಲ್ವಾ ಎನ್ನುವುದು ಗೊತ್ತಿಲ್ಲ. ಏನೇ ಕಾರಣ ಇದ್ದರೂ ತನಿಖೆ ನಡೆಸಿದ ಮೇಲೆ ಗೊತ್ತಾಗುತ್ತದೆ. ನಾವು ಊಹೆ ಮಾಡಿ ಇದೇ ಕಾರಣ ಅಂತ ಹೇಳಲು ಬರುವುದಿಲ್ಲ. ತನಿಖೆ ಮುಗಿಯೋವರೆಗೂ ಏನೂ ಹೇಳಲು ಸಾಧ್ಯವಿಲ್ಲ ಎಂದರು.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054